ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 111, ಪುಟಗಳು: 8, ಬುಧವಾರ, 31 ಜನವರಿ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಬುಧವಾರ 31, ಜನವರಿ -2024)

- ವಾರ: ಬುಧವಾರ, ತಿಥಿ: ಪಂಚಮಿ
- ನಕ್ಷತ್ರ: ಹಸ್ತ
- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ,
- ರಾಹುಕಾಲ: 12.36 ರಿಂದ 2.03
- ಗುಳಿಕಕಾಲ: 11.09 ರಿಂದ 12.36
- ಯಮಗಂಡಕಾಲ: 8.15 ರಿಂದ 9.42

## ಬೆಂಗಳೂರಿನ ಶಿವಾಜಿನಗರದಲ್ಲಿ ಹಸಿರು ಬಾವುಟ ತೆರವು



**ಬೆಂಗಳೂರು:** ಮಂಡ್ಯ ತಾಲೂಕಿನ ಕೆರಗೋಡು ಗ್ರಾಮದಲ್ಲಿನ ಹನುಮ ಧ್ವಜ ಹಾಗೂ ರಾಷ್ಟ್ರ ಧ್ವಜ ವಿವಾದ ರಾಜಕೀಯ ಸ್ವರೂಪ ಪಡೆದುಕೊಂಡಿದೆ. ಇದರ ಬೆನ್ನಲ್ಲೇ ಬೆಂಗಳೂರಿನ ಶಿವಾಜಿನಗರದ ಚಾಂದಿನಿ ಚೌಕ್‌ನಲ್ಲಿ ಹಾರಿಸಲಾದ ಹಸಿರು ಬಾವುಟ ವೈರಲ್ ಆಗಿದ್ದು, ಹಸಿರು ಬಾವುಟ ತೆಗೆಸುವ ತಾಕತ್ ನಿಮಗೆ ಇಲ್ಲವಾ ಎಂದು ಬಿಜೆಪಿ ನಾಯಕರು ಟ್ವೀಟ್ ಮಾಡಿ ಸವಾಲು ಹಾಕಿದ್ದರು. ಇದರ ಬೆನ್ನಲ್ಲೇ ಎಚ್ಚೆತ್ತುಕೊಂಡ ಪೊಲೀಸರು, ಚಾಂದಿನಿ ಚೌಕ್‌ನ ಬಿಬಿಎಂಪಿ ಧ್ವಜಸ್ತಂಭದಲ್ಲಿದ್ದ ಹಸಿರು ಬಾವುಟ ತೆರವು ಮಾಡಿ ತ್ರಿವರ್ಣ ಧ್ವಜ ಹಾರಿಸಿದ್ದಾರೆ. ಬೆಂಗಳೂರಿನ ಶಿವಾಜಿನಗರದ ಚಾಂದಿನಿ ಚೌಕ್‌ನಲ್ಲಿನ ಬಿಬಿಎಂಪಿ ಧ್ವಜಸ್ತಂಭದಲ್ಲಿದ್ದ ಹಸಿರು ಬಾವುಟ ಹಾರಾಡುತ್ತಿರುವುದನ್ನು ವಿಕಾಸ್ ವಿಕ್ಕಿ ಎನ್ನುವರು ಟ್ವೀಟ್ ಮಾಡಿದ್ದರು. ಈ ಬಾವುಟ ಯಾವ ಧರ್ಮದ್ದು ಎಂದು 'ಕೈ' ನಾಯಕರು ಉತ್ತರಿಸಬೇಕು. ಹಸಿರು ಬಾವುಟ ತೆಗೆಸುವ ತಾಕತ್ ನಿಮಗೆ ಇಲ್ಲವಾ. ಹಿಂದೂ ಗ್ರಾಮಸ್ಥರ ಮೇಲೆ ಮಾತ್ರ ನಿಮ್ಮ ಅಟ್ಟಹಾಸವೇ ಎಂದು ಬರೆದುಕೊಂಡಿದ್ದರು.

ಪುಟ 2

## ಗ್ರಾಮಸ್ಥರ ವಿರುದ್ಧ ಮತ್ತೆರಡು FIR



**ಮಂಡ್ಯ:** ಕೆರಗೋಡು ಗ್ರಾಮದಲ್ಲಿನ ಹನುಮ ಧ್ವಜವನ್ನು ತೆರವುಗೊಳಿಸಿದ ಹಿನ್ನೆಲೆಯಲ್ಲಿ ಗ್ರಾಮಸ್ಥರು ಜಿಲ್ಲಾಡಳಿತದ ವಿರುದ್ಧ ಪ್ರತಿಭಟನೆ ನಡೆಸಿದ್ದರು. ಇದೀಗ ಪೊಲೀಸರು ಪ್ರತಿಭಟನಾಕಾರರ ವಿರುದ್ಧ ಮತ್ತೆ ಎರಡು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಮಂಡ್ಯದ ಪಶ್ಚಿಮ ಠಾಣೆಯಲ್ಲಿ ಪ್ರತ್ಯೇಕ ಎರಡು ಪ್ರಕರಣ ದಾಖಲಾಗಿವೆ. ಅಲ್ಲದೇ ಸೋಮವಾರ ಕೆರಗೋಡು ಗ್ರಾಮದಿಂದ ಮಂಡ್ಯ ನಗರದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿವರೆಗು ನಡೆದ ಬಿಜೆಪಿ ಮತ್ತು ಜೆಡಿಎಸ್ ಪ್ರತಿಭಟನೆ ಮೆರವಣಿಗೆಯಲ್ಲಿ ಭಾಗಿಯಾಗಿದ್ದವರ ವಿರುದ್ಧವೂ ಮೊಕದ್ದಮೆ ಹೂಡಲಾಗಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಪಿಇಎಸ್ ಕಟ್ಟಡದಿಂದ ಜಿಗಿದು ವಿದ್ಯಾರ್ಥಿ ಆತ್ಮಹತ್ಯೆ

**ಬೆಂಗಳೂರು:** ಪಿಇಎಸ್ ವಿಶ್ವವಿದ್ಯಾಲಯದ ವಿದ್ಯಾರ್ಥಿಯೊಬ್ಬ ಮಂಗಳವಾರ ಎಲೆಕ್ಟ್ರಾನಿಕ್ಸ್ ಸಿಟಿಯಲ್ಲಿರುವ ತನ್ನ ಕ್ಯಾಂಪಸ್‌ನ ಕಟ್ಟಡದಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಪ್ರಥಮ ವರ್ಷದ ಬಿಬಿಎ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ. ಕೂಡಲೇ ಆತನನ್ನು ಆಸ್ಪತ್ರೆಗೆ ಸಾಗಿಸಲಾಯಿತಾದರೂ ಆತ ಮೃತಪಟ್ಟಿದ್ದಾನೆ ಎಂದು ವೈದ್ಯರು ಘೋಷಿಸಿದರು. ಪರಪ್ಪನ ಅಗ್ರಹಾರ ಪೊಲೀಸರು ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡಿದ್ದಾರೆ. ವಿದ್ಯಾರ್ಥಿಯ ಆತ್ಮಹತ್ಯೆಗೆ ಕಾರಣ ಇನ್ನೂ ತಿಳಿದು ಬಂದಿಲ್ಲ, ಈ ಸಂಬಂಧ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಕಳೆದ ಅಕ್ಟೋಬರ್‌ನಲ್ಲಿ 20 ವರ್ಷದ ವಿದ್ಯಾರ್ಥಿಯೊಬ್ಬ ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿರುವ ಕಟ್ಟಡದಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದ. ಜುಲೈ 2023 ರಲ್ಲಿ, ಗಿರಿನಗರ ಪೊಲೀಸ್ ವ್ಯಾಪ್ತಿಯ ಹೊಸಕೆರೆಹಳ್ಳಿಯಲ್ಲಿರುವ ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ 19 ವರ್ಷದ ಯುವಕ ತನ್ನ ಜೀವನವನ್ನು ಕೊನೆಗೊಳಿಸಿದ್ದ..

### ಪಿಜಿಗಳಿಗೆ ಹೊಸ ಮಾರ್ಗಸೂಚಿ



**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನ ಪಿಜಿಗಳು ಇನ್ಮುಂದೆ ಮತ್ತಷ್ಟು ಸ್ಮಾರ್ಟ್ ಆಗಲಿವೆ. ಪಿಜಿಗಳಿಗೆ ಪೊಲೀಸ್ ಇಲಾಖೆಯಿಂದ ಹೊಸ ಮಾರ್ಗಸೂಚಿ ಪ್ರಕಟಿಸುತ್ತಿದ್ದಂತೆ ಪಿಜಿ ಅಸೋಸಿಯೇಷನ್ ಹೊಸ ನಿರ್ಧಾರಕ್ಕೆ ಬಂದಿದೆ. ಪೊಲೀಸರಿಗೆ ನೆರವಾಗಲು ಹಾಗೂ ಪಿಜಿಯಲ್ಲಿದ್ದವರ ಸುರಕ್ಷತೆಗೆ ಐಡಿ ಕಾರ್ಡ್ ವ್ಯವಸ್ಥೆಯನ್ನು ಜಾರಿ ಮಾಡಲು ಮುಂದಾಗಿದೆ.

ಬೆಂಗಳೂರಿನಲ್ಲಿ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು ಹಾಗೂ ಪಿಜಿ ನಿವಾಸಿಗಳ ಸುರಕ್ಷತೆ, ಭದ್ರತೆಯ ವಿಚಾರಕ್ಕೆ ಪೊಲೀಸ್ ಇಲಾಖೆಯಿಂದ ಹೊಸ ಮಾರ್ಗಸೂಚಿ ಪ್ರಕಟ ಮಾಡಲಾಗಿತ್ತು. ಇದೀಗ ಪೊಲೀಸರಿಗೆ ಸಹಾಯಕಾರಿಯಾಗಲು ಪಿಜಿ ಅಸೋಸಿಯೇಷನ್ ಮತ್ತಷ್ಟು ಸ್ಮಾರ್ಟ್ ಪ್ಲ್ಯಾನ್ ಮಾಡಿದೆ. ಪಿಜಿಯಲ್ಲಿ ವಾಸ ಮಾಡುವವರಿಗೆ ಇನ್ಮುಂದೆ ಪಿಜಿ ಅಡ್ಮಿಶನ್‌ನ ಐಡಿ ಕಾರ್ಡ್ ನೀಡಲು ಚಿಂತನೆ ನಡೆಸುತ್ತಿದೆ. ಜೊತೆಗೆ ಫ್ಯಾಮಿಲಿ ಹಾಗೂ ಸ್ನೇಹಿತರ ಫೋನ್ ನಂಬರ್‌ಗಳನ್ನು ಸಂಗ್ರಹಿಸಿಕೊಳ್ಳಲು ಮುಂದಾಗಿದೆ.

ಪುಟ 2

## ಆದಾಯಕ್ಕಿಂತ ಹೆಚ್ಚು ಆಸ್ತಿ ಮಾಡಿದ ಭ್ರಷ್ಟ ಅಧಿಕಾರಿಗಳಿಗೆ ಶಾಕ್

# ಲೋಕಾಯುಕ್ತ ದಾಳಿ

**ಬೆಂಗಳೂರು:** ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪ ಹಿನ್ನೆಲೆ ಬೆಂಗಳೂರು, ಮಂಡ್ಯ, ಮೈಸೂರು, ಹಾಸನ, ತುಮಕೂರು, ಚಿಕ್ಕಮಗಳೂರು ಸೇರಿದಂತೆ ರಾಜ್ಯದ ಹಲವೆಡೆ ಲೋಕಾಯುಕ್ತ ದಾಳಿ ಬುಧವಾರ ನಡೆದಿದೆ.

ಲೋಕಾಯುಕ್ತ ಇನ್‌ಸ್ಪೆಕ್ಟರ್ ಅನಿಲ್ ರಾಥೋಡ್ ನೇತೃತ್ವದಲ್ಲಿ ಈ ದಾಳಿ ನಡೆದಿದೆ ಎಂದು ತಿಳಿದುಬಂದಿದೆ.

ಹಾಸನದಲ್ಲಿ ಆಹಾರ ನೀರಿಕ್ಷಕರ ನಿವಾಸ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ದಾಳಿ ಮಾಡಿದೆ. ಹೆಲ್ತ್ ಇನ್‌ಸ್ಪೆಕ್ಟರ್ ಜಗನ್ನಾಥ್ ನಿವಾಸದ ಮೇಲೆ ಲೋಕಾಯುಕ್ತ ಎಸ್ಪಿ ಮಲ್ಲಿಕ್ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ತಿರುಮಲೇಶ್, ಇನ್‌ಸ್ಪೆಕ್ಟರ್‌ಗಳಾದ ಬಾಲು, ಶಿಲ್ಪಾ ನೇತೃತ್ವದ ತಂಡ ದಾಳಿ ನಡೆಸಿದೆ. ಜಗನ್ನಾಥ್ ಸಹೋದರ ರಿಯಲ್ ಎಸ್ಟೇಟ್ ಉದ್ಯಮಿ ಕಿರಣ್ ನಿವಾಸ ಹಾಗೂ ಕಚೇರಿ ಮೇಲೂ ದಾಳಿ ಪರಿಶೀಲನೆ ನಡೆಸಲಾಗುತ್ತಿದೆ ಎಂದು ವರದಿಗಳಿಂದ ತಿಳಿದುಬಂದಿದೆ. ಚಿಕ್ಕಮಗಳೂರಿನಲ್ಲಿ ಕಡೂರು ಪಟ್ಟಣದಲ್ಲಿರುವ ವಾಣಿಜ್ಯ ಅಧಿಕಾರಿ ನೇತ್ರಾವತಿ ಮನೆ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ನೇತ್ರಾವತಿ ಅವರು ತರೀಕೆರೆ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಯಾಗಿದ್ದಾರೆ. 13 ವರ್ಷದಿಂದ ಅಧಿಕ ಆಸ್ತಿ ಹೊಂದಿರುವ ಆರೋಪ ಹೊತ್ತಿದ್ದಾರೆ.







ರಾಜ್ಯದ ಹಲವೆಡೆ ಮನೆ, ಕಚೇರಿಗಳ ಮೇಲೆ ದಾಳಿ

**40 ಸ್ಥಳಗಳಲ್ಲಿ ಶೋಧ**





ಇನ್ನು ಮಂಡ್ಯದಲ್ಲಿ ಪಿಡಬ್ಲ್ಯುಡಿ ಇಲಾಖೆ ಇಇ ಹರ್ಷ ಎಂಬವರ ಮನೆ, ಕಚೇರಿ, ಕುಟುಂಬಸ್ಥರು, ಸಂಬಂಧಿಕರ ಮನೆ ಮೇಲೂ ಲೋಕ ದಾಳಿ ಮಾಡಿದೆ. ಇವರ ಮನೆ ಬೆಂಗಳೂರಿನ ವಿದ್ಯಾರಣ್ಯಪುರದಲ್ಲಿದೆ. ಮಂಡ್ಯದ ಕಚೇರಿ, ಮಾವನ ಮನೆ, ನಾಗಮಂಗಲದಲ್ಲಿರುವ ಫಾರ್ಮ್ ಹೌಸ್ ಮೇಲೆ ದಾಳಿ ನಡೆಸಲಾಗಿದೆ. ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳಿಂದ ಆರು ಕಡೆ ದಾಳಿ ಮಾಡಿದ್ದಾರೆ.

ಮುಡಾ ಇಂಜಿನಿಯರ್ ಯಜ್ಞೇಂದ್ರ, ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಮೈಸೂರಿನ ಜೆ.ಪಿ.ನಗರದ ಮನೆ, ವಿಜಯನಗರದ ಅಪಾರ್ಟ್‌ಮೆಂಟ್, ಕೆ.ಆರ್.ನಗರ ತಾಲೂಕಿನ ನಗರ್ಲೆ ಗ್ರಾಮದಲ್ಲಿರುವ ಯಜ್ಞೇಂದ್ರ, ಸಹೋದರನ ಮನೆ ಮೇಲೂ ದಾಳಿ ನಡೆಸಿ ಪರಿಶೀಲನೆ ನಡೆಸಲಾಗುತ್ತಿದೆ. ತುಮಕೂರಿನಲ್ಲೂ ಲೋಕಾಯುಕ್ತ ಅಧಿಕಾರಿಗಳ ದಾಳಿ ನಡೆದಿದೆ. ತುಮಕೂರಿನ ಶಿರಾ ಗೇಟ್ ಬಳಿಯಿರುವ ಏಖಆಐ ಇಂಜಿನಿಯರ್ ಹನುಮಂತರಾಯಪ್ಪ ಮನೆ ಮೇಲೆ ದಾಳಿ ನಡೆಸಿ ಪರಿಶೀಲನೆ ಮಾಡಲಾಗುತ್ತಿದೆ ಎಂದು ತಿಳಿದುಬಂದಿದೆ.

## ಡಾ.ಮಂಜುನಾಥ್‌ಗೆ ಕರ್ನಾಟಕ ರತ್ನ ಘೋಷಿಸಿ

### ಸಿಎಂಗೆ ಆರ್.ಅಶೋಕ್ ಮನವಿ



**ಬೆಂಗಳೂರು:** ಬಡವರ ಪಾಲಿನ ಆಶಾಕಿರಣ ಡಾ.ಸಿ.ಎನ್.ಮಂಜುನಾಥ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಬೇಕು ಎಂದು ಮುಖ್ಯಮಂತ್ರಿಗಳಿಗೆ ವಿಪಕ್ಷ ನಾಯಕ ಆರ್.ಅಶೋಕ್ ಮನವಿ ಮಾಡಿದ್ದಾರೆ. ಜಯದೇವ ಆಸ್ಪತ್ರೆ ನಿರ್ದೇಶಕರಾಗಿ ಸೇವೆ ಸಲ್ಲಿಸಿರುವ ಮಂಜುನಾಥ್ ಅವರು ಇಂದು ನಿವೃತ್ತರಾಗಲಿದ್ದಾರೆ. ಅವರ ಸಾಧನೆ ಸ್ಮರಿಸಿರುವ ಅಶೋಕ್ ಸೋಷಿಯಲ್ ಮೀಡಿಯಾದ ಎಕ್ಸ್‌ನಲ್ಲಿ ಪೋಸ್ಟ್ ಹಾಕಿದ್ದಾರೆ. ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕರಾಗಿ 16 ವರ್ಷಗಳ ಕಾಲ ಸೇವೆ ಸಲ್ಲಿಸಿ ಇಂದು ನಿವೃತ್ತರಾಗುತ್ತಿರುವ ನಾಡಿನ ಪ್ರಖ್ಯಾತ ವೈದ್ಯರಾದ ಡಾ.ಸಿ.ಎನ್.ಮಂಜುನಾಥ್ ಅವರ ನಿವೃತ್ತಿ ಜೀವನ ಸುಖಕರವಾಗಿರಲೆಂದು ಮನಸಾರೆ ಶುಭ ಹಾರೈಸುತ್ತೇನೆ ಎಂದಿದ್ದಾರೆ.

ಪುಟ 2

## ಆಂಜನೇಯನ ತಂಟೆಗೆ ಬರ್ಬೇಡಿ ಹುಷಾರ್



ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರೇ ಮಂಡ್ಯದ ಕೆರಗೋಡು ಹನುಮಧ್ವಜ ತಂಟೆಗೆ ಬರಬೇಡಿ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಅವರು ಸಿಎಂ ಸಿದ್ದರಾಮಯ್ಯಗೆ ಟಾಂಗ್ ಕೊಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರದಲ್ಲಿ ನಡೆದ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿ ಮಂಡ್ಯದ ಕೆರಗೋಡು ಹುನಮಧ್ವಜ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಆಂಜನೇಯನಿಗೆ ಬೆಂಕಿ ಹಚ್ಚಿದ ರಾವಣನ ಕಥೆ ಏನಾಯ್ತು ಲಂಕಾ ದಹನವಾಯ್ತು.

ಪುಟ 2

## ಭಟ್ಕಳದಲ್ಲಿ ಸಾವರ್ಕರ್ ವೃತ್ತ, ಭಗವಾಧ್ವಜ ತೆರವು

**ಕಾರವಾರ:** ಮಂಡ್ಯ ಜಿಲ್ಲೆಯ ಕೆರಗೋಡು ಗ್ರಾಮದಲ್ಲಿ ಹಾರಿಸಲಾಗಿದ್ದ ಹನುಮ ಧ್ವಜ ತೆರವುಗೊಳಿಸಿರುವ ಪ್ರಕರಣ ಮಾಸುವ ಮುನ್ನ ಉತ್ತರ ಕನ್ನಡ ಜಿಲ್ಲೆಯಲ್ಲಿ ಇದೇ ತರಹದ ಮತ್ತೊಂದು ಘಟನೆ ನಡೆದಿದೆ. ಭಟ್ಕಳ ತಾಲೂಕಿನ ತೆಂಗಿನಗುಂಡಿ ಗ್ರಾಮದಲ್ಲಿನ ಸಮುದ್ರ ದಡದಲ್ಲಿದ್ದ ಸಾವರ್ಕರ್ ವೃತ್ತ ಮತ್ತು ಭಗವಾಧ್ವಜವನ್ನು ತೆರವುಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ತೆಂಗಿನಗುಂಡಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.ಬಿಜೆಪಿ ಮುಖಂಡರು ಮತ್ತು ಗ್ರಾಮ ಪಂಚಾಯಿತಿ ಸದಸ್ಯರಾದ ಗೋವಿಂದ್ ನಾಯ್ಕ್, ಸುಬ್ರಾಯ ದೇವಾಡಿಗ ನೇತೃತ್ವದಲ್ಲಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಸಾವರ್ಕರ್ ನಾಮಫಲಕ ಅಳವಡಿಕೆಗೆ ಒಪ್ಪಿಗೆ ನೀಡಲಾಗಿತ್ತು. ಈಗ ಗ್ರಾಮ ಪಂಚಾಯಿತಿ ಪಿಡಿಒ ಏಕಾಏಕಿ ಜೆಸಿಬಿ ಮೂಲಕ ನಾಮಫಲಕ ತೆರವುಗೊಳಿಸಿದ್ದಾರೆ ಎಂದು ಬಿಜೆಪಿ ಮುಖಂಡರು ಮತ್ತು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು.

ಯಾವ ಅಪ್ಪನ ಮನೆ ಆಸ್ತಿ ಅಂತಾ ಧ್ವಜಸ್ತಂಭ ತೆಗೆದಿದ್ದೀರಿ? ಇದೇನು ಪಾಕಿಸ್ತಾನ ಅಂತಾ ತೆಗೆದ್ರಾ? ಹಿಂದೂಗಳು ಬೇವರ್ಸಿಗಳು ಅಂತ ಅಂದುಕೊಂಡು ತೆಗೆದ್ರಾ? ಹಿಂದೂಗಳು ಸುಮ್ಮನೆ ಕುಳಿತಿಲ್ಲ, ನಿಮಗೆ ಯಾರ ಒತ್ತಡವಿದೆ ಹೇಳಿ. ಇದು ಭಟ್ಕಳ, ಯಾರದ್ದೋ ಕೈಗೊಂಬೆಯಾಗಿ ಆಟವಾಡಬೇಡಿ ಎಂದು ಬಿಜೆಪಿ ಮುಖಂಡ ಗೋವಿಂದ ನಾಯ್ಕ್ ಪಿಡಿಒಗೆ ತರಾಟೆಗೆ ತೆಗೆದುಕೊಂಡರು.



## ಟ್ರಕ್ಕಿಂಗ್‌ಗೆ ಸರ್ಕಾರದ ಬ್ರೇಕ್





**ಬೆಂಗಳೂರು:** ಅನಧಿಕೃತ ಚಾರಣಕ್ಕೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಹೊಸ ಪ್ರಮಾಣಿತ ಕಾರ್ಯ ವಿಧಾನ ಜಾರಿಯಾಗುವವರೆಗೂ ಚಾರಣಕ್ಕೆ ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ಆನ್‌ಲೈನ್ ಬುಕ್ಕಿಂಗ್ ಇಲ್ಲದ ಚಾರಣ ಪಾಯಿಂಟ್‌ಗಳಿಗೆ ನಿಷೇಧಿಸಲಾಗಿದೆ. ಆನ್‌ಲೈನ್ ಬುಕ್ಕಿಂಗ್ ವ್ಯವಸ್ಥೆ, ನಿರ್ದಿಷ್ಟ ಸಂಖ್ಯೆಗೆ ಸೀಮಿತಗೊಳಿಸುವ ಕಾರಣ ನಿಷೇಧಿಸಲಾಗಿದೆ. ಅರಣ್ಯ ವ್ಯಾಪ್ತಿಯ ಗಿರಿ ಶಿಬಿರಗಳಲ್ಲಿ ಚಾರಣ ಮಾಡುವವರ ಹವ್ಯಾಸ ಏರಿಕೆಯಾಗಿದ್ದು, ವಾರಾಂತ್ಯದಲ್ಲಿ ಜನದಟ್ಟಣೆ ಹೆಚ್ಚಾಗುತ್ತಿದೆ. ಅಲ್ಲದೆ ಚಾರಣ ಹೋದವರು ಅರಣ್ಯ ಪ್ರದೇಶಗಳಲ್ಲಿ ಪ್ಲಾಸ್ಟಿಕ್ ಬ್ಯಾಗ್, ಬಾಟಲಿ ಎಸೆಯುತ್ತಿದ್ದಾರೆ.

ಪುಟ 2

## ಆಕಸ್ಮಿಕ ಬೆಂಕಿ ತಗುಲಿ ಲಕ್ಷಾಂತರ ಮೌಲ್ಯದ

# ಕೊಬ್ಬರಿ ಬೆಂಕಿಗಾಹುತಿ



ಚಿಕ್ಕಬ್ಯಾಲದಕೆರೆ ಬಳಿಯ ತೋಟದಲ್ಲಿದ್ದ ಗೋದಾಮಿನಲ್ಲಿ ಅವಘಡ

**ಚಿತ್ರದುರ್ಗ:** ಕೊಬ್ಬರಿ ಗೋದಾಮುವೊಂದಕ್ಕೆ ಆಕಸ್ಮಿಕ ಬೆಂಕಿ ತಗುಲಿದ ಪರಿಣಾಮ ಗೋದಾಮು ಹೊತ್ತಿ ಉರಿದಿದ್ದು, ಲಕ್ಷಾಂತರ ಮೌಲ್ಯದ ಕೊಬ್ಬರಿ ಬೆಂಕಿಗಾಹುತಿಯಾದ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ.

ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲೂಕಿನ ಚಿಕ್ಕಬ್ಯಾಲದಕೆರೆ ಗ್ರಾಮದಲ್ಲಿ ಘಟನೆ ನಡೆದಿದೆ. ಚಿಕ್ಕಬ್ಯಾಲದಕೆರೆ ಬಳಿಯ ತೋಟದಲ್ಲಿದ್ದ ಗೋದಾಮು ಉದ್ಯಮಿ ಜಗದೀಶ್ ಎಂಬವರಿಗೆ ಈ ಕೊಬ್ಬರಿ ಗೋದಾಮು ಸೇರಿದ್ದು, ಗ್ರಾಮದ ಹೊರವಲಯದಲ್ಲಿತ್ತು. ಇದೀಗ ಆಕಸ್ಮಿಕ ಬೆಂಕಿ ತಗುಲಿ ಲಕ್ಷಾಂತರ ಮೌಲ್ಯದ ಕೊಬ್ಬರಿ ಸುಟ್ಟು ಕರಕಲಾಗಿದ್ದು, ಅಗ್ನಿಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಘಟನಾ ಸ್ಥಳಕ್ಕೆ ಶ್ರೀರಾಂಪುರ ಠಾಣೆ ಪಿಐ ಮಧು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

## ಸವದಿಯರಿಗೆ ಬಿಜೆಪಿ ಸೇರ್ಪಡೆ ಆಗುವಂತೆ ಆಹ್ವಾನ ಕೊಟ್ಟಿದ್ದೇವೆ

**ಬೆಳಗಾವಿ:** ಲಕ್ಷ್ಮಣ ಸವದಿಯವರನ್ನು ಕರೆದುಕೊಂಡು ಬರುವ ಜವಾಬ್ದಾರಿ ಎಲ್ಲರ ಹೆಗಲಿಗಿದೆ. ನಾನಿರಬಹುದು, ಈರಣ್ಣಾ ಕಡಾಡಿ, ಮಹಾಂತೇಶ್ ದೊಡ್ಡಗೌಡರ, ರಮೇಶ್ ಕತ್ತಿ ಸೇರಿ ಜಿಲ್ಲೆಯ ಎಲ್ಲ ನಾಯಕರ ಮೇಲಿದ್ದು ಸವದಿ ಬಿಜೆಪಿ ಬಂದ್ರೆ, ಅನುಕೂಲ ಆಗುತ್ತದೆ ಎಂದ ಸಂಸದ ಅಣ್ಣಾಸಾಹೇಬ ಹೇಳಿದರು. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಲಕ್ಷ್ಮಣ ಸವದಿಯನ್ನ ಕರೆದುಕೊಂಡು ಬರುವ ಜವಾಬ್ದಾರಿ ಎಲ್ಲರ ಹೆಗಲಿಗಿದೆ. ಈ ಬಗ್ಗೆ ಸವದಿ ಅವರು ಒಪ್ಪಿಗೆ ಕೊಡಬೇಕು. ಕೇಂದ್ರದರ ಮುಖಂಡರ ಜೊತೆಗೆ ಚರ್ಚೆ ಆಗಬೇಕು. ಸವದಿಯವರು ಬರಲಿ ಅನ್ನೋದು ನಮ್ಮ ಆಶಯ ಬಂದರೆ ಪಕ್ಷಕ್ಕೆ, ಬೆಳಗಾವಿ ಜಿಲ್ಲೆಗೆ ಒಳ್ಳೆಯದಾಗುತ್ತೆ. ನಮ್ಮ ಪಕ್ಷದಿಂದ ಹೊರ ಹೋದವರಿಗೆ ನಾವು ಆಹ್ವಾನ ಕೊಟ್ಟಿದ್ದೇವೆ. ಸವದಿಯರಿಗೆ ನಾವು ಕೂಡ ಆಹ್ವಾನ ಕೊಟ್ಟಿದ್ದೇವೆ. ನಮ್ಮ ರಾಜ್ಯಾಧ್ಯಕ್ಷರು, ಎಲ್ಲರು ಕೂಡ ಪ್ರಯತ್ನ ಮಾಡುತ್ತಿದ್ದಾರೆ ಎಂದರು. ಅದೇ ರೀತಿ ಎಷ್ಟು ಜನ ಬಿಜೆಪಿಗೆ ಬರ್ತಾರೆ ಅಂತಾ ಹೇಳಲು ಆಗಲ್ಲ. ಬಿಟ್ಟು ಹೋದವರು ಎಲ್ಲರೂ ಬರಬಹುದು. ಯಾಕೆಂದರೆ ಬಿಜೆಪಿಯಲ್ಲಿದ್ದವರು ಹೊರಗೆ ಇರುವುದೇ ಕಷ್ಟ ಹೀಗಾಗಿ ನಮ್ಮ ಪಕ್ಷಕ್ಕೆ ಬರ್ತಾರೆ. ಚುನಾವಣೆ ಮೊದಲು ಸವದಿಯವರು ಪಕ್ಷಕ್ಕೆ ಬಂದ್ರೆ, ಒಳ್ಳೆಯದಾಗುತ್ತೆ. ಸವದಿಯವರು ಪಕ್ಷಕ್ಕೆ ಬರಲು ಒಲವು ತೋರಿಸಬಹುದು ಅನಿಸುತ್ತೆ. ಅವರು ಬರುವವರೆಗೂ ಪಾಸಿಟಿವ್ ಇದ್ದಾರೆ ಅಂತಾನೇ ಹೇಳ್ತಾ ಹೋಗೊದು ಎಂದರು.

ಒಟ್ಟಾರೆ ಜಗದೀಶ್ ಶೆಟ್ಟರ್ ಬಿಜೆಪಿ ಸೇರ್ಪಡೆಯಾದ ಬಳಿಕ ಶತಾಯಗತಾಯ ಲಕ್ಷ್ಮಣ ಸವದಿಯನ್ನು ಪಕ್ಷಕ್ಕೆ ಸೇರಿಸಿಕೊಳ್ಳಲು ಕೇಸರಿ ಪಡೆ ರಣತಂತ್ರ ರೂಪಿಸುತ್ತಿರುವುದು ಈಗ ಗುಟ್ಟಾಗಿ ಉಳಿದಿಲ್ಲ. ಆದರೆ ಸವದಿ ಮಾತ್ರ ನಾನು ಬಿಜೆಪಿ ಸೇರುವ ಪ್ರಶ್ನೆಯೇ ಇಲ್ಲ ಎಂದು ಹೇಳಿಕೊಂಡು ಓಡಾಡುತ್ತಿದ್ದಾರೆ. ಅಂತಿಮವಾಗಿ ಸವದಿ ಕೂಡ ಮರಳಿ ಗೂಡು ಸೇರುತ್ತಾರಾ ಎಂಬುದನ್ನು ಕಾಲವೇ ಉತ್ತರಿಸಬೇಕಿದೆ.

## ಫುಟ್‌ಪಾತ್‌ಗಳ ಒತ್ತುವರಿ ತೆರವು; ಬಿಬಿಎಂಪಿಗೆ ಹೈಕೋರ್ಟ್ ತರಾಟೆ

ಬೆಂಗಳೂರು: ನಗರದಲ್ಲಿ ಫುಟ್‌ಪಾತ್‌ಗಳ ಒತ್ತುವರಿ ತೆರವು ವಿಚಾರವಾಗಿ ಕ್ರಮ ಕೈಗೊಳ್ಳದ ಬಿಬಿಎಂಪಿಗೆ ಹೈಕೋರ್ಟ್ ತರಾಟೆ ತೆಗೆದುಕೊಂಡಿದೆ. ಬಿಬಿಎಂಪಿ ಜನಗಳಿಂದ ತೆರಿಗೆ ಸಂಗ್ರಹಿಸುತ್ತದೆ. ಸರಿಯಾದ ರಸ್ತೆ, ಫುಟ್‌ಪಾತ್ ನಿರ್ಮಿಸಲು ತೆರಿಗೆ ನೀಡುತ್ತೇವೆ. ಆದರೆ ರಸ್ತೆ, ಫುಟ್‌ಪಾತ್ ಸುಧಾರಿಸಲು ಬಿಬಿಎಂಪಿ ಮುಂದಾಗುತ್ತಿಲ್ಲ. ಒತ್ತುವರಿ ತೆರವಿಗೆ ಸ್ವಯಂಪ್ರೇರಿತ ಪಿಐಎಲ್ ದಾಖಲಿಸುತ್ತೇವೆ. ಕೆಲವರು ಫುಟ್‌ಪಾತ್‌ಗಳನ್ನು ಕಾರು ಪಾರ್ಕಿಂಗ್‌ಗಾಗಿ ಬಳಸುತ್ತಿದ್ದಾರೆ. ಎಲ್ಲಾ ಫುಟ್‌ಪಾತ್‌ಗಳ ಒತ್ತುವರಿಗಳನ್ನು ತೆರವುಗೊಳಿಸಬೇಕು. ಹೈಕೋರ್ಟ್‌ನ ಹಂಗಾಮಿ ಸಿಜೆ ಪಿ.ಎಸ್.ದಿನೇಶ್ ಕುಮಾರ್ ಮತ್ತು ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡರಿದ್ದ ಪೀಠದಿಂದ ಸೂಚನೆ ನೀಡಲಾಗಿದೆ. ಫೆ.1ರಂದು ಬಿಬಿಎಂಪಿ ಮುಖ್ಯ ಆಯುಕ್ತರ ಖುದ್ದು ಹಾಜರಿಗೆ ಆದೇಶ ನೀಡಲಾಗಿದೆ.



ಬಿಬಿಎಂಪಿ ವ್ಯಾಪ್ತಿಯ ನಾಲ್ಕು ವಲಯಗಳಾದ ಪಶ್ಚಿಮ, ಯಲಹಂಕ, ಆರ್.ಆರ್ ನಗರ ಮತ್ತು ದಕ್ಷಿಣ ವಲಯದಲ್ಲಿ ಬೀದಿ ಬದಿ ವ್ಯಾಪಾರಿಗಳ ಜೊತೆಗೆ ರಸ್ತೆ ಬಳಿ ನಿಲ್ಲಿಸಿದ್ದ ಬಿಡಿ ವಾಹನಗಳನ್ನು ಬಿಬಿಎಂಪಿ ಅಧಿಕಾರಿಗಳು ಇತ್ತೀಚೆಗೆ ತೆರವು ಮಾಡಿಸಿದ್ದರು. ಹಾಗಾಗಿ ಬೀದಿಬದಿ ವ್ಯಾಪಾರಿಗಳ ಒಕ್ಕೂಟ ಸಂಘಟನೆ ಮುಖಂಡ ಬಾಬು ಸುದ್ದಿಗೋಷ್ಠಿ ನಡೆಸಿ ಆಕ್ರೋಶ ಹೊರ ಹಾಕಿತ್ತು. ಕಾನೂನು ಉಲ್ಲಂಘನೆ ಮಾಡಿ ವ್ಯಾಪಾರಿಗಳನ್ನ ಎತ್ತಂಗಡಿ ಮಾಡುತ್ತಿದ್ದಾರೆ. ಅಧಿಕಾರಿಗಳ ವಿರುದ್ದ ಎಫ್‌ಐಆರ್ ಹಾಕಬೇಕು ಎಂದು ಕಿಡಿಕಾರಿದ್ದರು. ಯಾವುದೇ ನೋಟಿಸ್ ನೀಡದೇ ಎತ್ತಂಗಡಿ ಮಾಡಿದ್ದಾರೆ. ಕಾನೂನಿಗೆ ಬಿಬಿಎಂಪಿ ಅಧಿಕಾರಿಗಳು ಕ್ಯಾರೇ ಅಂತಿಲ್ಲ. ಚುನಾವಣೆ ವೇಳೆ ರಾಹುಲ್ ಗಾಂಧಿಯೊಂದಿಗೆ ಒಂದು ಸಂವಾದ ಏರ್ಪಡಿಸಲಾಗಿತ್ತು. ಅಲ್ಲಿ ರಾಹುಲ್ ಗಾಂಧಿ ಬೀದಿ ವ್ಯಾಪಾರಿಗಳು ಬೆಂಗಳೂರಿನ ಆಸ್ತಿ ಎಂದಿದ್ದರು. ಸರ್ಕಾರವೇ ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ಕೊಟ್ಟಿದೆ. ಬೀದಿ ಬದಿ ವ್ಯಾಪಾರಕ್ಕೆ ಸರ್ಕಾರ ಸಾಲ ಸೌಲಭ್ಯ ಕೊಡುತ್ತೆ. ಬಿಬಿಎಂಪಿ ಕಾನೂನು ಬಾಹಿರ ಎತ್ತಂಗಡಿ ಮಾಡುತ್ತಿರುವುದನ್ನು ನಿಲ್ಲಿಸಬೇಕು. ಅಧಿಕಾರಿಗಳ ವಿರುದ್ದ ಎಫ್ ಐಆರ್ ಹಾಕಬೇಕು ಎಂದು ಆಗ್ರಹಿಸಿದ್ದರು.

### ಮಂಡ್ಯ ಹನುಮ ಧ್ವಜ ವಿವಾದ

# ಸರ್ಕಾರವೇ ನಕಲಿ ದಾಖಲೆ ಸೃಷ್ಟಿ

**ಬೆಂಗಳೂರು:** ಮಂಡ್ಯ ಜಿಲ್ಲೆಯ ಕೆರಗೋಡಿನಲ್ಲಿ ಹನುಮ ಧ್ವಜ ತೆರವು ಪ್ರಕರಣಕ್ಕೆ ಸಂಬಂಧಿಸಿ ಸಚಿವ ಎನ್ ಚಲುವರಾಯಸ್ವಾಮಿ ಮಾಡಿರುವ ಆರೋಪಗಳಿಗೆ ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ತೀಕ್ಷ್ಣ ತಿರುಗೇಟು ನೀಡಿದ್ದಾರೆ. ಧ್ವಜ ತೆರವು ವಿಚಾರವಾಗಿ ಸರ್ಕಾರವೇ ನಕಲಿ ದಾಖಲೆ ಸೃಷ್ಟಿಸಿದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ. ಕೆರಗೋಡಿನ ಬಸ್ ನಿಲ್ದಾಣದ ಧ್ವಜಸ್ತಂಭ ಸ್ಥಾಪನೆಗೆ ಮನವಿ ಮಾಡಿದ್ದ ಗೌರಿ ಶಂಕರ್ ಸೇವಾ ಟ್ರಸ್ಟ್, ಯಾವ ಧ್ವಜ ಅಂತ ಹೇಳಿರಲಿಲ್ಲ. ಅದಕ್ಕೆ ಅನುಮತಿ ನೀಡಲಾಗಿತ್ತು. ಈಗ ಸರ್ಕಾರವೇ ನಕಲಿ ದಾಖಲೆ ಸರ್ಕಾರ ಸೃಷ್ಟಿ ಮಾಡಿಕೊಂಡು ಆರೋಪ ಮಾಡುತ್ತಿದೆ ಎಂದು ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದಾರೆ.

ಗೌರಿ ಶಂಕರ್ ಟ್ರಸ್ಟ್‌ಗೆ ನವೆಂಬರ್ ತಿಂಗಳಲ್ಲಿ ಅನುಮತಿ ನೀಡಲಾಗಿತ್ತು. ಇಂಥದ್ದೇ ಧ್ವಜ ಎಂದು ಎಲ್ಲಿಯೂ ಉಲ್ಲೇಖಿಸಿರಲಿಲ್ಲ. 2023ರ ಡಿಸೆಂಬರ್ 29ರಂದು ಮತ್ತೆ ಹೊಸ ಅರ್ಜಿ ತೆಗೆದುಕೊಂಡಿದ್ದಾರೆ. ಅದನ್ನು ತಿದ್ದಿಕೊಂಡಿದ್ದಾರೆ. ಇದರಲ್ಲಿ ತ್ರಿವರ್ಣ ಧ್ವಜ, ಕನ್ನಡ ಧ್ವಜ ಹಾಕಲು ಅನುಮತಿ ನೀಡಿದ್ದೇವೆ ಎಂದಿದೆ. ಜನವರಿ ತಿಂಗಳಲ್ಲಿ ಪತ್ರ ಸೃಷ್ಟಿ ಮಾಡಿಕೊಳ್ಳಲಾಗಿದೆ. ಮುಚ್ಚಳಿಕೆಯಲ್ಲಿರುವ ಹೆಸರು, ಅರ್ಜಿಗಳಲ್ಲಿ ಬೇರೆ ಹೆಸರುಗಳು ಇವೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಕೆಂಪೇಗೌಡ, ಕುವೆಂಪು ಪ್ರತಿಮೆ ಸ್ಥಾಪನೆ ಸಂಬಂಧ ಅರ್ಜಿ ಹಾಕಿಸಿದ್ದಾರೆ. ಕಾಂಗ್ರೆಸ್ ನಾಯಕರಿಗೆ ಇನ್ನೂ ಬುದ್ಧಿ ಬಂದಿಲ್ಲ. 5/1 ಕ್ಕೆ ಒಂದು ?ರತ್ತು ಹಾಕಿದ್ದಾರೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ನಾನು ಸೋಮವಾರದ ಭಾ?ಣದಲ್ಲಿ ಬೆಂಕಿ ಹಚ್ಚಿ, ಫ್ಲೆಕ್ಸ್ ಹರಿಯಿರಿ ಅಂತ ಹೇಳಿಲ್ಲ. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಿ ಎಂಬುದಾಗಿ ಆಗ್ರಹಿಸಿದ್ದೆ ಅಷ್ಟೆ. ಕೆರೆಗೋಡಿನ ಜನತೆ ಜನವರಿ 26 ರಂದು ರಾಷ್ಟ್ರ ಧ್ವಜ ಹಾರಿಸಿದ್ದಾರೆಯೇ ವಿನಃ ಸರ್ಕಾರ ಅಲ್ಲ. ಕಾಂಗ್ರೆಸ್



ಶಾಸಕರನ್ನು ಕರೆದಿಲ್ಲ ಎಂದು ಈ ಗಲಾಟೆ ಆರಂಭ ಆಗಿದೆ ಎಂದು ಅವರು ದೂರಿದ್ದಾರೆ.

**ನಿಮ್ಮಿಂದ ಕಲಿಯಬೇಕಾ ಚಲುವರಾಯಸ್ವಾಮಿ ಅವರೇ:**

ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರಿಗೆ ನಮಸ್ಕಾರ. ನಾನು ನಿಮ್ಮಿಂದ ಕಲಿಯಬೇಕಾ? 200 ಜನ ರೈತರು ಆತ್ಮಹತ್ಯೆ ಮಾಡಿಕೊಂಡರು. ನೀವು ಒಂದು ರೂಪಾಯಿ ಕೂಡ ಬಿಚ್ಚಿಲ್ಲ. ನನ್ನ ದುಡಿಮೆ ಹಣ ಕೊಟ್ಟು ಬಂದಿದ್ದೇನೆ. ಅದೂ ಸಹ ವರ್ಗಾವಣೆ ದಂಧೆಯಿಂದ ಬಂದ ಹಣ ಅಲ್ಲ. ನಿಮ್ಮಿಂದ ವಿನಯ ಕಲಿಯಬೇಕಿಲ್ಲ. ನಾನು ಜಿಲ್ಲೆ ಹಾಳು ಮಾಡೋಕೆ ಬಂದಿದ್ದೇನೆಯೇ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು. ಅಲ್ಲದೆ, ಚಲುವರಾಯಸ್ವಾಮಿ ಆರೋಪಗಳಿಗೆ ತಿರುಗೇಟು ನೀಡಿದರು.

ಕಳೆದ ಎರಡು ದಿನಗಳಿಂದ ಮಂಡ್ಯದಲ್ಲಿ ಆರಂಭ ಆಗಿರುವ ಒಂದು ಘಟನೆಯಿಂದಾಗಿ ಈ ಸರ್ಕಾರದ ಕೆಲ ನಡವಳಿಕೆ ಬಗ್ಗೆ ಮತನಾಡಲೇಬೇಕಿದೆ. ಮಾಜಿ ಸಿಎಂ ದಿ. ದೇವರಾಜು ಅರಸು ಅವರಿಗಿಂತ ಸಿಎಂ ಸಿದ್ದರಾಮಯ್ಯ ಒಂದು ಹೆಜ್ಜೆ ಮುಂದೆ ಹೋಗಿ ಶೋಷಿತರ ಧ್ವನಿಯಾಗಿ ಚಿತ್ರದುರ್ಗದಲ್ಲಿ ಮಾಡಿದ ವೀರಾವೇಶ ಭಾಷಣ ಕೇಳಿದ್ದೇನೆ. ಮತ್ತೊಂದೆಡೆ, ಮಂಡ್ಯದಲ್ಲಿ ನಮ್ಮ ಹಳೆಯ ಸ್ನೇಹಿತ ಮಾತನಾಡಿರುವುದನ್ನೂ ಕೇಳಿದ್ದೇನೆ. ಮಂಡ್ಯವನ್ನು ಹಾಳು ಮಾಡಲು ಕುಮಾರಸ್ವಾಮಿ ಬಂದಿದ್ದಾರೆ ಎಂದಿದ್ದಾರೆ. ಮಂಡ್ಯದಲ್ಲಿ ನಡೆದ ಘಟನೆಗೂ ನನಗೂ ಏನೂ ಸಂಬಂಧ ಎಂದು ಸಿಎಂ ಮತ್ತು ಉಸ್ತುವಾರಿ ಸಚಿವರನ್ನು ಕೇಳುತ್ತೇನೆ. ಬಿಜೆಪಿ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ನಾನು ಕೊನೆ ಹಂತದಲ್ಲಿ ಭಾಗಿಯಾಗಿದ್ದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

### ಕೇಸರಿ ಶಾಲು ಹಾಕುವುದು ತಪ್ಪೇ

**ಪಾಪ ಹಳೆಯ ಸ್ನೇಹಿತರು (ಚಲುವರಾಯಸ್ವಾಮಿ) ಹೇಳಿದ್ದಾರೆ, ಕುಮಾರಸ್ವಾಮಿ ಕೇಸರಿ ಶಾಲು ಹಾಕಿಕೊಂಡು ಜೆಡಿಎಸ್ ಕಾರ್ಯಕರ್ತರ ಶಕ್ತಿ ಕೊನೆಗೊಳಿಸಲು ಹೊರಟಿದ್ದಾರೆ ಎಂದು. ನಾನು ಕೇಸರಿ ಶಾಲು ಹಾಕಿಕೊಂಡಿದ್ದು ಮಹಾನ್ ಅಪರಾಧವಾ? ಕಾಂಗ್ರೆಸ್‌ನವರಿಗೆ ಕೇಸರಿ ಮೇಲೆ ಯಾಕೆ ಸಂಕುಚಿತ ಮನೋಭಾವ? ಮಂಡ್ಯ ಉಸ್ತುವಾರಿ ಸಚಿವರಿಂದ ನಾನು ನನ್ನ ಪಕ್ಷವನ್ನು ಹೇಗೆ ಉಳಿಸಿಕೊಳ್ಳಬೇಕು ಎಂಬುದನ್ನು ಕಲಿಯಬೇಕಿಲ್ಲ. ನನಗೆ ಜನ ಕೊಟ್ಟಿರುವ ಪ್ರೀತಿ ಇದೆ ಎಂದು ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಡ್ಯ ಸಕ್ಕರೆ ಕಾರ್ಖಾನೆಗೆ ಹಣ ಬಿಡುಗಡೆ ಮಾಡಿಲ್ಲ ಎಂದು ಚಲುವರಾಯಸ್ವಾಮಿ ದೂರಿದ್ದಾರೆ. ನಾನು ಸಿಎಂ ಆಗಿದ್ದಾಗ ಕಾಂಗ್ರೆಸ್‌ನವರು ಕೆಲಸ ಮಾಡಲು ಬಿಡಲಿಲ್ಲ. ನಮ್ಮ ಕೊಡುಗೆ ಮಂಡ್ಯಗೆ ಏನೂ ಅಂತ ಜನ ನಿರ್ಧಾರ ಮಾಡುತ್ತಾರೆ. ನಿಮ್ಮ ಸರ್ಟಿಫಿಕೇಟ್ ಬೇಕಿಲ್ಲ. ಸೋಮವಾರ ನಡೆದ ಅಹಿತಕರ ಘಟನೆಗೆ ಉಸ್ತುವಾರಿ ಸಚಿವರು ಹಾಗೂ ಕಾಂಗ್ರೆಸ್ ಸರ್ಕಾರವೇ ಕಾರಣ. ಮೊದಲು ನಿಮ್ಮ ಮಂಡ್ಯ ಶಾಸಕರಿಗೆ ಯಾವ ರೀತಿ ನಡೆದುಕೊಳ್ಳಬೇಕು ಎಂದು ಪಾಠ ಮಾಡಿ ಎಂದು ಅವರು ಕಿಡಿಕಾರಿದರು.**

# ಕಾನೂನು ವಿರುದ್ಧ ನಡೆದರೆ ಕ್ರಮ

**ಬೆಂಗಳೂರು:** ಕಾನೂನು ವಿರುದ್ಧ ಯಾರೇ ನಡೆದುಕೊಂಡರೂ ಅವರ ವಿರುದ್ಧ ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆ ಎಂದು ಗೃಹ ಸಚಿವ ಪರಮೇಶ್ವರ್ ಮಂಡ್ಯ ಕೆರಗೋಡು ಘಟನೆಗೆ ಪೊಲೀಸರು ತೆಗೆದುಕೊಂಡ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ.

ಕೆರಗೋಡಿನಲ್ಲಿ ಪೊಲೀಸರು ಲಾಠಿ ಚಾರ್ಜ್ ಮಾಡಿದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಕೆರಗೋಡಿನಲ್ಲಿ ಧ್ವಜ ಹಾರಿಸಲು ಅನುಮತಿ ಕೇಳಿದ್ದರು. ರಾಷ್ಟ್ರಧ್ವಜ, ನಾಡ ಧ್ವಜ ಹಾರಿಸಲು ಅನುಮತಿ ಕೇಳಿದ್ರು. ಅದಕ್ಕೆ ಅನುಮತಿ ಪಂಚಾಯತ್ ಅವರೇ ಕೊಟ್ಟಿದ್ದಾರೆ. ಪಂಚಾಯತ್ ಅವರು ಅನುಮತಿ ಕೊಡುವಾಗ ಕೆಲವು ಕಂಡೀ?ನ್ ಹಾಕಿ ಕೊಟ್ಟಿದ್ದಾರೆ. ಬೇರೆ ಧ್ವಜ ಹಾಕಬಾರದು ಎಂದು ಪಂಚಾಯತ್ ಹೇಳಿ, ಮುಚ್ಚಳಿಕೆ ಬರೆಸಿಕೊಂಡು ಅನುಮತಿ ಕೊಟ್ಟಿದ್ದಾರೆ. ಮುಚ್ಚಳಿಕೆಯಲ್ಲಿ ಅವರು ಬೇರೆ ಯಾವುದೇ ಧ್ವಜ ಹಾಕೋದಿಲ್ಲ ಎಂದು ಬರೆದು ಕೊಟ್ಟಿದ್ದಾರೆ. ರಾಷ್ಟ್ರ ಮತ್ತು ನಾಡ ಧ್ವಜ ಬಿಟ್ಟು ಯಾವುದೇ ರಾಜಕೀಯ ಧ್ವಜ ಹಾಕೋದಿಲ್ಲ, ಧರ್ಮದ ಧ್ವಜ ಹಾಕೋದಿಲ್ಲ ಎಂದು ಮುಚ್ಚಳಿಕೆ ಬರೆದುಕೊಟ್ಟಿದ್ದಾರೆ. ಅದಾದ ಮೇಲೂ ಹೋಗಿ ಹನುಮಾನ್ ಧ್ವಜ ಹಾರಿಸಿದ್ದಾರೆ. ಇದು ಸರಿಯಲ್ಲ



ಎಂದರು.

ಹನುಮ ನಮಗೆಲ್ಲರಿಗೂ ದೇವರು. ಹನುಮನ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡೋದು, ನಡೆದುಕೊಳ್ಳೋದು ಇಲ್ಲ. ಅವರಿಗೆ ಹೇಗೆ ದೇವರೋ ನಮಗೂ ದೇವರೇ. ಆದರೆ ಕಾನೂನು ಈ ದೇಶದಲ್ಲಿ ಎಲ್ಲರಿಗೂ ಒಂದೇ. ಕಾನೂನು ಪಾಲನೆ ಮಾಡಬೇಕು. ಸರ್ಕಾರಿ ಜಾಗದಲ್ಲಿ ಹೋಗಿ ಧಾರ್ಮಿಕ ಧ್ವಜ ಹಾಕಿದ್ರೆ ಹೇಗೆ? ಬೇರೆಯವರು ಕೂಡಾ ಅಂಬೇಡ್ಕರ್ ಧ್ವಜ ಬೇರೆ ಬೇರೆ ಧ್ವಜ ಹಾಕ್ತೀವಿ ಎಂದು ಮನವಿ ಮಾಡಿದ್ದಾರೆ. ಸರ್ಕಾರ ಆಗಿ ನಾವು ಏನು ಮಾಡಬಹುದು? ಶಾಂತಿ ಕಾಪಾಡಿ ಎಂದು ಹೇಳಬಹುದು. ನಿಮ್ಮ ಜಾಗದಲ್ಲಿ ಹನುಮಧ್ವಜ ಹಾಕೋಕೆ ಯಾರು ತಡೆಯಲ್ಲ. ದೇವಸ್ಥಾನ, ನಿಮ್ಮ ಮನೆ ಬಳಿ ಧ್ವಜ ಹಾಕಲು ಯಾರು ತಡೆಯೋದಿಲ್ಲ. ಆದರೆ ಸಾರ್ವಜನಿಕ ಸ್ಥಳ, ಸರ್ಕಾರಿ ಜಾಗದಲ್ಲಿ ಹಾಕಿದ್ದು ತಪ್ಪು. ತಪ್ಪು ಇವರೇ ಮಾಡಿ ಇವರೇ ಸರ್ಕಾರವನ್ನು ದೂಷಣೆ ಮಾಡೋದು, ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡೋದು ಸರಿಯಲ್ಲ. ಹೀಗಾಗಿ ಕಾನೂನು ಪ್ರಕಾರ ಏನು ಕ್ರಮ ಮಾಡಬೇಕೋ ಅದನ್ನು ಮಾಡುತ್ತೇವೆ ಎಂದು ಹೇಳಿದರು.

ಬಿಜೆಪಿ-ಜೆಡಿಎಸ್ ರಾಜ್ಯಮಟ್ಟದ ಪ್ರತಿಭಟನೆ ಮಾಡುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅವರು ರಾಜ್ಯ ಮಟ್ಟದಲ್ಲಿ ಪ್ರತಿಭಟನೆ ಮಾಡಲಿ. ಸರ್ಕಾರ ವೀಕ್ ಆಗಿಲ್ಲ. ನಾವು ಅದನ್ನು ಹ್ಯಾಂಡಲ್ ಮಾಡುತ್ತೇವೆ. ಬಿಜೆಪಿ-ಜೆಡಿಎಸ್ ಅವರು ಏನು ಬೇಕಾದರೂ ಮಾಡಿಕೊಳ್ಳಲಿ. ಅದು ಕಾನೂನು ಒಳಗೆ ಇದ್ದರೆ ನಾವು ಅವರನ್ನು ಮಾತನಾಡಿಸಲು ಹೋಗಲ್ಲ. ಕಾನೂನು ಬಿಟ್ಟು ಕೆಲಸ ಮಾಡಿದರೆ ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆ ಎಂದು ಎಚ್ಚರಿಕೆ ಕೊಟ್ಟರು.

# ಸರಕಾರಕ್ಕೆ ಸಂವಿಧಾನದ ಬಗ್ಗೆ ಗೌರವ ಇದೆಯೇ?

**ಬೆಂಗಳೂರು:** ಸಂವಿಧಾನ ಜಾಗೃತಿ ಸಪ್ತಾಹ ಮಾಡುತ್ತಾರೆ. ಈ ಸರಕಾರದವರು ಸಂವಿಧಾನ ಗೌರವಿಸುತ್ತಾರಾ? ಇವರಿಗೇ ಮೊದಲು ಜಾಗೃತಿ ಮೂಡಿಸಬೇಕಿದೆ ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರು ತಿಳಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗೆ ಉತ್ತರಿಸಿದ ಅವರು, ಇವರಿಗೆ ಸಂವಿಧಾನ ಕುರಿತ ಪರಿಜ್ಞಾನ ಇಲ್ಲ. ಇವರು ಜನರ ಭಾವನೆ ಅರ್ಥ ಮಾಡಿಕೊಂಡಿಲ್ಲ. ಅಗೌರವದಿಂದ ನಡೆದುಕೊಂಡಿದ್ದಾರೆ ಎಂದು ಆಕ್ಷೇಪಿಸಿದರು. ಕೆರೆಗೋಡಿನಲ್ಲಿ ಕಾನೂನು ಪ್ರಕಾರ ಅನುಮತಿ ಪಡೆದೇ ಧ್ವಜ ಹಾರಿಸಿದ್ದಾರೆ. ಕಾನೂನು ಪ್ರಕಾರ ತಪ್ಪಾಗಿದ್ದರೆ ನೋಟಿಸ್ ಕೊಡಬೇಕಿತ್ತು ತಾನೇ ಎಂದು ಕೇಳಿದರು. ಈಗಲಾದರೂ ಸರಕಾರ ಗ್ರಾಮಸ್ಥರ ಭಾವನೆಗೆ ಗೌರವ ಕೊಡುವ ಕೆಲಸ ಮಾಡಲಿ ಎಂದು ಒತ್ತಾಯವನ್ನು ಮುಂದಿಟ್ಟರು.

ಏಕಾಏಕಿ ಮುಂಜಾನೆ ಹೋಗಿ ಭಗವಾಧ್ವಜ ಇಳಿಸಿದ್ದು ಸರಿಯೇ? ನಿಯಮ ಮೀರಿ ರಾಷ್ಟ್ರಧ್ವಜ ಹಾರಿಸಿದ್ದು ಸರಿಯೇ ಎಂದೂ ಅವರು ಪ್ರಶ್ನಿಸಿದರು. ಸ್ಥಳೀಯರು ಕೆರೆಗೋಡು ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಇನ್ನೂ ಯಾಕೆ ಎಫ್‌ಐಆರ್ ಮಾಡಿಲ್ಲ ಎಂದು ಕೇಳಿದರು.

ರಾಷ್ಟ್ರಧ್ವಜವನ್ನು ಪೂರ್ತಿ ಏರಿಸಿಲ್ಲ. ಇದೇನು ಸರಕಾರವೇ? ಯಾವ ರೀತಿ ನಡವಳಿಕೆ ಇದು ಎಂದು ಕೇಳಿದರು. ಬಿಜೆಪಿ- ಜೆಡಿಎಸ್ ನಡುವೆ ವೈಮನಸ್ಸು ಏನಿಲ್ಲ. ಮತ್ತೊಮ್ಮೆ ಮೋದಿ, ಮತ್ತೊಮ್ಮೆ ಬಿಜೆಪಿ ಎಂಬುದೇ ನಮ್ಮೆಲ್ಲರ ಗುರಿ ಎಂದು ಅವರು ಪ್ರಶ್ನೆಗೆ ಉತ್ತರ ನೀಡಿದರು. ಮಾಜಿ ಪ್ರಧಾನಿ ದೇವೇಗೌಡರು ಕೂಡ ಅಭಿಮಾನದಿಂದ ಮೋದಿಯವರು ಮತ್ತೊಮ್ಮೆ ಪ್ರಧಾನಮಂತ್ರಿ ಆಗಲಿ ಎನ್ನುತ್ತಿದ್ದಾರೆ ಎಂದು ವಿವರಿಸಿದರು. ಮತ್ತೊಮ್ಮೆ ಬಿಜೆಪಿ, ಮತ್ತೊಮ್ಮೆ ಮೋದಿಜೀ ಬೇಕೆಂದು ಜನರು ಈಗಾಗಲೇ ನಿರ್ಧರಿಸಿದ್ದಾರೆ ಎಂದು ಅವರು ತಿಳಿಸಿದರು. ಇದೊಂದು ತುಘಲಕ್ ಸರಕಾರ. ಕಾನೂನನ್ನು ಇವರು ಗೌರವಿಸುವುದಿಲ್ಲ ಎಂದು ಟೀಕಿಸಿದರು. ಅದು ಗ್ರಾಮಸ್ಥರೇ ಹಣ ಸೇರಿಸಿ ನಿಲ್ಲಿಸಿದ ಧ್ವಜಸ್ತಂಭ. ಪಂಚಾಯತ್ ಕೂಡ ರಾಷ್ಟ್ರಧ್ವಜ, ನಾಡಧ್ವಜ, ಭಗವಾಧ್ವಜ ಹಾರಿಸಲು ಅನುಮತಿ ಕೊಟ್ಟಿದೆ ಎಂದು ಗಮನ ಸೆಳೆದರು. ಮಾಜಿ ಸಚಿವ ಗೋಪಾಲಯ್ಯ, ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ.ರಾಮಮೂರ್ತಿ ಇದ್ದರು.




# ಖರ್ಗೆ ವಿರುದ್ಧ ಅವಹೇಳನ; ಚಕ್ರವರ್ತಿ ಸೂಲಿಬೆಲೆಗೆ ರಿಲೀಫ್

**ಬೆಂಗಳೂರು:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬಗ್ಗೆ ಅವಹೇಳನಕಾರಿ ಪದ ಬಳಕೆ ಮಾಡಿದ ಪ್ರಕರಣದಲ್ಲಿ ಚಕ್ರವರ್ತಿ ಸೂಲಿಬೆಲೆ ವಿರುದ್ಧ ದಾಖಲಾಗಿದ್ದ ಎಫ್‌ಐಆರ್‌ಗೆ ಕಲಬುರಗಿ ವಿಭಾಗೀಯ ಪೀಠ ಮಧ್ಯಂತರ ತಡೆ ನೀಡಿದೆ. ನ್ಯಾ.ರಾಜೇಂದ್ರ ಬಾದಾಮಿ ಅವರು ಎಫ್‌ಐಆರ್‌ಗೆ ತಡೆಯಾಜ್ಞೆ ನೀಡಿ ಆದೇಶ ಹೊರಡಿಸಿದ್ದಾರೆ. ಬಲವಂತದ ಕ್ರಮವನ್ನು ಜರುಗಿಸಬಾರದು ಎಂದು ಸೂಚನೆ ನೀಡಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರು ದೂರು ನೀಡಿಲ್ಲ. ರಾಜಕೀಯ ವ್ಯಕ್ತಿ ದೂರು ನೀಡಿರುವುದು. ಜಾತಿನಿಂದನೆ ಮಾಡಿಲ್ಲ. ಜಾತಿನಿಂದನೆ ಹಾಕಲು ಸಾಧ್ಯವಿಲ್ಲ ಎಂದು ವಕೀಲ ಅರುಣ್ ಶಾಂ ವಾದ ಮಂಡಿಸಿದ್ದರು. ವಾದ ಆಲಿಸಿದ ಕೋರ್ಟ್ ಪ್ರಕರಣಕ್ಕೆ ತಡೆ ನೀಡಿದೆ. 'ಅಯೋಗ್ಯ' ಎಂದು ಸೂಲಿಬೆಲೆ ಪೋಸ್ಟ್ ಪ್ರಕರಣಕ್ಕೆ ತಡೆಯಾಜ್ಞೆ ನೀಡಿದ ಬೆನ್ನಲ್ಲೇ ಚಕ್ರವರ್ತಿ ಸೂಲಿಬೆಲೆ ಅವರು, 'ಅಯೋಗ್ಯ' ಎಂದು ತಮ್ಮ ಫೇಸ್‌ಬುಕ್ ಖಾತೆಯಲ್ಲಿ ಪೋಸ್ಟ್ ಹಾಕಿದ್ದಾರೆ.



## ಟ್ರೆಕ್ಕಿಂಗ್‌ಗೆ ಸರ್ಕಾರದ ಬ್ರೇಕ್

ಇದು ವನ್ಯಜೀವಿಗಳಿಗೆ ಅಪಾಯ ತರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಹೀಗಾಗಿ ಚಾರಣಕ್ಕೆ ನಿರ್ಬಂಧ ವಿಧಿಸಿ ಸಚಿವ ಈಶ್ವರ್ ಖಂಡ್ರೆ ಆದೇಶ ಹೊರಡಿಸಿದ್ದಾರೆ.

ಗಣರಾಜ್ಯೋತ್ಸವದ ದಿನ ಕುಮಾರಪರ್ವತಕ್ಕೆ ಸಾವಿರಾರು ಚಾರಣಿಗರು ಆಗಮಿಸಿದ್ದು ಸಾಮಾಜಿಕ ತಾಣಗಳಲ್ಲಿ ವೈರಲ್ ಆಗಿದೆ. ಕೆಲವರು ಟೆಂಟ್ ಹಾಕಿ ರಾತ್ರಿ ಪರ್ವತದಲ್ಲಿ ಉಳಿಯುತ್ತಾರೆ ಎನ್ನಲಾಗಿದೆ. ಪರಿಸರ ತಜ್ಞರು ಅರಣ್ಯ ಉಳಿವಿನ ಬಗ್ಗೆ ತಮ್ಮ ಕಳಕಳಿ ಜೊತೆಗೆ ಆತಂಕ ವ್ಯಕ್ತಪಡಿಸಿದ್ದಾರೆ. ಈ ರೀತಿ ಸಾವಿರಾರು ಸಂಖ್ಯೆಯಲ್ಲಿ ಚಾರಣಕ್ಕೆ ಬರುವವರನ್ನು ನಿಯಂತ್ರಿಸುವುದು ಸವಾಲಿನ ಕೆಲಸವಾಗಿದೆ. ಜೊತೆಗೆ ಅವರ ತಪಾಸಣೆ ಮಾಡಿ ಬಿಡುವುದು ಅರಣ್ಯ ಇಲಾಖೆಯ ಸಿಬ್ಬಂದಿಗೂ ದೊಡ್ಡ ಸಮಸ್ಯೆಯಾಗಿದೆ. ಹೀಗಾಗಿ ಹೊಸ ಮಾರ್ಗಸೂಚಿ ಜಾರಿಯಾಗುವ ತನಕ ಬುಕ್ಕಿಂಗ್ ಇಲ್ಲದ ಚಾರಣವನ್ನು ಸರ್ಕಾರ ನಿಷೇಧಿಸಿದೆ.

ಸರ್ಕಾರ ಹೊರಡಿಸಿದ ಆದೇಶದಲ್ಲಿ ಏನಿದೆ?

ರಾಜ್ಯದ ಯುವಜನರಲ್ಲಿ ಇತ್ತೀಚೆಗೆ ಅರಣ್ಯವ್ಯಾಪ್ತಿಯ ಗಿರಿ ಶಿಖರಗಳಲ್ಲಿ ಚಾರಣ ಮಾಡುವ ಹವ್ಯಾಸ ಅಧಿಕವಾಗಿದ್ದು, ಇದು ವಾರಾಂತ್ಯದಲ್ಲಿ ಜನದಟ್ಟಣೆಗೆ ಕಾರಣವಾಗಿದೆ. ಹೀಗೆ ಬರುವವರು ಅರಣ್ಯದ ಅಂಚಿನ ಗ್ರಾಮಗಳಲ್ಲಿ ಮತ್ತು ಪರಿಸರ ಸೂಕ್ಷ್ಮ ಪ್ರದೇಶಗಳಲ್ಲಿ ಮನಸೋ ಇಚ್ಛೆ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಬಾಟಲಿ, ತಟ್ಟೆ, ಉಳಿದ ಆಹಾರ ಪದಾರ್ಥ ಇತ್ಯಾದಿಗಳನ್ನು ಎಸೆಯುತ್ತಿದ್ದು, ಇದು ವನ್ಯಜೀವಿಗಳಿಗೆ ಅಪಾಯ ತರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇದೇ ತಿಂಗಳು 26 ರಂದು ಕುಮಾರಪರ್ವತಕ್ಕೆ ಸಾವಿರಾರು ಚಾರಣಿಗರು ಆಗಮಿಸಿದ್ದು ಸಾಮಾಜಿಕ ತಾಣಗಳಲ್ಲಿ ವೈರಲ್ ಆಗಿದ್ದು, ಮಾಧ್ಯಮಗಳಲ್ಲೂ ವರದಿಯಾಗಿದೆ. ಕೆಲವರು ಟೆಂಟ್ ಹಾಕಿ ರಾತ್ರಿ ಪರ್ವತದಲ್ಲಿ ಉಳಿಯುತ್ತಾರೆ ಎನ್ನಲಾಗಿದೆ. ಪರಿಸರ ತಜ್ಞರು ಅರಣ್ಯ ಉಳಿವಿನ ಬಗ್ಗೆ ತಮ್ಮ ಕಳಕಳಿ. ಆತಂಕ ವ್ಯಕ್ತಪಡಿಸಿದ್ದಾರೆ. ಹೀಗೆ ಸಾವಿರಾರು ಸಂಖ್ಯೆಯಲ್ಲಿ ಚಾರಣಕ್ಕೆ ಜನರು ದಟ್ಟ ಅರಣ್ಯವಿರುವ ಗಿರಿ ಪ್ರದೇಶಗಳಿಗೆ, ಪಶ್ಚಿಮಘಟ್ಟಕ್ಕೆ ಪ್ರತಿವಾರವೂ ಆಗಮಿಸಿದರೆ ನಿಯಂತ್ರಿಸುವುದು ಮತ್ತು ಅವರ ತಪಾಸಣೆ ಮಾಡಿ ಬಿಡುವುದು ಅರಣ್ಯ ಇಲಾಖೆಯ ಸಿಬ್ಬಂದಿಗೂ ದೊಡ್ಡ ಸವಾಲಾಗುತ್ತದೆ. ಇದರಿಂದ ಪರಿಸರಕ್ಕೂ ಹಾನಿಯಾಗುತ್ತದೆ ಮತ್ತು ಜಲ ಮೂಲಗಳೂ ಕಲುಷಿತಗೊಳ್ಳುವ ಅಪಾಯ ಇದೆ.

ಈ ನಿಟ್ಟಿನಲ್ಲಿ ರಾಜ್ಯದ ಎಲ್ಲ ಚಾರಣ ತಾಣ (ಟ್ರೆಕ್ಕಿಂಗ್ ಪಾಯಿಂಟ್)ಗಳಲ್ಲೂ ಆನ್ ಲೈನ್ ಬುಕ್ಕಿಂಗ್ ವ್ಯವಸ್ಥೆ ಮತ್ತು ನಿರ್ದಿಷ್ಟ ಸಂಖ್ಯೆಗೆ ಸೀಮಿತಗೊಳಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಪ್ರಮಾಣಿತ ಕಾರ್ಯ ವಿಧಾನ ರೂಪಿಸುವವರೆಗೆ ಆನ್ ಲೈನ್ ಬುಕ್ಕಿಂಗ್ ಇಲ್ಲದ ಎಲ್ಲ ಚಾರಣ ತಾಣಗಳಲ್ಲಿ ತಾತ್ಕಾಲಿಕವಾಗಿ ಚಾರಣ ನಿರ್ಬಂಧಿಸುವಂತೆ ಸೂಚಿಸಿದೆ.

## ಗ್ರಾಮಸರ ವಿರುದ್ಧ ಮತ್ತೆರಡು ಎಫ್‌ಐಆರ್

ಡಿವೈಎಸ್‌ಪಿ ಶಿವಮೂರ್ತಿ ಅವರು ನೀಡಿದ ದೂರಿನ ಮೇರೆಗೆ ದೂರು ದಾಖಲಾಗಿದೆ.

ಮೆರವಣಿಗೆ ವೇಳೆ ಪಾದಯಾತ್ರೆ ವೇಳೆ ಮಂಡ್ಯದ ಮಹವೀರ ಸರ್ಕಲ್ ನಲ್ಲಿ ಬ್ಯಾನರ್ ಹಾಗೂ ಸಾರ್ವಜನಿಕರ

### ಮೊದಲ ಪುಟದಿಂದ...

ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ. ಅಕ್ರಮವಾಗಿ ಗುಂಪು ಕಟ್ಟಿಕೊಂಡು ಪೊಲೀಸರ ಕೆಲಸಕ್ಕೆ ಅಡ್ಡಿ ಮಾಡಿದ್ದಾರೆ ಎಂದು ಪ್ರಕಾಶ್, ಆರಾಧ್ಯ, ಬಸವರಾಜು, ಕಾಂತ, ಅವಿನಾಶ್, ಅಭಿ ಪಾಟೀಲ್, ಶಿವಕುಮಾರ್, ಸೋಮಶೇಖರ್ ಸೇರಿದಂತೆ ಇತರೆ 42-50 ಜನರ ವಿರುದ್ಧ ಐಪಿಸಿ ಸೆಕ್ಷನ್ 143, 147, 148, 504, 353, 149ರ ಅಡಿ ಎಫ್‌ಐಆರ್ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ, ಪಾದಯಾತ್ರೆ ವೇಳೆ ಕುರುಬರ ಸಂಘದ ಆವರಣದಲ್ಲಿರುವ ವಿದ್ಯಾರ್ಥಿ ನಿಲಯದ ಕಿಟಕಿ ಗಾಜುಗಳನ್ನ ಕಲ್ಲು, ದೊಣ್ಣೆಗಳಿಂದ ಹೊಡೆದು ಹಾಕಿದ್ದಾರೆ. ಅಕ್ರಮವಾಗಿ ಸಂಘದ ಆವರಣಕ್ಕೆ ನುಗ್ಗಿ ದಾಂದಲೆ ನಡೆಸಿದ್ದಾರೆಂದು ಜಿಲ್ಲಾ ಕುರುಬರ ಸಂಘದ ಕಾರ್ಯದರ್ಶಿ ಶಶಿಧರ್ ಎಂಬುವರು ಅಪರಿಚಿತ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದಾರೆ.

ಜನವರಿ 28 ರಂದು ಕೆರಗೋಡು ಪೊಲೀಸ್ ಠಾಣೆಯಲ್ಲೂ ಒಂದು ಪ್ರಕರಣ ದಾಖಲಾಗಿತ್ತು. ಒಟ್ಟು ಈವರೆಗೆ ಪ್ರತ್ಯಕ ಮೂರು ಪ್ರಕರಣಗಳು ದಾಖಲಾಗಿವೆ.

## ಹಸಿರು ಬಾವುಟ ತೆರವು

ಇದರ ಬೆನ್ನಲ್ಲೇ ಈ ಬಗ್ಗೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಹ ಟ್ವೀಟ್ ಮಾಡಿ, ಪೂರ್ವ ವಿಭಾಗ ಡಿಸಿಪಿಯವರೇ ಶತ್ರು ದೇಶದ ಬಣ್ಣ ಹೋಲುವ ಧ್ವಜ ಹಾರಾಟ. ಸಾರ್ವಜನಿಕ ಪ್ರದೇಶದಲ್ಲಿ ಧ್ವಜ ನಿಯಮಕ್ಕೆ ವಿರುದ್ಧವಾದದ್ದು ಅಲ್ಲವೇ. ಶಿವಾಜಿನಗರ ಇರುವುದು ಭಾರತದಲ್ಲಿ, ಪಾಕಿಸ್ತಾನದಲ್ಲಿ ಅಲ್ಲ ಎಂದು ಬರೆದುಕೊಂಡಿದ್ದರು.

ಮಂಡ್ಯದ ಕೆರಗೋಡು ಗ್ರಾಮದಲ್ಲಿನ ಹನುಮ ಧ್ವಜ ಹಾಗೂ ರಾಷ್ಟ್ರ ಧ್ವಜ ವಿವಾದ ರಾಜಕೀಯ ಸ್ವರೂಪ ಪಡೆದುಕೊಂಡಿದೆ. ಹನುಮ ಧ್ವಜವನ್ನು ತೆರವುಗೊಳಿಸಿ ರಾಷ್ಟ್ರ ಧ್ವಜ ಹಾರಿಸಿ ಶಾಂತಿ ಕಾಪಾಡಲು ಪೊಲೀಸರು ಮುಂದಾಗಿದ್ದರು. ಆದರೂ ಸಹ ಗ್ರಾಮಸ್ಥರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಇದಾದ ಬೆನ್ನಲ್ಲೇ ಕೇಸರಿ ಧ್ವಜ, ಹಸಿರು ಧ್ವಜ ವಿವಾದ ಬೆಂಗಳೂರಿಗೂ ಹಬ್ಬಿತ್ತು. ಶಿವಾಜಿನಗರದ ಚಾಂದಿನಿ ಚೌಕ್‌ನ ಬಿಬಿಎಂಪಿ ಧ್ವಜಸ್ತಂಭದಲ್ಲಿ ಹಸಿರು ಧ್ವಜ ಹಾರಾಡುವುದನ್ನು ಹಿಂದೂ ಕಾರ್ಯಕರ್ತರು ಟ್ವೀಟ್ ಮಾಡಿ ಕಾಂಗ್ರೆಸ್ ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಇದರ ಬೆನ್ನಲ್ಲೇ ಶಿವಾಜಿ ನಗರ ಪೊಲೀಸರು ಹಸಿರುವ ಬಾವುಟವನ್ನು ತೆರವುಗೊಳಿಸಿ ತ್ರಿವರ್ಣ ಧ್ವಜ ಹಾರಿಸಿದ್ದಾರೆ.

## ಆಂಜನೇಯನ ತಂಟೆಗೆ ಬರ್ಬೇಡಿ ಹುಷಾರ್

ಅದೇ ರೀತಿ ಸಿದ್ದರಾಮಯ್ಯನವರೇ ಹನುಮನ ತಂಟೆಗೆ ಬರಬೇಡಿ, ಸುಟ್ಟು ಹೋಗ್ತೀರಾ ಹು?ಾರ್ ಎಂದು ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರಕ್ಕೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಹನುಮನ ತಂಟೆಗೆ ಬರಬೇಡಿ. ಹನುಮನ ಬಾಲಕ್ಕೆ ಬೆಂಕಿ ಇಟ್ಟರೆ ನಿಮ್ಮ ಸರ್ಕಾರನೇ ಉಳಿಯಲ್ಲ. ಅಂತ ರಾವಣನೇ ಉಳಿಯಲಿಲ್ಲ, ನೀವು ಯಾವ ಲೆಕ್ಕ ಎಮದು ಪ್ರಶ್ನಿಸುವ ಮೂಲಕ ವಾಗ್ದಾಳಿ ನಡೆಸಿದರು.

ಸಿದ್ದರಾಮಯ್ಯ ಎದೆಯಲ್ಲಿ ಟಿಪ್ಪು ಸುಲ್ತಾನ್ ಇದ್ದಾರೆ. ಆದರೆ ಬಾಯಲ್ಲಿ ಮಾತ್ರ ರಾಮ ಅಂತೀರಾ. ಹೃದಯದಿಂದ ರಾಮ ಅನ್ನಬೇಕು. ಎದೆ ಸೀಳಿದರೆ ಟಿಪ್ಪು ಸುಲ್ತಾನ್ ಕಾಣಿಸುತ್ತಾನೆ. ಮೂರು ರಾಜ್ಯಗಳಲ್ಲಿ ಅಧಿಕಾರ ಕಳೆದುಕೊಂಡಿದ್ದಾರೆ ಹಾಗಾಗಿ ಅವರು ಪ್ರಚಾರ ಮಾಡಲಿ ಎಂದು ವ್ಯಂಗ್ಯವಾಡಿದ್ದಾರೆ.

ಫಿ ಡಾ.ಮಂಜುನಾಥ್‌ಗೆ ಕರ್ನಾಟಕ ರತ್ನ ಘೋಷಿಸಿ

ಬಡರೋಗಿಗಳ ಪಾಲಿನ ಆಶಾಕಿರಣವಾಗಿ ''ಟ್ರೀಟ್ಮೆಂಟ್ ಫಸ್ಟ್, ಪೇಮೆಂಟ್ ನೆಕ್ಸ್ಟ'' ಎಂಬ ಪರಿಕಲ್ಪನೆಯನ್ನಿಟ್ಟುಕೊಂಡು ಸಾವಿರಾರು ಬಡ ರೋಗಿಗಳಿಗೆ ಚಿಕಿತ್ಸೆ ಕೊಟ್ಟ ಡಾ.ಮಂಜುನಾಥ್ ಅವರು ಬಡವರ ಪಾಲಿನ ಧನ್ವಂತರಿ ಅಂದರೆ ಅತಿಶಯೋಕ್ತಿಯಲ್ಲ ಎಂದು ಹೇಳಿದ್ದಾರೆ.

ಸರ್ಕಾರಿ ಆಸ್ಪತ್ರೆ ಎಂದರೆ ಮೂಗು ಮುರಿಯುವ ಕಾಲದಲ್ಲಿ ಯಾವುದೇ ಖಾಸಗಿ ಕಾರ್ಪೊರೇಟ್ ಆಸ್ಪತ್ರೆಗೆ ಕಡಿಮೆ ಇಲ್ಲದಂತೆ ಬಡವರಿಗೆ ಕೈಗೆಟಕುವ ದರದಲ್ಲಿ ಉತ್ಕೃಷ್ಟ ಆರೋಗ್ಯ ಸೇವೆ ನೀಡುವ ಮಟ್ಟಕ್ಕೆ ಒಂದು ಸರ್ಕಾರಿ ಸಂಸ್ಥೆಯನ್ನು ಕಟ್ಟಿಬೆಳೆಸಿದ ಅನನ್ಯ ಸಾಧನೆ ಮಾಡಿದ ಡಾ.ಸಿ.ಎನ್.ಮಂಜುನಾಥ್ ಅವರು ಕರ್ನಾಟಕದ ಹೆಮ್ಮೆಯ ಸುಪುತ್ರ. ಡಾ.ಸಿ.ಎನ್.ಮಂಜುನಾಥ್ ಅವರ ಸಾಧನೆಯನ್ನು ಗುರುತಿಸಿ, ಗೌರವಿಸಲು ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡುತ್ತೇನೆ ಎಂದು ತಿಳಿಸಿದ್ದಾರೆ.

## ಡಾ.ಮಂಜುನಾಥ್‌ಗೆ ಕರ್ನಾಟಕ ರತ್ನ ಘೋಷಿಸಿ

ಬಡರೋಗಿಗಳ ಪಾಲಿನ ಆಶಾಕಿರಣವಾಗಿ ''ಟ್ರೀಟ್ಮೆಂಟ್ ಫಸ್ಟ್, ಪೇಮೆಂಟ್ ನೆಕ್ಸ್ಟ'' ಎಂಬ ಪರಿಕಲ್ಪನೆಯನ್ನಿಟ್ಟುಕೊಂಡು ಸಾವಿರಾರು ಬಡ ರೋಗಿಗಳಿಗೆ ಚಿಕಿತ್ಸೆ ಕೊಟ್ಟ ಡಾ.ಮಂಜುನಾಥ್ ಅವರು ಬಡವರ ಪಾಲಿನ ಧನ್ವಂತರಿ ಅಂದರೆ ಅತಿಶಯೋಕ್ತಿಯಲ್ಲ ಎಂದು ಹೇಳಿದ್ದಾರೆ.

ಸರ್ಕಾರಿ ಆಸ್ಪತ್ರೆ ಎಂದರೆ ಮೂಗು ಮುರಿಯುವ ಕಾಲದಲ್ಲಿ ಯಾವುದೇ ಖಾಸಗಿ ಕಾರ್ಪೊರೇಟ್ ಆಸ್ಪತ್ರೆಗೆ ಕಡಿಮೆ ಇಲ್ಲದಂತೆ ಬಡವರಿಗೆ ಕೈಗೆಟಕುವ ದರದಲ್ಲಿ ಉತ್ಕೃಷ್ಟ ಆರೋಗ್ಯ ಸೇವೆ ನೀಡುವ ಮಟ್ಟಕ್ಕೆ ಒಂದು ಸರ್ಕಾರಿ ಸಂಸ್ಥೆಯನ್ನು ಕಟ್ಟಿಬೆಳೆಸಿದ ಅನನ್ಯ ಸಾಧನೆ ಮಾಡಿದ ಡಾ.ಸಿ.ಎನ್.ಮಂಜುನಾಥ್ ಅವರು ಕರ್ನಾಟಕದ ಹೆಮ್ಮೆಯ ಸುಪುತ್ರ. ಡಾ.ಸಿ.ಎನ್.ಮಂಜುನಾಥ್ ಅವರ ಸಾಧನೆಯನ್ನು ಗುರುತಿಸಿ, ಗೌರವಿಸಲು ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡುತ್ತೇನೆ ಎಂದು ತಿಳಿಸಿದ್ದಾರೆ.

## ಪಿಜಿಗಳಿಗೆ ಹೊಸ ಮಾರ್ಗಸೂಚಿ

ನಗರದಲ್ಲಿ 25 ಸಾವಿರಕ್ಕೂ ಅಧಿಕ ಪಿಜಿಗಳಿವೆ. ಪಾಲಿಕೆ, ಬೆಸ್ಕಾಂ, ಜಲಮಂಡಳಿ ಪ್ರಕಾರ 50 ಸಾವಿರಕ್ಕೂ ಅಧಿಕ ಪಿಜಿಗಳಿವೆ. ಪೊಲೀಸರ ತನಿಖೆ ಹಾಗೂ ಪಿಜಿ ವಾಸಿಗಳ ಸುರಕ್ಷತೆಯ ನಿಟ್ಟಿನಲ್ಲಿ ಆಯಾ ಪಿಜಿಗಳಲ್ಲಿ ಅಡ್ಮಿಷನ್ ಐಡಿ ಕಾರ್ಡ್ ವಿತರಿಸಿ ಅದನ್ನು ಪ್ರತಿ ತಿಂಗಳಿಗೊಮ್ಮೆ ರಿನಿವಲ್ ಮಾಡೋಕೆ ಪಿಜಿ ಅಸೋಸಿಯೇಷನ್ ನಿರ್ಧರಿಸಿದೆ. ನ್ನು ಪಿಜಿ ಅಸೋಸಿಯೇಷನ್ ಪದಾಧಿಕಾರಿಗಳ ಜೊತೆ ಸಭೆ ನಡೆಸಿ ಈ ಪ್ಲ್ಯಾನ್ ಅನ್ನು ಜಾರಿಗೆ ತರಲು ಸಿದ್ಧತೆ ನಡೆಸುತ್ತಿದೆ. ಪಿಜಿ ಮಾಲೀಕರ ಐಡಿ ಕಾರ್ಡ್ ಪ್ಲ್ಯಾನ್, ಪೊಲೀಸರ ತನಿಖೆಗಳಿಗೆ ಮತ್ತಷ್ಟು ಸಹಾಯಕಾರಿಯಾಗಲಿದೆ

# ಗಾಂಧಿ ಪುಣ್ಯಸ್ಮರಣೆ; ಸಿಎಂ ರಾಮ ಜಪ

**ಬೆಂಗಳೂರು:** ಅಯೋಧ್ಯೆ ರಾಮ ಮಂದಿರ ನಿರ್ಮಾಣಕ್ಕೆ ಒಂದು ರೂಪಾಯಿ ಕೊಡಲ್ಲ ಎಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೀಗ ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ರಾಮ ಜಪ ಮಾಡಲು ಆರಂಭಿಸಿದ್ದಾರೆ. ಬೆಂಗಳೂರಿನಲ್ಲಿ ರಾಮ ಮಂದಿರ ಉದ್ಘಾಟಿಸಿದ್ದ ಸಿದ್ದರಾಮಯ್ಯ ಅವರು ಜೈ ಶ್ರೀರಾಮ್ ಘೋಷಣೆ ಕೂಗಿದ್ದರು. ಇಲ್ಲಿಂದ ಆರಂಭವಾದ ಸಿದ್ದರಾಮಯ್ಯ ಅವರ ಶ್ರೀರಾಮ ಜಪ ಗಾಂಧಿ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲೂ ಮುಂದುವರಿದಿದೆ.

ಗಾಂಧಿ ಪುಣ್ಯಸ್ಮರಣೆ ಹಿನ್ನೆಲೆ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಸಿದ್ದರಾಮಯ್ಯ, ಶ್ರೀರಾಮ ಚಂದ್ರರ ಆದರ್ಶವನ್ನು ಸ್ಮರಿಸಿದರು. ಮಹಾತ್ಮ ಗಾಂಧೀಜಿ ಸಾಯುವಾಗ ಹೇ ರಾಮ್ ಅಂತ ಉಚ್ಚಾರ ಮಾಡಿ ಪ್ರಾಣ ತ್ಯಾಗ ಮಾಡಿದ್ದರು. ಶ್ರೀ ರಾಮಚಂದ್ರನ ಬಗ್ಗೆ ಅಪಾರವಾದ ಭಕ್ತಿ, ನಂಬಿಕೆ ಇಟ್ಟಿದ್ದರು. ಅದಕ್ಕೆ ಅವರು ಯಾವತ್ತೂ ರಘು ಪತಿ ರಾಘವ ರಾಜಾ ರಾಂ ಪತೀತ ಪಾವನ ಸೀತಾ ರಾಂ ಅಂತಿದ್ದರು. ನಾವೂ ಅದನ್ನು ಪ್ರತಿ ಕಾರ್ಯಕ್ರಮಗಲ್ಲೂ ಹೇಳುತ್ತೇವೆ ಎಂದರು.

ಶ್ರೀರಾಮ ಚಂದ್ರ, ದಶರಥರಾಜ ಹಾಗೂ ಕೌಶಲ್ಯ ದೇವಿಯ ಮಗ ಆಗಿದ್ದಾರೆ. ದಶರಥ ಮಹಾರಾಜರಿಗೆ ಮೂರು ಜನ ಹೆಂಡತಿಯರು. ಮೂವರ ಪೈಕಿ ಕೌಶಲ್ಯ ದೇವಿಯ ಮಗ



ಶ್ರೀರಾಮಚಂದ್ರ. ಶ್ರೀರಾಮಚಂದ್ರ ಪಿತೃ ವಾಕ್ಯ ಪರಿಪಾಲನೆಗಾಗಿ ರಾಜ್ಯಭಸರ ತ್ಯಾಗ ಮಾಡಿ ಸಹೋದರ ಭರತನಿಗೆ ಪಟ್ಟ ಕಟ್ಟಿ ಕಾಡಿಗೆ ಹೋಗುತ್ತಾರೆ. ಪತ್ನಿ ಸೀತೆ, ಸಹೋದರ ಲಕ್ಷ್ಮಣ ಜೊತೆ ಕಾಡಿಗೆ ಹೋಗುತ್ತಾರೆ. 14 ವರ್ಷ ವನವಾಸ ಮಾಡುತ್ತಾರೆ ಎಂದರು.

ಶ್ರೀರಾಮ ಅಂದರೆ ಸತ್ಯ ಪರಿಪಾಲನೆ ಮಾಡುವವರು. ಶ್ರೀರಾಮಚಂದ್ರ ಎಲ್ಲಾ ಜಾತಿ, ಧರ್ಮವನ್ನು ಸಾಮಾನವಾಗಿ ಕಾಣುತ್ತಿದ್ದರು. ಅವರಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದ್ದರು. ಅದಕ್ಕೆ ನಾವು ದೇಶ, ಕರ್ನಾಟಕ ರಾಮ ರಾಜ್ಯ ಆಗಬೇಕು ಅಂತೇವೆ. ಅಷ್ಟರಮಟ್ಟಿಗೆ ಆದರ್ಶ ರಾಜ್ಯವನ್ನು ಶ್ರೀರಾಮಚಂದ್ರ ಕೊಡುತ್ತಿದ್ದರು ಎಂದರು.

ಅಂತ ವ್ಯಕ್ತಿಯ ಆದರ್ಶವನ್ನು ಪ್ರತಿಪಾದಿಸುತ್ತಿದ್ದ ಗಾಂಧಿಯನ್ನು ಒಬ್ಬ ಮತಾಂಧ ಕೊಂದು ಹಾಕುತ್ತಾನೆ. ನಾನು ರಾಜಕೀಯ ಮಾತನಾಡಲ್ಲ, ಅದರ ಅಗತ್ಯ ಇಲ್ಲ. ಗಾಂಧಿ ಎಲ್ಲಾ ಧರ್ಮದವರನ್ನು ಪ್ರೀತಿಸುತ್ತಿದ್ದರು. ಎಲ್ಲರನ್ನೂ ಮನುಷ್ಯರಾಗಿ ಕಾಣುತ್ತಿದ್ದರು. ಮನುಷ್ಯ ಮನುಷ್ಯ ನಡುವೆ ಪ್ರೀತಿ ಇರಬೇಕೇ ಹೊರತು ದ್ವೇಷ ಇರಬಾರದು ಎಂದರು.

ಬೆಂಗಳೂರು ಪೂರ್ವ ತಾಲೂಕಿನ ಬಿದರಹಳ್ಳಿ ಹೋಬಳಿಯ, ಹಿರಂಡಹಳ್ಳಿ ಶ್ರೀರಾಮ ಟೆಂಪಲ್ ಟ್ರಸ್ಟ್ ನಿರ್ಮಿಸಿದ್ದ ರಾಮ ಸೀತ ಲಕ್ಷ್ಮಣ ದೇವಾಲಯ ಹಾಗೂ 33 ಅಡಿ ಎತ್ತರದ ಏಕಶಿಲಾ ಆಂಜನೇಯ ಸ್ವಾಮಿ ವಿಗ್ರಹದ ಶಿಲಾ ಪ್ರತಿ?ಾಪನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ್ದ ಸಿದ್ದರಾಮಯ್ಯ ಅವರು ಜೈ ಶ್ರೀರಾಮ್ ಎಂದು ಘೋ?ಣೆ ಕೂಗಿದ್ದರು.

ಜೈ ಶ್ರೀರಾಮ್ ಅಂತ ನಾವೂ ಹೇಳೋಲ್ವಾ? ಜೈ ಶ್ರೀರಾಮ್ ಎಂಬುದು ಒಬ್ಬರ ಸ್ಲೋಗನ್ ಅಲ್ಲ, ನಾನೂ ಹೇಳುತ್ತೇನೆ. ಕೆಲವರು ಜೈ ಶ್ರೀರಾಮ್ ಸ್ಲೋಗನ್ ತಮ್ಮ ಸ್ವತ್ತು ಅಂದುಕೊಂಡಿದ್ದಾರೆ. ಎಲ್ಲರೂ ಜೈ ಶ್ರೀರಾಮ್ ಹೇಳಿ ಎಂದಿದ್ದರು. ಬಳಿಕ ಮೈಸೂರು ಪ್ರವಾಸದಲ್ಲಿರುವ ವೇಳೆಯಲ್ಲೂ ರಾಮ ಜಪ ಮಾಡಿದ್ದರು. ನಾವೂ ಶ್ರೀರಾಮನ ಭಕ್ತರೇ, ಜೈ ಶ್ರೀರಾಮ್ ಬಿಜೆಪಿ ಆಸ್ತಿಯಲ್ಲ ಎಂದು ಪಿರಿಯಾಪಟ್ಟಣ ತಾಲೂಕಿನ ಕೊಪ್ಪ ಗ್ರಾಮದಲ್ಲಿ ಹೇಳಿದ್ದರು.

# 1 ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ಜಪ್ತಿ

**ಬೆಂಗಳೂರು:** ಬೆಂಗಳೂರು ನಗರ ಪೊಲೀಸರು ಡ್ರಗ್ಸ್ ಪೆಡ್ಲರ್‌ಗಳ ವಿರುದ್ಧ ಸಮರ ಸಾರಿದ್ದಾರೆ. ಡ್ರಗ್ಸ್ ಮುಕ್ತ ನಗರವನ್ನಾಗಿ ಮಾಡಲು ಪಣ ತೊಟ್ಟಿದ್ದಾರೆ. ಅದರಂತೆ ಕೇಂದ್ರ ಅಪರಾಧ ವಿಭಾಗದ ಅಧಿಕಾರಿಗಳು ನಗರದಲ್ಲಿ ಒಂದು ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿದ್ದು, ಏಳು ಜನ ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ. ಪುಲಿಕೇಶಿನಗರ, ಬಾಣಸವಾಡಿ, ಹುಳಿಮಾವು ಪೊಲೀಸ್ ಠಾಣೆ ವ್ಯಾಪ್ತಿ ಸೇರಿದಂತೆ ನಗರದ ಹಲವೆಡೆ ಆರೋಪಿಗಳು ಡ್ರಗ್ಸ್ ಮಾರುತ್ತಿದ್ದರು. 219 ಎಕ್ಸ್‌ಟೆಸಿ ಪಿಲ್ಸ್, 505 ಗ್ರಾಂ ಎಂಡಿಎಂಎ ಕ್ರಿಸ್ಟಲ್, 130 ಗ್ರಾಂ ತೂಕದ ಚರಸ್, ಕೊಕೇನ್ ಒಟ್ಟು 1 ಕೋಟಿ 52 ಲಕ್ಷದ 50 ಸಾವಿರ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದಾರೆ. 21 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ, ಆಫ್ರಿಕಾ ಮೂಲದ ಆರೋಪಿ ಬಂಧನ ಹೊಸ ವರ್ಷಕ್ಕೆಂದು ಮಾರಾಟಕ್ಕೆ 21 ಕೋಟಿ ಮೌಲ್ಯದ ಡ್ರಗ್ಸ್ ತಂದಿದ್ದ ಆಫ್ರಿಕಾ ಮೂಲದ ಆರೋಪಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದರು. ಲಿಯೋನಾರ್ಡ್ ಓಕ್ವುಡಿಲಿ ಬಂಧಿತ ಆರೋಪಿ. ಬಂಧಿತನಿಂದ 21 ಕೋಟಿ ಮೌಲ್ಯದ 16 ಕೆಜಿ ಎಂಡಿಎಂಎ, 500 ಗ್ರಾಂ ಕೊಕೇನ್ ಜಪ್ತಿ ಮಾಡಲಾಗಿತ್ತು. ಬ್ಯುಸಿನೆಸ್ ವೀಸಾ ಪಡೆದುಕೊಂಡು ಆರೋಪಿ ಲಿಯೋನಾರ್ಡ್ ಬೆಂಗಳೂರಿಗೆ ಬಂದು ರಾಮಮೂರ್ತಿನಗರದಲ್ಲಿ ನೆಲೆಸಿದ್ದನು. ಈ ಹೊಸ ವರ್ಷಕ್ಕೆ ಮತ್ತೇರಿಸಲು ಅಪಾರ ಪ್ರಮಾಣದ ಡ್ರಗ್ಸ್ ತಂದಿದ್ದನು. ಸಿಸಿಬಿ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿ ಡ್ರಗ್ಸ್ ವಶಕ್ಕೆ ಪಡೆದಿದ್ದರು. ಆರೋಪಿಯು ಬೆಡ್‌ಶೀಟ್ ಕವರ್, ಸೋಪ್ ಬಾಕ್ಸ್ ಹಾಗೂ ಚಾಕೊಲೇಟ್ ಬಾಕ್ಸ್‌ನಲ್ಲಿ ಡ್ರಗ್ಸ್ ಸಾಗಾಟ ಮಾಡುತ್ತಿದ್ದನು. ಹೊಸ ವರ್ಷಕ್ಕೆ ರೇವ್ ಪಾರ್ಟಿಗೆ ಡ್ರಗ್ಸ್ ಸಾಗಿಸಲು ಮುಂದಾಗಿದ್ದ ವೇಳೆ ಆರೋಪಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದನು. ರಾಮಮೂರ್ತಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.



ಬೆಂಗಳೂರಿನಲ್ಲಿ ಹುಕ್ಕಾ ಬಾರ್‌ಗಳ ನಿಷೇಧದ ಕುರಿತು ವಿಧಾನಸಭೆಯಲ್ಲಿ ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಪ್ರಶ್ನೆ ಮಾಡಿದ್ದರು. ಹುಕ್ಕಾ ಬಾರ್‌ಗಳನ್ನು ನಿಷೇಧ ಮಾಡುವಂತೆ ವಿಪಕ್ಷ ಬಿಜೆಪಿ ಶಾಸಕರು ಆಗ್ರಹಿಸಿದ್ದರು. ನಿಮ್ಮ ಅವಧಿಯಲ್ಲಿ ನಿಷೇಧ ಮಾಡಿಲ್ಲ. ಈಗ ಹೇಳುತ್ತಿದ್ದೀರಿ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಾಗ್ದಾಳಿ ನಡೆಸಿದ್ದರು. ಪಂಜಾಬ್ ರೀತಿ ಬೆಂಗಳೂರು ಆಗುವುದು ಬೇಡ ಎಂದು ಶಾಸಕ ಅರವಿಂದ ಬೆಲ್ಲದ್ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಆಗ ಹುಕ್ಕಾ ಬಾರ್ ವಿಚಾರವಾಗಿ ಕಾಯ್ದೆ ತರುವುದಾಗಿ ಸದನಕ್ಕೆ ಗೃಹ ಸಚಿವ ಪರಮೇಶ್ವರ್ ಭರವಸೆ ನೀಡಿದ್ದರು.

# ಕೆ.ಆರ್.ಆಸ್ಪತ್ರೆಯಲ್ಲಿ ಪರಿಶೀಲನೆ



**ಮೈಸೂರು:** ನಗರದ ಕೆ.ಆರ್.ಆಸ್ಪತ್ರೆಗೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಎಲ್. ನಾರಾಯಣಸ್ವಾಮಿ ಅವರು ಇಂದು ಸಂಜೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ವಾರ್ಡ್‌ಗಳು ಹಾಗೂ ರೇಡಿಯೋ ಡಯಾಗ್ನೋಸಿಸ್ ವಿಭಾಗ, ಎಕ್ಸ್ ರೇ ವಿಭಾಗ, ಆಪರೇಷನ್ ಥಿಯೇಟರ್‌ಗಳು ಮತ್ತು ಇತರೆ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಔಷಧಗಳ ದಾಸ್ತಾನು ದಾಖಲಾತಿಯನ್ನು ಹಾಗೂ ರೋಗಿಗಳು ಹಾಗೂ ರೋಗಿಗಳ ಸಂಬಂಧಿಕರ ಕುಂದುಕೊರತೆಗಳ ಆಲಿಸಿದರು. ಗ್ರಾಮೀಣ ಪ್ರದೇಶದಿಂದ ಆಸ್ಪತ್ರೆಗೆ ಬರುವವವರು ಬಡವರು ಉತ್ತಮವಾದ ಆರೋಗ್ಯ ಸೇವೆ ದೊರೆಯಬೇಕು. ಆಸ್ಪತ್ರೆಯಲ್ಲಿ ಶುಚಿತ್ವ ಕಾಪಾಡಿಕೊಳ್ಳಬೇಕು. ಈ ಸಂಬಂಧ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದ್ದು ಯಾವುದೇ ಗುರುತರವಾದ ಸಮಸ್ಯೆ ಕಂಡು ಬಂದಿರುವುದಿಲ್ಲ ಎಂದು ಅವರು ತಿಳಿಸಿದರು. ಆದರೆ ಮರಣ ಪ್ರಮಾಣ ಪತ್ರ ವಿತರಣೆ ತಡವಾಗುತ್ತಿರುವ ಬಗ್ಗೆ ಅಧಿಕಾರಿಗಳು ಗಮನಹರಿಸಿ ಬೇಗ ಸಿಗುವಂತೆ ಅಗತ್ಯ ಕ್ರಮ ವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾದ ಡಾ ಟಿ .ಶ್ಯಾಮ್ ಭಟ್, ಡಾ ಎಸ್.ಕೆ. ವೆಂಟಗೋಡಿ , ಆರ್.ಎಂ.ಓ ಡಾ. ನಯಜ್ ಹಾಗೂ ಮೆಡಿಕಲ್ ಸೂಪರಿಂಟೆಂಡೆಂಟ್ ಡಾ. ಶೋಭಾ ಹಾಗೂ ವೈದ್ಯರು ಉಪಸ್ಥಿತರಿದ್ದರು.

# ಬಡವರು, ನಿರ್ಗತಿಕರಿಗೆ ಆದ್ಯತೆ ನೀಡಿ



**ಮೈಸೂರು:** ಬಡವರು, ನಿರ್ಗತಿಕರಂತಹವರ ಪ್ರಕರಣಗಳು ತಮ್ಮ ಮುಂದೆ ಬಂದಾಗ ಅವರಿಗೆ ನೀವು ಮೊದಲ ಆದ್ಯತೆ ನೀಡಬೇಕು ಎಂದು ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಎಲ್. ನಾರಾಯಣಸ್ವಾಮಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಜಿಲ್ಲಾ ಪಂಚಾಯಿತಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಮಾನವ ಹಕ್ಕುಗಳ ಸಾಕ್ಷರತೆಯ ಬಗ್ಗೆ ಸಂವಾದತ್ಮಕ ಅಧಿವೇಶನ ಸಭೆಯಲ್ಲಿ ಮಾತನಾಡಿ, ಜನರು ಅಧಿಕಾರಿಗಳನ್ನು ನಂಬಿ ಬಂದಿರುತ್ತಾರೆ ಅಂತವರಿಗೆ ಸ್ಪಂದಿಸುವುದು ನಮ್ಮ ಕರ್ತವ್ಯ. ಸಾಮಾಜಿಕ ಬಹಿಷ್ಕಾರದಂತಹ ಪ್ರಕರಣಗಳ ಬಗ್ಗೆ ಆದಷ್ಟು ಬೇಗ ಕ್ರಮ ಕೈಗೊಳ್ಳಬೇಕು ಏಕೆಂದರೆ ಆ ರೀತಿಯ ಪ್ರಕರಣಕ್ಕೆ ಒಳಗಾಗಿರುವವರಿಗೆ ಬೇಗನೆ ನ್ಯಾಯ ಕೊಡಿಸುವ ಅಗತ್ಯವಿರುತ್ತದೆ. ಇಲ್ಲಿಯವರೆಗೂ ಸಭೆಯಲ್ಲಿ ಚರ್ಚಿಸಲಾಗಿರುವ ಕೆಲವು ಪ್ರಕರಣಗನ್ನು ಇನ್ನೂ ಬಗೆಹರಿಸಿ ವರದಿ ನೀಡಿರುವುದಿಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಪ್ರಸ್ತುತ ಬಾಕಿ ಉಳಿದಿರುವ ಪ್ರಕರಣಗಳಿಗೆ ಪ್ರತ್ಯೇಕ ಅಂತಿಮ ದಿನಾಂಕವನ್ನು ನೀಡಲಾಗಿದ್ದು ಆ ದಿನಾಂಕದೊಳಗೆ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಮಾನವ ಹಕ್ಕುಗಳ ಆಯೋಗದ ಸದಸ್ಯರಾದ ಎಸ್.ಕೆ.ವೆಂಟಗೋಡಿ ಅವರು ಮಾತನಾಡಿ ಪ್ರಕರಣಗಳು ಪರಿಹಾರವಾದ ಕೂಡಲೇ ಅದರ ವರದಿಯನ್ನು ಸಲ್ಲಿಸಬೇಕು. ಆಗ ನಾವು ಮುಂದಿನ ಕ್ರಮ ಕೈಗೊಳ್ಳಬಹುದು ಆದ್ದರಿಂದ ಸಂಬಂಧ ಪಟ್ಟ ಅಧಿಕಾರಿಗಳು ಆದಷ್ಟು ಬೇಗ ಸಮಸ್ಯೆಗಳನ್ನು ಬಗೆಹರಿಸಿ ವರದಿ ಸಲ್ಲಿಸಬೇಕು ಎಂದರು. ಮಾನವ ಹಕ್ಕುಗಳ ಆಯೋಗದ ಸದಸ್ಯರಾದ ಡಾ.ಟಿ.ಶ್ಯಾಮಭಟ್ ಅವರು ಮಾತನಾಡಿ ಗ್ರಾಮೀಣ ಪ್ರದೇಶಗಳಲ್ಲಿ ಲೀಡರ್ ಶಿಪ್‌ಗಳು, ಯಜಮಾನಿಕೆಗಳು ಹೆಚ್ಚಾಗಿರುವುದರಿಂದ ಅಲ್ಲಿಂದ ಬಂದಂತಹ ಪ್ರಕರಣಗಳಿಗೆ ಖುದ್ದು ಅಧಿಕಾರಿಗಳೇ ಭೇಟಿ ನೀಡಿ ಸಮಸ್ಯೆ ಬಗೆಹರಿಸಬೇಕು. ಇದರಿಂದ ಜನರಿಗೆ ಸರಿಯಾದ ನ್ಯಾಯ ದೊರಕಿಸಲು ನೆರವಾಗುತ್ತದೆ ಎಂದರು. ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಶರಣಪ್ಪ ವಿ. ಹಲ್ಸೆ ಸಲಹೆ

# ಮಕ್ಕಳ ರಕ್ಷಣೆಗೆ ಆದ್ಯತೆ ನೀಡಿ

**ಮೈಸೂರು:** ನಮ್ಮ ದೇಶವನ್ನು, ರಾಜ್ಯವನ್ನು ರಕ್ಷಣೆ ಮಾಡಿ ಸಮಾಜವನ್ನು ಸದೃಢವಾಗಿ ಬೆಳೆಸಬೇಕಾದರೆ ಮಕ್ಕಳನ್ನು ರಕ್ಷಣೆ ಮಾಡಬೇಕು. ಮಕ್ಕಳ ರಕ್ಷಣೆಯನ್ನು ಮಾಡಿದಾಗ ನಾವು ಮುಂದಿನ ಭವಿಷ್ಯವನ್ನು ವಿಚಾರ ಮಾಡಲು ಸಾಧ್ಯ. ಹೀಗಾಗಿ ಮಕ್ಕಳ ರಕ್ಷಣೆಗೆ ಪ್ರಥಮ ಆದ್ಯತೆಯನ್ನು ನೀಡಬೇಕು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಶರಣಪ್ಪ ವಿ. ಹಲ್ಸೆ ರವರು ಹೇಳಿದರು.



ಇಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕಾವೇರಿ ಸಭಾಂಗಣದಲ್ಲಿ ನಡೆದ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಗೆ ಮಕ್ಕಳಿಗೆ ಸಂಬಂಧಿಸಿದ ಕಾನೂನುಗಳು ಕುರಿತು ಒಂದು ದಿನದ ತರಬೇತಿ ಹಾಗೂ ಅರಿವು ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಕ್ಕಳ ಏಳಿಗೆ ಕುರಿತು ನಾವು ಜವಾಬ್ದಾರಿಯುತವಾಗಿ ಮಕ್ಕಳ ರಕ್ಷಣೆ ಮತ್ತು ನಿರ್ವಹಣೆ ಮಾಡಬೇಕು. ಅರಿವೇ ಗುರು ಎನ್ನುತ್ತಾ ಮಕ್ಕಳಿಗೆ ಬಾಲ್ಯದಲ್ಲಿಯೇ ನೈತಿಕತೆ, ಆಚಾರ-ವಿಚಾರಗಳು, ಸಂಪ್ರದಾಯದ ಬಗ್ಗೆ ತಿಳಿಸಿದರೆ ದೇಶವನ್ನು ಮುನ್ನಡೆಸಲು ಸಹಕಾರಿಯಾಗುತ್ತದೆ. ಮಕ್ಕಳನ್ನು ಬೆಳೆಸುವಲ್ಲಿ ನಮ್ಮ ಜವಾಬ್ದಾರಿಗಳನ್ನೂ ಸಹ ನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳಾದ ಡಾ.ರಾಜೇಂದ್ರ ಕೆ.ವಿ ರವರು ಮಾತನಾಡಿ, ಮಕ್ಕಳ ಹಕ್ಕುಗಳು, ಬಾಲ್ಯವಿವಾಹ, ಮಕ್ಕಳ ಶಿಕ್ಷಣದ ಕುರಿತು ಪೋಷಕರಿಗೆ ಹಾಗೂ ಅಧಿಕಾರಿಗಳಿಗೆ ಅರಿವು ಮೂಡಿಸಬೇಕು. ಮೈಸೂರು ಇತ್ತೀಚಿಗೆ ಅತಿ ವೇಗದಲ್ಲಿ ನಗರೀಕರಣಕ್ಕೆ ಒಳಗಾಗುತ್ತಿದೆ. ಆದರೆ ಇನ್ನೂ ಸಹ ಗ್ರಾಮೀಣ ಭಾಗಗಳಲ್ಲಿ ಹೆಣ್ಣು ಮಕ್ಕಳ ಬಾಲ್ಯ ವಿವಾಹ ನಡೆಯುತ್ತಿದೆ. ಮಕ್ಕಳ ರಕ್ಷಣೆಯಲ್ಲಿ ಮಕ್ಕಳ ಪಾಲನೆ-ಪೋಷಣೆ ಮಾಡಬೇಕಾದ ಮಕ್ಕಳ ಹಕ್ಕುಗಳ ಬಗ್ಗೆ ತಿಳಿದುಕೊಳ್ಳುವುದು ಬಹಳ ಮುಖ್ಯವಾಗುತ್ತದೆ. ಮಕ್ಕಳಿಗೆ ಗುಡ್‌ಟಚ್, ಬ್ಯಾಡ್‌ಟಚ್‌ಗಳ ಬಗ್ಗೆ ಅರಿವು ಮೂಡಿಸಬೇಕು. ಪೋಷಕರು ತಮ್ಮ ಮಕ್ಕಳಿಗೆ ಗಂಡು-ಹೆಣ್ಣು ಎಂಬ ತಾರತಮ್ಯ ಮಾಡಬಾರದು. ಪ್ರತಿಯೊಬ್ಬರಲ್ಲಿಯೂ ಮಾನವೀಯತೆ, ಸಂವೇದನಾಶೀಲತೆ ಇರಬೇಕು. ಹೆಣ್ಣು ಮಕ್ಕಳು ಸಮಸ್ಯೆಗಳನ್ನು ಹೊತ್ತು ತಂದಾಗ ಅದನ್ನು ಕಡೆಗಣಿಸಬಾರದು. ಸಮಸ್ಯೆ ಚಿಕ್ಕದಿದ್ದಾಗಲೇ ಅದನ್ನು ಬಗೆಹರಿಸಿಕೊಳ್ಳಬೇಕು. ಎಲ್ಲಾ ವಿಭಾಗದ ಅಧಿಕಾರಿಗಳು ಸಹ ಇದರ ಬಗ್ಗೆ ಗಮನ ಹರಿಸಬೇಕು. ಕಾನೂನಿನ ಅರಿವು ಪ್ರತಿಯೊಬ್ಬರಿಗೂ ಇರಬೇಕು .ಮಕ್ಕಳ ಬಗೆಗೆ ಯಾವುದೇ ರೀತಿಯ ತೊಂದರೆಗಳು ಕಂಡು ಬಂದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಿನೇಶ್ ಬಿ.ಜಿ ರವರು ಮಾತನಾಡಿ, ಈ ಕಾರ್ಯಕ್ರಮ ಅವಶ್ಯಕತೆ ಮತ್ತು ಅನಿವಾರ್ಯ ಕಾರ್ಯಾಗಾರ. ಇದು ಇಂಡಿಯನ್ ಮೆಜಾರಿಟಿ ಕಾಯಿದೆ ಮತ್ತು ಪೋಕ್ಸೋ ಕಾಯಿದೆ ಪ್ರಕಾರ 18 ವರ್ಷದೊಳಗಿನ ಎಲ್ಲರೂ ಸಹ ಮಕ್ಕಳೇ ಎಂದು ಪರಿಗಣಿಸಲಾಗುತ್ತದೆ. ಸಂವಿಧಾನದ 14 ನೇ ವಿಧಿಯು ಸಮಾನತೆಯ ಹಕ್ಕು, 15 ನೇ ವಿಧಿಯು ರೈಟ್ಸ್ ಆಗೈನೆಸ್ಟ್ ದಿಸ್ಕಿಮಿನೇಷನ್ ಹಾಗೂ ಮಕ್ಕಳಿಗೆ ಪೌಷ್ಠಿಕ ಆಹಾರವನ್ನೂ ಪಡೆಯುವ ಹಕ್ಕು, 6 ರಿಂದ 14 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಶಿಕ್ಷಣ ಕಡ್ಡಾಯವಾದುದ್ದು, ಇಂದಿನ ಮಕ್ಕಳೇ ಮುಂದಿನ ಭವಿಷ್ಯದ ಆಸ್ತಿ. ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಮಾಡಿಕೊಂಡಿದೆ ಅದರ ಅನುಷ್ಠಾನದ ಜವಾಬ್ದಾರಿ ಎಲ್ಲಾ ಇಲಾಖೆಗಳ ಮೇಲಿದೆ ಎಂದರು.

ಈ ಸಂದರ್ಭದಲ್ಲಿ ಛಾಯಾದೇವಿ ಶಾಲಾ ಮಕ್ಕಳಿಂದ ಬಾಲ್ಯ ವಿವಾಹದ ನಿಷೇಧ ಕುರಿತಂತೆ ಕಿರು ನಾಟಕವನ್ನು ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಎಸ್. ಮಂಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಹೆಚ್. ಆರ್. ಸುರೇಶ್, ಜಿಲ್ಲಾ ಮಕ್ಕಳಾ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳಾದ ಯೋಗೇಶ್ ಎನ್. ಟಿ, ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ಆಹಾರ ವಿಜ್ಞಾನ ಮತ್ತು ಪೋಷಣೆ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಸಿ.ಅನಿತ, ಪೊಲೀಸ್ ಮಹಾ ನಿರ್ದೇಶಕರ ತರಬೇತಿ ಕಚೇರಿಯ ಪೊಲೀಸ್ ತರಬೇತುದಾರರಾದ ರೋಹಿತ್ ಸಿ.ಜೆ, ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಪಾಂಡು ಮತ್ತಿತರರು ಉಪಸ್ಥಿತರಿದ್ದರು.

# ಮಹಾತ್ಮ ಗಾಂಧಿಗೆ ಸಿದ್ದರಾಮಯ್ಯರಿಂದ ಗೌರವ

**ಬೆಂಗಳೂರು:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪುಣ್ಯತಿಥಿ ಅಂಗವಾಗಿ, ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ಮಧ್ಯ ಭಾಗದಲ್ಲಿರುವ ಮಹಾತ್ಮ ಗಾಂಧಿ ಅವರ ಪ್ರತಿಮೆಯ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದ ಬಳಿಕ, ಕೆಲವು ನಿಮಿಷಗಳ ಕಾಲ ಮೌನವನ್ನು ಆಚರಣೆ ಮಾಡಿ, ಹುತಾತ್ಮರ ದಿನಾಚರಣೆಯನ್ನು ನೆರವೇರಿಸಿದರು. ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಡಾ. ಕೆ.ಹೆಚ್.ಮುನಿಯಪ್ಪ, ನಗರಾಭಿವೃದ್ಧಿ ಸಚಿವ ಸುರೇಶ (ಬೈರತಿ), ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಪೊನ್ನಣ್ಣ, ವಿಧಾನ ಪರಿಷತ್ ಸದಸ್ಯ ಶರವಣ, ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಕಾರ್ಯದರ್ಶಿ ಅಜಯ್ ನಾಗಭೂಷಣ್, ಮಾಜಿ ಸಚಿವ ಹೆಚ್.ಆಂಜನೇಯ, ರಾಜ್ಯ ಸಭೆ ಸದಸ್ಯ ರಾಜೀವ್ ಗೌಡ, ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.



# ಕಂಪ್ಯೂಟರ್ ಪ್ರೋಗ್ರಾಮರ್ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರಿನ ವಿಸ್ತರಣಾ ನಿರ್ದೇಶನಾಲಯವು ಸಮೇತಿ(ದಕ್ಷಿಣ), ಸಿಬ್ಬಂದಿ ತರಬೇತಿ ಘಟಕ, ವಿಸ್ತರಣಾ ನಿರ್ದೇಶನಾಲಯದಲ್ಲಿ ಗುತ್ತಿಗೆ ಆಧಾರದ ಮೇಲೆ ಒಂದು ಕಂಪ್ಯೂಟರ್ ಪ್ರೋಗ್ರಾಮರ್ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಿದೆ. ಭರ್ತಿ ಮಾಡಿದ ಅರ್ಜಿಯನ್ನು ಸೂಕ್ತ ದೃಢೀಕರಿಸಿದ ಪ್ರಮಾಣಪತ್ರಗಳೊಂದಿಗೆ ಫೆಬ್ರವರಿ 13ರೊಳಗಾಗಿ ಸಂಯೋಜಕರು, ಸಮೇತಿ (ದಕ್ಷಿಣ), ಸಿಬ್ಬಂದಿ ತರಬೇತಿ ಘಟಕ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560065 ಈ ಕಛೇರಿಗೆ ಸಲ್ಲಿಸುವುದು. ಪದವಿಯೊಂದಿಗೆ ಕಂಪ್ಯೂಟರ್ ಜ್ಞಾನ ಹೊಂದಿರುವವರು ಅರ್ಜಿಯನ್ನು ಸಲ್ಲಿಸಬಹುದು. ಮಾಸಿಕ ಕ್ರೋಢಿಕೃತ ವೇತನ ರೂ.16,000/- ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ: 9972035456ಗೆ ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಚುನಾವಣೆ ವೇಳೆ ಗಲಾಟೆ ಹಬ್ಬಿಸುವ ಕೆಲಸ

**ಮೈಸೂರು:** ರಾಜ್ಯದ ಅಭಿವೃದ್ಧಿ ಕೆಲಸಕ್ಕೆ ಧ್ವನಿ ಎತ್ತದೇ ಕೋಮು ಸೌಹಾರ್ದ ಕದಲುವ ಕೆಲಸದಲ್ಲಿ ಬಿಜೆಪಿ, ಜೆಡಿಎಸ್ ಮಗ್ನರಾಗಿದ್ದಾರೆ. ಚುನಾವಣೆ ವೇಳೆ ಗಲಾಟೆ ಹಬ್ಬಿಸುವ ಕೆಲಸ ಮಾಡುತ್ತಿದ್ದಾರೆ. ಬಿಜೆಪಿ, ಜೆಡಿಎಸ್ ಕುತಂತ್ರ ರಾಜಕಾರಣಕ್ಕೆ ನಿಮ್ಮ ಮಕ್ಕಳನ್ನ ಕಳಿಸಬೇಡಿ ಎಂದು ಜನರಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮನವಿ ಮಾಡಿದರು.

ಮಂಡ್ಯದ ಕೆರಗೋಡು ಧ್ವಜಸ್ತಂಭ ವಿಚಾರ ಗಲಭೆ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಶಾಂತಿಯನ್ನು ಕದಡುವ ಕೆಲಸವನ್ನು ಮಾಡುತ್ತಿವೆ. ಜನರು ಬಿಜೆಪಿ ಮತ್ತು ಜೆಡಿಎಸ್ ನವರ ಕುತಂತ್ರ ರಾಜಕಾರಣಕ್ಕೆ ನಿಮ್ಮಮಕ್ಕಳನ್ನ ಕಳಿಸಬೇಡಿ. ಮೊದಲು ಕರಾವಳಿ ಭಾಗದಲ್ಲಿ ನಡೆಯುತ್ತಿತ್ತು. ಈಗ ಹಳೇ ಮೈಸೂರು ಭಾಗದಲ್ಲೂ ಈ ರೀತಿ ಗಲಭೆ ಸೃಷ್ಟಿಸುತ್ತಿದ್ದಾರೆ.ಯಾವ ಧ್ವಜಕ್ಕಾಗಿ ಹೋರಾಟ ಮಾಡುತ್ತೀದ್ದೀರಿ. ರಾಷ್ಟ್ರಧ್ವಜದ ಮೇಲೆ ಇವರಿಗೆ ಗೌರವ ಇಲ್ಲ. ಭಗವತ್ ಧ್ವಜವನ್ನ ಸಂಸತ್ ಭವನದ ಮೇಲೆ ಹಾರಿಸುತ್ತೇವೆ ಎನ್ನುವುದು ಇವರ ಅಜೆಂಡಾವಾಗಿದೆ. ಕೆರಗೋಡು ಗ್ರಾ.ಪಂ ನೀಡಿರುವ ಅನುಮತಿ ನಿಯಮ ಉಲ್ಲಂಘನೆ ಮಾಡಿ ಹನುಮ ಧ್ವಜವನ್ನ ಹಾರಿಸಿದ್ದಾರೆ. ರಾಷ್ಟ್ರಧ್ವಜದ ಕೋಡ್ ಆಫ್ ಕಂಡಕ್ಟ್ ಆಗಿದೆ. ಕಾನೂನು ಉಲ್ಲಂಘನೆ ಮಾಡಿದವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಕರಾವಳಿಯಲ್ಲಿ ನಡೆಯುತ್ತಿದ್ದ ಕೋಮು ಗಲಭೆ ಪ್ರಯೋಗವನ್ನು ಇಲ್ಲಿ ಪ್ರಯೋಗ ಮಾಡಲು ಬಿಜೆಪಿ, ಜೆಡಿಎಸ್ ನಾಯಕರ ಹುನ್ನಾರ ಇದು ಎಂದು ಕಿಡಿಕಾರಿದರು.



ಮಂಡ್ಯಕ್ಕೆ ಸುಮಾರು 400 ಕ್ಕೂ ಹೆಚ್ಚು ಜನ ಆರ್ ಎಸ್ ಎಸ್ ಕಾರ್ಯಕರ್ತರು ಕರಾವಳಿಯಿಂದ ಬಂದಿದ್ದರು ಎಂಬ ಮಾಹಿತಿ ಇದೆ. ಸಣ್ಣ ವಿಚಾರವನ್ನು ತೆಗೆದುಕೊಂಡು ಈ ರೀತಿ ಗಲಭೆ ಸೃಷ್ಟಿಸುವುದಕ್ಕೆ ನಾಚಿಕೆ ಆಗಬೇಕು. ಕಾಂಗ್ರೆಸ್ ನಾಯಕರ ಫೋಟೋ, ಫ್ಲೆಕ್ಸ್ ಗಳನ್ನು ಹರಿದು ಹಾಕಿ ಒಕ್ಕಲಿಗ ತ/ ಕುರುಬ, ದಲಿತ ತ/ ಒಕ್ಕಲಿಗರ ನಡುವೆ ಕೋಮು ಗಲಭೆ ಸೃಷ್ಟಿಸುತ್ತಿದ್ದಾರೆ. ವಿಧಾನಸಭಾ ಚುನಾವಣೆ ವೇಳೆ ಉರಿಗೌಡ, ನಂಜೇಗೌಡ ಅಂತ ತಂದರು. ಈಗ ಈ ರೀತಿ ಒಂದೊಂದು ವಿಚಾರಗಳನ್ನು ತಂದು ಗಲಭೆ ಸೃಷ್ಟಿ ಮಾಡುತ್ತಿದ್ದಾರೆ. ಇದನ್ನು ಜನ ಅರ್ಥ ಮಾಡಿಕೊಳ್ಳಬೇಕು ಎಂದು ಎಂ.ಲಕ್ಷ್ಮಣ್ ವಾಗ್ದಾಳಿ ನಡೆಸಿದರು.

ವಿಪಕ್ಷ ನಾಯಕ ಆರ್. ಅಶೋಕ್ ವಿಪಕ್ಷ ನಾಯಕನಾಗಿ ಶ್ಯಾಡೋ ಸಿಎಂ ಆಗಿ ಕೆಲಸ ಮಾಡಬೇಕು. ರಾಜ್ಯದ ಅಭಿವೃದ್ಧಿ ಕೆಲಸಕ್ಕೆ ಧ್ವನಿ ಎತ್ತದೆ ಕೋಮು ಸೌಹಾರ್ದ ಕದಲುವ ಕೆಲಸದಲ್ಲಿ ಮಗ್ನರಾಗಿದ್ದಾರೆ. ಇಂತಹ ಗಲಭೆಯಲ್ಲಿ ಬಿಜೆಪಿಯವರೇ ಕೆಲವರ ತಲೆ ಉರುಳಿಸಿ ಅದನ್ನ ಕಾಂಗ್ರೆಸ್ ಮೇಲೆ ಹಾಕುವ ವ್ಯವಸ್ಥೆ ಮಾಡುತ್ತಾರೆ. ಯುವಕರು ಅರ್ಥ ಮಾಡಿಕೊಳ್ಳಬೇಕು ಎಂದು ಎಂ.ಲಕ್ಷ್ಮಣ್ ಹೇಳಿದರು.

ಸಂಸದ ಪ್ರತಾಪ್ ಸಿಂಹ ಜನರಿಗೆ ಸುಳ್ಳಿನ ರೈಲು ಬಿಟ್ಟಿದ್ದಾರೆ.

2024 ರ ಫೆಬ್ರವರಿಗೆ ಕುಶಾಲನಗರಕ್ಕೆ ರೈಲು ಬಂದು ನಿಲ್ಲುತ್ತೆ. ಎಂದು ಸಂಸದ ಪ್ರತಾಪ್ ಸಿಂಹ ಹೇಳಿದ್ದರು. ಆದರೆ, ಈಗ ಇನ್ನೂ ಸರ್ವೇನೇ ಆರಂಭವಾಗಿಲ್ಲ ಸಂಸದ ಪ್ರತಾಪ್ ಸಿಂಹ ಜನರಿಗೆ ಸುಳ್ಳಿನ ರೈಲು ಬಿಟ್ಟಿದ್ದಾರೆ. ಕೊಡುಗು ಪ್ರತ್ಯೇಕ ಲೋಕಸಭಾ ಕ್ಷೇತ್ರ ಮಾಡುತ್ತೇವೆ. ಏರ್ ಪೋರ್ಟ್ ಅಭಿವೃದ್ಧಿ ಕಾಮಗಾರಿ ಬಗ್ಗೆ ಹಾಗೆ ಹೀಗೆ ಎಂದು ಪುಂಕಾನು ಪುಂಕವಾಗಿ ಹೇಳಿದ್ರಿ. ಇವೆಲ್ಲ ಒಂದು ಕೂಡ ನೆರವೇರಿಲ್ಲ. ಸುಳ್ಳು ಆಶ್ವಾಸನೆಗಳ ಸರದಾರ ಪ್ರತಾಪ್ ಸಿಂಹ. ಕ್ಷೇತ್ರಕ್ಕೆ ಯಾವ ಯಾವ ಕಾರ್ಯಕ್ರಮ ತಂದಿದ್ದೀರಿ ಅಂತ ಒಂದು ಶ್ವೇತ ಪತ್ರ ಹೊರಡಿಸಿ ಎಂದು ಎಂ. ಲಕ್ಷ್ಮಣ್ ಸವಾಲು ಹಾಕಿದರು.

ಮಂಡ್ಯದಲ್ಲಿರುವ ಪೊಲೀಸ್ ಅಧಿಕಾರಿಗಳನ್ನು ಬದಲಿಸಬೇಕು. ಮಂಡ್ಯದಲ್ಲಿರುವ ಪೊಲೀಸ್ ಅಧಿಕಾರಿಗಳನ್ನು ಬದಲಿಸಬೇಕು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ ಕಾಂಗ್ರೆಸ್ ವಕ್ತಾರ ಎಂ ಲಕ್ಷ್ಮಣ್, ಸದ್ಯ ಇರುವ ಪೊಲೀಸ್ ಅಧಿಕಾರಿಗಳಲ್ಲಿ ಬಿಜೆಪಿ ಮೈಂಡ್ ಸೆಟ್ ಇದೆ. ನಿನ್ನೆ ಕಾಂಗ್ರೆಸ್ ನಾಯಕರ ಭಾವಚಿತ್ರದ ಫ್ಲೆಕ್ಸ್ ಹರಿದು ಹಾಕಿದ್ದಾರೆ. ಕುರುಬ ಸಮುದಾಯ ಹಾಸ್ಟೆಲ್ ಗೆ ತೆರಳಿ ಸಿದ್ದರಾಮಯ್ಯ ಫೋಟೋ ಹರಿದಿದ್ದಾರೆ. ಒಬ್ಬ ಸಿಎಂ ಫೋಟೊ ಹರಿಯುವಾಗ ಪೊಲೀಸರು ಎಲ್ಲಿದ್ದರು? ಬಿಜೆಪಿ ಮೈಂಡ್ ಸೆಟ್ ನಿಂದ ಪೊಲೀಸರು ಹೊರ ಬಂದಿಲ್ಲ. ಸರ್ಕಾರಕ್ಕೆ ಕೆಟ್ಟ ಹೆಸರು ತರುವ ಕೆಲಸ ಕೆಲ ಅಧಿಕಾರಿಗಳಿಂದ ನಡೆಯುತ್ತಿದೆ. ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗ ಇದ್ದ ಪೊಲೀಸ್ ಅಧಿಕಾರಿಗಳೇ ಈಗಲೂ ಇದ್ದಾರೆ. ನಿನ್ನೆ ಪ್ರಕರಣದಲ್ಲಿ ಪೊಲೀಸರು ಎಷ್ಟು ಮಂದಿಯನ್ನು ಅರೆಸ್ಟ್ ಮಾಡಿದ್ದಾರೆ? ಎಷ್ಟು ಮಂದಿಯ ಮೇಲೆ ಎಫ್ ಐಆರ್ ಹಾಕಿದ್ದಾರೆ.? ಬಿಜೆಪಿಗರ ಹಾಗೆ ನಾವು ಅವರ ನಾಯಕರ ಭಾವಚಿತ್ರ ಹರಿಯಲು ನಮ್ಮ ಕಾರ್ಯಕರ್ತರಿಗೆ ಕರೆ ಕೊಡಬೇಕಾ?? ಚುನಾವಣೆ ವೇಳೆ ಗಲಾಟೆ ಹಬ್ಬಿಸುವ ಕೆಲಸ ಬಿಜೆಪಿ ಮಾಡುತ್ತಿದೆ. ಮುಗ್ದ ಮಕ್ಕಳ ಮನಸ್ಸು ಕೆಡಿಸಿ ಗಲಾಟೆ ಹಬ್ಬಿಸುತ್ತಿದ್ದಾರೆ ಎಂದು ಎಂ ಲಕ್ಷ್ಮಣ್ ಆಕ್ರೋಶ ವ್ಯಕ್ತಪಡಿಸಿದರು.

# ರಸ್ತೆಗೆ ಅಂಬೇಡ್ಕರ್ ಹೆಸರಿಡಲು ವಿರೋಧ: ಪರಸ್ಪರ ಕಲ್ಲು ತೂರಾಟ, ಪೊಲೀಸರಿಗೂ ಗಾಯ

**ಮೈಸೂರು:** ನಂಜನಗೂಡು ತಾಲ್ಲೂಕಿನ ಹಲ್ಲರೆ ಗ್ರಾಮದ ರಸ್ತೆಯೊಂದಕ್ಕೆ ಅಂಬೇಡ್ಕರ್ ಹೆಸರಿನ ನಾಮಫಲಕ ಅಳವಡಿಸುವ ವಿಚಾರವಾಗಿ ಸೋಮವಾರ ರಾತ್ರಿ ಗ್ರಾಮದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನಾಯಕ ಸಮುದಾಯದವರ ನಡುವೆ ವಾಗ್ವಾದ ನಡೆದು ಪರಸ್ಪರ ಹಲ್ಲೆ ಮಾಡಿಕೊಂಡಿದ್ದಾರೆ. ಘಟನೆಯಲ್ಲಿ ಪೊಲೀಸರೂ ಸೇರಿದಂತೆ 30ಕ್ಕೂ ಹೆಚ್ಚು ಮಂದಿಗೆ ಗಾಯಗಳಾಗಿವೆ.

ಹಲ್ಲರೆ ಗ್ರಾಮದಿಂದ ಹುರ ಗ್ರಾಮದ ಕಡೆಗೆ ತೆರಳುವ ರಸ್ತೆಗೆ ಡಾ. ಬಿ.ಆರ್. ಅಂಬೇಡ್ಕರ್ ಹೆಸರಿಡಲು ಪರಿಶಿಷ್ಟ ಸಮುದಾಯದ ಯುವಕರು ಸ್ಥಳೀಯ ಪಂಚಾಯಿತಿಗೆ ಅರ್ಜಿ ಸಲ್ಲಿಸಿ ಪಿಡಿಒ ಅವರಿಂದ ಅನುಮತಿ ಪಡೆದಿದ್ದರು. ಆದರೆ ಬೀದಿಯ ಕೊನೆಯಲ್ಲಿ ನಮ್ಮ ಮನೆಗಳಿದ್ದು, ಇಲ್ಲಿ ಫಲಕ ಅಳವಡಿಸಬೇಡಿ ಎಂದು ನಾಯಕ ಸಮುದಾಯದವರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಹೀಗಾಗಿ ಐದು ದಿನಗಳ ಹಿಂದೆ ನಾಮಫಲಕ ಅಳವಡಿಕೆ ಕಾರ್ಯಕ್ರಮ ಮುಂದೂಡಲಾಗಿತ್ತು. ಸೋಮವಾರ ಸಂಜೆ ಪರಿಶಿಷ್ಟ ಜಾತಿಯ ಯುವಕರು ರಸ್ತೆಯಲ್ಲಿ ನಾಮಫಲಕ ಅಳವಡಿಸಲು ಮುಂದಾದಾಗ ಆರಂಭಗೊಂಡ ಜಗಳವು ಹೊಡೆದಾಟಕ್ಕೆ ತಿರುಗಿದ್ದು, ಪರಸ್ಪರ ಕಲ್ಲು ಹಾಗೂ ಒನಕೆಯಿಂದ ಹಲ್ಲೆ ನಡೆಸಿದರು. ಮಹಿಳೆಯರು, ಮಕ್ಕಳು ಸಹ ಘಟನೆಯಲ್ಲಿ ಗಾಯಗೊಂಡರು.

ಕೆಲವರು ಮನೆಗಳಿಗೂ ಕಲ್ಲು ತೂರಿದ್ದು, ಹೆಂಚುಗಳು ಪುಡಿಪುಡಿಯಾಗಿವೆ. 30ಕ್ಕೂ ಹೆಚ್ಚು ಬೈಕ್‌ಗಳು ಜಖಂಗೊಂಡಿದ್ದು, ಶಾಲಾ ಬಸ್ ಸೇರಿದಂತೆ ಸ್ಥಳದಲ್ಲಿದ್ದ ಇತರ ವಾಹನಗಳಿಗೂ ಹಾನಿಯಾಗಿದೆ. ಪರಿಸ್ಥಿತಿ ನಿಯಂತ್ರಣಕ್ಕೆ ತೆರಳಿದ್ದ ಪೊಲೀಸರ ಮೇಲೂ ಕಲ್ಲು ತೂರಾಟ ನಡೆದಿದ್ದು, ಸಬ್ ಇನ್‌ಸ್ಪೆಕ್ಟರ್ ಸೇರಿದಂತೆ ಮೂವರು ಸಿಬ್ಬಂದಿಗೆ ಗಾಯಗಳಾಗಿವೆ.

ಆಸ್ಪತ್ರೆಗೆ ದಾಖಲು: ಗಲಾಟೆಯಲ್ಲಿ ಪರಿಶಿಷ್ಟ ಜಾತಿಯ 25 ಜನರು ಹಾಗೂ ನಾಯಕ ಸಮುದಾಯದ ಹಲವು ಮಂದಿಗೆ ಗಾಯಗಳಾಗಿದ್ದು, ನಂಜನಗೂಡು ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಬಳಿಕ ಮೈಸೂರಿನ ಕೆ.ಆರ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಎಎಸ್‌ಪಿ ನಂದಿನಿ, ಡಿವೈಎಸ್‌ಪಿ ಗೋವಿಂದರಾಜು ಹಾಗೂ ಸರ್ಕಲ್ ಇನ್ ಸ್ಪೆಕ್ಟರ್ ಸುನಿಲ್ ರಾತ್ರಿ ಗ್ರಾಮಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು.

ಗ್ರಾಮದಲ್ಲಿ ಸದ್ಯ ಬಿಗುವಿನ ವಾತಾವರಣ ಇದ್ದು, ಪೊಲೀಸ್ ತುಕಡಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ.




## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯಪಾಲಕ ಅಭಿಯಂತರರ ಕಛೇರಿ, ವಿದ್ಯುತ್ ವಿಭಾಗ, ದಕ್ಷಿಣ ವಲಯ, 9ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಜಯನಗರ ಬೆಂಗಳೂರು-11

ಸಂಖ್ಯೆ: ಕಾಪಾಅ/ವಿದ್ಯುತ್/ದ/ಟೆಂಡರ್/07/2023-24 ದಿನಾಂಕ: 29.01.2024

**ಅಲ್ಪಾವಧಿ ಟೆಂಡರ್‌ಗಾಗಿ ಆಹ್ವಾನ (ಐಎಫ್‌ಟಿ) (ದ್ವಿಲಕೋಟೆ ಪದ್ಧತಿ)**
**(ಕರ್ನಾಟಕ ಸರ್ಕಾರದ ಕೆಪಿಪಿ ಪೋರ್ಟಲ್ ಮುಖಾಂತರ ಮಾತ್ರ)**

ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ದಕ್ಷಿಣ ವಲಯ, ಇವರು ಬೃ.ಬೆಂ.ಮ.ಪಾಲಿಕೆ ಇವರ ಪರವಾಗಿ, ಕೆಟಿಪಿಪಿ ಕಾಯಿದೆಗಳು 2000ಕ್ಕೆ ಅನುಗುಣವಾಗಿ ಬೃ.ಬೆಂ.ಮ.ಪಾಲಿಕೆ ಅಥವಾ ತತ್ಸಮಾನವಾಗಿ ಸಿ.ಪಿ.ಡಬ್ಲ್ಯೂ.ಡಿ/ಕೆ.ಪಿ.ಡಬ್ಲ್ಯೂ.ಡಿ/ರೈಲ್ವೇಸ್/ಎಂ.ಇ.ಎಸ್/ರಾಷ್ಟ್ರೀಯ ಹೆದ್ದಾರಿ ಅಥವಾ ತತ್ಸಮಾನವಾಗಿ ಯಾವುದೇ ಕೇಂದ್ರ/ರಾಜ್ಯ ಸರ್ಕಾರಿ ಸಂಸ್ಥೆಗಳಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ವಿದ್ಯುತ್ ಕಾಮಗಾರಿಗಳಿಗಾಗಿ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

**01.04.2024 ರಿಂದ 30.09.2024ರ ಅವಧಿಗೆ ದಕ್ಷಿಣ ವಲಯದ ವ್ಯಾಪ್ತಿಯಲ್ಲಿ ಬರುವ ವಿವಿಧ ವಾರ್ಡ್‌ಗಳಲ್ಲಿ ಬೀದಿ ದೀಪ ವ್ಯವಸ್ಥೆಗಳಿಗೆ ಕಾರ್ಯಾಚರಣೆ ಮತ್ತು ನಿರ್ವಹಣೆ ಮಾಡುವುದು**

| ಕ್ರ. ಸಂ. | ಕಾಮಗಾರಿಗಳ ಹೆಸರು ಮತ್ತು ವಾರ್ಡ್‌ಗಳು | ಕಾಮಗಾರಿಯ ಅಂದಾಜು ಮೊತ್ತ (₹.ಲಕ್ಷಗಳಲ್ಲಿ) | ಇಎಂಡಿ (₹. ಗಳಲ್ಲಿ) |
|---|---|---|---|
| 1 | ಕೆಂಪಾಪುರ ಅಗ್ರಹಾರ ವಾರ್ಡ್ ಸಂಖ್ಯೆ-144 ಮತ್ತು ವಿಜಯನಗರ ವಾರ್ಡ್ ಸಂಖ್ಯೆ-145 ಪ್ಯಾಕೇಜ್ ಎಸ್-1 | 18.00 | 45000/- |
| 2 | ಹೊಸಹಳ್ಳಿ ವಾರ್ಡ್ ಸಂಖ್ಯೆ-146 ಮತ್ತು ಹಂಪಿನಗರ ವಾರ್ಡ್ ಸಂಖ್ಯೆ-147 ಪ್ಯಾಕೇಜ್ ಎಸ್-2 | 22.00 | 50000/- |
| 3 | ಹೊಸಗುಡ್ಡದಹಳ್ಳಿ ವಾರ್ಡ್ ಸಂಖ್ಯೆ-148 ಮತ್ತು ಗಾಳಿ ಆಂಜನೇಯ ಸ್ವಾಮಿ ವಾರ್ಡ್ ಸಂಖ್ಯೆ-149 ಪ್ಯಾಕೇಜ್ ಎಸ್-3 | 18.00 | 45000/- |
| 4 | ಅತ್ತಿಗುಪ್ಪೆ ವಾರ್ಡ್ ಸಂಖ್ಯೆ-150 ಮತ್ತು ದೀಪಾಂಜಲಿ -ನಗರ ವಾರ್ಡ್ ಸಂಖ್ಯೆ-151 ಪ್ಯಾಕೇಜ್ ಎಸ್-4 | 24.00 | 50000/- |
| 5 | ಆವಲಹಳ್ಳಿ ವಾರ್ಡ್ ಸಂಖ್ಯೆ-152 ಪ್ಯಾಕೇಜ್ ಎಸ್-5 | 12.00 | 30000/- |
| 6 | ಧರ್ಮರಾಯಸ್ವಾಮಿ ದೇವಸ್ಥಾನ ವಾರ್ಡ್ ಸಂಖ್ಯೆ-160 ಮತ್ತು ಸಿಲ್ವರ್ ಜುಬಿಲಿ ಪಾರ್ಕ್ ವಾರ್ಡ್ ಸಂಖ್ಯೆ-161 ಪ್ಯಾಕೇಜ್ ಎಸ್-6 | 22.00 | 50000/- |
| 7 | ಸುಂಕೇನಹಳ್ಳಿ ವಾರ್ಡ್ ಸಂಖ್ಯೆ-162 ಮತ್ತು ವಿಶ್ವೇಶ್ವರಪುರಂ ವಾರ್ಡ್ ಸಂಖ್ಯೆ-163 ಪ್ಯಾಕೇಜ್ ಎಸ್-7 | 35.00 | 70000/- |
| 8 | ಹೊಂಬೇಗೌಡನಗರ ವಾರ್ಡ್ ಸಂಖ್ಯೆ-164 ಮತ್ತು ವೆಂಕಟರೆಡ್ಡಿನಗರ ವಾರ್ಡ್ ಸಂಖ್ಯೆ-165 ಪ್ಯಾಕೇಜ್ ಎಸ್-8 | 28.50 | 57000/- |
| 9 | ಈಜಿಪುರ ವಾರ್ಡ್ ಸಂಖ್ಯೆ-173 ಮತ್ತು ಆಡುಗೋಡಿ ವಾರ್ಡ್ ಸಂಖ್ಯೆ-176 ಪ್ಯಾಕೇಜ್ ಎಸ್-9 | 24.00 | 50000/- |
| 10 | ಕೋರಮಂಗಲ ವಾರ್ಡ್ ಸಂಖ್ಯೆ-174 ಪ್ಯಾಕೇಜ್ ಎಸ್-10 | 23.00 | 50000/- |
| 11 | ಲಕ್ಕಸಂದ್ರ ವಾರ್ಡ್ ಸಂಖ್ಯೆ-177 ಮತ್ತು ಸುದ್ದಗುಂಟೆ -ಪಾಳ್ಯ ವಾರ್ಡ್ ಸಂಖ್ಯೆ-178 ಪ್ಯಾಕೇಜ್ ಎಸ್-11 | 20.00 | 50000/- |
| 12 | ಮಡಿವಾಳ ವಾರ್ಡ್ ಸಂಖ್ಯೆ-179 ಮತ್ತು ಜಕ್ಕಸಂದ್ರ ವಾರ್ಡ್ ಸಂಖ್ಯೆ-175 ಪ್ಯಾಕೇಜ್ ಎಸ್-12 | 24.00 | 50000/- |
| 13 | ಸೋಮೇಶ್ವರ ವಾರ್ಡ್ ಸಂಖ್ಯೆ-180 ಮತ್ತು ಬಿಟಿಎಂ ಬಡಾವಣೆ ವಾರ್ಡ್ ಸಂಖ್ಯೆ-181 ಪ್ಯಾಕೇಜ್ ಎಸ್-13 | 30.00 | 60000/- |
| 14 | ಭೈರಸಂದ್ರ ವಾರ್ಡ್ ಸಂಖ್ಯೆ-182 ಮತ್ತು ಗುರಪ್ಪನಪಾಳ್ಯ ವಾರ್ಡ್ ಸಂಖ್ಯೆ-183 ಪ್ಯಾಕೇಜ್ ಎಸ್-14 | 28.00 | 56000/- |
| 15 | ಜಯನಗರ ಪೂರ್ವ ವಾರ್ಡ್ ಸಂಖ್ಯೆ-184 ಮತ್ತು ಜೆಪಿ ನಗರ ವಾರ್ಡ್ ಸಂಖ್ಯೆ-185 ಪ್ಯಾಕೇಜ್ ಎಸ್-15 | 33.00 | 66000/- |
| 16 | ಶಾಕಾಂಬರಿನಗರ ವಾರ್ಡ್ ಸಂಖ್ಯೆ-186 ಮತ್ತು ಸಾರಕ್ಕಿ ವಾರ್ಡ್ ಸಂಖ್ಯೆ-187 ಪ್ಯಾಕೇಜ್ ಎಸ್-16 | 35.00 | 70000/- |
| 17 | ಯಡಿಯೂರು ವಾರ್ಡ್ ಸಂಖ್ಯೆ-188 ಪ್ಯಾಕೇಜ್ ಎಸ್-17 | 20.00 | 50000/- |
| 18 | ಗಣೇಶ ಮಂದಿರ ವಾರ್ಡ್ ಸಂಖ್ಯೆ-189 ಪ್ಯಾಕೇಜ್ ಎಸ್-18 | 19.00 | 47500/- |
| 19 | ದೇವಗಿರಿ ದೇವಸ್ಥಾನ ವಾರ್ಡ್ ಸಂಖ್ಯೆ-190 ಮತ್ತು ಬನಶಂಕರಿ ದೇವಸ್ಥಾನ ವಾರ್ಡ್ ಸಂಖ್ಯೆ-191 ಪ್ಯಾಕೇಜ್ ಎಸ್-19 | 25.00 | 50000/- |
| 20 | ಕುಮಾರಸ್ವಾಮಿ ಬಡಾವಣೆ ವಾರ್ಡ್ ಸಂಖ್ಯೆ-192 ಮತ್ತು ಪದ್ಮನಾಭನಗರ ವಾರ್ಡ್ ಸಂಖ್ಯೆ-193 ಪ್ಯಾಕೇಜ್ ಎಸ್-20 | 46.00 | 92000/- |
| 21 | ಚಿಕ್ಕಲ್ಲಸಂದ್ರ ವಾರ್ಡ್ ಸಂಖ್ಯೆ-194 ಮತ್ತು ಹೊಸ -ಕೆರೆಹಳ್ಳಿ ವಾರ್ಡ್ ಸಂಖ್ಯೆ-195 ಪ್ಯಾಕೇಜ್ ಎಸ್-21 | 25.00 | 50000/- |
| 22 | ಗವಿಗಂಗಾಧರೇಶ್ವರ ವಾರ್ಡ್ ಸಂಖ್ಯೆ-196 ಮತ್ತು ಶ್ರೀನಗರ ವಾರ್ಡ್ ಸಂಖ್ಯೆ-197 ಪ್ಯಾಕೇಜ್ ಎಸ್-22 | 29.00 | 58000/- |
| 23 | ದೊಡ್ಡಗಣಪತಿ ವಾರ್ಡ್ ಸಂಖ್ಯೆ-198 ಮತ್ತು ವಿದ್ಯಾಪೀಠ ವಾರ್ಡ್ ಸಂಖ್ಯೆ-199 ಪ್ಯಾಕೇಜ್ ಎಸ್-23 | 32.52 | 65100/- |
| 24 | ಸ್ವಾಮಿ ವಿವೇಕಾನಂದ ವಾರ್ಡ್ ಸಂಖ್ಯೆ-200 ಮತ್ತು ಕತ್ರಿಗುಪ್ಪೆ ವಾರ್ಡ್ ಸಂಖ್ಯೆ-201 ಪ್ಯಾಕೇಜ್ ಎಸ್-24 | 36.00 | 72000/- |

**ಟೆಂಡರ್ ವೇಳಾಪಟ್ಟಿ:** (1) ಟೆಂಡರ್ ದಾಖಲೆಗಳನ್ನು ಕೆಪಿಪಿ ಪೋರ್ಟಲ್‌ನಲ್ಲಿ ದಿನಾಂಕ **02.02.2024** ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. (2) ಬಿಡ್‌ಗಳನ್ನು ಕೆಪಿಪಿ ಪೋರ್ಟಲ್‌ನಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕ **12.02.2024**ರ ಸಂಜೆ **4:00** ಗಂಟೆಗೆ ಅಥವಾ ಮುಂಚಿತವಾಗಿ. (3) ತಾಂತ್ರಿಕ ಬಿಡ್‌ಗಳನ್ನು ದಿನಾಂಕ **14.02.2024**ರ ಸಂಜೆ **4:00** ಗಂಟೆಗೆ ತೆರೆಯಲಾಗುವುದು. (4) ಆರ್ಥಿಕ ಬಿಡ್‌ಗಳನ್ನು ದಿನಾಂಕ **17.02.2024**ರ ಸಂಜೆ **4:30** ಗಂಟೆಗೆ ತೆರೆಯಲಾಗುವುದು. (5) ಈ ಟೆಂಡರ್ ಪ್ರಕಟಣೆಯನ್ನು ಬೃ.ಬೆಂ.ಮ.ಪಾಲಿಕೆ ವೆಬ್‌ಸೈಟ್ **www.bbmp.gov.in**. ನಲ್ಲಿಯು ಕೂಡ ವೀಕ್ಷಿಸಬಹುದಾಗಿದೆ. ಹೆಚ್ಚಿನ ವಿವರಗಳನ್ನು ಮೇಲ್ಕಂಡ ಕಚೇರಿಯಿಂದ ಕೆಲಸದ ವೇಳೆಯಲ್ಲಿ ಅಥವಾ ವೆಬ್‌ಸೈಟ್ **https://kppp.karnataka.gov.in** ನಲ್ಲಿ ಪಡೆದುಕೊಳ್ಳಬಹುದಾಗಿದೆ.

**ಸಹಿ/- ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ದಕ್ಷಿಣ ವಲಯ**


# ಪೋಷಕರ ಕನಸು ನನಸು ಮಾಡಿ




**ಮೈಸೂರು:** ಮೊದಲೆಲ್ಲಾ ಪೋಷಕರು ಭವಿಷ್ಯದಲ್ಲಿ ಮಕ್ಕಳು ತಮ್ಮನ್ನು ಸಾಕಬೇಕು ಎಂದು ಬಯಸುತ್ತಿದ್ದರು. ಆದರೆ ಈಗ ತಮ್ಮ ಮಕ್ಕಳು ವಿದ್ಯಾವಂತರಾಗಬೇಕು. ಬುದ್ಧಿವಂತರಾಗಬೇಕು. ತಮ್ಮ ಕಾಲ ಮೇಲೆ ತಾವು ನಿಂತು ನೆಮ್ಮದಿಯಿಂದ ಬಾಳಬೇಕು ಎಂದು ಬಯಸುತ್ತಾರೆ ಲಯನ್ಸ್ ಜಿಲ್ಲಾ ರಾಜ್ಯಪಾಲ ಡಾ.ಕೃಷ್ಣೇಗೌಡ ತಿಳಿಸಿದರು.

ಬನ್ನಿಮಂಟಪದ ಮೈಸೂರು ಲಯನ್ಸ್ ಸ್ಕೂಲ್ ನ 42ನೇ ವಾರ್ಷಿಕೋತ್ಸವ ಹಾಗೂ ಕ್ಲಬ್ ನಾ ಜಿಲ್ಲಾ ರಾಜ್ಯಪಾಲರ ಅಧಿಕೃತ ಭೇಟಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಆದ್ದರಿಂದ ವಿದ್ಯಾರ್ಥಿಗಳು ಉತ್ತಮ ಪ್ರಜೆಗಳಾಗಬೇಕು. ಕೆಟ್ಟವರ ಸಹವಾಸ ಮಾಡಬಾರದು. ಯಾರೂ ಕದಿಯಲಾಗದ ಆಸ್ತಿಯಾದ ವಿದ್ಯೆಯನ್ನು ಪಡೆದು, ತಂದೆ- ತಾಯಿಯ ಕನಸನ್ನು ನನಸು ಮಾಡಬೇಕು ಎಂದು ಅವರು ಹೇಳಿದರು. ಅಂತಾರಾಷ್ಟ್ರೀಯ ಮಟ್ಟದ ಸಂಸ್ಥೆಯಾದ ಲಯನ್ ಸೇವಾ ಮನೋಭಾವದಿಂದ ಯಾವುದೇ ವಂತಿಗೆ ಇಲ್ಲದೇ ಕಡಿಮೆ ಶುಲ್ಕ ಪಡೆದು ಈ ಶಾಲೆಯನ್ನು ನಡೆಸುತ್ತಿದೆ. ಇದರ ಸದುಪಯೋಗಪಡೆದು ಮುಂದೆ ಬರಬೇಕು ಎಂದು ಅವರು ಹೇಳಿದರು. ಅತಿಥಿಯಾಗಿದ್ದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ವಿದ್ಯಾರ್ಥಿಗಳು ವ್ಯಕ್ತಿತ್ವ ವಿಕಸನಕ್ಕೆ ಎಲ್ಲಾ ರೀತಿಯ ಚಟುವಟಿಕೆಗಳಲ್ಲೂ ಪಾಲ್ಗೊಳ್ಳುವುದು ಮುಖ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಮೈಸೂರು ಲಯನ್ಸ್ ಸ್ಕೂಲ್ ಚೇರ್ಮನ್ ಶಿವಕುಮಾರ್ ಮಾತನಾಡಿ, ಇಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ವೈದ್ಯರು, ಎಂಜಿನಿಯರ್ ಸೇರಿದಂತೆ ಬೇರೆ ಬೇರೆ ಉದ್ಯೋಗದಲ್ಲಿ ತೊಡಗಿಸಿಕೊಂಡರೆ ನಮಗೆ ಸಂತೋಷವಾಗುತ್ತದೆ. ರಾಷ್ಟ್ರಪತಿಯಾಗಿದ್ದ ಡಾ.ಎಪಿಜೆ ಅಬ್ದುಲ್ ಕಲಾಂ ಅವರನ್ನು ಮಾದರಿಯಾಗಿಟ್ಟುಕೊಂಡು ಜೀವನದಲ್ಲಿ ಸಾಧನೆ ಮಾಡಬೇಕು ಎಂದರು.

ಲಯನ್ಸ್ ಕ್ಲಬ್ ಆಫ್ ಮೈಸೂರು ಅಧ್ಯಕ್ಷೆ ಬಿ. ಭಾರತಿ ಅತಿಥಿಯಾಗಿದ್ದರು. ಜಿಲ್ಲಾ ಲಯನ್ಸ್ ಕಾರ್ಯದರ್ಶಿ ವೆಂಕಟೇಶ್, ಖಜಾಂಚಿ ಕಾಂತರಾಜು ವೇದಿಕೆಯಲ್ಲಿದ್ದರು.

ಮೈಸೂರು ಲಯನ್ಸ್ ಸ್ಕೂಲ್ ಕಾರ್ಯದರ್ಶಿ ಸಿ. ಮೋಹನಕುಮಾರ್ ಸ್ವಾಗತಿಸಿದರು. ಖಜಾಂಚಿ ಜೆ. ಲೋಕೇಶ್ ವಂದಿಸಿದರು. ಮುಖ್ಯ ಶಿಕ್ಷಕಿ ಹೇಮಾವತಿ ಶಾಲಾ ವರದಿ ಓದಿದರು. ಲಯನ್ಸ್ ಜಿಲ್ಲಾ ಮಾಜಿ ಗೌರ್ನರ್ ಡಾ.ಡಿ. ಪ್ರಭಾಮಂಡಲ್, ಹಿರಿಯ ಸದಸ್ಯರಾದ ಮತಿದೇವಕುಮಾರ್, ಪಿ.ಎಸ್. ಚಂದ್ರಶೇಖರ್, ಗಿರೀಶ್, ಶಿವಣ್ಣ, ಪ್ರತಿಮಾ ರಮೇಶ್, ಗೀತಾ, ಉಪಾಧ್ಯಕ್ಷ ವಿರೂಪಾಕ್ಷ, ಸಹ ಕಾರ್ಯದರ್ಶಿ ಪಿ. ರಮೇಶ್ ಮೊದಲಾದವರು ಇದ್ದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ 150ಕ್ಕೂ ಹೆಚ್ಚು ಬಹುಮಾನಗಳನ್ನು ವಿತರಿಸಲಾಯಿತು. ಆಡಳಿತ ಮಂಡಳಿಯ ಪರವಾಗಿ ಎಲ್ಲಾ ಶಿಕ್ಷಕರಿಗೂ ನೆನಪಿನ ಕಾಣಿಕೆ ನೀಡಿ ಅಭಿನಂದಿಸಲಾಯಿತು.

# 3,97,036.05 ಕೋಟಿ ರೂ.ಗಳ ಆದ್ಯತಾ ಸಾಲ

**ಬೆಂಗಳೂರು:** 2024-25 ನೇ ಸಾಲಿನಲ್ಲಿ ಒಟ್ಟು ರೂ. 3,97,036.05 ಕೋಟಿ ರೂ.ಗಳ ಆದ್ಯತಾ ವಲಯದ ಸಾಲದ ಗುರಿಯನ್ನು ನಬಾರ್ಡ್ (ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ರಾಷ್ಟ್ರೀಕೃತ ಬ್ಯಾಂಕ್ ) ತನ್ನ ರಾಜ್ಯ ಫೋಕಸ್ ಪೇಪರ್‌ನಲ್ಲಿ ಗುರಿ ಹೊಂದಿದ್ದು, ಆದ್ಯತಾ ವಲಯಗಳಾದ ಕೃಷಿ, ತೋಟಗಾರಿಕೆ, ಹೈನುಗಾರಿಕೆ ಮುಂತಾದವುಗಳಿಗೆ ಪ್ರಾಶಸ್ತ್ಯ ನೀಡಿ ಆರ್ಥಿಕ ಮಟ್ಟ ಹೆಚ್ಚಿಸಬೇಕು ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ.ಶಾಲಿನಿ ರಜನೀಶ್ ತಿಳಿಸಿದರು. ಇಂದು ನಬಾರ್ಡ್‌ನಲ್ಲಿ ಹಮ್ಮಿಕೊಳ್ಳಲಾದ 2024-25ನೇ ಸಾಲಿನ 'ರಾಜ್ಯ ಸಾಲ ಗೋಷ್ಠಿ'ಯಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ನಮ್ಮಲ್ಲಿ, ಬಹಳಷ್ಟು ನೈಸರ್ಗಿಕ ಸಂಪನ್ಮೂಲಗಳಿವೆ. ಇವನ್ನು ಸಮರ್ಪಕ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕು. ಕೃಷಿ, ತೋಟಗಾರಿಕೆ, ಒಳನಾಡು ಮೀನುಗಾರಿಕೆ ಮುಂತಾದ ವಲಯಗಳಲ್ಲಿ ಹೊಸ ತಂತ್ರಜ್ಞಾನ ಬಳಸಿಕೊಂಡು ಹೇಗೆ ರೈತರ ಜನರ ಆದಾಯವನ್ನು ದ್ವಿಗುಣಗೊಳಿಸಬೇಕೆಂಬುದನ್ನು ನಾವು ಅರಿತುಕೊಳ್ಳಬೇಕು ಎಂದರು. ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಬೆಳವಣಿಗೆ ಸಹ ಪ್ರೋತ್ಸಾಹಿಸಬೇಕು. ರೈತರ ಉತ್ಪಾದನಾ ಸಂಸ್ಥೆಗಳ (ಎಫ್‌ಪಿಒ) ಬೆಳವಣಿಗೆಗೆ ಸಹ ನಾವು ಕೈಜೋಡಿಸಬೇಕು. ಬ್ಯಾಂಕಿಂಗ್ ವಲಯದವರು ಆದಷ್ಟು ಜನಸ್ನೇಹಿಯಾಗಿ ಕೆಲಸ ನಿರ್ವಹಿಸಬೇಕು. ಸರ್ಕಾರ ಹಾಗೂ ಬ್ಯಾಂಕ್‌ಗಳು ಜನರಿಗೆ ಹಲವು ಯೋಜನೆಗಳನ್ನು ಯಾವುದೇ ಮಧ್ಯವರ್ತಿಗಳಿಲ್ಲದೇ ಶೀಘ್ರವಾಗಿ ತಲುಪಿಸುವ ಹೊಣೆ ಹೊರಬೇಕು. ನೂತನ ಡಿಜಿಟಲ್ ತಂತ್ರಜ್ಞಾನವನ್ನು ಜನರು ಬಳಕೆ ಮಾಡಲು ಅರಿವು ಮೂಡಿಸಬೇಕು ಎಂದು ತಿಳಿಸಿದರು. ಕರ್ನಾಟಕವು 2032 ರ ವೇಳೆಗೆ 1 ಟ್ರಿಲಿಯನ್ ಜಿಡಿಪಿ ಆರ್ಥಿಕತೆ ಮುಟ್ಟುವಂತೆ ನಾವು ಶ್ರಮಿಸಬೇಕು. ಸರ್ಕಾರ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಕಾರ್ಯಕ್ರಮಗಳನ್ನು ರೂಪಿಸಬೇಕು. ರೈತರಿಗೆ ಬೆಳೆ ಬೆಳೆಯಲು ಸಂಯೋಜಿತ ಸಾಲ, ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಕೆನರಾ ಬ್ಯಾಂಕ್‌ನ ಕಾರ್ಯನಿರ್ವಾಹಕ ನಿರ್ದೇಶಕರಾದ ಹರ್ದೀಪ್ ಸಿಂಗ್ ಅಹ್ಲುವಾಲಿಯಾ ಮಾತನಾಡಿ, ಆದ್ಯತಾ ವಲಯಗಳ ಸಾಲದ ಅಡಿಯಲ್ಲಿ ಕೃಷಿ ಮೂಲಸೌಕರ್ಯ ಮತ್ತು ಪೂರಕ ಚಟುವಟಿಕೆಗಳು ಸೇರಿದಂತೆ ಕೃಷಿ ಕ್ಷೇತ್ರದ ಪಾಲು ರೂ. 1.85 ಲಕ್ಷ ಕೋಟಿ (46%), ಎಂಎಸ್‌ಎಂಇ ವಲಯಕ್ಕೆ ರೂ.58 ಲಕ್ಷ ಕೋಟಿ (40%) ಮತ್ತು ಇತರ ಆದ್ಯತಾ ವಲಯಗಳಿಗೆ ರೂ.0.54 ಲಕ್ಷ ಕೋಟಿ (14%) ಸಾಲದ ಗುರಿಯನ್ನು ಯೋಜಿಸಲಾಗಿದೆ. ರಾಜ್ಯದಲ್ಲಿ ಸಿರಿಧಾನ್ಯ, ಕಾಫಿ, ಹೂವುಗಳು ಹೇರಳವಾಗಿ ಉತ್ಪಾದನೆಗೊಳ್ಳುತ್ತದೆ. ಇವುಗಳ ರಫ್ತು ಕೈಗೊಂಡರೆ ದೇಶಕ್ಕೆ ಲಾಭ ಬರುವುದು ಎಂದರು.

## ಎಳ್ಳುಜೇರಿಗೆ ಬೆಳೆಯೋ ಭೂತಾಯಿನ ಎದ್ದೊಂದು ಗಳಿಗೆ ನೆನೆದೇನು

**ಹುಳಿಯಾರು:** ಆದಿಕವಿ ಪಂಪ, ರತ್ನ, ಜನ್ನ ಕಟ್ಟಿದ ಕನ್ನಡವನ್ನು ಬಸವಾದಿ ಶರಣರ ವಚನಗಳು, ದಾಸಶ್ರೇಷ್ಠರ ಕೀರ್ತನೆಗಳು, ಕನ್ನಡಕ್ಕೆ ಜ್ಞಾನಪೀಠ ತಂದುಕೊಟ್ಟ ಸಾಹಿತಿಗಳು, ನೂರಾರು ವರ್ಷ ಕನ್ನಡಕಾಗಿ ದುಡಿಯುತ್ತಿರುವವರನ್ನು ಎಲ್ಲರೂ ಸ್ಮರಿಸಿ ಕನ್ನಡ ಭಾಷೆ ಉಳಿಸಿ ಬೆಳಸುವ ಕಾರ್ಯ ಆಗಬೇಕಿದೆ ಎಂದು ಚಿಕ್ಕನಾಯಕನಹಳ್ಳಿ ತಹಸೀಲ್ದಾರ್ ಸಿ.ಜಿ.ಗೀತಾ ಅವರು ಹೇಳಿದರು. ಹುಳಿಯಾರಿನಲ್ಲಿ ಆಯೋಜಿಸಿರುವ 11 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ರಾಷ್ಟ್ರಧ್ವಜಾರೋಹಣ ಮಾಡಿ ಅವರು ಮಾತನಾಡಿದರು.

ಎಳ್ಳುಜೇರಿಗೆ ಬೆಳೆಯೋ ಭೂತಾಯಿನ ಎದ್ದೊಂದು ಗಳಿಗೆ ನೆನೆದೇನ ಎಂದು ಪದ ಕಟ್ಟಿ ನಾಡಿದ ಪಂಚಭೂತಗಳಿಗೆ ಗೌರವ ಕೊಡುವ ಜೊತೆಗೆ ಕೃಷಿ ಚಟುವಟಿಕೆ, ಧಾರ್ಮಿಕ ಮತ್ತು ಶುಭ ಕಾರ್ಯಗಳಿಗೆ ಒತ್ತೇಜನ ನೀಡಿ ಕನ್ನಡ ಭಾಷೆಯನ್ನು ನಮ್ಮ ಜನಪದರು ಉಳಿಸಿ ಬೆಳೆಸಿದ್ದಾರೆ. ಈ ನಿಟ್ಟಿನಲ್ಲಿ ಹುಳಿಯಾರು ಸಾಹಿತ್ಯ ಸಮ್ಮೇಳನದಲ್ಲಿ ಹಳ್ಳಿ, ಕೇರಿ, ದೇಸಿ ಸಂಸ್ಕೃತಿಯ ಗೋಷ್ಠಿಗಳನ್ನು ಆಯೋಜಿಸಿರುವುದು ಅಭಿನಂದನಾರ್ಹ ಎಂದರು. ಪಪಂ ಅಧ್ಯಕ್ಷ ಕೆ.ಎಂ.ಎಲ್ ಕಿರಣ್ ಕನ್ನಡಧ್ವಜಾರೋಹಣ ನೆರವೇರಿಸಿದರು. ಹುಳಿಯಾರು ಕಸಾಪ ಅಧ್ಯಕ್ಷ ನಾರಾಯಣಪ್ಪ ಪರಿಷತ್ ಧ್ವಜ ಆರೋಹಣ ಮಾಡಿದರು. ಸಮ್ಮೇಳನಾಧ್ಯಕ್ಷೆ ಪ್ರೊ.ಕೃಷ್ಣಾಬಾಯಿ ಹಾಗಲವಾಡಿ, ತಾಲೂಕು ಕಸಾಪ ಅಧ್ಯಕ್ಷ ರವಿಕುಮಾರ್ ಸೇರಿದಂತೆ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

30ಊಗಐಖಜಂಖ2: ಕನ್ನಡ ಜಾತ್ರೆಗೆ ಧ್ವಜಾರೋಹಣ ನೆರವೇರಿಸಿ ಚಾಲನೆ ನೀಡಲಾಯಿತು.

## 2ರಂದು ವಿಶೇಷ 'ಸ್ವಾತಿ' ಪೂಜೆ

**ಮೈಸೂರು:** ನಗರದ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಫೆ.2ರಂದು ಶುಕ್ರವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಪ್ರಧಾನ ವ್ಯವಸ್ಥಾಪಕ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

## ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ

**ಮಂಡ್ಯ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ವಾರ್ತಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಕುಷ್ಠರೋಗ ಬಾಧಿತರ ಸಂಘದ ಸಹಯೋಗದೊಂದಿಗೆ ಜಿಲ್ಲೆಯಲ್ಲಿ ಇಂದಿನಿಂದ ಫೆಬ್ರವರಿ 13 ರವರೆಗೆ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನದ ಸಪ್ತಾಹಕ್ಕೆ ಇಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಚಾಲನೆ ನೀಡಿದರು. ನಂತರ ಮಾತನಾಡಿದ ಅವರು ಕುಷ್ಠರೋಗಕ್ಕೆ ತುತ್ತಾದವರನ್ನು ತಾರತಮ್ಯದಿಂದ ನೋಡಬಾರದು ಎನ್ನುವ ದೃಷ್ಟಿಯಿಂದ ಕುಷ್ಠರೋಗದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವಾಗುತ್ತಿದೆ. ಜೊತೆಗೆ ಕುಷ್ಠರೋಗ ಬಾಧಿತರನ್ನು ಪತ್ತೆಹಚ್ಚಿ ಚಿಕಿತ್ಸೆ ನೀಡಲಾಗುವುದು ಎಂದರು. ಕುಷ್ಠರೋಗದ ಲಕ್ಷಣಗಳು ಕಂಡುಬಂದರೆ ಸಾರ್ವಜನಿಕರು ಪರೀಕ್ಷೆಗೆ ಒಳಪಟ್ಟು ಚಿಕಿತ್ಸೆ ಪಡೆದುಕೊಳ್ಳಿ ಎಂದರು. ಕುಷ್ಠರೋಗ ಬಾಧಿತರಿಗೆ ಅಧಿಕಾರಿಗಳು ಆತ್ಮಸ್ಥೈರ್ಯ ತುಂಬಬೇಕು. ಈ ಮೂಲಕ ಅವರಿಗೆ ಜಾಗೃತಿ ಮೂಡಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಸಿಇಒ ಶೇಖ್ ತನ್ವಿರ್ ಆಸಿಫ್, ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್, ಅಪರ ಜಿಲ್ಲಾಧಿಕಾರಿ ಡಾ.ಹೆಚ್ ಎಲ್ ನಾಗರಾಜ್, ಆರೋಗ್ಯ ಅಧಿಕಾರಿ ಡಾ.ಕೆ ಮೋಹನ್, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ಕುಟುಂಬ ಕಲ್ಯಾಣ ಅಧಿಕಾರಿ ಡಾ ಬೆಟ್ಟಸ್ವಾಮಿ ಹಾಜರಿದ್ದರು.



## ರಾಮಚಂದ್ರಪ್ಪ ನಿಧನ

**ವಿಜಯಪುರ:** ಪಟ್ಟಣ ಸಮೀಪದ ಗಡ್ಡದನಾಯಕನಹಳ್ಳಿಯ ಮಂಡಿಬೆಲೆ ಗ್ರಾಮಪಂಚಾಯ್ತಿ ಸದಸ್ಯ ಕೇಶವರವರ ತಂದೆಯಾದ ಪಿ.ರಾಮಚಂದ್ರಪ್ಪ(71) (ಮಂಡಿಬೆಲೆ ಎಂ.ಪಿ.ಸಿ.ಎಸ್ ಮಾಜಿ ಅಧ್ಯಕ್ಷ) ರವರು ವಯೋಸಹಜ ಅನಾರೋಗ್ಯದಿಂದ ಸೋಮವಾರದಂದು ನಿಧನರಾಗಿರುತ್ತಾರೆ. ಮೃತರು ಇಬ್ಬರು ಹೆಣ್ಣು ಮಕ್ಕಳು ಹಾಗೂ ಇಬ್ಬರು ಗಂಡು ಮಕ್ಕಳನ್ನು ಅಗಲಿರುತ್ತಾರೆ. ಮೃತರ ಅಂತ್ಯ ಸಂಸ್ಕಾರವನ್ನು ಮಂಗಳವಾರದಂದು ಅವರ ನಿವಾಸದ ಪಕ್ಕ ಜಮೀನಿನಲ್ಲಿ ನೆರವೇರಿಸಲಾಯಿತು.



# ಶಿವ ಶರಣರ ವಚನಗಳು ಅಧ್ಯಾತ್ಮದ ಹಾದಿಯ ದಾರಿದೀಪ

**ವಿಜಯಪುರ;** ಶಿವ ಶರಣರ ವಚನಗಳು ಆಧ್ಯಾತ್ಮದ ಹಾದಿಯಲ್ಲಿ ಸಾಗುವವರಿಗೆ ದಾರಿದೀಪ ಕತ್ತಲೆಯ ಬದುಕಿನಲ್ಲಿ ಸಾಗುವವರ ಕಂದೀಲು ಎಂಬುದಾಗಿ ಬಾಗಲಕೋಟೆ ಜಿಲ್ಲೆಯ ಸಾರಂಗ ಮಠದ ಪೂಜ್ಯ ಶರಣೆ ಸುನಂದಮ್ಮರವರು ಅಭಿಪ್ರಾಯ ಪಟ್ಟರು.

ಅವರು ಪಟ್ಟಣದ ಅಕ್ಕನ ಬಳಗದ ಅರಿವಿನ ಮನೆಯಲ್ಲಿ ನಡೆದ 104 ನೇ ತಿಂಗಳ ಬೆಳಕು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ, ಮಾತನಾಡುತ್ತಾ, ಬಸವಣ್ಣ ನವರಿಗಿಂತ ಮುಂಚೆ ಹನ್ನೊಂದನೇ ಶತಮಾನದಲ್ಲಿಯೆ ಜೇಡರದಾಸಿಮಯ್ಯ, ಮಿರಿಮಿಂಡಿದೇವ, ಚಂದ್ರಗುಂಡ ಶಿವಾಚಾರ್ಯರು, ತಮಿಳು ನಾಡಿನ ಅರವತ್ತು ಮೂರು ಪುರಾತನರು ಇವರೆಲ್ಲ ಶರಣರ ಸಾಲಿಗೆ ಸೇರುತ್ತಾರೆ.

ಹನ್ನೊಂದನೇ ಶತಮಾನದ ಹೊತ್ತಿಗೇನೆ ಮೊದಲ ಅನುಭವ ಮಂಟಪ ಪ್ರಾರಂಭ ವಾಗಿತ್ತು. ಜೇಡರ ದಾಸಿಮಯ್ಯ ನವರನ್ನು ಆದ್ಯ ವಚನಕಾರ ಎಂಬುದಾಗಿ ಗುರುತಿಸುವರು. ಪುರುಷರಿಗೂ ಸ್ತ್ರೀಯರಿಗೂ ಸಮಾನ ಸ್ಥಾನ ಕಲ್ಪಿಸಿ ಕೊಟ್ಟವರು ಶಿವ ಶರಣರು, ಮೊಲೆ ಮೂಡಿ ಬಂದರೆ ಹೆಣ್ಣೆಂಬರು, ಗಡ್ಡ ಮೀಸೆ ಬಂದರೆ ಗಂಡೆಂಬರು ಒಳಗೆ ಇರುವ ಆತ್ಮಕ್ಕೆ ಬೇಧ ಭಾವ ಇಲ್ಲ. ಹೆಣ್ಣು ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧಿಸಬಹುದು . ಆಧ್ಯಾತ್ಮದ ಹಾದಿಯಲ್ಲಿ ತಾರತಮ್ಯವಿಲ್ಲ,ಯಾರು ಬೇಕಾದರೂ ಸಾಗಬಹುದು



ಎಂಬುದಾಗಿ ತೋರಿಸಿ ಕೊಟ್ಟವಳು ಕನ್ನಡದ ಮೊಟ್ಟ ಮೊದಲ ಕವಯಿತ್ರಿ ಅಕ್ಕ ಮಹಾದೇವಿ ಎಂಬುದಾಗಿ ಅಭಿಪ್ರಾಯ ವ್ಯಕ್ತಪಡಿಸುತ್ತ, ನಮ್ಮ ಗುರುವರ್ಯ ರಾದ ಶ್ರೀ ಜ ಚ ನಿ ಮಹಾ ಸ್ವಾಮೀಜಿಯವರು ವಿಜಯಪುರದ ನಿಮ್ಮ ಈ ಸಂಸ್ಥೆಗೆ ಅಕ್ಕನ ಬಳಗ ಎಂಬುದಾಗಿ ಹೆಸರಿಸಿದ್ದರು ಎಂದು ನೆನಪು ಮಾಡಿಕೊಂಡರು. ಆದ್ಯ ವಚನಕಾರ ಮಿರಿಮಿಂಡಿದೇವನ ವಚನದ ನಿರ್ವಚನವನ್ನು ವೀರೇಶ್ವರ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ರಾದ ವಿ ಅನಿಲ್ ಕುಮಾರ್ ನಡೆಸಿಕೊಡುತ್ತ,ಅವರು ವೃತ್ತಿಯಲ್ಲಿ ವ್ಯವಸಾಯಗಾರ ರಾದರೂ ಅವರ ಆಧ್ಯಾತ್ಮಿಕ ಸಾಧನೆ ಅಪಾರ ಎಂಬುದಾಗಿ ತಿಳಿಸಿದರು ,

ಸಂಚಾಲಕರಾದ ಮ.ಸುರೇಶ್ ಬಾಬು ಮಾತನಾಡುತ್ತ ಲಿಂ ಪುಟ್ಟಯ್ಯ ದಂಪತಿಗಳು ತಮ್ಮ ವಾಸದ ಮನೆಯನ್ನೆ ಓದಿ ಕೇಳುವ ಮನೆಯನ್ನಾಗಿಸಿ ಆಧ್ಯಾತ್ಮಿಕ ಕೇಂದ್ರವನ್ನಾಗಿಸಿದ ಮಹಾನುಭಾವರು . ಕೀರ್ತಿಶೇಷರಾದ ದೊಡ್ಡ ಅಪ್ಪಯ್ಯಣ್ಣ ದಂಪತಿ, ಸಿ ಎನ್ ಬಸವರಾಜು,ಸಿ ಎಂ ವೀರಣ್ಣ, ತಾಯಿ ಕಾಮಾಕ್ಷಮ್ಮ ಇನ್ನೂ ಹಲವು ಹಿರಿಯರ ಪರಿಶ್ರಮದಿಂದ ಶ್ರೀ ವೀರಭದ್ರ ಸ್ವಾಮಿ ಗೋಷ್ಠಿ ಅಕ್ಕನ ಬಳಗ ಅರವತ್ತಮೂರು ವರ್ಷಗಳಿಂದ ನಡೆದು ಬರುತ್ತಿದೆ ರಜತ, ಸುವರ್ಣ ಮಹೋತ್ಸವ ಆಚರಿಸಿಕೊಂಡು ವಜ್ರ ಮಹೋತ್ಸವದತ್ತ ಮುನ್ನುಗ್ಗುತ್ತಿದೆ ಎಂಬುದಾಗಿ ಅಭಿಪ್ರಾಯ ಪಟ್ಟರು .

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೋಷ್ಠಿ ಬಳಗದ ಉಪಾಧ್ಯಕ್ಷೆ ಅಂಭಾ ಭವಾನಿ ವಹಿಸಿದ್ದರು , ಪ್ರಾರ್ಥನೆ ಭಾರತಿ ವಿಶ್ವನಾಥ್,ನಿರೂಪಣೆ ವಿಮಲಾಂಬ ಅನಿಲ್ ಕುಮಾರ್, ಸ್ವಾಗತ ಮೀನಾ ಸುರೇಶ್ ಬಾಬು, ವಂದನಾರ್ಪಣೆ ಚಂದ್ರಕಲಾ ರುದ್ರಮೂರ್ತಿ, ನಡೆಸಿಕೊಟ್ಟರು.ಶ್ರೀ ಕೃಷ್ಣಪ್ಪ ದಾಸರು, ರೇಷ್ಮೆ ನಿವೃತ್ತ ನೌಕರರಾದ ಎಸ್ ಪಿ ಕೃಷ್ಣಾನಂದ, ಸುಮಂತ್, ಹಾಗೂ ಅಕ್ಕನ ಬಳಗದ ತಾಯಂದಿರು ಭಾಗವಹಿಸಿದ್ದರು

# ಪಠ್ಯಪುಸ್ತಕಗಳಲ್ಲಿ ಗೋಡ್ಸೆ ಬಂದರೂ ಅಚ್ಚರಿಯಿಲ್ಲ



ಹುಳಿಯಾರು: ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧೀಜಿ, ಸಮಾನತೆಯ ಸಮಾಜ ಕಟ್ಟಿದ ಬಸವಣ್ಣ ಇಂದು ಪಠ್ಯಪುಸ್ತಕಗಳಲ್ಲಿ ಕಾಣೆಯಾಗಿ ಆ ಜಾಗದಲ್ಲಿ ಗೋಡ್ಸೆ ಬಂದರೂ ಅಚ್ಚರ್ಯ ಪಡಬೇಕಿಲ್ಲ. ಏಕೆಂದರೆ ಬಹುತ್ವದ ಭಾರತದಲ್ಲಿ ದ್ವೇಷವನ್ನು ಬಿತ್ತಲಾಗುತ್ತಿದೆ. ಇಡೀ ಭಾರತವನ್ನು ಹೊಡೆಯಲಾಗುತ್ತಿದೆ ಎಂದು ಸಂಸ್ಕೃತಿ ಚಿಂತಕ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಆತಂಕ ವ್ಯಕ್ತಪಡಿಸಿದರು.

ಹುಳಿಯಾರಿನಲ್ಲಿ ಸೋಮವಾರ ಆಯೋಜಿಸಿದ್ದ 11 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ರಸ್ಕಿನ್ ಅವರ ಅನ್ ಟು ದಿಸ್ ಲಾಸ್ಟ್ ಪುಸ್ತಕ ಓದಿ ಗಾಂದೀಜಿ ಚಿಂತನೆ, ಆಲೋಚನೆ, ಬದುಕಿನ ಕ್ರಮ ಎಲ್ಲವೂ ಬದಲಾಯಿತು. ಒಂದು ಪುಸ್ತಕ ಗಾಂಧೀಯ ವ್ಯಕ್ತಿತ್ವ ರೂಪಿಸಿತೆಂದರೆ ನಮ್ಮ ಸಾಹಿತ್ಯ ಕ್ಷೇತ್ರದಲ್ಲಿರುವ ಕೃತಿಗಳು ಎಷ್ಟು ಜನರ ಮನಸ್ಸುಗಳನ್ನು ಬದಲಾಯಿಸಬಾರದಿತ್ತು. ಆದರೆ ಸಾಹಿತಿಗಳೂ ಸಹ ರಾಜಕಾರಣಿಗಳಷ್ಟೆ ಕೆಟ್ಟು ಹೋಗಿದ್ದೇವೆ. ಏಕೆಂದರೆ ಮಾತನಾಡಬೇಕಾದ ಕಾಲದಲ್ಲಿ ಮಾತನಾಡುತ್ತಿಲ್ಲ, ಶಾಂತಿಯ ಕಾಲದಲ್ಲಿ ಕ್ರಾಂತಿಯ ಮಾತನಾಡುತ್ತೇವೆ. ಈ ರೀತಿಯ ಹಿಬ್ಬಂದ್ದಿ ಬುದ್ದಿ ಸಾಹಿತಿಗಳಿಗೆ ಬರಬಾರದು. ಪಂಪ, ಬಸವಣ್ಣ ತಮ್ಮ ರಾಜನ ವಿರುದ್ಧವೇ ಧ್ವನಿ ಎತ್ತಿದ್ದಾರೆ. ಸಮಾಜದ ಹಿತವನ್ನೇ ಕಾಪಾಡುವುದು ಸಾಹಿತ್ಯ. ಆದರೆ ಇಂದು ಸಾಹಿತ್ಯವೂ ಭ್ರಷ್ಟವಾಗಿದೆ. ಶೇ.90 ರಷ್ಟು ಸಾಹಿತಿಗಳು ಶವದ ರೀತಿಯಲ್ಲಿ ಇದ್ದಾರೆ ಎಂದು ಟೀಕಾಪ್ರಹಾರ ಮಾಡಿದರು.

ನಮ್ಮಲ್ಲಿಯೇ ಹುಟ್ಟಿ, ನಮ್ಮ ಜೊತೆಯಲ್ಲೇ ಬೆಳೆದವರು ಯಾವ ಜಾತಿ, ಧರ್ಮದವರಾದರೇನು ಅವರು ಭಾರತೀಯರು. ಇವರ ವಿರುದ್ಧ ನಮ್ಮ ಮಕ್ಕಳನ್ನು ಎತ್ತಿ ಕಟ್ಟುವುದೆಂದರೇನು, ಮಚ್ಚು, ಲಾಂಗು ಹಿಡಿದು ಹೊಡೆದಾಡುವುದೆಂದರೇನು ಎಂಬುದನ್ನು ತಂದೆತಾಯಿಯರು ಯೋಜನೆ ಮಾಡಬೇಕು. ರಾಮಾಯಣವನ್ನು ಸೀತೆಯ, ಗಾಂಧೀಯ, ವಾಲ್ಮೀಕಿಯ ಸ್ಥಾನದಲ್ಲಿನಿಂತು ನೋಡಬೇಕು. ರಾಮನನ್ನು ದೇವರಾಗಿ ಅಲ್ಲ, ಮನುಷ್ಯನನ್ನಾಗಿ ಅದರಲ್ಲೂ ಮರ್ಯಾದಾ ಪುರುಷೋತ್ತಮನನ್ನಾಗಿ ನೋಡಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಕರ ಜವಾಬ್ದಾರಿ ಹೆಚ್ಚಾಗಿದ್ದು ಆತ್ಮಸಾಕ್ಷಿ ಸಾಯದಿರುವಂತೆ ಮಕ್ಕಳ ವ್ಯಕ್ತಿತ್ವವನ್ನು ಎಚ್ಚರಿಸಿ ರೂಪಿಸಬೇಕಿದೆ. ಪ್ರಜಾಪ್ರಭುತ್ವನ್ನು ಉಳಿಸಬೇಕಿದೆ. ಸತ್ಪ್ರಜೆಯನ್ನಾಗಿ ಮಾಡಿ ದೇಶವನ್ನು ಕಟ್ಟಬೇಕಿದೆ. ಹಾದಿಬೀದಿಯೊಳಗೆ ಕಾಲಾಳುಗಳಾಗಿ ಮಕ್ಕಳು ನಡೆದುಕೊಳ್ಳದ ರೀತಿಯಲ್ಲಿ ಎಚ್ಚರವಹಿಸಬೇಕಿದೆ ಎಂದರು. ಸಮ್ಮೇಳನಾಧ್ಯಕ್ಷೆ ಪ್ರೊ.ಕೃಷ್ಣಾಬಾಯಿ ಹಾಗಲವಾಡಿ, ಶಾಸಕ ಸಿ.ಬಿ.ಸುರೇಶ್‌ಬಾಬು, ಸಾಹಿತಿ ಡಾ.ತಿಮ್ಮನಹಳ್ಳಿ ವೇಣುಗೋಪಾಲ್, ಕಂಟಲಗೆರೆ ಸಣ್ಣಹೊನ್ನಯ್ಯ, ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ, ತಾಲೂಕು ಕಸಾಪ ಅಧ್ಯಕ್ಷ ರವಿಕುಮಾರ್, ಹೋಬಳಿ ಕಸಾಪ ಅಧ್ಯಕ್ಷ ನಾರಾಯಣಪ್ಪ, ತಹಸೀಲ್ದಾರ್ ಗೀತಾ, ಪಪಂ ಅಧ್ಯಕ್ಷ ಕಿರಣ್, ಉಪಾಧ್ಯಕ್ಷೆ ಶೃತಿ, ನಿವೃತ್ತ ಜಿಲ್ಲಾಧಿಕಾರಿ ಶ್ರೀರಂಗಯ್ಯ, ಡಿಸಿಸಿ ಬ್ಯಾಂಕ್ ನಿರ್ದೇಶಕ ರಾಜಕುಮಾರ್, ಎಇಇ ಗವಿರಂಗಯ್ಯ, ಬಿಇಒ ಕಾಂತರಾಜು, ಜಿಪಂ ಮಾಜಿ ಸದಸ್ಯೆ ಮಂಜುಳಾ, ತಾಪಂ ಮಾಜಿ ಸದಸ್ಯರುಗಳಾದ ಏಜೆಂಟ್‌ಕುಮಾರ್, ಶಿವನಂಜಪ್ಪ, ಶಿಕ್ಷಕರ ಸಂಘದ ಸುರೇಶ್, ಕರವೇಯ ಚನ್ನಬಸವಯ್ಯ, ಪ್ರಕಾಶ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಕನ್ನಡ ಭವನಕ್ಕೆ 5 ಲಕ್ಷ ರೂ.

**11 ನೇ ಕನ್ನಡ ಸಾಹಿತ್ಯ ಸಮ್ಮೇಳನ ನಡೆದ ಸವಿನೆನಪಿಗೆ ಹುಳಿಯಾರಿನಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಕಸಾಪ ಮುಂದಾಗಿರುವುದು ಸ್ವಾಗತಾರ್ಹ ಬೆಳವಣಿಗೆಯಾಗಿದ್ದು ಈ ಕಟ್ಟಡಕ್ಕೆ ಶಾಸಕ ನಿಧಿಯಿಂದ 5 ಲಕ್ಷ ರೂ. ಧನ ಸಹಾಯ ಮಾಡುವ ಜೊತೆಗೆ ವಿವಿಧ ಇಲಾಖೆಗಳಿಂದ ಹಣ ಕೊಡಿಸುತ್ತೇನೆ. ಚಿಕ್ಕನಾಯಕನಹಳ್ಳಿಯ ತೀನಂಶ್ರೀ ಭವನಕ್ಕೆ 1 ಕೋಟಿ ರೂ. ಹಣ ಮಂಜೂರು ಮಾಡಿಸಿದ್ದು ಶೀಘ್ರದಲ್ಲೇ ಕಟ್ಟಡದ ಸಂಪೂರ್ಣ ಕಾರ್ಯ ಮುಗಿಸುತ್ತೇನೆ. ಈ ಮೂಲಕ ತಾಲೂಕಿನಲ್ಲಿ ಕನ್ನಡ ಕಲೆ, ಸಂಸ್ಕೃತಿ ಉಳಿಸಿ ಬೆಳೆಸುವ ಕಾರ್ಯಕ್ಕೆ ಮುಂದಾಗಿದ್ದೇನೆ. ರಾಜ್ಯದಲ್ಲಿ 9 ಸಾವಿರಕ್ಕೂ ಹೆಚ್ಚು ಕನ್ನಡ ಶಾಲೆಗಳು ಮುಚ್ಚಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ. ಆದರೆ ಕನ್ನಡ ಶಾಲೆಗಳನ್ನು ಮುಚ್ಚುವ ಬದಲು ಇಂದಿನ ಕಾಲಕ್ಕೆ ಅಗತ್ಯವಾಗಿರುವ ಇಂಗ್ಲೀಷಿಗೂ ಆದ್ಯತೆ ನೀಡಿ ಶಾಲೆಗಳನ್ನು ಉಳಿಸಬೇಕಿದೆ.**

I ಸಿ.ಬಿ.ಸುರೇಶ್‌ಬಾಬು ಶಾಸಕರು, ಚಿಕ್ಕನಾಯಕನಹಳ್ಳಿ

## ಸಮ್ಮೇಳನಾಧ್ಯಕ್ಷರ ಮೆರವಣಿಗೆ

**ಹುಳಿಯಾರು:** ಕಣ್ಣು ಹಾಯಿಸಿದಷ್ಟು ದೂರ ಕನ್ನಡ ಮನಸ್ಸುಗಳ ಬೃಹತ್ ಮೆರವಣಿಗೆ. ಜಾನಪದ ಕಲಾ ತಂಡಗಳ ಸೊಬಗು, ಸೊಗಡು. ಬೀದಿಬೀಯಲ್ಲೂ ಸಾಂಸ್ಕೃತಿಕ ಕಲರವ, ಜೈ ಕನ್ನಡ, ಕನ್ನಡಾಂಬೆಗೆ ಜೈ, ಕನ್ನಡವಬೇ ಸತ್ಯ ಎಂಬ ಉದ್ಘೋಷದ ಕನ್ನಡದ ಕಹಳೆ. ಇದು ಹುಳಿಯಾರಿನಲ್ಲಿ ಮಂಗಳವಾರ ಆರಂಭಗೊಂಡ 11 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ನಡೆದ ಸಮ್ಮೇಳನಾಧ್ಯಕ್ಷರ ಭವ್ಯ ಮೆರವಣಿಗೆಯ ಪ್ರಮುಖ ಆಕರ್ಷಣೆ. ಸಮ್ಮೇಳನಾಧ್ಯಕ್ಷೆ ಪ್ರೊ.ಕೃಷ್ಣಬಾಯಿ ಹಾಗಲವಾಡಿ ಅವರನ್ನು ಮಾಜಿ ಶಾಸಕ ಕೆ.ಎಸ್.ಕಿರಣ್‌ಕುಮಾರ್ ಅವರು ಮೈಸೂರು ಪೇಟ ತೊಡಿಸಿ ಪುಷ್ಪಾಲಂಕೃತ ಸಾರೋಟಿಗೆ ಕೂರಿಸಿದರಲ್ಲದೆ ಕನ್ನಡ ಬಾವುಟ ಹಾರಿಸಿ ಮೆರವಣಿಗೆಗೆ ಚಾಲನೆ ನೀಡಿದರು. ಪ್ರಮುಖ ಬೀದಿಗಳಲ್ಲಿ ನಡೆದ ಮೆರವಣಿಗೆಯಲ್ಲಿ ಕನ್ನಡದ ಸಹಸ್ರಾರು ಅಭಿಮಾನಿಗಳು ಉರಿ ಬಿಸಿಲು ಲೆಕ್ಕಿಸದೆ ಪಾಲ್ಗೊಂಡು ಕನ್ನಡಾಂಭಿಮಾನ ಮೆರೆದರು. ಮಹಿಳೆಯರು ಮತ್ತು ವಿದ್ಯಾರ್ಥಿಗಳ ಪೂರ್ಣಕುಂಭದೊಂದಿಗೆ ವಾಸವಿ ಕಲ್ಯಾಣ ಮಂಟಪದಿಂದ ಆರಂಭವಾದ ಮೆರವಣಿಗೆ ರಾಮಗೋಪಾಲ್ ಸರ್ಕಲ್, ಕನಕವೃತ್ತ, ಬಸ್ ನಿಲ್ದಾಣ, ರಾಜಕುಮಾರ್ ರಸ್ತೆಯ ಮೂಲಕ ಎಂಪಿಎಸ್ ಮೈದಾನದ ವೈದಿಕೆ ಬಳಿ ಮುಕ್ತಾಯವಾಯಿತು. ಶಾಲಾ ಮಕ್ಕಳು, ಸಾಹಿತಿಗಳು, ಸಾರ್ವಜನಿಕರು ಮೆರವಣಿಗೆಯಲ್ಲಿ ಪಾಲ್ಗೊಂಡು ಕನ್ನಡದ ಜಾತ್ರೆಗೆ ಸಾಕ್ಷಿಯಾದರು.

ಮೆರವಣಿಗೆಯುದ್ದಕ್ಕೂ ಶಾಲಾ ಮಕ್ಕಳು ಕೆಂಪು, ಹಳದಿ ಬಣ್ಣದ ಕನ್ನಡ ಧ್ವಜ ಹಿಡಿದು ಸಿರಿಗನ್ನಡಂ ಗೆಲ್ಗೆ, ಸಿರಿಗನ್ನಡಂ ಬಾಳ್ಗೆ, ಕನ್ನಡ ರಾಜರಾಜೇಶ್ವರಿಗೆ ಜೈ ಹೀಗೆ ಅನೇಕ ಕನ್ನಡ ಪರ ಘೋಷಣೆಗಳನ್ನು ಕೂಗುವ ಮೂಲಕ ರಸ್ತೆ ಬದಿ ನೆರೆದ ಸಹಸ್ರಾರು ಕನ್ನಡಿಗರ ಅಭಿಮಾನವನ್ನು ಬಡಿದೆಬ್ಬಿಸಿದರಲ್ಲದೆ ಜಾನಪದ ಮೇಳಗಳ ವಾದ್ಯಕ್ಕೆ ಹೆಜ್ಜೆ ಹಾಕಿ ನಾಡು-ನುಡಿ ಬಗೆಗಿನ ಪ್ರೀತಿ ಪ್ರದರ್ಶಿಸಿದರು. ವಾಸವಿ ಶಾಲೆಯ ಮಕ್ಕಳ ಪೂರ್ಣ ಕುಂಭದೊಂದಿಗೆ ಆಗಮಿಸಿದರೆ ಜ್ಞಾನ ಜ್ಯೋತಿ ಶಾಲೆಯ ಮಕ್ಕಳು ಕೆಂಪು, ಹಳದಿ ಬಣ್ಣದ ಬಟ್ಟೆ ತೊಟ್ಟು ಆಗಮಿಸಿದ್ದರು. ವಿವಿಧ ಶಾಲೆಯ ಮಕ್ಕಳು ಕನ್ನಡ ನಾಡಿಗಾಗಿ ಹೋರಾಡಿದ ಮಹಾನೀಯರ ವೇಷಭೂಷಣದೊಂದಿಗೆ ಆಗಮಿಸಿ ಉತ್ಸವದ ಮೆರಗು ಹೆಚ್ಚಿಸಿದ್ದರು. ಶಿಕ್ಷಕರು, ಸಂಘಟಕರು, ಕನ್ನಡ ಪರ ಸಂಘಟನೆಯವರು ನಾಡ ಬಣ್ಣದ ಶಾಲು ಧರಿಸಿ ಕನ್ನಡ ಕನ್ನಡ ಸಾಗಿ ನಮ್ಮ ಸಂಗಡ, ಕನ್ನಡವೆನ್ನಿ ಜತೆಗೆ ಬನ್ನಿ ಎಂಬ ಘೋಷಣೆಗಳೊಂದಿಗೆ ಹೆಜ್ಜೆ ಹಾಕಿ ಮೆರವಣಿಗೆಗೆ ಕಳೆ ತುಂಬಿದರು. ವೀರಗಾಸೆ, ಡೊಳ್ಳುಕುಣಿತ, ಗೊರವನಕುಣಿತ, ಸೋಮನಕುಣಿತ, ಹುಲಿವೇಷ, ನಾಸಿಕ್ ಡೋಲ್, ತಮಟೆ, ಕಹಳೆ, ಪೂಜಾಕುಣಿತ, ಕೋಲಾಟ ಜನರನ್ನು ಆಕರ್ಷಿಸಿತು. ತಾಳಕ್ಕೆ ತಕ್ಕಂತೆ ಲಂಬಾಣಿ ಮಹಿಳೆಯರು ತಮ್ಮ ವಿಶಿಷ್ಟ ಉಡುಗೆಯಲ್ಲಿ ನೋಡುಗರ ಕಣ್ಮನ ಸೆಳೆದರು.



## ದೇಶ ವೃದ್ಧಾಶ್ರಮ ಮುಕ್ತವಾಗಿ ವಸುದೇವ ಕುಟುಂಬವಾಗಲಿ

**ತಿಪಟೂರು:** ಶ್ರೀ ರಾಮನು ರಾಮ ರಾಜ್ಯದ ಕನಸು ಕಂಡಿದ್ದನು, ಈಗ ರಾಮ ರಾಷ್ಟವಾಗುತ್ತಿರುವುದು ಕಾಣುತ್ತಿದ್ದೇವೆ, ಅಸಂಖ್ಯಾತ ಹಿಂದುಗಳ ಕನಸು ನನಸಾಗಿದೆ, ಪ್ರಾಥಮಿಕವಾಗಿ ಮಕ್ಕಳಿಗೆ ಕುಟುಂಬದಲ್ಲಿ ಸಂಸ್ಕಾರ, ಸಂಸ್ಕೃತಿ, ಆಧ್ಯಾತ್ಮಿಕ ವಿಚಾರ, ಪೋಷಕರು ಕಲಿಸಬೇಕು ದೇಶ ವೃದ್ಧಾಶ್ರಮ ಮುಕ್ತವಾಗಿ ವಸುದೇವ ಕುಟುಂಬವಾಗಲಿ ಎಂದು ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದ ಡಾ. ಶ್ರೀ ಕರಿವೃಷಭದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮೀಜಿ ಆಶಿಸಿದರು ನೊಣವಿನಕೆರೆಯಲ್ಲಿ ನಡೆದ 72ನೇ ಜನ್ಮ ವರ್ಧಂತಿ ಕಾರ್ಯಕ್ರಮದಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಿ ಭಕ್ತರು ಗುರುಗಳು ಶತಾಯುಷಿಗಳಾಗಲೆಂದು ಬಯಸಿದರೆ ಗುರುಗಳು ಸಹ ಭಕ್ತರು ನೂರಾರು ಕಾಲ ಸುಖವಾಗಿ ಬಾಳಲಿ ಎಂದು ಆಶಿಸುತ್ತೇವೆ. ಈ ಕಾರ್ಯಕ್ರಮವನ್ನು ನೀವೇ ಆಯೋಜಿಸಿದ್ದೀರಿ ನನಗೆ



ಭಕ್ತರ ಕಷ್ಟಗಳನ್ನು ಭಗವಂತನಲ್ಲಿ ಮೊರೆಯಿಟ್ಟು ಕಷ್ಟ ಕಾರ್ಪಣ್ಯಗಳು ದೂರವಾಗಲಿ ಎಂದು ಜಪಿಸುತ್ತೇವೆ, ಭಕ್ತರ ಸುಖವೇ ಗುರುವಿನ ಸಂತೋಷ, ದೇಶ ಕಾಯುವ ಸೈನಿಕರು, ಅನ್ನ ನೀಡುವ ರೈತರು, ಸುಖವಾಗಿರಲಿ ರಾಜಕಾರಣಿಗಳಲ್ಲಿ ದೇಶನಿಷ ಪ್ರಜಾ ಪರಿಪಾಲನೆ ಇರಲಿ, ಯುವಕರು ಸದೃಢ ದೇಶ ನಿರ್ಮಾಣವಾಗಲು ಪಣತೊಡಬೇಕು, ದೇಶ ಅಭಿಮಾನ ಭಾಷಾಭಿಮಾನ ಪ್ರತಿಯೊಬ್ಬರಲ್ಲಿಯೂ ಮೂಡಬೇಕು ಎಂದು ಆಶಿಸಿದರು.

## ಪರಂಪರೆಯ ಜ್ಞಾನದ ಕ್ರಿಯಾರೂಪವೇ ಜಾನಪದ

**ಕಲಬುರಗಿ:** ಪರಂಪರಾಗತ ಜ್ಞಾನವು ನೆನಪಿನ ರೂಪದಲ್ಲಿ ಮತ್ತು ಕ್ರಿಯಾರೂಪದಲ್ಲಿ ಸಾಗಿಬರುವ ಪ್ರಕ್ರಿಯೆಯೇ ಜಾನಪದ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಹಾಗೂ ಲೇಖಕ ಮಹಿಪಾಲರೆಡ್ಡಿ ಮುನ್ನೂರ್ ಹೇಳಿದರು.



ನಗರದ ಸರಕಾರಿ ಡಿಗ್ರಿ ಕಾಲೇಜು (ಸ್ವಾಯತ್ತ) ಸಭಾಂಗಣದಲ್ಲಿ ಕರ್ನಾಟಕ ಜಾನಪದ ಪರಿಷತ್ತಿನ ವತಿಯಿಂದ ಜಾನಪದ ತಜ್ಞರ ಸರಣಿ ಉಪನ್ಯಾಸ ಕಾರ್ಯಕ್ರಮವನ್ನು ಸೋಮವಾರ ಉದ್ಘಾಟಿಸಿ ಮಾತನಾಡಿದ ಅವರು, ಮೌಖಿಕ ಸಂಪ್ರದಾಯದಲ್ಲಿ ಸಾಗಿಬಂದ ಯಾವುದೇ ಪರಂಪರಾನುಗತ ವಿಷಯವಾಗಿರುವ ಪದ್ಯ ಮತ್ತು ಗದ್ಯ ವಿ?ಯವಾಗಿರಲಿ ಅದುವೇ ಜಾನಪದ. ಹಿಂದಿನ ಜ್ಞಾನ, ಅನುಭವ, ಜಾಣ್ಮೆ, ನೈಪುಣ್ಯ, ಹವ್ಯಾಸಗಳು ಮತ್ತು ಅನುಸರಣೆಗಳು ಹಳೆಯ ತಲೆಮಾರಿನಿಂದ ಹೊಸ ತಲೆಮಾರಿಗೆ ಮಾತಿನ ಮೂಲಕ ಹಸ್ತಾಂತರಗೊಳಿಸುತ್ತವೆಯೋ, ಅವು ಪುಸ್ತಕ ಅಚ್ಚು ವಿ?ಯಗಳು ಆಗಿರುವುದಿಲ್ಲವೋ ಅಲ್ಲಿ ನಾವು ಜಾನಪದವನ್ನು ಕಾಣುತ್ತೇವೆ ಎಂದು ಹೇಳಿದರು.

ಮೂಲ ಜಾನಪದವು ಇತ್ತೀಚೆಗೆ ಮೂಲೆಗುಂಪಾಗುತ್ತಿದೆ. ಸಿನಿಮಾಗಳಲ್ಲಿ ಬಳಸಲಾಗುತ್ತಿರು ಜಾನಪದ ಗೀತೆಗಳು ರೀಮಿಕ್ಸ್ ನೆಪದಲ್ಲಿ ಅದರ ಪಾವಿತ್ರ್ಯತೆಯನ್ನು ಹಾಳುಮಾಡಲಾಗುತ್ತಿದೆ ಎಂದು ವಿಷಾದಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಹಿರಿಯ ಮಕ್ಕಳ ಕವಿ ಎ.ಕೆ.ರಾಮೇಶ್ವರ ವಹಿಸಿದ್ದರು. ಫರಹತಾಬಾದ್ ಸರಕಾರಿ ಡಿಗ್ರಿ ಕಾಲೇಜಿನ ಪ್ರಾಧ್ಯಾಪಕಿ ಡಾ.ಇಂದುಮತಿ ಪಾಟೀಲ ಅವರು 'ಜಾನಪದ ತಜ್ಞ ಡಾ.ಬಸವರಾಜ ಮಲಶೆಟ್ಟಿ ಜೀವನ'ದ ಕುರಿತು ಉಪನ್ಯಾಸ ನೀಡಿದರು. ವಿಶ್ರಾಂತ ಪ್ರಾಂಶುಪಾಲರಾದ ಡಾ.ವಿಶಾಲಾಕ್ಷಿ ಕರೆಡ್ಡಿ ಮುಖ್ಯ ಅತಿಥಿಗಳಾಗಿದ್ದರು. ಕಾಲೇಜಿನ ಪ್ರಾಚಾರ್ಯರಾದ ಪ್ರೊ.ಸವಿತಾ ತಿವಾರಿ ಅಧ್ಯಕ್ಷತೆ ವಹಿಸಿದ್ದರು. ಜೇವರ್ಗಿಯ ಸರಕಾರಿ ಪಿಯು ಕಾಲೇಜಿನ ನಿವೃತ್ತ ಪ್ರಾಚಾರ್ಯ ಪ್ರೊ.ಅಲ್ಲಾವುದ್ದಿನ್ ಸಾಗರ ಅವರನ್ನು ವಿಶೇಷವಾಗಿ ಸತ್ಕರಿಸಲಾಯಿತು. ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ಸಿ.ಎಸ್.ಮಾಲಿಪಾಟೀಲ ಪ್ರಾಸ್ತಾವಿಕ ಮಾತನಾಡಿದರು. ಪ್ರಾಧ್ಯಾಪಕ ಸುರೇಶ ಮಾಳೇಗಾಂವ ಸ್ವಾಗತಿಸಿದರು.

## ಪ್ರಸಾದ ಗುಣ ಎತ್ತರಕ್ಕೇರಿಸಿದವರು ಶಿವಕುಮಾರ ಶ್ರೀ

**ವಿಜಯಪುರ:** ಛಲದಲ್ಲಿ ದುರ್ಯೋದನ, ಸತ್ಯ, ಪ್ರೀತಿ ಮತ್ತು ದಾನದಂತಹ ಗುಣಗಳಲ್ಲಿ ಕರ್ಣ, ಸಾಹಸಮಹಿಮೆಯಲ್ಲಿ ಅರ್ಜುನ, ಧರ್ಮಪಾಲನೆಯಲ್ಲಿ ಭೀಷ್ಮಾಚಾರ್ಯರಂತಿದ್ದು ಕಾಯಕ, ದಾಸೋಹ, ಪ್ರಸಾದದ ಮೌಲ್ಯ, ಗುಣಗಳನ್ನು ಅತಿ ಎತ್ತರಕ್ಕೇರಿಸಿದವರು ಶ್ರೀ ಸಿದ್ಧಗಂಗಾಕ್ಷೇತ್ರದ ಶ್ರೀ ಶಿವಕುಮಾರಮಹಾಸ್ವಾಮೀಜಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಚ್.ಎಸ್.ರುದ್ರೇಶಮೂರ್ತಿ ತಿಳಿಸಿದರು. ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ಸೌಮ್ಯಕೇಶವಸ್ವಾಮಿ ದೇವಾಲಯದ ಆವರಣದಲ್ಲಿ ಶ್ರೀ ಕೃಷ್ಣ ಯತೀಂದ್ರ ಸತ್ಸಂಗ ಸೇವಾ ಟ್ರಸ್ಟ್ ವತಿಯಿಂದ ದ್ವಾದಶಿ ವಿಚಾರಗೋಷ್ಟಿ ಅಂಗವಾಗಿ ಹಮ್ಮಿಕೊಂಡಿದ್ದ ದಾಸೋಹ ದಿನಾಚರಣೆ, ಡಾ.ಶ್ರೀ ಶಿವಕುಮಾರಸ್ವಾಮೀಜಿ ಸಂಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಉಪನ್ಯಾಸ ನೀಡಿದರು.ಶ್ರೀಗಳದ್ದು ಅಧಿಕಾರದಾಹ, ಒಡ್ಡೋಲಗ, ಅಟ್ಟಹಾಸ, ಆಡಂಬರದ ಲಾಂಚನಗಳಿಗೆ ಮನಕೊಡದೇ ನಿರಪೇಕ್ಷ ಮತ್ತು ನಿಸ್ವಾರ್ಥವಾಗಿ ಸಮಾಜಸೇವೆಯನ್ನೇ ಗುರಿಯಾಗಿರಿಸಿಕೊಳ್ಳುವ ಗುಣವಾಗಿದ್ದಿತು. ಸ್ವಾಮೀಜಿ ಅವರು ನಿಷ್ಠೆ, ಸೇವಾಕಾಂಕ್ಷೆ, ದೃಢನಿಶ್ಚಯ, ಒದಗಬಹುದಾದ ಅಡಚಣೆಗಳನ್ನು ಸಮರ್ಥವಾಗಿ ಎದುರಿಸಬಲ್ಲ ಧೈರ್ಯ, ಜೀವನ ಪಾವಿತ್ರತೆ, ವೈಶಾಲ್ಯ ಮನೋದೋರಣೆ, ಶುದ್ಧ ಅಂತಃಕರಣ, ಸತ್ಯಪ್ರೇಮ, ಕಾರುಣ್ಯ, ಎಲ್ಲಾಸದ್ಗುಣಗಳನ್ನೂ ಮೈಗೂಡಿಸಿಕೊಂಡ ಸಾಕಾರಮೂರ್ತಿಯಾಗಿದ್ದರಿಂದ ಶ್ರೀ ಶಿವಕುಮಾರಸ್ವಾಮೀಜಿ ನಡೆದಾಡುವ ದೇವರೆನಿಸಿಕೊಂಡರು



ಎಂದರು. ಕವಿಯತ್ರಿ ಬಿ.ಸ್ವರ್ಣಗೌರಿಮಹದೇವ್ ಅವರು ಮಾತನಾಡಿ, ಈ ಜಗತ್ತಿಗೆ ಶಿವಶರಣರು ನೀಡಿದ ಕೊಡುಗೆ ಅಪಾರವಾದುದು, ಅಭಿನವಬಸವಣ್ಣರಾಗಿ ಶಿವಶರಣರ ಮೌಲ್ಯಗಳನ್ನು ಸಮಾಜಕ್ಕೆ ಬಿತ್ತಿ ಬೆಳೆದವರಲ್ಲಿ ಶಿವಕುಮಾರಸ್ವಾಮೀಜಿ ಅಗ್ರಗಣ್ಯರು. ಅವರ ಆದರ್ಶಗಳು ಸಮಾಜಕ್ಕೆ ಅನುಕರಣೀಯವಾದುವು ಎಂದರು.

ಶ್ರೀ ಕೃಷ್ಣಯತೀಂದ್ರ ಸತ್ಸಂಗಸೇವಾ ಟ್ರಸ್ಟ್‌ನ ಅಧ್ಯಕ್ಷ ಜೆ.ಎಸ್.ರಾಮಚಂದ್ರಪ್ಪ ಮಾತನಾಡಿ, ಪ್ರತಿಯೊಬ್ಬರೂ ತನ್ನನ್ನು ತಾನು ಅರಿತು ಬಾಳಬೇಕು. ತನ್ನಲ್ಲಿ ದೇವರನ್ನು ಕಾಣುವಂತಾಗಬೇಕು. ಎಲ್ಲಾ ಆದರ್ಶ ವ್ಯಕ್ತಿಗಳೂ ತಾವು ಮಾಡುವ ಕಾರ್ಯಗಳಲ್ಲಿ ಔನತ್ಯವನ್ನು ಕಾಣಲು ನಿಸ್ವಾರ್ಥತೆಯಂತಹ ಅನೇಕ ಮೌಲ್ಯಗಳನ್ನು ರೂಢಿಸಿಕೊಡಿದ್ದವರು. ಎಲ್ಲಾ ಆದರ್ಶವ್ಯಕ್ತಿಗಳು, ಸಂತರ ಗುಣಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಕೆಇಬಿ ನಿವೃತ್ತ ಅಧಿಕಾರಿ ಬಿ.ಪುಟ್ಟರಾಜಣ್ಣ, ಎಸ್.ರಮೇಶ್‌ಸ್ವಾಮಿ, ಶ್ರೀ ಕೃಷ್ಣಯತೀಂದ್ರಸತ್ಸಂಗ ಸೇವಾಟ್ರಸ್ಟ್‌ನ ಸಂಚಾಲಕ ವಿ.ಎನ್.ವೆಂಕಟೇಶ್ ಮಾತನಾಡಿದರು. ಖ್ಯಾತ ರಂಗನಿರ್ದೇಶಕ ಎಂ.ವಿ.ನಾಯ್ಡು, ಗಾಯಕ ಟಿ.ಮಹಾತ್ಮಾಂಜನೇಯ, ನರಸಿಂಹಪ್ಪ, ಗಾಯಕಿ ರಾಧಾಮಣಿಶಿವಣ್ಣ, ಅನಿಲ್ ಅವರಿಂದ ಕೀರ್ತನೆ, ವಚನಗಳ ಗಾಯನ ನಡೆಯಿತು. ಮಹಿಳೆಯರಿಗೆ ವಸ್ತ್ರ, ಅರಿಶಿಣಕುಂಕುಮ, ವೃದ್ಧರಿಗೆ ರಗ್ಗುಗಳ ವಿತರಣೆ ನಡೆಯಿತು. ಸೇವಾಕರ್ತರನ್ನು ಅಭಿನಂದಿಸಲಾಯಿತು. ಗಿರಿಜಾ ವಿ.ನಾಗರಾಜು, ವರ್ಷಿತಾ ವರದರಾಜು, ಸ್ವರ್ಣಗೌರಿಮಹದೇವ್, ಎಚ್.ಎಸ್.ರುದ್ರೇಶಮೂರ್ತಿ, ಬಿ.ಪುಟ್ಟರಾಜಣ್ಣ ಅವರನ್ನು ಸನ್ಮಾನಿಸಲಾಯಿತು. ಸೇವಾಟ್ರಸ್ಟ್‌ನ ಖಜಾಂಚಿ ವಿ.ನಾಗಯ್ಯ, ವಿ.ಕೃಷ್ಣಪ್ಪ, ಆಂಜಿನಪ್ಪ, ಆರ್.ಮುನಿರಾಜು, ಶಿಕ್ಷಕಿ ಎಂ.ಗಿರಿಜಾಂಬ, ಚಂದ್ರಕಾಂತಕುಮಾರ್, ವಿ.ಮುನಿರಾಜು, ಅಂಗನವಾಡಿ ಸಊಪರ್‌ವೈಸರ್ ಭಾಗ್ಯ ಪಾಲ್ಗೊಂಡಿದ್ದರು.

## ಪ್ರತಿಯೊಬ್ಬ ಪ್ರಜೆಗೂ ಇದೆ ನ್ಯಾಯ

**ವಿಜಯಪುರ:** ಭಾರತ ಸಂವಿಧಾನವು ದೇಶದ ಪ್ರತಿಯೊಬ್ಬ ಪ್ರಜೆಗೂ ಸಮಾನತೆ, ನ್ಯಾಯ ಮತ್ತು ಸ್ವಾತಂತ್ರ್ಯ ನೀಡಿದೆ. ಭಾರತದ ಸಂವಿಧಾನವನ್ನು ವಿಶ್ವದ ಶ್ರೇಷ್ಠ ಸಂವಿಧಾನಗಳಲ್ಲಿ ಒಂದು ಎಂದು ಪರಿಗಣಿಸಲಾಗಿದ್ದು, ಸಂವಿಧಾನ ದೇಶದ ಪ್ರಜೆಗಳ ಸಮಾನತೆಯ ಅಡಿಪಾಯವಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಪ್ರೇಮ ತಿಳಿಸಿದರು. ಮಂಗಳವಾರದಂದು ಇವರು ಪಟ್ಟಣದ ಪುರಸಭಾ ಮುಂಭಾಗದಲ್ಲಿ ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪುರಸಭಾವತಿಯಿಂದ ಆಯೋಜಿಸಿದ್ದ ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಈಗಾಗಲೇ ಜಿಲ್ಲೆಯ ಎಲ್ಲಾ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ನಗರಸಭೆ, ಪುರಸಭೆ ಹಾಗೂ ಎಲ್ಲಾ ಹೋಬಳಿಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನದ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಮೇಲಧಿಕಾರಿಗಳ ಆದೇಶದಂತೆ ಕಾರ್ಯಕ್ರಮಗಳನ್ನು ಮಾಡುತ್ತಿದ್ದೇವೆ. ಈಗಾಗಲೇ ಪಂಚಾಯಿತಿ ಮಟ್ಟದಿಂದ ನಗರ ಸಭೆಯದವರಿಗೆ ನಡೆಸಿಕೊಂಡು ಬಂದಿದ್ದು ಫೆಬ್ರವರಿಯಲ್ಲಿ ಕಾರ್ಯಕ್ರಮವನ್ನು ಎಲ್ಲಾ ಕಡೆ ನಡೆಸಲಾಗುವುದು ಎಂದರು.

ಸಮಾನ ಮೂಲಭೂತ ಹಕ್ಕುಗಳು: ದೇಶದ ಪ್ರತಿಯೊಬ್ಬರಿಗೂ ಸಮಾನ ಮೂಲಭೂತ ಹಕ್ಕುಗಳಿದೆ. ಪ್ರತಿಯೊಬ್ಬರೂ ಸಂವಿಧಾನದ ಪ್ರಸ್ತಾವನೆ ಹಾಗೂ ಮೂಲಭೂತ ಹಕ್ಕುಗಳನ್ನು ಪ್ರತಿನಿತ್ಯ ಒಮ್ಮೆ ಅವಲೋಕಿಸಿದರೆ ಕಾನೂನಿನಡಿ ಸಿಗುವ ಸೌಲಭ್ಯಗಳನ್ನು ಸಕಾಲದಲ್ಲಿ ಪಡೆದುಕೊಳ್ಳಬಹುದು.ಮೂಲಭೂತ ಕರ್ತವ್ಯಗಳನ್ನು ಸಹ ಕಡ್ಡಾಯವಾಗಿ ಪಾಲಿಸಿದರೆ ದೇಶದ ಸಂವಿಧಾನ ಪರಿಕಲ್ಪನೆಯನ್ನು ಸಶಕ್ತಗೊಳಿಸಬಹುದು. ಭಾರತದ ಸಂವಿಧಾನ ವಿಶ್ವದ ಅತ್ಯುತ್ತಮ ಸಂವಿಧಾನಗಳಲ್ಲೊಂದು ಎಂದು ಹೇಳಿದರು.

ಪುರಸಭಾ ಅಧ್ಯಕ್ಷೆ ವಿಮಲ ಬಸವರಾಜ್ ಮಾತನಾಡಿ, ಸ್ವಾತಂತ್ರ್ಯದ ದುರುಪಯೋಗವನ್ನು ಹಾಗೂ ಅಧಿಕಾರದ ಹಸ್ತಕ್ಷೇಪವನ್ನು ತಡೆಗಟ್ಟುವ ಅನೇಕ ಕಟ್ಟುಪಾಡುಗಳು ಮತ್ತು ನಿರ್ಬಂಧಗಳು ನಮ್ಮ ಸಂವಿಧಾನದಲ್ಲೇ ಅಂತರ್ಗತವಾಗಿವೆ. ಆದ್ದರಿಂದ ಈ ಎಲ್ಲ ಸ್ವಾತಂತ್ರ್ಯಗಳು, ನಿರ್ಬಂಧಗಳು ಮತ್ತು ಕರ್ತವ್ಯಗಳು ಪ್ರತಿಯೊಬ್ಬ ನಾಗರಿಕನ ಹಕ್ಕುಗಳೂ ಹೌದು ಬಾಧ್ಯತೆಗಳೂ ಹೌದು ಎಂದರು.

ಈ ಕಾರ್ಯಕ್ರಮವು ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ, ಮಂಡಿಬೆಲೆ ಗ್ರಾಮ ಪಂಚಾಯಿತಿ, ಎಲಿಯೂರು ಗ್ರಾಮ ಪಂಚಾಯಿತಿ, ಐಬಸಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಗೃತಿ ಜಾಥ ನಡೆಸಲಾಯಿತು.

ಈ ಕಾರ್ಯಕ್ರಮವು ಪುರಭೆಯ ಆವರಣದಲ್ಲಿ ಡೋಳ್ಳು ಕುಣಿತ ಹಾಗೂ ಪೂಜಾ ಕುಣಿತದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡುವ ಮೂಲಕ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜಾಥ ಕಾರ್ಯ ನಡೆಯಿತು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕಿ ನಳಿನಾಕ್ಷಿ, ಸತೀಶ್, ನೂಡಲ್ ಅಧಿಕಾರಿ ಪ್ರಭಾಕರ್, ಶ್ರೀನಿವಾಸ್ ಗಾಂಧಿ, ಪುರಸಭಾ ಅಧಿಕಾರಿಗಳಾದ ಕಂದಾಯ ನೀರಿಕ್ಷಕ ತ್ಯಾಗರಾಜ್, ಶಿವನಾಗೇಗೌಡ, ಅನೀಲ್, ಪವನ್ ಜೋಷಿ, ಆರೋಗ್ಯ ಅಧಿಕಾರಿ ಲಾವಣ್ಯ, ರವಿ, ಹಜ್ಮತ್, ಮಂಜು, ಜನಾರ್ಧನ್, ಪುರಸಭಾ ಸದಸ್ಯರಾದ ಹನೀಪುವುಲ್ಲ, ನಾರಾಯಣಸ್ವಾಮಿ, ರಾಜಣ್ಣ ಮುಖಂಡರಾದ ಬಸವರಾಜ್, ಜೆ.ಎನ್.ಶ್ರೀನಿವಾಸ್ ಹಾಗೂ ಸಿಬ್ಬಂದಿವರ್ಗ ಹಾಜರಿದ್ದರು.

ಶಾಸಕರು ಹಾಗೂ ಎಂಎಸ್‌ಐಎಲ್ ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ಸಲಹೆ

# ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಶಿಕ್ಷಣಕ್ಕೆ ಆದ್ಯತೆ ನೀಡಿ



**ಚಾಮರಾಜನಗರ:** ಕಟ್ಟಡ ಕಾರ್ಮಿಕರು ಶ್ರಮ ಜೀವಿಗಳಾಗಿದ್ದು ಮಕ್ಕಳ ಶಿಕ್ಷಣಕ್ಕೆ ವಿಶೇಷ ಆದ್ಯತೆ ನೀಡಿ ಉತ್ತಮ ಭವಿಷ್ಯ ರೂಪಿಸಬೇಕೆಂದು ಶಾಸಕರು ಹಾಗೂ ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (ಎಂಎಸ್‌ಐಎಲ್) ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ಅವರು ಸಲಹೆ ಮಾಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಕೆಡಿಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಕಾರ್ಮಿಕ ಇಲಾಖೆ ಹಾಗೂ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ನೊಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಲ್ಯಾಪ್ ಟಾಪ್ ವಿತರಿಸಿ ಅವರು ಮಾತನಾಡಿದರು.

ಕಟ್ಟಡ ಕಾರ್ಮಿಕರು ಮಕ್ಕಳ ವಿದ್ಯಾಭ್ಯಾಸಕ್ಕೆ ಉತ್ತೇಜನ ನೀಡಬೇಕು. ಸಮಾಜದಲ್ಲಿ ಬದುಕು ಹಸನಾಗಲು ಶಿಕ್ಷಣ ಅತಿ ಮುಖ್ಯವಾಗಿದೆ. ಉನ್ನತ ಶಿಕ್ಷಣ ನೀಡಿ ಉನ್ನತ ಹುದ್ದೆಗಳನ್ನು ಪಡೆಯಲು ಅಗತ್ಯವಿರುವ ಎಲ್ಲ ಪ್ರೋತ್ಸಾಹ ನೀಡಬೇಕು. ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ಮಕ್ಕಳ ಭವಿಷ್ಯ ಉಜ್ವಲಗೊಳಿಸಬೇಕು ಎಂದರು. ಸರ್ಕಾರ ಶ್ರಮಿಕರ ಶ್ರೇಯೋಭಿವೃದ್ದಿಗೆ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಇದನ್ನು ಪಾರದರ್ಶಕವಾಗಿ ಅರ್ಹರಿಗೆ ತಲುಪಿಸುವ ಹೊಣೆಗಾರಿಕೆ ಅಧಿಕಾರಿಗಳ ಮೇಲಿದೆ. ಅರ್ಹರನ್ನು ಗುರುತಿಸಿ ಯೋಜನೆ ಸದ್ಬಳಕೆ ಮಾಡಿಕೊಳ್ಳಲು ಬೇಕಿರುವ ಎಲ್ಲ ನೆರವನ್ನು ಅಧಿಕಾರಿ ವರ್ಗ ಮಾಡಬೇಕಿದೆ ಎಂದು ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಅತೀ ಹೆಚ್ಚು ಅಂಕಗಳಿಸಬೇಕು. ವಿದ್ಯಾರ್ಥಿ ಜೀವನದ ಪ್ರತಿ ಹಂತದಲ್ಲಿಯೂ ಏಕಾಗ್ರತೆಯಿಂದ ವ್ಯಾಸಂಗ ಮಾಡಿ ಅಗ್ರ ಸ್ಥಾನ ಪಡೆಯಬೇಕು. ಪ್ರತಿದಿನ ಓದಿನ ಕಡೆಗೆ ಆಸಕ್ತಿ ಇರಲೇಬೇಕು. ಉನ್ನತ ಉದ್ಯೋಗ ಸಿಗುವವರೆಗೂ ನಿರಂತರ ಅಧ್ಯಯನ ಮುಂದುವರೆಸಬೇಕು ಎಂದು ಕಿವಿಮಾತು ಹೇಳಿದರು. ಕಷ್ಟಪಟ್ಟು ನಿಮ್ಮ ಪೋಷಕರು ನಿಮ್ಮ ಏಳಿಗೆಗೆ ದುಡಿಯುತ್ತಿದ್ದಾರೆ. ಅವರು ಎಲ್ಲವನ್ನು ತ್ಯಾಗ ಮಾಡಿ ನಿಮ್ಮ ಭವಿಷ್ಯ ಉತ್ತಮಗೊಳಿಸಲು ಮುಂದಾಗಿದ್ದಾರೆ. ಮುಂದೆ ಪೋಷಕರು ಖುಷಿ ನೆಮ್ಮದಿಯಿಂದ ಇರುವಂತೆ ನೋಡಿಕೊಳ್ಳುವ ಜವಾಬ್ದಾರಿ ಮಕ್ಕಳ ಮೇಲಿದೆ. ನಿಮಗಾಗಿ ಹಗಲಿರುಳು ದುಡಿದ ತಂದೆ ತಾಯಿ ಪೋಷಕರಿಗೆ ಒಳ್ಳೆಯ ಹೆಸರು ತರಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು. ಜಿಲ್ಲಾ ಕಾರ್ಮಿಕ ಅಧಿಕಾರಿ ಎಂ. ಸವಿತಾ ಅವರು ಮಾತನಾಡಿ ನೊಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಅವರ ಮೆರಿಟ್ ಆಧಾರದ ಮೇಲೆ ಲ್ಯಾಪ್‌ಟಾಪ್ ನೀಡಲಾಗುತ್ತಿದೆ. ಪ್ರತಿ ತಾಲೂಕಿಗೆ 40ರಂತೆ ಜಿಲ್ಲೆಯಲ್ಲಿ ಒಟ್ಟು 200 ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಸೌಲಭ್ಯ ಸಿಗುತ್ತಿದೆ. ಪಾರದರ್ಶಕವಾಗಿ ಆಯ್ಕೆ ಪ್ರಕ್ರಿಯೆ ನಡೆದಿದೆ. ಯಾವುದೇ ಮಧ್ಯವರ್ತಿಗಳಿಗೆ ಅವಕಾಶವಿಲ್ಲದೆ ನೇರವಾಗಿ ಅರ್ಹರಿಗೆ ಇಲಾಖೆಯ ಯೋಜನೆಗಳನ್ನು ತಲುಪಿಸಲಾಗುತ್ತಿದೆ ಎಂದರು. ಕಾರ್ಮಿಕ ನಿರೀಕ್ಷಕರಾದ ವೀಣಾ, ಜಿಲ್ಲಾ ಕಾರ್ಮಿಕ ಯೋಜನಾ ಸೊಸೈಟಿಯ ಕಾರ್ಯದರ್ಶಿ ಮಹೇಶ್, ಇತರರು ಉಪಸ್ಥಿತರಿದ್ದರು.

## ಗೋಶಾಲೆ ನಿರ್ವಹಣೆ: ಖಾಸಗಿ ಸಂಘ ಸಂಸ್ಥೆಗಳಿಗೆ ಅವಕಾಶ

**ಚಾಮರಾಜನಗರ:** ಜಿಲ್ಲೆಯ ಸರ್ಕಾರಿ ಗೋ ಶಾಲೆಯನ್ನು ನಿರ್ವಹಿಸಲು ಆಸಕ್ತಿ ಹೊಂದಿರುವ ಖಾಸಗಿ ಗೋಶಾಲೆಗಳು ಅಥವಾ ನೊಂದಾಯಿತ ಸಂಘ ಸಂಸ್ಥೆಗಳು ಪಶುಪಾಲನಾ ಇಲಾಖೆಯನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ. ಖಾಸಗಿ ಸಹಭಾಗತ್ವದಲ್ಲಿ ಗೋಶಾಲೆಗಳನ್ನು ನಡೆಸಲು ಆಸಕ್ತಿ ಹೊಂದಿರುವ ಜಿಲ್ಲೆಯ ಖಾಸಗಿ ಗೋಶಾಲೆ ಅಥವಾ ಇತರೆ ಸಂಘ ಸಂಸ್ಥೆಗಳು ಆಸಕ್ತಿ ಹೊಂದಿದ್ದಲ್ಲಿ ಅಂತಹವರನ್ನು ಗುರುತಿಸಿ ನಿಯಮಾನುಸಾರ ವಹಿಸಿಕೊಡುವ ಬಗ್ಗೆ ಇತ್ತೀಚೆಗೆ ನಡೆದ ಜಿಲ್ಲಾ ಪ್ರಾಣಿ ದಯಾ ಸಮಿತಿಯಲ್ಲಿ ತೀರ್ಮಾನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಆಸಕ್ತಿ ಹೊಂದಿರುವವರು ನಗರದ ಜಿಲ್ಲಾಡಳಿತ ಭವನದಲ್ಲಿರುವ ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರ ಕಚೇರಿ ಸಂಪರ್ಕಿಸುವಂತೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಶ ಕಂಡ ಅದುತ ನಾಯಕನಿಗೆ ತಲೆಬಾಗಿ ನಮಿಸೋಣ

**ವಿಜಯಪುರ:** ಪಟ್ಟಣದ ಪ್ರಗತಿ ಆಂಗ್ಲ ಶಾಲೆಯ ಆವರಣದಲ್ಲಿ ಮಂಗಳವಾರದಂದು ಶಾಹೀದ್ ದಿವಸ್ ಕಾರ್ಯಕ್ರಮವನ್ನು ಆಚರಿಸಲಾಯಿತು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯರಾದ ಜೆ.ಎನ್. ಪ್ರಕಾಶ್ ರವರು ವಹಿಸಿ ಮಾತನಾಡಿ, ದೇಶ ಕಂಡ ಅದ್ಭುತ ನಾಯಕನಾದ ಧೈರ್ಯವಂತ ,ಚಳುವಳಿಗಳ ನೇತಾರ ,ಗಾಂಧೀಜಿ ಒಬ್ಬ ಹೋರಾಟಗಾರ ಮಹಾನ್ ನಾಯಕರಾಗಿದ್ದರು. ಅವರಿಗೆ ನೀವು ನಾವೆಲ್ಲ ಸೇರಿ ಶಿರ ಬಾಗಿ ನಮಿಸೋಣ. ಅವರ ಆದರ್ಶ ಮಾರ್ಗಗಳನ್ನು ನಾವು ಕೂಡ ಪಾಲಿಸೋಣ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಶಿಕ್ಷಕಿ ನಿರ್ಮಲ .ಜಿ.ರವರು ಮಾತನಾಡಿ, ಹುತಾತ್ಮರ ದಿನ ಅಥವಾ ಶಾಹಿದ್ ದಿವಸವನ್ನು ಭಾರತದಲ್ಲಿ ಹಲವಾರು ದಿನಾಂಕಗಳಲ್ಲಿ ಆಚರಿಸಲಾಗುತ್ತದೆ ಸ್ವಾತಂತ್ರ ಹೋರಾಟಗಾರರಾದ ಚಂದ್ರಶೇಖರ್ ಅಜಾದ್, ಭಗತ್ ಸಿಂಗ್, ರಾಜಗುರು ಹಾಗೂ ಸುಖದೇವ್, ಎಂಬ ವೀರ ಸ್ವಾತಂತ್ರ ಹೋರಾಟಗಾರರನ್ನು ಬ್ರಿಟಿಷರು ಮಾರ್ಚ್ 23 ರಂದು ಗಲ್ಲಿಗೇರಿಸಿದರು.. ಗಾಂಧೀಜಿ ಒಬ್ಬ ಹೋರಾಟಗಾರ ಮಹಾನ್ ನಾಯಕ ಇವರನ್ನು ನಾಥುರಾಮ್ ಗೋಡ್ಸೆ ರವರು ಜನವರಿ 30 1948 ರಂದು ಸಂಜೆಯ ಪ್ರಾರ್ಥನೆಯ ಸಮಯದಲ್ಲಿ ಬಿರ್ಲಾ ಹೌಸ್ ನಲ್ಲಿ ಗುಂಡಿಕ್ಕಿ ಹತ್ಯೆಗೈದರು. ಈ ಎಲ್ಲಾ ಹುತಾತ್ಮರ ನೆನಪಿಗಾಗಿ ಭಾರತದಾದ್ಯಂತ ಈ ದಿನವನ್ನು ಹುತಾತ್ಮರ ದಿನ ಅಥವಾ ಶಾಹಿದ್ ದಿವಸ್ ಎಂದು ಆಚರಿಸಲಾಗುತ್ತದೆ. ಎಂದು ತಿಳಿಸಿಕೊಟ್ಟರು. ಆರನೇ ತರಗತಿ ವಿದ್ಯಾರ್ಥಿನಿ ಹರ್ಷಿತ ವೈ .ಕೆ ರವರು ಮಾತನಾಡಿ ಗಾಂಧೀಜಿರವರ ಜೀವನ ಅವರ ತ್ಯಾಗ ಅವರ ಹೋರಾಟ ಎಲ್ಲರಿಗೂ ಮಾದರಿ ಅವರಂತೆ ನಾವೆಲ್ಲರೂ ನಡೆಯೋಣ ಹಾಗೆ ಇಂದು ಅವರ ಪುಣ್ಯಸ್ಮರಣೆಯ ದಿನ ಹಾಗಾಗಿ ಅವರನ್ನು ಸ್ಮರಿಸಿಕೊಳ್ಳೋಣ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗಾಂಧೀಜಿಯವರಿಗೆ ಸಂಬಂಧಪಟ್ಟ ಹಾಗೆ ಹಾಡನ್ನು 6ನೇ ತರಗತಿ ವಿದ್ಯಾರ್ಥಿಗಳು ಹಾಡಿದರು ಮತ್ತು ಗಾಂಧೀಜಿಯವರಿಗೆ ಇಷ್ಟವಾದ ರಘುಪತಿ ರಾಘವ ಹಾಡನ್ನು ಶಿಕ್ಷಕಿ ಶ್ವೇತಾ ರವರು ಹಾಡಿದರು. ಈ ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ಶಿಕ್ಷಕ ಶಿಕ್ಷಕಿಯರು ಮತ್ತು ಎಲ್ಲಾ ವಿದ್ಯಾರ್ಥಿಗಳು ಭಾಗಿಯಾಗಿದ್ದರು.



## ವಿವಿಧ ಕೆರೆ ಪರಿಶೀಲನೆ



**ಚಾಮರಾಜನಗರ:** ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ಇಂದು ಚಾಮರಾಜನಗರ ತಾಲೂಕಿನ ವಿವಿಧ ಕೆರೆಗಳಿಗೆ ಭೇಟಿ ನೀಡಿ ಒತ್ತುವರಿ ಸಂಬಂಧ ಸ್ಥಳ ಪರಿಶೀಲನೆ ನಡೆಸಿದರು. ಅಧಿಕಾರಿಗಳೊಂದಿಗೆ ತಾಲೂಕಿನ ಕೋಡಿಮೋಳೆ ಕೆರೆ, ನಾಗವಳ್ಳಿ ಕೆರೆ, ಜ್ಯೋತಿಗೌಡನಪುರ ಕೆರೆ, ಕಾಗಲವಾಡಿ ಕೆರೆ, ಹೊಂಗನೂರು ಕೆರೆ, ಹೊಂಡರಬಾಳು ಕೆರೆ, ಇನ್ನಿತರ ಕೆರೆಗಳನ್ನು ವ್ಯಾಪಕವಾಗಿ ವೀಕ್ಷಿಸಿದರು. ಕಾವೇರಿ ನೀರಾವರಿ ನಿಗಮ ಹಾಗೂ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಒಳಪಡುವ ಕೆರೆಗಳ ವಿಸ್ತೀರ್ಣ, ಒತ್ತುವರಿಯಾಗಿರುವ ಭಾಗಗಳು, ಕೆರೆಗಳ ಅಭಿವೃದ್ಧಿ ಕುರಿತ ಮಾಹಿತಿಯನ್ನು ಅಧಿಕಾರಿಗಳಿಂದ ಆಯಾ ಸ್ಥಳದಲ್ಲಿಯೇ ಪಡೆದು ಪರಿಶೀಲನೆ ನಡೆಸಿದರು. ಕೆರೆಗಳ ಹದ್ದುಬಸ್ತು ಮಾಡಿ ಒತ್ತುವರಿ ತೆರವಿಗೆ ಅಗತ್ಯ ಮುಂದಿನ ಕ್ರಮ ವಹಿಸಲು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಭೇಟಿಯ ವೇಳೆ ಆಯಾ ಭಾಗದ ಗ್ರಾಮಸ್ಥರು ಜಿಲ್ಲಾಧಿಕಾರಿ ಹಾಗೂ ನ್ಯಾಯಾಧೀಶರಿಗೆ ಅಹವಾಲು ಸಲ್ಲಿಸಿ ಕೆರೆಗಳನ್ನು ಅಭಿವೃದ್ದಿಗೊಳಿಸಬೇಕು. ಕೆಲವೆಡೆ ಕೆರೆಗಳಿಗೆ ತ್ಯಾಜ್ಯ ನೀರು ಸೇರುತ್ತಿರುವುದನ್ನು ತಡೆಯಬೇಕೆಂದು ಮನವಿ ಮಾಡಿದರು.

ಕೆಲವೆಡೆ ಕೆರೆಗಳಿಗೆ ಹರಿಯಬಿಟ್ಟಿರುವ ಕಲುಷಿತ ನೀರು ಸೇರದಂತೆ ಕೂಡಲೇ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು. ಕೆರೆ ಸುತ್ತಮುತ್ತಲ ಪ್ರದೇಶದಲ್ಲಿ ಸ್ವಚ್ಚತೆ ಕಾಪಾಡಬೇಕು. ತ್ಯಾಜ್ಯ ವಸ್ತುಗಳನ್ನು ಕೆರೆಯ ಬಳಿ ಹಾಕುವುದನ್ನು ತಡೆಗಟ್ಟಬೇಕು. ಕೆರೆಯ ವ್ಯಾಪ್ತಿಯಲ್ಲಿ ನೈರ್ಮಲ್ಯ ಕಾಪಾಡಬೇಕು. ಸ್ವಚ್ಚ ಪರಿಸರ ಇರಬೇಕೆಂದು ಜಿಲ್ಲಾಧಿಕಾರಿಯವರು ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾಮಗಾರಿ ನಿರ್ವಹಿಸಿರುವ ಸ್ಥಳದಲ್ಲಿ ಅಳವಡಿಸಿರುವ ಮಾಹಿತಿ ಫಲಕಗಳನ್ನು ಸರಿಪಡಿಸುವಂತೆ ಸೂಚಿಸಿದರು. ಅನುದಾನ ಲಭ್ಯತೆಗೆ ಅನುಗುಣವಾಗಿ ಕೆರೆಗಳ ಹೂಳೆತ್ತುವುದು, ಅಭಿವೃದ್ದಿ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು. ನರೇಗಾ ಅನುದಾನವನ್ನು ಗ್ರಾಮೀಣ ಭಾಗಗಳಲ್ಲಿ ಹೆಚ್ಚು ಸದ್ಬಳಕೆಯಾಗಬೇಕು. ಸ್ಥಳೀಯವಾಗಿ ಕೆಲಸ ನೀಡಬೇಕು. ಕೆರೆಗಳ ಅಭಿವೃದ್ದಿ ಕೆಲಸವನ್ನು ಕೈಗೆತ್ತಿಕೊಳ್ಳಬೇಕು. ಕೆರೆಗಳ ಸಂರಕ್ಷಣೆ ಆಗಬೇಕು ಎಂದು ಸೂಚಿಸಲಾಯಿತು. ತಹಶೀಲ್ದಾರ್ ಬಸವರಾಜು, ಭೂ ದಾಖಲೆಗಳ ಉಪ ನಿರ್ದೇಶಕರಾದ ವಿದ್ಯಾಯಿನಿ, ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಎಂಜಿನಿಯರ್ ಎಂ.ಬಿ. ಪಾಟೀಲ್, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಟಿ. ಜಯರಾಮ್, ಸಣ್ಣ ನೀರಾವರಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ನಿರಂಜನ್, ಇನ್ನಿತರ ಇಲಾಖೆಯ ಅಧಿಕಾರಿಗಳು ಇದ್ದರು.

ಅರ್ಥಪೂರ್ಣವಾಗಿ ನಡೆದ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ

# ಸಮಾಜಕ್ಕೆ ವಚನಕಾರರ ಕೊಡುಗೆ ಅಪಾರ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಿಜಶರಣ ಅಂಬಿಗರ ಚೌಡಯ್ಯ ನವರ ಜಯಂತಿಯನ್ನು ನಗರದಲ್ಲಿಂದು ಅರ್ಥಪೂರ್ಣವಾಗಿ ಆಚರಿಸಲಾಯಿತು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಆಯೋಜಿಸಲಾಗಿದ್ದ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವನ್ನು ಶಾಸಕರು ಹಾಗೂ ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (ಎಂಎಸ್‌ಐಎಲ್) ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ಅವರು ಉದ್ಘಾಟಿಸಿ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು. ಇದೇ ವೇಳೆ ಮಾತನಾಡಿದ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು 12ನೇ ಶತಮಾನದ ಪ್ರಮುಖ ವಚನಕಾರರಲ್ಲಿ ಅಂಬಿಗರ ಚೌಡಯ್ಯ ಅವರು ಸಹ ಒಬ್ಬರಾಗಿದ್ದಾರೆ. ತಮ್ಮದೇ ಆದ ವಿಶಿಷ್ಟ ವಚನಗಳ ಮೂಲಕ ಅಂಬಿಗರ ಚೌಡಯ್ಯ ಅವರು ಗಮನಸೆಳೆದಿದ್ದಾರೆ. ಅಂದಿನ ಕಾಲದ ಶೋಷಣೆ ವಿರುದ್ದ ತಮ್ಮದೇ ಆದ ವಚನಗಳಿಂದ ಎಚ್ಚರಿಸಿದರು ಎಂದರು. ಸಮಾಜದ ಜನತೆ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚು ಆದ್ಯತೆ ನೀಡಬೇಕು. ಶ್ರಮ ಜೀವಿಗಳಾಗಿರುವ ಸಮುದಾಯ ಮಕ್ಕಳ ಮುಂದಿನ ಭವಿಷ್ಯದ ದೃಷ್ಠಿಯಿಂದ ಶಿಕ್ಷಣಕ್ಕೆ ವಿಶೇಷ ಗಮನಹರಿಸಿ ಸರ್ಕಾರದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ಅಂಬಿಗರ ಚೌಡಯ್ಯನವರು ಬಸವಣ್ಣನವರ ಕಾಯಕ ತತ್ವದಲ್ಲಿ ಅಪಾರವಾದ ನಂಬಿಕೆ ಉಳ್ಳವರಾಗಿದ್ದರು. ಅಂಬಿಗರ ಚೌಡಯ್ಯನವರು ತಮ್ಮ ಹೆಸರಿನಲ್ಲೇ ವಚನಾಂಕಿತವನ್ನು ಬಳಸಿ ರಚಿಸಿರುವ ವಚನಗಳಲ್ಲಿ ಆಳವಾದ ಅನುಭವ, ಸಾಮಾಜಿಕ ಪ್ರಜ್ಞೆ ಕಾಣಬಹುದಾಗಿದೆ ಎಂದರು.

ಮುಖಂಡರಾದ ಗು. ಪುರುಷೋತ್ತಮ್ ಅವರು ಮಾತನಾಡಿ ಅಂಬಿಗರ ಚೌಡಯ್ಯನವರು ಸಮಾಜದ ಡಂಬಾಚಾರಗಳನ್ನು ನಿರ್ಭೀತಿಯಿಂದ ಕಟುವಾಗಿ ಟೀಕಿಸಿದರು. ಅವರ ವಚನಗಳಲ್ಲಿ ವೈಚಾರಿಕತೆಯನ್ನ ನಿರೂಪಿಸಿದ್ದಾರೆ. ತಾರತಮ್ಯ ನೀತಿಯನ್ನು ವಿರೋಧಿಸಿದ್ದಾರೆ. ಇತರೆ ವಚನಕಾರರಿಗಿಂತ ಬಿನ್ನರಾಗಿದ್ದ ಅಂಬಿಗರ ಚೌಡಯ್ಯ ಅವರು ನುಡಿದಂತೆ ನಡೆದವರು ಎಂದರು. ಸಂಘಟನೆಗಳ ಮುಖಂಡರಾದ ಪ್ರಕಾಶ್, ಇನ್ನಿತರರು, ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ವಿಕಲಚೇತನರ ಅಭಿವೃದ್ಧಿಗೆ ಒತ್ತು

**ಚಾಮರಾಜನಗರ:** ವಿಕಲಚೇತನರ ಅಭಿವೃದ್ದಿಗೆ ಶ್ರಮಿಸುತ್ತಿರುವ ಸಂಸ್ಥೆ ಮಾರ್ಗದರ್ಶಿ ಸಂಸ್ಥೆಯು ವಿಕಲಚೇತನರಿಗೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಸಂಸ್ಥೆಯ ಸಹಯೋಗದಲ್ಲಿ ಹೊಸ ಪ್ರಯತ್ನಕ್ಕೆ ಮುಂದಾಗಿದೆ ಎಂದು ಕೇರರ್ಸ್ ವರ್ಲ್ಡ್‌ವೈಡ್ ಸಂಸ್ಥೆ ಸಂಸ್ಥಾಪಕ ಡಾ.ಅನಿಲ್ ಪಾಟಿಲ್ ತಿಳಿಸಿದರು.

ನಗರದ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಇರುವ ಮಾಗದರ್ಶಿ ಸಂಸ್ಥೆಯಲ್ಲಿ ಶ್ರೀ ಮಾತೆ ಆರ್ಯೆಕೆದಾರರ ಸೌಹಾರ್ದ ಸಹಕಾರಿ ಸಂಘವನ್ನು ಉದ್ಘಾಟಿಸುವುದರ ಮೂಲಕ ಚಾಲನೆ ನೀಡಿದರು. ಪ್ರತಿಯೊಬ್ಬರಿಗೂ ನಾನು ಚೆನ್ನಾಗಿ ಬಾಳಬೇಕು ಎನ್ನುವುದು ಇದ್ದೇ ಇರುತ್ತದೆ. ಮಾರ್ಗದರ್ಶಿ ಸಂಸ್ಥೆಯು ವಿಕಲಚೇತನರ ಕುಟುಂಬಗಳಿಗೆ ಆಸರೆಯಾಗಿದೆ. ಅದರ ಜೊತೆಗೆ ವಿಕಲಚೇತರಿಗೋಸ್ಕರ ಸಹಕಾರವನ್ನು ತೆರೆಯಲಾಗಿದೆ. ಇದರ ಉದ್ದೇಶ ಪ್ರತಿಯೊಬ್ಬರಂತೆ ಅವರು ಸಹ ಸಂತೋಷದಿಂದ ಬಾಳಬೇಕು ಎನ್ನುವುದು ಎಂದು ಹೇಳಿದರು,

ಮಾರ್ಗದರ್ಶಿ ವಿಕಲಚೇತನರ ಸ್ವಯಂಸೇವ ಸಂಸ್ಥೆಯ ಅಧ್ಯಕ್ಷರಾದ ಶಾಂತಲಕ್ಷ್ಮಿ ಅವರು ಮಾತನಾಡಿ ಚಾಮರಾಜನಗರ ಜಿಲ್ಲೆಯ ಸುತ್ತಮತ್ತಲಿನ ವಿಕಲಚೇತನರ ಕುಟುಂಬಗಳಿಗೆ ಅನುಕೂಲವಾಗುವಂತೆ ಈ ಸಹಕಾರ ಸಂಘವನ್ನು ತೆರೆಯಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಶ್ರೀ ಮಾತೆ ಆರ್ಯೆಕೆದಾರರ ಸೌಹಾರ್ದ ಸಹಕಾರಿ ಸಂಘವನ್ನು ಸ್ಥಾಪಿಸಲಾಗುವುದು ಸದಸ್ಯರು ನಿಮಗೆ ಸಿಗುವ ಹಣದಲ್ಲಿ ಅಲ್ಪಸ್ವಲ್ಪ ಹಣವನ್ನು ಸಹಕಾರ ಸಂಘದಲ್ಲಿ ಇಡುವುದರಿಂದ ನಿಮಗೆ ಅನುಕೂಲವಾಗುತ್ತದೆ. ಶ್ರೀ ಮಾತೆ ಆರ್ಯೆಕೆದಾರರ ಸೌಹಾರ್ದ ಸಹಕಾರಿ ಶಾಖೆಯನ್ನು ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ತೆರೆಯಲಾಗುವುದು ಎಂದು ತಿಳಿಸಿದರು. ಅಸಂಸ್ಥೆಯ ಉಪಾಧ್ಯಕ್ಷರಾದ ಕೆ.ಎಂ.ಗೀತಾಮೃತ ಅವರು ಮರ್ಗದರ್ಶಿ ಸಂಸ್ಥೆಯ ಸಹಕಾರ ಶ್ರೀ ಮಾತೆ ಅರ್ಯೆಕೆದಾರರ ಸೌಹಾರ್ದ ಸಹಕಾರಿ ಸಂಘಕ್ಕೆ ನೀಡಲಾಗುತ್ತಿದೆ. ವಿಕಲಚೇತನರ ಸಮಸ್ಯೆಗಿಂತ ಆರ್ಯೆಕೆದಾರರ ಸಮಸ್ಯೆಗಳೇ ತೀವ್ರವಾಗಿದ್ದನ್ನು ಮನಗೊಂಡು ಮಾರ್ಗದರ್ಶಿ ಸಂಸ್ಥೆಯು ಈ ಪ್ರಯತ್ನಕ್ಕೆ ಕೈ ಹಾಕಿದೆ. ಸಹಕಾರ ಸಂಘದಲ್ಲಿ 480 ಜನ ಸದಸ್ಯರು ನೊಂದಣಿ ಮಾಡಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಜಿಲ್ಲೆಗೆ ಮಾದರಿ ಸಹಕಾರಿಯಾಗಲಿದೆ ಎಂದು ನುಡಿದರು.

## ಎಟಿಎಂಕಾರ್ಡ್ ಕದ್ದು ಚಿನ್ನ ಖರೀದಿ

**ವಿಜಯಪುರ:** ಎ.ಟಿ.ಎಂವೊಂದರಲ್ಲಿ ಹಣ ಡ್ರಾ ಮಾಡಿಕೊಳ್ಳಲು ಹೋಗಿದ್ದ ರೈತರೊಬ್ಬರನ್ನು ಯಾಮಾರಿಸಿ, ಎ.ಟಿ.ಎಂ.ಕಾರ್ಡ್ ಕದ್ದು ಚಿನ್ನ ಖರೀದಿಸಿರುವ ಘಟನೆ ಶುಕ್ರವಾರ ನಡೆದಿದೆ.

ಪಟ್ಟಣದ ಹಳೇ ಕೆನರಾ ಬ್ಯಾಂಕ್ ರಸ್ತೆಯಲ್ಲಿರುವ ಕರ್ನಾಟಕ ಬ್ಯಾಂಕ್ ಎ.ಟಿ.ಎಂ ನಲ್ಲಿ ಹಣ ಡ್ರಾ ಮಾಡಿಕೊಳ್ಳಲು ಹೋಗಿದ್ದ ಭಟ್ರೇನಹಳ್ಳಿಯ ರೈತ ರಾಜಣ್ಣ ಅವರು, ರೇಷ್ಮೆಗೂಡು ಮಾರಾಟ ಮಾಡಿದ್ದ ಹಣ ಬ್ಯಾಂಕ್ ಖಾತೆಗೆ ಬಂದಿದ್ದು, ಈ ಹಣ ಡ್ರಾ ಮಾಡಲು ಎಟಿಎಂಗೆ ಹೋಗಿ ಡ್ರಾ ಮಾಡಲು ಬಾರದಿದ್ದಾಗ,



ಅಲ್ಲೇ ಇದ್ದ ಅಪರಿಚಿತ ವ್ಯಕ್ತಿಯೊಬ್ಬರ ಕೈಗೆ ತನ್ನ ಕೆನರಾ ಬ್ಯಾಂಕಿನ ಎಟಿಎಂ ಕೊಟ್ಟು, ಪಿನ್ ನಂಬರ್ ಒತ್ತಿದ್ದಾರೆ. ಮೊದಲು ಎರಡು ಬಾರಿ ಹಣ ಬಂದಿಲ್ಲ. ಅಪರಿಚಿತ ವ್ಯಕ್ತಿ ಮೂರನೇ ಬಾರಿ 10 ಸಾವಿರ ಡ್ರಾ ಮಾಡಿಕೊಟ್ಟಿದ್ದಾರೆ. ಇನ್ನೂ ಹತ್ತು ಸಾವಿರ ಡ್ರಾ ಮಾಡಿಕೊಡುವಂತೆ ರೈತ ರಾಜಣ್ಣ ಕೇಳಿದಾಗ ಸೆಕ್ಯೂರಿಟಿ ಕರೆಯುತ್ತಿದ್ದಾರೆ ಬರ್ತೇನೆ ಇರಿ ಎಂದು ಬ್ಯಾಂಕ್ ಆಫ್ ಬರೋಡಾ ಬ್ಯಾಂಕಿನ ಎ.ಟಿ.ಎಂ.ಕಾರ್ಡ್ ವೊಂದನ್ನು ಅವರ ಕೈಗೆ ಕೊಟ್ಟು, ಪರಾರಿಯಾಗಿದ್ದಾರೆ. ತಕ್ಷಣ ಎಚ್ಚೆತ್ತುಕೊಂಡ ರೈತ, ತನಗೆ ಮೋಸವಾಗಿದೆ ಎಂದು ತಿಳಿದುಕೊಂಡು ಪೊಲೀಸ್ ಠಾಣೆಗೆ ದೂರು ಕೊಡಲು ಹೋಗಿದ್ದಾರೆ. ಬ್ಯಾಂಕಿನಿಂದ ಸ್ಟೇಟ್ ಮೆಂಟ್ ತೆಗೆದುಕೊಂಡು ಬರುವಂತೆ ಸೂಚಿಸಿದ್ದಾರೆ. ಆ ನಂತರ ಕೆನರಾ ಬ್ಯಾಂಕಿಗೆ ಹೋಗಿ ಎಟಿಎಂ ಕಾರ್ಡ್ ಲಾಕ್ ಮಾಡಿಸುವಷ್ಟರಲ್ಲಿ ಬ್ಯಾಂಕ್ ಖಾತೆಯಲ್ಲಿದ್ದ 63590 ರೂಪಾಯಿಯ ಪೈಕಿ, ಎಟಿಎಂ ಕದ್ದಿರುವ ವ್ಯಕ್ತಿ, ಸಮೀಪದ ಖಾಸಗಿ ಜ್ಯುವೆಲ್ಲರಿ ಅಂಗಡಿಯಲ್ಲಿ ಎಟಿಎಂ ಕಾರ್ಡ್ ಬಳಕೆ ಮಾಡಿಕೊಂಡು 40,500 ರೂಪಾಯಿ ಮೌಲ್ಯದ ಚಿನ್ನ ಖರೀದಿಸಿಕೊಂಡು ಹೋಗಿದ್ದಾರೆ. ನಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

# ಎನ್.ಮಹೇಶ್, ಸಿಮೆಂಟ್ ಮಂಜು, ನಿರಂಜನ್ ಕುಮಾರ್‌ಗೆ ಸನ್ಮಾನ



**ಚಾಮರಾಜನಗರ:** ಛಲವಾದಿ ಮಹಾಸಭಾದಿಂದ ಬಿಜೆಪಿ ರಾಜ್ಯಾ ಉಪಾಧ್ಯಕ್ಷ ಎನ್.ಮಹೇಶ್, ಎಸ್ ಸಿ ಮೋರ್ಚಾದ ರಾಜ್ಯಾಧ್ಯಕ್ಷ. ಸಿಮೆಂಟ್ ಮಂಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಹಾಗೂ ಮುಖಂಡರಾದ ಜನಧ್ವನಿ ವೆಂಕಟೇಶ್ ಅವರನ್ನು ಸನ್ಮಾನಿಸಲಾಯಿತು. ನಗರದ ಅಂಬೇಡ್ಕರ್ ಭವನದಲ್ಲಿ ಛಲವಾದಿ ಮಹಾಸಭಾದ ಮೈಸೂರು ಜಿಲ್ಲಾಧ್ಯಕ್ಷ ಹಂಸರಾಜು ಹಾಗೂ ಪದಾಧಿಕಾರಿಗಳು ಭಾರಿ ಗಾತ್ರದ ಹೂವಿನ ಹಾರ ಹಾಕಿ ಮೈಸೂರು ಪೇಟಾ ತೊಡಿಸಿ, ಶಾಲು ಹೊದಿಸಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾದ ವೆಂಕಟೇಶ್, ಜ್ಯೋತಿ, ಸಿದ್ದಪ್ಪ, ಅಶೋಕ್,ಕುಮಾರ್ ಶಿವು, ಮೂರ್ತಿ, ಮುಖಂಡರಾದ ವೆಂಕಟರಮಣಸ್ವಾಮಿ, ಮಾಜಿ ಶಾಸಕ ಎಸ್. ಬಾಲರಾಜು, ಕೂಡ್ಲುರುಶ್ರೀಧರಮೂರ್ತಿ, ಎಸ್ಸಿ ಮೋರ್ಚಾ ಅಧ್ಯಕ್ಷ ಮೂಡ್ನಾಕೂಡು ಪ್ರಕಾಶ್ ಇತರರು ಇದ್ದರು.

## ಕೊತ್ತೂರು ಮಂಜುನಾಥ್ ನೀವೆಷ್ಟು ಸತ್ಯವಂತರು

**ಕೋಲಾರ:** ಬಿಜೆಪಿ ಸುಳ್ಳಿನ ಪಕ್ಷ ಎಂದು ಹೇಳಿಕೆ ನೀಡಿರುವ ಶಾಸಕ ಕೊತ್ತೂರು ಜಿ. ಮಂಜುನಾಥ್ ಅವರೇ ನಿಮ್ಮ ಕಾಂಗ್ರೆಸ್ ಪಕ್ಷದ ಸುಳ್ಳಿನ ಸಾಧನೆ ಇಡೀ ದೇಶದ ಜನರಿಗೆ ಗೊತ್ತಿದೆ ಕಾಂಗ್ರೆಸ್ ಸುಳ್ಳಿನ ಪಕ್ಷ ಎಂದು ಬಿಜೆಪಿ ಜಿಲ್ಲಾ ಮಾಧ್ಯಮ ಸಂಚಾಲಕ ಕೆಂಬೋಡಿ ನಾರಾಯಣಸ್ವಾಮಿ ಟೀಕಿಸಿದ್ದಾರೆ. ಪತ್ರಿಕಾ ಹೇಳಿಕೆಯಲ್ಲಿ ಮಾತನಾಡಿ, ಮುಳಬಾಗಿಲು ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ದಲಿತರಿಗೆ ಮೀಸಲಿರಿಸಿದ್ದ ರಾಜಕೀಯ ಸ್ಥಾನಮಾನವನ್ನು ಕಸಿದುಕೊಂಡಿರುವ ನೀವು, ಬಿಜೆಪಿ ಪಕ್ಷ ಸುಳ್ಳಿನ ಪಕ್ಷ ಹೇಳುವ ಯೋಗ್ಯತೆ ನಿಮ್ಮ ಶಾಸಕ ಸ್ಥಾನಕ್ಕೆ ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರದ ವೈಫಲ್ಯ ಹಾಗೂ ಬರ ಪರಿಹಾರ ಬಿಡುಗಡೆಯನ್ನು ಖಂಡಿಸಿ, ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಶಾಸಕ ಕೊತ್ತೂರು ಮಂಜುನಾಥ್ ಅವರಿಗೆ ಬಿಜೆಪಿ ವಿರೋಧ ಪಕ್ಷದ ನಾಯಕ ಆರ್.ಅಶೋಕರಿಗೆ ಯೋಗ್ಯತೆ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ, ಇನ್ನು ವಿಧಾನಸಭಾ ಚುನಾವಣೆಯಲ್ಲಿ ದಲಿತರ ಮೀಸಲಾತಿಯನ್ನು ದುರುಪಯೋಗಪಡಿಸಿಕೊಂಡು, ನ್ಯಾಯಾಲಯದಲ್ಲಿ ಛೀಮಾರಿ ಹಾಕಿಸಿಕೊಂಡು ಕೋಲಾರ ಸಾಮಾನ್ಯ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದು, ನೀವು ದಲಿತರ ಹಕ್ಕುಗಳನ್ನು ಕಸಿದುಕೊಂಡಿರುವ ನಿಮಗೆ ಯಾವ ಅರ್ಹತೆ ಇದೆ ಅಶೋಕ್ ಅವರ ವಿರುದ್ಧ ಮಾತನಾಡಲು ಎಂದು ತಿರುಗೇಟು ನೀಡಿದರು. ರಾಜ್ಯದಲ್ಲಿ ಮಳೆಯ ಅಭಾವದಿಂದ ರೈತರ ಮಳೆಯಾಶ್ರಿತ ಬೆಳೆಗಳು ನಷ್ಟ ಹೊಂದಿದ್ದು, ಸುಮಾರು ಆರು ತಿಂಗಳಿನಿಂದ ರಾಜ್ಯ ಕಾಂಗ್ರೆಸ್ ಸರ್ಕಾರ ರೈತರ ಬೆಳೆಗಳಿಗೆ ಸೂಕ್ತ ಪರಿಹಾರವನ್ನು ನೀಡಲು ಸಾಧ್ಯವಾಗಿಲ್ಲ, ಕೇಂದ್ರ ಸರ್ಕಾರ ಮೇಲೆ ಆರೋಪ ಮಾಡುವ ರಾಜ್ಯ ಸರ್ಕಾರ, ಪ್ರತಿ ವರ್ಷ ಕೇಂದ್ರ ಸರ್ಕಾರದಿಂದ ಎನ್ ಡಿಆರ್‌ಎಫ್ ಮೂಲಕ ಮಾರ್ಚ್ ತಿಂಗಳಿನಲ್ಲಿ ಅನುದಾನ ಬಿಡುಗಡೆ ಮಾಡುತ್ತದೆ, ಈ ಒಂದು ವಾಸ್ತವಂಶ ಶಾಸಕ ಕೊತ್ತೂರು ಮಂಜುನಾಥ್ ಅರಿತುಕೊಳ್ಳುವುದು ಉತ್ತಮ, ರಾಜ್ಯದ ಕಾಂಗ್ರೆಸ್ ನಾಯಕರು ಪದೇಪದೇ ಕೇಂದ್ರ ಸರ್ಕಾರದ ವಿರುದ್ಧ ಮಾತನಾಡುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದ್ದಾರೆ. ರೈತರಿಗೆ ಬೆಳೆ ನಷ್ಟದ ಪರಿಹಾರಕ್ಕಾಗಿ ಕೋಲಾರ ಜಿಲ್ಲೆಯ ರೈತರಿಗೆ 10 ಕೋಟಿ ಬರ ಪರಿಹಾರ ಅನುದಾನ ಬಿಡುಗಡೆಗೊಳಿಸುವ ಬದಲು 2 ಕೋಟಿ ಹಣ ನೀಡಿರುವುದು ಎಷ್ಟು ಸಮಂಜಸ, ಕಾಂಗ್ರೆಸ್ ನಾಯಕರು ಸುಳ್ಳು ಹೇಳುವುದಕ್ಕೂ ಮಿತಿ ಇರಬೇಕು ಎಂದು ವ್ಯಂಗ್ಯವಾಡಿದರು.

# ರಾಷ್ಟ್ರೀಯ ಮತದಾರರ ದಿನಾಚರಣೆ

**ಚಾಮರಾಜನಗರ:** ಪ್ರಜಾಪ್ರಭುತ್ವದ ಬಲವರ್ಧನೆಗೆ ಮತದಾರರನ್ನು ಜಾಗೃತಗೊಳಿಸುವ ರಾಷ್ಟ್ರೀಯ ಮತದಾರರ ದಿನವನ್ನು ವಿಶಿಷ್ಟ ಕಾರ್ಯಕ್ರಮಗಳ ಮೂಲಕ ನಗರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು. ಭಾರತ ಚುನಾವಣಾ ಆಯೋಗ, ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಸಹಯೋಗದಲ್ಲಿಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 14ನೇ 'ರಾಷ್ಟ್ರೀಯ ಮತದಾರರ ದಿನ' ಆಚರಣೆ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್. ಭಾರತಿ ಅವರು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಮತದಾನದ ಬಗ್ಗೆ ಯುವಜನರು, ನಾಗರಿಕರು ಸೇರಿದಂತೆ ಎಲ್ಲರಿಗೂ ಅರಿವು ಮೂಡಿಸುವ ಮಹತ್ವದ ಕಾರ್ಯಕ್ರಮ ಇದಾಗಿದೆ. ಮತದಾನದ ಮೂಲಕ ಉತ್ತಮ, ಪ್ರಾಮಾಣಿಕ ಅಭ್ಯರ್ಥಿಯನ್ನು ಆಯ್ಕೆ ಮಾಡಿದರೆ ಸೌಲಭ್ಯಗಳು ಜನಸಾಮಾನ್ಯರನ್ನು ತಲುಪಲಿವೆ. ಮತದಾರರು ಯಾವುದೇ ಹಣ, ಆಮಿಷಕ್ಕೆ ಒಳಗಾಗದೇ ನಿರ್ಭೀತಿಯಿಂದ ಮತ ಚಲಾಯಿಸಬೇಕು. ಪ್ರಜಾಪ್ರಭುತ್ವಕ್ಕೆ ಬಲ ತುಂಬಬೇಕು ಎಂದರು. ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾವಿಧಿ ಬೋಧಿಸಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಬೃಹತ್ ಪ್ರಜಾಪ್ರಭುತ್ವ ರಾಷ್ಟ್ರವಾಗಿರುವ ಭಾರತದಲ್ಲಿ ಪ್ರತಿಯೊಬ್ಬರಿಗೂ ಮತದಾನ ಹಕ್ಕು ದೊರೆತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ. 18 ವರ್ಷ ತುಂಬಿದ ಯುವ ಮತದಾರರು ಈ ಬಾರಿ ಮೊದಲ ಮತ ಚಲಾಯಿಸಲಿದ್ದು, ಇದು ಅವರ ಜೀವನದ ಪ್ರಮುಖ ಕ್ಷಣವಾಗಲಿದೆ. ಮತದಾನದ ಮೂಲಕ ನವಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರು ಬದ್ಧರಾಗಬೇಕು ಎಂದರು. ರಾಷ್ಟ್ರೀಯ ಮತದಾರರ ದಿನವನ್ನು ಅರ್ಥಪೂರ್ಣವಾಗಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು, ಯುವಕರು, ನಾಗರಿಕರು, ವಿಶೇಷಚೇತನರು, ಲಿಂಗತ್ವ ಅಲ್ಪಸಂಖ್ಯಾತರು, ಮತಗಟ್ಟೆ ಅಧಿಕಾರಿಗಳನ್ನೊಳಗೊಂಡಂತೆ ಎಲ್ಲರನ್ನು ಒಂದೆಡೆ ಸೇರಿಸಿ ಹಬ್ಬದ ಮಾದರಿಯಲ್ಲಿ ಆಚರಿಸಲಾಗುತ್ತಿದೆ. ಮತದಾನ ಪ್ರಮಾಣ ಕಡಿಮೆಯಾಗಿರುವ ಜಿಲ್ಲೆಯ ಮತಗಟ್ಟೆಗಳಲ್ಲಿ ಜಾಗೃತಿ ಮೂಡಿಸಿ ಮತದಾನದ ಹೆಚ್ಚಳಕ್ಕೆ ಎಲ್ಲರೂ ಸಕ್ರಿಯರಾಗಬೇಕು. ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿ ನೇತೃತ್ವದಲ್ಲಿ ಎಲ್ಲರೂ ಸೇರಿ ಒಂದು ತಂಡವಾಗಿ ಮತದಾನದ ಪ್ರಗತಿಗಾಗಿ ಕೆಲಸ ಮಾಡೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ವಿಶೇಷ ಉಪನ್ಯಾಸ ನೀಡಿದ ಡಯಡ್‌ನ ಹಿರಿಯ ಉಪನ್ಯಾಸಕರಾದ ಯು.ಆರ್. ಲಿಂಗರಾಜೇ ಅರಸ್ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದಲ್ಲಿ ದೇಶದ ಪ್ರತಿಯೊಬ್ಬರಿಗೂ ಮತದಾನದ ಹಕ್ಕುಗಳನ್ನು ನೀಡಿದ್ದಾರೆ. ಮಾನವ ಹಕ್ಕುಗಳ ರಕ್ಷಣೆಗಾಗಿ, ಪ್ರಗತಿಪರ, ಸುಶಿಕ್ಷಿತ, ಸದೃಢ ಸಮಾಜ ನಿರ್ಮಾಣ ಹಾಗೂ ಎಲ್ಲರೂ ಸರ್ವತಂತ್ರ ಸ್ವತಂತ್ರವಗಿ ಬದುಕಲು ಮತದಾನದ ಅರಿವು ಎಲ್ಲರಿಗೂ ಅವಶ್ಯವಾಗಿದೆ ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ಶ್ರೀಧರ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮತದಾರರ ಜಾಗೃತಿಗಾಗಿ ಭಾರತ ಚುನಾವಣಾ ಆಯೋಗ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಸಿದ್ದಪಡಿಸಿರುವ ಜಿಲ್ಲೆಯ ಜಾನಪದ ಕಲೆ, ಸಂಸ್ಕೃತಿಯೊಂದಿಗೆ ಮತದಾನದ ಮಹತ್ವವನ್ನು ಸಾರುವ ಕಿರುಚಿತ್ರಗಳನ್ನು ಪ್ರಸಾರ ಮಾಡಲಾಯಿತು.

# ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇಂದಿನಿಂದ ಫೆಬ್ರವರಿ 13ರವರೆಗೆ ಹಮ್ಮಿಕೊಂಡಿರುವ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನಕ್ಕೆ ಇಂದು ಚಾಲನೆ ನೀಡಲಾಯಿತು.

ನಗರದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಅಭಿಯಾನಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಕುಷ್ಠರೋಗದ ವಿರುದ್ದ ಜಾಗೃತಿ ಮೂಡಿಸುವ ಪೋಸ್ಟರ್ ಅನ್ನು ಬಿಡುಗಡೆ ಮಾಡಿದರು. ಕುಷ್ಠರೋಗದ ವಿರುದ್ದ ಹೋರಾಡುವ ಪ್ರತಿಜ್ಞಾವಿಧಿಯನ್ನು ಜಿಲ್ಲಾ ಪಂಚಾಯತ್ ಸಿಇಒ ಅವರು ಬೋಧಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಜನವರಿ 30ರಂದು ಕುಷ್ಠರೋಗ ನಿರ್ಮೂಲನಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಕುಷ್ಠರೋಗದ ವಿರುದ್ದ ಹೋರಾಡಿ ಇದರ ಕಳಂಕವನ್ನು ಕೊನೆಗೊಳಿಸಿ ಘನತೆಯನ್ನು ಎತ್ತಿ ಹಿಡಿಯಿರಿ ಎಂಬುದು ಈ ಸಾಲಿನ ಘೋಷವಾಕ್ಯವಾಗಿದೆ. ಕುಷ್ಠರೋಗ ನಿರ್ಮೂಲನೆಗೆ ಜಾಗೃತಿ ಉಂಟುಮಾಡುವ ಅಭಿಯಾನ ಯಶಸ್ವಿಗೊಳಿಸಬೇಕು ಎಂದರು.



ಕುಷ್ಠರೋಗ ಸಂಬಂಧಿ ಚಿಹ್ನೆಗಳು ಕಂಡುಬಂದಲ್ಲಿ ತಕ್ಷಣವೇ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷಿಸಿಕೊಳ್ಳಲು ಸಲಹೆ ನೀಡಬೇಕು. ಎಲ್ಲಾ ಆಸ್ಪತ್ರೆಗಳಲ್ಲಿ ಪರೀಕ್ಷೆ ಮತ್ತು ಚಿಕಿತ್ಸೆ ಉಚಿತವಾಗಿ ಲಭ್ಯವಿದ್ದು, ಈ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡಬೇಕು. ವಿಶೇಷವಾಗಿ ಗ್ರಾಮೀಣ ಭಾಗಗಳಲ್ಲಿ ಹೆಚ್ಚು ಅರಿವು ಮೂಡಿಸಬೇಕೆಂದು ಜಿ.ಪಂ ಸಿಇಒ ಅವರು ತಿಳಿಸಿದರು.

ಕುಷ್ಠರೋಗದ ಹೊಸ ಪ್ರಕರಣಗಳು ಮತ್ತು ಚಿಕಿತ್ಸೆ ಪೂರ್ಣಗೊಳಿಸಿದ ಪ್ರಕರಣಗಳ ವಿವರವನ್ನು ಪರಿಶೀಲಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಕುಷ್ಠರೋಗ ಬಗೆಗಿನ ತಪ್ಪು ಕಲ್ಪನೆಗಳನ್ನು ಜನರಲ್ಲಿ ಹೋಗಲಾಡಿಸಬೇಕಿದೆ. ಕುಷ್ಠರೋಗ ಸಂಪೂರ್ಣವಾಗಿ ಗುಣಪಡಿಸಬಹುದಾಗಿದ್ದು ಆರಂಭದಲ್ಲಿಯೇ ರೋಗ ಪತ್ತೆಹಚ್ಚಿ ಚಿಕಿತ್ಸೆ ನೀಡುವುದರಿಂದ ಮುಂದೆ ಆಗಬಹುದಾದ ತೊಂದರೆಗಳನ್ನು ತಪ್ಪಿಸಬಹುದು. ಅಭಿಯಾನದ ವೇಳೆ ಇಂತಹ ಮಹತ್ವದ ಮಾಹಿತಿಗಳನ್ನು ನೀಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಚಂದ್ರಶೇಖರ್, ಆರ್.ಸಿ.ಹೆಚ್. ಅಧಿಕಾರಿ ಡಾ. ಮಂಜುನಾಥ್, ಜಿಲ್ಲಾಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ. ರವಿಕುಮಾರ್, ತಾಲೂಕು ಆರೋಗ್ಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಇತರೆ ಅಧಿಕಾರಿಗಳು ಈ ಸಂದರ್ಭದಲ್ಲಿ ಇದ್ದರು.

# ಸಂಜೆ ಟಿಪ್ಸ್

## ಗೋದ್ರೇಜ್ ಗ್ರೂಪ್ ಡಿಜಿಟಲ್ ಅಭಿಯಾನ

ಗಣರಾಜ್ಯೋತ್ಸವ ಸಂಭ್ರಮದಲ್ಲಿ ಗೋದ್ರೇಜ್ ಗ್ರೂಪ್ ಒಂದು ಪರಿವರ್ತಿತ ರಾಷ್ಟ್ರದ ಪ್ರಯಾಣವನ್ನು ಬಿಂಬಿಸುವ ಡಿಜಿಟಲ್ ಅಭಿಯಾನವನ್ನು ಪ್ರಾರಂಭಿಸಲು ಹೆಮ್ಮೆಪಡುತ್ತದೆ. ಅಧಿಕೃತ ಥೀಮ್, "#HeereJaisaMazboot" (ಅಭಿವೃದ್ಧಿ ಹೊಂದಿದ ಭಾರತ) ನೊಂದಿಗೆ ಸಂಯೋಜಿಸಲ್ಪಟ್ಟ ಈ ಅಭಿಯಾನವು ವಜ್ರ ಮಹೋತ್ಸವವನ್ನು ರೂಪಿಸಿದ ಭಾರತದ ಸಾಮಾನ್ಯ ನಾಗರಿಕರ ಮೇಲೆ ಬೆಳಕು ಚೆಲ್ಲುತ್ತದೆ. ಅರ್ಥಪೂರ್ಣವಾದ ವೀಡಿಯೊ ನಿರೂಪಣೆಯ ಮೂಲಕ ಈ ಅಭಿಯಾನವು ನಮ್ಮ ರಾಷ್ಟ್ರವನ್ನು ರೂಪಕ ವಜ್ರವಾಗಿ ಬದಲಾಗುವುದಕ್ಕೆ ಕಾರಣವಾದ ಒತ್ತಡಗಳು, ಪಟ್ಟುಬಿಡದ ಕಠಿಣ ಪರಿಶ್ರಮ ಮತ್ತು ಅಚಲ ದೃಷ್ಟಿಯನ್ನು ಗುರುತಿಸುತ್ತದೆ. ರೈತರಿಂದ - ವಾಣಿಜ್ಯೋದ್ಯಮಿಗಳು, ವೈದ್ಯರಿಂದ - ಸೈನಿಕರು, ಕ್ರೀಡಾಪಟುಗಳಿಂದ ? ಕಲಾವಿದರುಹೀಗೆ ವಿವಿಧ ಹಿನ್ನೆಲೆಗಳು ಮತ್ತು ವಯೋಮಾನದವರ ದೈನಂದಿನ ಕಥೆಗಳನ್ನು ಈ ಅಭಿಯಾನವು ಗುರುತಿಸುತ್ತಿದೆ.ಇವರು ಭಾರತದ ಬೆಳವಣಿಗೆ ಮತ್ತು ವೈಭವಕ್ಕೆ ನೀಡಿರುವ ಕೊಡುಗೆಯನ್ನುಈ ಅಭಿಯಾನ ನೆನೆಯುತ್ತದೆ. #HeereJaisaMazboot(ಹೀರೆ ಜೈಸಾ ಮಜ್ಬೂತ್)'', ಕ್ರಿಯೇಟಿವ್ಲ್ಯಾಂಡ್ ಏಷ್ಯಾದ ಸಹಯೋಗದೊಂದಿಗೆ ಗೋದ್ರೇಜ್ ಗ್ರೂಪ್ನಿಂದ ಪರಿಕಲ್ಪನೆ ಮತ್ತು ಕಾರ್ಯಗತಗೊಳಿಸಲಾಗಿದೆ. ಇದು ರಾಷ್ಟ್ರದ ವಿಜಯಗಳು ಮತ್ತು ಹೋರಾಟಗಳಿಗೆ ಒಂದು ಹೃತ್ಪೂರ್ವಕ ಧ್ವನಿಯಾಗಿದೆ. ಇದು ಏಕತೆ ಮತ್ತು ಪ್ರಗತಿಯ ಮನೋಭಾವವನ್ನು ಒಳಗೊಂಡಿದೆ. ಈ ಅಭಿಯಾನವು ಗೋದ್ರೇಜ್ ಗ್ರೂಪ್ನ ''ರಾಷ್ಟ್ರೀಯ ಹೆಮ್ಮೆ''ಯ ಪ್ರಜ್ಞೆಯನ್ನು ಬೆಳೆಸುವ ಬದ್ಧತೆಗೆ ಸಾಕ್ಷಿಯಾಗಿದೆ ಮತ್ತು ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಪ್ರತಿಯೊಬ್ಬ ವ್ಯಕ್ತಿಯ ಪಾತ್ರದ ಮೇಲೆ ಬೆಳಕು ಚೆಲ್ಲುತ್ತದೆ.ಗೋದ್ರೇಜ್ ಇಂಡಸ್ಟ್ರೀಸ್ನ ಕಾರ್ಯನಿರ್ವಾಹಕ ನಿರ್ದೇಶಕಿ ಮತ್ತು ಮುಖ್ಯ ಬ್ರಾಂಡ್ ಅಧಿಕಾರಿ ತಾನ್ಯಾ ದುಬಾಶ್, ಈ ಅಭಿಯಾನದ ಮಹತ್ವವನ್ನು ವಿವರಿಸುತ್ತಾ, ನಾವು 75 ನೇ ಗಣರಾಜ್ಯೋತ್ಸವವನ್ನು ಆಚರಿಸುತ್ತಿರುವಾಗಎಷ್ಟೇ ಒತ್ತಡ ಇದ್ದರೂ ತಡೆದುಕೊಳ್ಳುವವಜ್ರ ದಂತೆಗಟ್ಟಿಯಾದ ನಮ್ಮ ರಾಷ್ಟ್ರದ ಸ್ಥಿತಿಸ್ಥಾಪಕತ್ವ ಗುರುತಿಸುತ್ತೇವೆ ಮತ್ತು ಈ ಬಗ್ಗೆ ಹೆಮ್ಮೆ ಪಡುತ್ತೇವೆ.

## ನುಗ್ಗೆಸೊಪ್ಪಿನಪಲ್ಯ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1. ನುಗ್ಗೆ ಸೊಪ್ಪು - 2 ಬೌಲ್(ದೊಡ್ಡದು) 2. ತೊಗರಿ ಬೇಳೆ - ಅರ್ಧ ಬೌಲ್ 3. ಈರುಳ್ಳಿ - 2 4. ತೆಂಗಿನ ತುರಿ - 3/4 ಕಪ್ 5. ಬೆಳ್ಳುಳ್ಳಿ - 3 ರಿಂದ 4 6. ಉಪ್ಪು - ರುಚಿಗೆ ತಕ್ಕಷ್ಟು 7. ಎಣ್ಣೆ - 3 ರಿಂದ 4 ಚಮಚ 8. ಸಾಸಿವೆ - ಅರ್ಧ ಚಮಚ 9. ಒಣಮೆಣಸಿನ ಕಾಯಿ - 2.

### ಮಾಡುವ ವಿಧಾನ

ಮೊದಲಿಗೆ ನುಗ್ಗೆ ಸೊಪ್ಪನ್ನು ಬಿಡಿಸಿಟ್ಟಿಕೊಳ್ಳಬೇಕು. ಆದಷ್ಟು ಕಡ್ಡಿಯಿಂದ ಎಲೆಗಳನ್ನು ಬೇರ್ಪಡಿಸಿಕೊಳ್ಳಿ. ಬಳಿಕ ಸೊಪ್ಪನ್ನು ತೊಳೆದು, ಒಂದು ದೊಡ್ಡ ಬೌಲಿಗೆ ಅರ್ಧ ಬೌಲ್ ತೊಗರಿಬೇಳೆ ಮತ್ತು 3 ಲೋಟ ನೀರು ಹಾಕಿ ಬೇಯಿಸಿ. ಬೇಳೆ ಒಂದು ಕುದಿ ಬಂದಾಗ ಬಿಡಿಸಿಕೊಂಡಿದ್ದ ಬೆಳ್ಳುಳ್ಳಿಯನ್ನು ಹಾಕಿರಿ. ಬೇಳೆ ಸಂಪೂರ್ಣವಾಗಿ ಬೆಂದಮೇಲೆ ನುಗ್ಗೆ ಸೊಪ್ಪು ಹಾಕಿ(ಬೇಯಿಸುವಾಗ ತಟ್ಟೆ ಮುಚ್ಚಬಾರದು) ಈಗ ರುಚಿಗೆ ತಕ್ಕಷ್ಟು ಉಪ್ಪು ಹಾಕಿ 10 ನಿಮಿಷ ಬೇಯಿಸಿರಿ.(ನೀರು ಕಡಿಮೆಯಾದರೆ ಬಿಸಿ ನೀರು ಹಾಕಿ) ಸೊಪ್ಪು ಬೆಂದ ಬಳಿಕ ನೀರು ಮತ್ತು ಸೊಪ್ಪು ಎರಡನ್ನೂ ಬೇರೆ ಬೇರೆಯಾಗುವಂತೆ ಸೋಸಿಕೊಳ್ಳಿ. ಒಗ್ಗರಣೆಗೆಒಂದು ಬಾಣಲೆಗೆ ಎಣ್ಣೆ ಹಾಕಿ ಬಿಸಿಯಾದ ಮೇಲೆ ಸಾಸಿವೆ, ಒಣ ಮೆಣಸಿನ ಕಾಯಿ, ಸಣ್ಣಗೆ ಕತ್ತರಿಸಿದ್ದ ಈರುಳ್ಳಿ ಹಾಕಿ ಫ್ರೈ ಮಾಡಿ. ಈರುಳ್ಳಿ ಫ್ರೈ ಆದ ಮೇಲೆ, ತೆಂಗಿನ ತುರಿ, ಸೋಸಿಕೊಂಡಿದ್ದ ಸೊಪ್ಪನ್ನು ಹಾಕಿ ಚೆನ್ನಾಗಿ ಫ್ರೈ ಮಾಡಿದರೆ ರುಚಿರುಚಿಯಾದ ನುಗ್ಗೆ ಸೊಪ್ಪಿನ ಪಲ್ಯ ಸವಿಯಲು ಸಿದ್ಧ.

## ಫೈಟರ್ ಮೆಚ್ಚಿಕೊಂಡ ಪಿ.ವಿ.ಸಿಂಧು



ಹೃತಿಕ್ ರೋಷನ್ ಮತ್ತು ದೀಪಿಕಾ ಪಡುಕೋಣೆ ಮೊದಲ ಬಾರಿಗೆ ತೆರೆ ಹಂಚಿಕೊಂಡ ಬಾಲಿವುಡ್ ಚಿತ್ರ 'ಫೈಟರ್' ಬಾಕ್ಸ್ ಆಫೀಸ್ನಲ್ಲಿ ಸದ್ದು ಮಾಡುತ್ತಿದೆ. ಗಣರಾಜ್ಯೋತ್ಸವದ ನಿಮಿತ್ತ ಜನವರಿ 25ರಂದು ತೆರೆಕಂಡ ಈ ಚಿತ್ರಕ್ಕೆ ಉತ್ತಮ ಪ್ರತಿಕ್ರಿಯೆ ಲಭ್ಯವಾಗುತ್ತಿದೆ.

ಚಿತ್ರ ನೋಡೊದ ಪ್ರತಿಯೊಬ್ಬರೂ ಮೆಚ್ಚಿಗೆಯ ಮಾತುಗಳನ್ನಾಡುತ್ತಿದ್ದಾರೆ. ಇದೀಗ ಖ್ಯಾತ ಬ್ಯಾಡ್ಮಿಂಟನ್ ತಾರೆ ಪಿ.ವಿ.ಸಿಂಧು ಚಿತ್ರವನ್ನು ಮೆಚ್ಚಿ ಪೋಸ್ಟ್ ಹಂಚಿಕೊಂಡಿದ್ದಾರೆ.

ಇನ್ಸ್ಟಾಗ್ರಾಮ್ ಸ್ಟೋರಿ ಹಂಚಿಕೊಂಡಿರುವ ಪಿ.ವಿ.ಸಿಂಧು ಚಿತ್ರವನ್ನು, ಚಿತ್ರತಂಡವನ್ನು ಶ್ಲಾಘಿಸಿದ್ದಾರೆ. ಅದರಲ್ಲೂ ಹೃತಿಕ್ ರೋಷನ್, ದೀಪಿಕಾ ಪಡುಕೋಣೆ ಮತ್ತು ಅನಿಲ್ ಕಪೂರ್ ಅಭಿನಯವನ್ನು ಕೊಂಡಾಡಿದ್ದಾರೆ. ಯಾವ ರೀತಿ ಸಿನಿಮಾ ತಮ್ಮನ್ನು ಕಾಡಿತು ಎನ್ನುವುದರ ಬಗ್ಗೆ ತಿಳಿಸಿದ್ದಾರೆ. ಫೈಟರ್ ಅದ್ಭುತ ಸಿನಿಮಾ. ಹೃತಿಕ್ ರೋಷನ್ ಮತ್ತು ದೀಪಿಕಾ ಪಡುಕೋಣೆ ಅತ್ಯುತ್ತಮವಾಗಿ ನಟಿಸಿದ್ದಾರೆ. ಅನಿಕ್ ಕಪೂರ್ ಅವರ ನಟನೆ ವರ್ಣಾತೀತ?? ಎಂದು ಬರೆದುಕೊಂಡಿದ್ದಾರೆ. ಈ ಪೋಸ್ಟ್ ಅನ್ನು ಶೇರ್ ಮಾಡಿದ ದೀಪಿಕಾ ಪಡುಕೋಣೆ ಧನ್ಯವಾದ ತಿಳಿಸಿದ್ದಾರೆ. ಸಿದ್ಧಾರ್ಥ್ ಆನಂದ್ ನಿರ್ದೇಶನದ ಈ ಚಿತ್ರದಲ್ಲಿ ಭಾರತೀಯ ವಾಯುಸೇನೆಯ ಮೈ ನವಿರೇಳಿಸುವ ಸಾಹಸ ಕಥೆಯ ಚಿತ್ರಣ ಇದೆ. ವೈಮಾನಿಕ ಫೈಟಿಂಗ್ ಸಿನಿಮಾದ ಹೈಲೈಟ್. ಜತೆಗೆ ಇಲ್ಲಿ ತೀವ್ರವಾದ ಭಾವುಕತೆ ಇದೆ. ಕರುಳು ಹಿಂಡುವ ದೃಶ್ಯಗಳು ಇವೆ. ಸೈನಿಕರ ಕುಟುಂಬಗಳ ನೋವಿನ ಕಥೆ ಇದೆ. ಪಾಕಿಸ್ತಾನದ ಭಯೋತ್ಪಾದಕ ಸಂಸ್ಥೆಗಳು ನಡೆಸುವ ಕ್ರೌರ್ಯಗಳು ಇದೆ. ಎಲ್ಲಕ್ಕಿಂತ ಹೆಚ್ಚಾಗಿ ಹೆಜ್ಜೆ ಹೆಜ್ಜೆಗೂ ಭಾರತೀಯ ಸೈನಿಕರ ತ್ಯಾಗ, ಬಲಿದಾನಗಳ ಹೂರಣ ಇದೆ. ಒಟ್ಟಿನಲ್ಲಿ ದೇಶಪ್ರೇಮ ಉಕ್ಕಿಸುವ ಅಂಶ ಧಾರಾಳವಾಗಿ ಇದೆ. ಈ ಕಾರಣಕ್ಕಾಗಿಯೇ ಅನೇಕರು ಮೆಚ್ಚುಗೆ ಸೂಚಿಸಿದ್ದಾರೆ.

ಫೈಟರ್ ಈಗಾಗಲೇ ಜಾಗತಿಕವಾಗಿ 200 ಕೋಟಿ ರೂ. ಕ್ಲಬ್ ಸೇರಿದೆ. ತೆರೆಕಂಡ ಮೂರು ದಿನಗಳಲ್ಲಿ 100 ಕೋಟಿ ರೂ.ಗಿಂತ ಹೆಚ್ಚಿನ ಕಲೆಕ್ಷನ್ ಮಾಡಿದ್ದ ಈ ಸಿನಿಮಾ ಇದೀಗ ಭರ್ಜರಿ ಪ್ರದರ್ಶನ ಮುಂದುವರಿಸಿದೆ. ಭಾರತದಲ್ಲಿ ಸುಮಾರು 140 ಕೋಟಿ ರೂ. ಮತ್ತು ವಿಶ್ವಾದ್ಯಂತ 61 ಕೋಟಿ ರೂ. ಬಾಚಿಕೊಂಡಿದೆ. ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ ಸಾಲು ಸಾಲು ರಜೆ ಇದ್ದಿದ್ದು ಚಿತ್ರಕ್ಕೆ ಪ್ಲಸ್ ಆಗಿದೆ. ಅಲ್ಲದೆ ಬೇರೆ ಯಾವ ದೊಡ್ಡ ಚಿತ್ರಗಳು ತೆರೆ ಕಾಣದಿರುವುದು ಕೂಡ ಕಲೆಕ್ಷನ್ ಮೇಲೆ ಪರಿಣಾಮ ಬೀರಿದೆ.




## ವಿಟಮಿನ್ ಡಿ ಕೊರತೆಗೆ

### ಹೆಲ್ತ್ ಟಿಪ್ಸ್




ಕಳೆದ 500 ವರ್ಷಗಳಿಂದ ಪ್ರಪಂಚದಾದ್ಯಂತ ಜನರಲ್ಲಿ ವಿಟಮಿನ್ ಡಿ ಕೊರತೆಗೆ ಮುಖ್ಯ ಕಾರಣ ವಲಸೆ. ಇದು ಹೇಗೆ ಎಂಬ ಪ್ರಶ್ನೆ ಏಳುವುದು ಸಹಜ. ಬಿಸಿಲು ಹೆಚ್ಚಾಗ್ತಿದ್ದಂತೆ ಅಥವಾ ಬಿಸಿಲು ಹೆಚ್ಚಿರುವ ಪ್ರದೇಶದಿಂದ ಜನರು ತಣ್ಣನೆಯ ಪ್ರದೇಶಕ್ಕೆ ವಲಸೆ ಬರ್ತಿದ್ದಾರೆ. ಸ್ವಲ್ಪ ಬಿಸಿಲು ಹೆಚ್ಚಾಗ್ತಿದ್ದಂತೆ ಜನರು ಊರು ಬಿಡ್ತಾರೆ. ಶೀತ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆ ಕಾಡುವುದು ಸಾಮಾನ್ಯ. ವಿಟಮಿನ್ ಡಿ ಕೊರತೆಯಿಂದ ಕೊರೊನಾ, ಹೃದ್ರೋಗ, ಮಧುಮೇಹ, ಒತ್ತಡ ಮತ್ತು ಕೆಲವು ರೀತಿಯ ಕ್ಯಾನ್ಸರ್ ಕಾಡುತ್ತದೆ. ಶೀತ ಪ್ರದೇಶಗಳಲ್ಲಿ ವಾಸಿಸುವ ಕೆಲವರು ಈ ಕೊರತೆಯಿಂದ ರಕ್ಷಣೆ ಪಡೆಯಲು ಸಮುದ್ರ ತೀರಕ್ಕೆ ಬರ್ತಾರೆ.

ದಕ್ಷಿಣ ಡೆನ್ಮಾರ್ಕ್ ವಿಶ್ವವಿದ್ಯಾಲಯ ಮತ್ತು ಕೋಪನ್ ಹ್ಯಾಗನ್ ವಿಶ್ವವಿದ್ಯಾಲಯದ ಸಂಶೋಧಕರು ಒಟ್ಟಾಗಿ ಸಂಶೋಧನೆ ನಡೆಸಿದ್ದಾರೆ. ಕಳೆದ 500 ವರ್ಷಗಳಲ್ಲಿ ಜನರು ದಕ್ಷಿಣ ಪ್ರದೇಶಗಳಿಂದ ಉತ್ತರದ ಪ್ರದೇಶಗಳ ಕಡೆಗೆ ವಲಸೆ ಬಂದಿದ್ದಾರೆ. ನೇರಳಾತೀತ ಕಿರಣಗಳ ಪರಿಣಾಮ ಹೆಚ್ಚಿರುವ ಸ್ಥಳಗಳನ್ನು ಬಿಡುವ ಜನರು ಈ ಕಿರಣಗಳ ಪ್ರಭಾವ ಕಡಿಮೆಯಿರುವ ಪ್ರದೇಶದಲ್ಲಿ ವಾಸ ಶುರು ಮಾಡಿದ್ದಾರೆ. ಅಂಥವರಲ್ಲಿ ವಿಟಮಿನ್ ಡಿ ಕೊರತೆ ಎದ್ದು ಕಾಣ್ತಿದೆ.

ಸೂರ್ಯನ ಬೆಳಕಿಗೆ ಬಂದಾಗ ವಿಟಮಿನ್ ಡಿ ಹೆಚ್ಚಾಗಿ ನಮ್ಮ ದೇಹದಲ್ಲಿ ಉತ್ಪತ್ತಿಯಾಗುತ್ತದೆ.

ಇದಕ್ಕಾಗಿ ನಾವು ನಮ್ಮ ದೇಹವನ್ನು ಸಾಕಷ್ಟು ಸಮಯದವರೆಗೆ ಸೂರ್ಯನ ಬೆಳಕಿನಲ್ಲಿ ಇಡಬೇಕು. ಆದರೆ ಜನರು ಎಸಿ ಕಾರು, ಮನೆ, ಕಚೇರಿಯಲ್ಲಿ ತಿಂಗಳುಗಟ್ಟಲೆ ಕೆಲಸ ಮಾಡುತ್ತಾರೆ. ಸೂರ್ಯನ ಕಿರಣಕ್ಕೆ ಮೈ ಒಡ್ಡುವುದಿಲ್ಲ. ಇದರ ಫಲಿತಾಂಶವೆಂದರೆ ವಿಟಮಿನ್ ಡಿ ಕೊರತೆ. ವಿಟಮಿನ್ ಡಿ ಮಾತ್ರೆ ಸೇವನೆಯಿಂದ ತಾತ್ಕಾಲಿಕ ಪರಿಹಾರ ಸಿಗುತ್ತದೆ. ಆದ್ರೆ ಅಪಾಯ ಕಡಿಮೆಯಾಗುವುದಿಲ್ಲ.

## ನೈಸರ್ಗಿಕ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್

ಚಳಿಗಾಲದಲ್ಲಿ ಒಣ ಚರ್ಮವು ಹೆಚ್ಚಿನವರು ಎದುರಿಸುವ ಸಾಮಾನ್ಯ ಚರ್ಮದ ಸಮಸ್ಯೆಯಾಗಿದೆ. ಅನೇಕ ಜನರು ಈ ಚರ್ಮದ ಶುಷ್ಕತೆಯನ್ನು ತಮ್ಮ ಕೈ ಮತ್ತು ಕಾಲುಗಳ ಮೇಲೆ ಮಾತ್ರವಲ್ಲದೆ ತಮ್ಮ ಮುಖದ ಮೇಲೂ ಅನುಭವಿಸುತ್ತಾರೆ. ಕೈ ಕಾಲುಗಳ ಒಣ ತ್ವಚೆಯನ್ನು ಹೋಗಲಾಡಿಸಲು ಮಾರುಕಟ್ಟೆಯಲ್ಲಿ ಸಿಗುವ ಹಲವು ರೀತಿಯ ಕ್ರೀಮ್ಗಳ ಬಳಸುತ್ತಾರೆ. ಒಣ ಚರ್ಮವನ್ನು ಗುಣಪಡಿಸಲು ಮತ್ತು ಚರ್ಮದ ಸೌಂದರ್ಯವನ್ನು ಸುಧಾರಿಸಲು ಕೆಲವು ನೈಸರ್ಗಿಕ ಫೇಸ್ ಪ್ಯಾಕ್ಗಳನ್ನು ಬಳಸಿ ಒಣ ತ್ವಚೆಯಿಂದ ಬಳಲುತ್ತಿರುವವರು ಈ ಫೇಸ್ ಪ್ಯಾಕ್ ಗಳನ್ನು ಬಳಸಿದರೆ ಉತ್ತಮ ಫಲಿತಾಂಶ ಪಡೆಯಬಹುದು. ಮೊದಲು ಮಿಕ್ಸರ್ ಜಾರ್ ನಲ್ಲಿ ತುರಿದ ತೆಂಗಿನಕಾಯಿಯನ್ನು ತೆಗೆದುಕೊಂಡು ಸ್ವಲ್ಪ ನೀರು ಹಾಕಿ ಚೆನ್ನಾಗಿ ರುಬ್ಬಿ, ಅದನ್ನು ಸೋಸಿಕೊಂಡು ದಪ್ಪ ತೆಂಗಿನ ಹಾಲನ್ನು ತೆಗೆದುಕೊಳ್ಳಿ. ನಂತರ ತೆಂಗಿನ ಹಾಲನ್ನು ಮುಖಕ್ಕೆ ಮಾತ್ರವಲ್ಲ, ಕೈ ಕಾಲುಗಳಿಗೂ ಹಚ್ಚಿ 20 ನಿಮಿಷ ನೆನೆಯಲು ಬಿಡಿ. ನಂತರ ತಣ್ಣೀರಿನಿಂದ ತೊಳೆಯಿರಿ. ಇದನ್ನು ಪ್ರತಿನಿತ್ಯ ಬಳಸಿದರೆ ನಿಮ್ಮ ತ್ವಚೆಯು ಶುಷ್ಕತೆ ಇಲ್ಲದೆ ರೇಷ್ಮೆಯಂತೆ ನಯವಾಗಿರುತ್ತದೆ.



## ವಸುಧೈವ ಕುಟುಂಬಕಮ್ ಕಲಾ ಕಾರ್ಯಾಗಾರ



ನವನೀತ್ ಎಜುಕೇಶನ್ ಅಡಿಯಲ್ಲಿ ಯುವಾ ಸ್ಟೇಷನರಿ ಇತ್ತೀಚೆಗೆ ಜನವರಿ 16 ರಿಂದ 18 ರ ವರೆಗೆ ಬೆಂಗಳೂರಿನಲ್ಲಿ ಕಲಾ ಕಾರ್ಯಾಗಾರಗಳ ಸರಣಿಯನ್ನು ನಡೆಸಿಕೊಟ್ಟಿದೆ. ವಿಲ್ ಇಂಡಿಯಾ ಚೇಂಜ್ ಫೌಂಡೇಶನ್ನ ಎನ್ಜಿಒ ಸಹಭಾಗಿತ್ವದಲ್ಲಿ ನಡೆಸಿದ ಕಾರ್ಯಾಗಾರವು ''ವಸುಧೈವ ಕುಟುಂಬಕಂ'' ಎಂಬ ತತ್ವವನ್ನು ಆಧರಿಸಿತ್ತು. ಯುವ ಪ್ರತಿಭೆಗಳಲ್ಲಿ 'ಏಕ ವಿಶ್ವ, ಏಕ ಕುಟುಂಬ'' ಎಂಬ ಪರಿಕಲ್ಪನೆಯನ್ನು ಮೂಡಿಸುವುದಕ್ಕೆ ಈ ಪರಿಕಲ್ಪನೆಯನ್ನು ರೂಪಿಸಲಾಗಿತ್ತು. ಗಣಪತಿ ಎಸ್ ಹೆಗಡೆ ಅವರ ಮಾರ್ಗದರ್ಶನದಲ್ಲಿ ಬೆಂಗಳೂರು ನಗರದಲ್ಲಿ ಐದು ಆಕರ್ಷಕ ಕಾರ್ಯಾಗಾರಗಳನ್ನು ನಡೆಸಲಾಗಿತ್ತು ಮತ್ತು ಸುಮಾರು 2300 ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದ್ದರು. ಜನಪ್ರಿಯ ಸಂಸ್ಥೆಗಳಾದ ಶ್ರೀ ಜ್ಞಾನಾಕ್ಷಿ ವಿದ್ಯಾನಿಕೇತನ, ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರ, ಶ್ರೀ ಭಾರತಿ ವಿದ್ಯಾಲಯ, ಹೋಲಿ ಚೈಲ್ಡ್ ಕಾನ್ವೆಂಟ್, ನ್ಯೂ ಮಿಲೆನಿಯಂ ಸ್ಕೂಲ್, ಅಶ್ವಿನಿ ಪ್ರೈಮರಿ ಮತ್ತು ಪ್ರೌಢ ಶಾಲೆ, ವಿಸ್ಡಮ್ ಇಂಟರ್ನ್ಯಾಷನಲ್ ಸ್ಕೂಲ್, ಬಿಇಟಿ ಕಾನ್ವೆಂಟ್ ಸ್ಕೂಲ್ ಮತ್ತು ಜೆಎಸ್ಎಸ್ ಪಬ್ಲಿಕ್ ಸ್ಕೂಲ್ ಈ ಕಾರ್ಯಕ್ರಮಕ್ಕೆ ಸಹಭಾಗಿತ್ವ ನೀಡಿದ್ದವು.

ಕಾರ್ಯಾಗಾರವು ಕಲಾತ್ಮಕ ಕೌಶಲವನ್ನು ಪೋಷಿಸುವುದಷ್ಟೇ ಅಲ್ಲ, ವೈವಿಧ್ಯತೆ ಮತ್ತು ಏಕತೆಯ ಮೌಲ್ಯಗಳನ್ನು ತಿಳಿಸಿಕೊಡುವುದು ಮತ್ತು ವಿಶ್ವವು ಒಂದು ದೊಡ್ಡ ಕುಟುಂಬ ಎಂಬ ತತ್ವವನ್ನು ಅವರ ಮನಸಲ್ಲಿ ಮೂಡಿಸುವ ಧ್ಯೇಯವನ್ನು ಹೊಂದಿದೆ. ಈ ಕಾರ್ಯಾಗಾರದ ಯಶಸ್ಸಿನಲ್ಲಿ ವಿಲ್ ಇಂಡಿಯಾ ಚೇಂಜ್ ಫೌಂಡೇಶನ್ ಪ್ರಮುಖ ಪಾತ್ರ ವಹಿಸಿದ್ದು, ಸಮಗ್ರ ಶಿಕ್ಷಣ ಮತ್ತು ಸಮುದಾಯ ಕಲ್ಯಾಣಕ್ಕೆ ಸಂಬಂಧಿಸಿದಂತೆ ಯುವಾ ಸ್ಟೇಷನರಿಯ ಬದ್ಧತೆಗೆ ಪೂರಕವಾಗಿದೆ.ಯುವಾ ಮುಖ್ಯ ಕಾರ್ಯತಂತ್ರ ಅಧಿಕಾರಿ ಅಭಿಜಿತ್ ಸನ್ಯಾಲ್, ಯುವ ಸಂಸ್ಥೆಯ ಧ್ಯೇಯದ ಬಗ್ಗೆ ಮಾತನಾಡಿ ''ಈ ಕಾರ್ಯಾಗಾರಗಳ ಮೂಲಕ, ಕಲೆ ಮತ್ತು ಕ್ರಾಫ್ಟ್ನಲ್ಲಿ ಹೊಸ ಪರಿಕಲ್ಪನೆಗಳು ಮತ್ತು ತಂತ್ರಗಳನ್ನು ಕಲಿಯಲು ವಿದ್ಯಾರ್ಥಿಗಳಿಗೆ ಅವಕಾಶವಾಗುತ್ತದೆ.

ಯುವಾ ಹಿರಿಯ ಬ್ರ್ಯಾಂಡ್ ಮ್ಯಾನೇಜರ್ ಅಮರ್ ಕುಲಕರ್ಣಿ ಈ ಕಾರ್ಯಾಗಾರದ ಬಗ್ಗೆ ಅತ್ಯಂತ ಉತ್ಸಾಹದಿಂದ ಮಾತನಾಡಿದ್ದಾರೆ. ''ಮಕ್ಕಳಿಗೆ ಸರಿಯಾದ ಮಾರ್ಗದರ್ಶನ ಸಿಕ್ಕರೆ ಅವರು ತಮ್ಮ ಕಲ್ಪನೆಗೆ ಹೊಸ ರೂಪ ನೀಡಬಲ್ಲರು. ಈ ಕಾರ್ಯಾಗಾರವು ಕಲಾತ್ಮಕ ಪ್ರತಿಭೆಯನ್ನು ಪ್ರದರ್ಶಿಸಿದ್ದಷ್ಟೇ ಅಲ್ಲ, ಮಕ್ಕಳಲ್ಲಿ ಒಗ್ಗಟ್ಟಿನ ಭಾವವನ್ನೂ ಇದು ಪೋಷಿಸಿದೆ.

ಉನ್ನತ ಗುಣಮಟ್ಟದ ಕಲಾತ್ಮಕ ಪ್ರತಿಭೆಯನ್ನು ಪ್ರದರ್ಶಿಸಿದಂತೆಯೇ, ತಮ್ಮ ಅಭಿವ್ಯಕ್ತಿಗಾಗಿ ಮತ್ತು ಮಾನವೀಯತೆಯನ್ನು ಅನಾವರಣಗಳಿಸಲು ಯುವಕರಿಗೆ ಹೊಸ ವೇದಿಕೆಯನ್ನು ಒದಗಿಸಿದೆ.ಯುವ ಸ್ಟೇಷನರಿ ಮತ್ತು ವಿಲ್ ಇಂಡಿಯಾ ಚೇಂಜ್ ಫೌಂಡೇಶನ್ ಮಧ್ಯದ ಈ ಸಹಭಾಗಿತ್ವ ಮತ್ತು ಗಣ್ಯ ಮಾರ್ಗದರ್ಶಕರುಹಾಗೂ ಅದ್ಭುತ ಪ್ರತಿಭೆಗಳು ಎಲ್ಲವೂ ಕೂಡ ಕ್ರಿಯಾಶೀಲತೆ, ಶಿಕ್ಷಣ ಮತ್ತು ಸಮುದಾಯದ ತೊಡಗಿಸಿಕೊಳ್ಳುವಿಕೆಯನ್ನುಪೋಷಿಸುವುದಕ್ಕೆ ಬದ್ಧವಾಗಿವೆ. ಯುವ ಮನಸುಗಳು ಮತ್ತು ಹೃದಯಗಳಲ್ಲಿ ದೀರ್ಘಕಾಲದವರೆಗೆ ಪ್ರಭಾವವನ್ನುಉಂಟುಮಾಡುವ ಕ್ರಿಯಾಶೀಲತೆ, ಶಿಕ್ಷಣ ಮತ್ತು ಸಮುದಾಯದ ತೊಡಗಿಸಿಕೊಳ್ಳುವಿಕೆಯನ್ನು ಪ್ರೋತ್ಸಾಹಿಸಲು ಯುವ ಸ್ಟೇಷನರಿ ಬದ್ಧವಾಗಿದೆ.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಮಾತಿಗೆ ಮರುಳಾಗದಿರಿ, ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ಹಿರಿಯರ ಮಾತನ್ನು ಗೌರವಿಸಿ.

**ವೃಷಭ:** ಆಸ್ತಿ ವಿಚಾರದಲ್ಲಿ ಭಿನ್ನಾಭಿಪ್ರಾಯ, ವಿವಾಹ ಯೋಗ, ದಾಂಪತ್ಯದಲ್ಲಿ ಪ್ರೀತಿ, ಧಾನ ಧರ್ಮದಲ್ಲಿ ಆಸಕ್ತಿ, ದೂರಾಲೋಚನೆ.

**ಮಿಥುನ:** ವಿದ್ಯಾಭ್ಯಾಸದಲ್ಲಿ ಮುನ್ನಡೆ, ಸ್ತ್ರೀಯರಿಗೆ ಶುಭ, ಹಿತ ಶತ್ರುಗಳಿಂದ ತೊಂದರೆ, ಅನಿರೀಕ್ಷಿತ ದೂರ ಪ್ರಯಾಣ.

**ಕಟಕ:** ಅನಾವಶ್ಯಕ ದ್ವೇಷ ಸಾಧನೆ, ಮಿತ್ರರಲ್ಲಿ ಕಲಹ, ಮಕ್ಕಳಿಂದ ನೋವು, ಅಲ್ಪ ಕಾರ್ಯಸಿದ್ಧಿ, ಉದ್ಯೋಗದಲ್ಲಿ ಕಿರಿಕಿರಿ.

**ಸಿಂಹ:** ಯತ್ನ ಕಾರ್ಯಗಳಲ್ಲಿ ಜಯ, ಅತಿಯಾದ ಒತ್ತಡ, ಇಲ್ಲಸಲ್ಲದ ಅಪವಾದ, ಯೋಚಿಸಿ ನಿರ್ಧಾರ ತೆಗೆದುಕೊಳ್ಳಿ.

**ಕನ್ಯಾ:** ಮನೆಯಲ್ಲಿ ಶುಭಕಾರ್ಯ, ಶ್ರಮಕ್ಕೆ ತಕ್ಕ ಫಲ, ಉತ್ತಮ ಬುದ್ಧಿಶಕ್ತಿ, ಹಣಕಾಸಿನ ಪರಿಸ್ಥಿತಿ ಉತ್ತಮ.

**ತುಲಾ:** ಪ್ರಿಯ ಜನರ ಭೇಟಿ, ಬುದ್ಧಿವಂತಿಕೆಯಿಂದ ಕೆಲಸ ಮಾಡುವಿರಿ, ಮನಶಾಂತಿ, ವಾಹನ ಖರೀದಿ.

**ವೃಶ್ಚಿಕ:** ಮಾನಸಿಕ ಒತ್ತಡ, ವಿರೋಧಿಗಳಿಂದ ತೊಂದರೆ, ಅಕಾಲ ಭೋಜನ, ಆಲಸ್ಯ ಮನೋಭಾವ.

**ಧನಸ್ಸು:** ಹಣಕಾಸಿನ ಸಮಸ್ಯೆ, ಕುಟುಂಬದಲ್ಲಿ ಪ್ರೀತಿ, ಅಧಿಕಾರಿಗಳಿಂದ ಪ್ರಶಂಸೆ, ಅನಿರೀಕ್ಷಿತ ಲಾಭ, ತೀರ್ಥಯಾತ್ರೆ.

**ಮಕರ:** ಸ್ಥಳ ಬದಲಾವಣೆ, ಮಾತಿನ ಚಕಮಕಿ, ಋಣಭಾದೆ, ಮನಕ್ಲೇಶ, ಸುಖ ಭೋಜನ, ವಿವಾದಗಳಿಗೆ ಆಸ್ಪದ ಕೊಡಬೇಡಿ.

**ಕುಂಭ:** ಅನಾವಶ್ಯಕ ಖರ್ಚು, ದೂರ ಪ್ರಯಾಣ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಅಪರಿಚಿತರಿಂದ ಸಹಾಯ.

**ಮೀನ:** ಎಷ್ಟು ಹಣ ಬಂದರೂ ಉಳಿಯುವುದಿಲ್ಲ, ಮಹಿಳೆಯರಿಗೆ ಶುಭ, ನೌಕರಿಯಲ್ಲಿ ಹೆಚ್ಚಿನ ಜವಾಬ್ದಾರಿ

## ಇಂಟರ್‌ನ್ಯಾಷನಲ್ ಜೀಬ್ರಾ ದಿನ



ಅಂತರರಾಷ್ಟ್ರೀಯ ಜೀಬ್ರಾ ದಿನವನ್ನು ಪ್ರತಿ ವರ್ಷ ಜನವರಿ 31 ರಂದು ಆಚರಿಸಲಾಗುತ್ತದೆ. ಅವುಗಳ ನೈಸರ್ಗಿಕ ಪರಿಸರವು ಕ್ಷೀಣಿಸುತ್ತಿದೆ ಮತ್ತು ಮಾನವ ಅಭಿವೃದ್ಧಿಯನ್ನು ಹೆಚ್ಚಿಸುತ್ತಿದೆ, ಈ ಸೌಮ್ಯ ಪ್ರಾಣಿಗಳು ಅಪಾಯದಲ್ಲಿದೆ. ಆವಾಸಸ್ಥಾನಗಳು ಬೆದರಿಕೆಗೆ ಒಳಗಾದಾಗ, ಪ್ರಾಣಿಗಳು ಸಹ ಅಳಿವಿನಂಚಿನಲ್ಲಿವೆ. ಅಂತರಾಷ್ಟ್ರೀಯ ಜೀಬ್ರಾ ದಿನವು ಜಾಗೃತಿ ಮೂಡಿಸುವುದು ಮತ್ತು ಈ ಪ್ರಾಣಿಯ ಸಂರಕ್ಷಣೆಯಲ್ಲಿ ಸಹಾಯ ಮಾಡಲು ನೀವು ಏನು ಮಾಡಬಹುದು. ಜೀಬ್ರಾಗಳು ಹೆಚ್ಚಾಗಿ ಆಫ್ರಿಕನ್ ಖಂಡದಲ್ಲಿ, ಕೀನ್ಯಾ ಮತ್ತು ಇಥಿಯೋಪಿಯಾದ ಅರೆ ಮರುಭೂಮಿ ಪ್ರದೇಶಗಳಲ್ಲಿ ಮತ್ತು ನಮೀಬಿಯಾ, ಅಂಗೋಲಾ ಮತ್ತು ದಕ್ಷಿಣ ಆಫ್ರಿಕಾದ ಗುಡ್ಡಗಾಡು ಪ್ರದೇಶಗಳಲ್ಲಿ ಕಂಡುಬರುತ್ತವೆ. ಜೀಬ್ರಾವನ್ನು ಅದರ ವಿಶಿಷ್ಟವಾದ ಕಪ್ಪು ಮತ್ತು ಬಿಳಿ ಪಟ್ಟೆಗಳಿಂದ ನೀವು ಸುಲಭವಾಗಿ ಗುರುತಿಸಬಹುದು.

ಅಂತರರಾಷ್ಟ್ರೀಯ ಜೀಬ್ರಾ ದಿನವನ್ನು ಸ್ಮಿತ್ಸೋನಿಯನ್ ರಾಷ್ಟ್ರೀಯ ಮೃಗಾಲಯ ಮತ್ತು ಕನ್ಸರ್ವೇಶನ್ ಬಯಾಲಜಿ ಇನ್ಸ್ಟಿಟ್ಯೂಟ್ನಂತಹ ಸಂರಕ್ಷಣಾ ಸಂಸ್ಥೆಗಳ ಒಕ್ಕೂಟದಿಂದ ಸ್ಥಾಪಿಸಲಾಗಿದೆ. ಅಂತರಾಷ್ಟ್ರೀಯ ಜೀಬ್ರಾ ದಿನವು ಜೀಬ್ರಾಗಳ ಜೀವನ ಪರಿಸ್ಥಿತಿಗಳ ಬಗ್ಗೆ ಜಾಗೃತಿ ಮೂಡಿಸಲು ಸಹಾಯ ಮಾಡುತ್ತದೆ ಮತ್ತು ಅವುಗಳ ಸಂಖ್ಯೆಯನ್ನು ಮತ್ತಷ್ಟು ಕುಸಿತದಿಂದ ಹೇಗೆ ರಕ್ಷಿಸಬಹುದು.

ಪ್ರಸ್ತುತ, ಕಾಡಿನಲ್ಲಿ ಮೂರು ವಿಧದ ಜೀಬ್ರಾಗಳನ್ನು ಕಾಣಬಹುದು. ಅವುಗಳೆಂದರೆ ಗ್ರೆವಿಯ ಜೀಬ್ರಾ, ಬಯಲಿನ ಜೀಬ್ರಾ ಮತ್ತು ಪರ್ವತ ಜೀಬ್ರಾ. ಗ್ರೆವಿಯ ಜೀಬ್ರಾ, ಕೀನ್ಯಾದ ಉತ್ತರ ಪ್ರದೇಶಗಳಲ್ಲಿ ಕಂಡುಬರುತ್ತದೆ ಮತ್ತು ಅತ್ಯಂತ ವಿರಳವಾಗಿದ್ದರೂ, ಅವು ಅಳಿವಿನಂಚಿನಲ್ಲಿರುವ ಪ್ರಭೇದವಾಗಿದ್ದು, ಅದರ ಒಟ್ಟು ಜನಸಂಖ್ಯೆಯ 54% ಕ್ಕಿಂತ ಹೆಚ್ಚು ನಷ್ಟವನ್ನು ಅನುಭವಿಸಿವೆ. ಕಳೆದ ಮೂರು ದಶಕಗಳಲ್ಲಿ ಜೀಬ್ರಾಗಳು ತಮ್ಮ ಚರ್ಮಕ್ಕಾಗಿ ಬೇಟೆಯಾಡಿದ ಕಾರಣ ನಷ್ಟವು ವೇಗವಾಗಿ ಸಂಭವಿಸಿದೆ. ಜೀಬ್ರಾಗಳು ಆಫ್ರಿಕನ್ ಸವನ್ನಾದಲ್ಲಿ ಕಂಡುಬರುತ್ತವೆ, ಅಲ್ಲಿ ಅವುಗಳ ನೈಸರ್ಗಿಕ ಆವಾಸಸ್ಥಾನವನ್ನು ಚೆನ್ನಾಗಿ ಸಂರಕ್ಷಿಸಲಾಗಿದೆ ಮತ್ತು ಎಲ್ಲಾ ಜೀಬ್ರಾಗಳು ಕಣ್ಮರೆಯಾಗುವ ಅಪಾಯದಲ್ಲಿಲ್ಲ. ಜೀಬ್ರಾದ ಇತರ ಎರಡು ಉಪಜಾತಿಗಳು ಗ್ರೆವಿಯ ಜೀಬ್ರಾಗಿಂತ ಕಡಿಮೆ ಅಪಾಯದಲ್ಲಿದೆ.

# ಬಾಬಾ ರಾಮದೇವ್ ಮೇಣದ ಪ್ರತಿಮೆ ಅನಾವರಣ

**ನವದೆಹಲಿ:** ನ್ಯೂಯಾರ್ಕ್ ನ ಮೇಡಮ್ ಟುಸ್ಸಾಡ್ಸ್ ಮ್ಯೂಸಿಯಂನಲ್ಲಿ ಯೋಗ ಗುರು ರಾಮದೇವ್ ಅವರ ಮೇಣದ ಪ್ರತಿಮೆಯನ್ನು ಮಂಗಳವಾರ ಅನಾವರಣಗೊಳಿಸಲಾಗಿದೆ.

ವೃಕ್ಷಾಸನ ಭಂಗಿಯಲ್ಲಿ ಕೆತ್ತಲಾದ ಮೇಣದ ಪ್ರತಿಮೆಯನ್ನು ಮ್ಯಾನ್ಹ್ಯಾಟನ್ನ ಟೈಮ್ಸ್ ಸ್ಕ್ವೇರ್ನಲ್ಲಿರುವ ಮೇಣದ ವಸ್ತುಸಂಗ್ರಹಾಲಯದಲ್ಲಿ ಇರಿಸಲಾಗುವುದು. ದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಯೋಗ ಶಿಕ್ಷಕರ ಉಪಸ್ಥಿತಿಯಲ್ಲಿ ಮೇಣದ ಪ್ರತಿಮೆಯನ್ನು ಅನಾವರಣಗೊಳಿಸಲಾಯಿತು. ಮ್ಯೂಸಿಯಂನಲ್ಲಿ ತಮ್ಮ ಮೇಣದ ಪ್ರತಿಮೆಯನ್ನು ಹೊಂದಿರುವ ಮೊದಲ ಭಾರತೀಯ ಸನ್ಯಾಸಿ ರಾಮದೇವ್. ಈ ಘಟನೆಯ ವೀಡಿಯೊವನ್ನು ರಾಮದೇವ್ ಅವರ ಅಧಿಕೃತ ಹ್ಯಾಂಡಲ್ ಎಕ್ಸ್ನಲ್ಲಿ ಪೋಸ್ಟ್ ಮಾಡಿದೆ.



# ಪಾಕಿಸ್ತಾನದಲ್ಲೂ ನೋಟ್ ಬ್ಯಾನ್

**ಪಾಕಿಸ್ತಾನ:** ಕರೆನ್ಸಿ ಕೊರತೆ ಮತ್ತು ನಕಲಿ ನೋಟುಗಳ ಭೀತಿಯನ್ನು ಎದುರಿಸಲು ಸುಧಾರಿತ ತಂತ್ರಜ್ಞಾನವನ್ನು ಹೊಂದಿರುವ ಹೊಸ ಕರೆನ್ಸಿ ನೋಟುಗಳನ್ನು ಪರಿಚಯಿಸುವುದಾಗಿ ಪಾಕಿಸ್ತಾನದ ಕೇಂದ್ರ ಬ್ಯಾಂಕ್ ಘೋಷಿಸಿದೆ.

ಸ್ಟೇಟ್ ಬ್ಯಾಂಕ್ ಆಫ್ ಪಾಕಿಸ್ತಾನದ ಗವರ್ನರ್ ಜಮೀಲ್ ಅಹ್ಮದ್ ಅವರು ಹೊಸ ನೋಟುಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಸುಧಾರಿತ ಭದ್ರತಾ ತಂತ್ರಜ್ಞಾನವನ್ನು ಹೊಂದಿರುತ್ತವೆ ಎಂದು ಹೇಳಿದರು. ಪಾಕಿಸ್ತಾನದ ಕರೆನ್ಸಿಯನ್ನು ಆಧುನೀಕರಿಸಲು, ವಿಶೇಷ ಭದ್ರತಾ ಸಂಖ್ಯೆಗಳು ಮತ್ತು ವಿನ್ಯಾಸಗಳನ್ನು ಅದರಲ್ಲಿ ಬಳಸಲಾಗುವುದು ಸ್ಟೇಟ್ ಬ್ಯಾಂಕ್ ಆಫ್ ಪಾಕಿಸ್ತಾನದ ಗವರ್ನರ್ ಮಾಹಿತಿ ನೀಡಿದರು. ಈ ಹಿಂದೆ ಇತರ ಕೆಲವು ದೇಶಗಳಲ್ಲಿ ಕಂಡುಬಂದಂತೆ ಪಾಕಿಸ್ತಾನದಲ್ಲಿ ಸಾರ್ವಜನಿಕ ಮಟ್ಟದಲ್ಲಿ ಯಾವುದೇ ಸಮಸ್ಯೆಯಾಗದಂತೆ ಕ್ರಮೇಣ ಬದಲಾವಣೆ ಮಾಡಲಾಗುವುದು ಎಂದು ಅಹ್ಮದ್ ಹೇಳಿದರು. ಆದಾಗ್ಯೂ, ನಕಲಿ ಕರೆನ್ಸಿ ಮತ್ತು ಕಪ್ಪು ಹಣದ ಮಾರುಕಟ್ಟೆಯ ಭೀತಿಯನ್ನು ನಿಭಾಯಿಸಲು 5,000 ಅಥವಾ ಅದಕ್ಕಿಂತ ಹೆಚ್ಚಿನ ಮುಖಬೆಲೆಯ ನೋಟುಗಳ ಅಮಾನ್ಯೀಕರಣವನ್ನು ಏಕಕಾಲದಲ್ಲಿ ಕೈಗೊಳ್ಳಬಹುದೇ ಎಂದು ಕೆಲವು ಹಣಕಾಸು ತಜ್ಞರು ಆಶ್ಚರ್ಯ ವ್ಯಕ್ತಪಡಿಸಿದ್ದಾರೆ.



# ಜಾರ್ಖಂಡ್ ಸಿಎಂ ಹೇಮಂತ್ ಸೊರೇನ್ ಪ್ರತ್ಯಕ್ಷ

**ಜಾರ್ಖಂಡ್:** ದೆಹಲಿ ನಿವಾಸಕ್ಕೆ ಇ.ಡಿ ಅಧಿಕಾರಿಗಳು ದಾಳಿ ನಡೆಸಿದ ಬೆನ್ನಲ್ಲೇ ತಲೆಮರೆಸಿಕೊಂಡಿದ್ದ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್, ಇದೀಗ ಏಕಾಏಕಿ ರಾಂಚಿಯಲ್ಲಿರುವ ತಮ್ಮ ಅಧಿಕೃತ ನಿವಾಸದಲ್ಲಿ ಕಾಣಿಸಿಕೊಂಡಿದ್ದಾರೆ. ಈ ವೇಳೆ ಆಡಳಿತಾರೂಢ ಮೈತ್ರಿಕೂಟದ ಶಾಸಕರನ್ನು ಭೇಟಿ ಮಾಡಿದ ಅವರು,



ಸದ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಿದ್ದಾರೆ. ಜಮೀನು ಅಕ್ರಮದ ಹಗರಣವೊಂದಕ್ಕೆ ಸಂಬಂಧಿಸಿದಂತೆ ಹಣದ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆ ನಡೆಸಲು ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ಸೊರೇನ್ ಅವರ ದೆಹಲಿ ನಿವಾಸಕ್ಕೆ ಸೋಮವಾರ ಭೇಟಿ ನೀಡಿದ್ದರು. ಅಲ್ಲಿ ಸುಮಾರು 13 ತಾಸು ಶೋಧ ನಡೆಸಿದ ಅಧಿಕಾರಿಗಳು 36 ಲಕ್ಷ ನಗದು, ಎಸ್ಯುವಿ ಕಾರು ವಶಕ್ಕೆ ಪಡೆದಿದ್ದಾರೆ.

# 11 ರಾಜ್ಯಸಭಾ ಸಂಸದರ ಅಮಾನತು ವಾಪಸ್

**ನವದೆಹಲಿ:** 11 ರಾಜ್ಯಸಭಾ ಸದಸ್ಯರ ವಿರುದ್ಧದ ಅಮಾನತು ಆದೇಶನವನ್ನು ಇಂದು ( ಜನವರಿ 30 ) ಹಿಂಪಡೆಯಲಾಗಿದೆ. ನಾಳೆಯಿಂದ ಬಜೆಟ್ ಅಧಿವೇಶನ ಆರಂಭವಾಗಲಿದ್ದು, ಅಮಾನತು ವಾಪಸ್ ಬಗ್ಗೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ. ಸಂಬಂಧಪಟ್ಟ ವಿಶೇಷಾಧಿಕಾರ ಸಮಿತಿಯೊಂದಿಗೆ ಮಾತನಾಡಿ ಅಮಾನತುಗೊಂಡಿರುವ ಎಲ್ಲಾ ಸಂಸದರ ಅಮಾನತನ್ನು ಹಿಂಪಡೆಯುವಂತೆ ಮನವಿ ಮಾಡಲಾಗಿದೆ ಎಂದು ಪ್ರಲ್ಹಾದ ಜೋಶಿ ಹೇಳಿಕೆ ನೀಡಿದ್ದಾರೆ. ಕಳೆದ ಡಿಸೆಂಬರ್ ತಿಂಗಳಿನಲ್ಲಿ ಸಂಸತ್ ಭವನದಲ್ಲಿ ಉಂಟಾಗಿದ್ದ ಭದ್ರತಾ ಲೋಪದ ಕುರಿತಾಗಿ ಗೃಹ ಸಚಿವ ಅಮಿತ್ ಶಾ ಹೇಳಿಕೆ ನೀಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದ ಒಟ್ಟು 146 ಸಂಸದರನ್ನು ಅಮಾನತುಗೊಳಿಸಲಾಗಿತ್ತು. ಈ ಪೈಕಿ 132 ಸಂಸದರನ್ನು ಚಳಿಗಾಲದ ಉಳಿದ ಅವಧಿವರೆಗೆ ಅಮಾನತುಗೊಳಿಸಲಾಗಿತ್ತು. ಉಳಿದ 14 ಸಂಸದರನ್ನು ( ರಾಜ್ಯಸಭೆಯ 11 ಹಾಗೂ ಲೋಕಸಭೆಯ 3 ಸಂಸದರು ) ಹಕ್ಕುಬಾಧ್ಯತಾ ಸಮಿತಿಗಳು ನಿರ್ಧರಿಸುವವರೆಗೆ ಅಮಾನತು ಮಾಡಲಾಗಿತ್ತು. ಈ ಪೈಕಿ ಮೂವರು ಲೋಕಸಭಾ ಸದಸ್ಯರ ಅಮಾನತನ್ನು ವಿಶೇಷಾಧಿಕಾರ ಸಮಿತಿಗಳು ಜನವರಿ 13ರಂದು ಹಿಂಪಡೆದಿತ್ತು. ಇಂದು 11 ರಾಜ್ಯಸಭಾ ಸದಸ್ಯರ ಅಮಾನತನ್ನು ಹಿಂಪಡೆಯಲಾಗಿದೆ.

# ಬಿಹಾರಕ್ಕೆ ಕಾಲಿಟ್ಟ ಭಾರತ್ ಜೋಡೋ ನ್ಯಾಯ ಯಾತ್ರೆ



**ಪೂರ್ಣಿಯಾ:** ಕಾಂಗ್ರೆಸ್ ನ ಭಾರತ್ ಜೋಡೋ ನ್ಯಾಯ ಯಾತ್ರೆ ಇದೀಗ ಬಿಹಾರಕ್ಕೆ ಕಾಲಿಟ್ಟಿದ್ದು, ಜನರನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ ರೈತರು ತಮ್ಮ ಮೇಲೆ ವಿಶ್ವಾಸವಿಡುವಂತೆ ಕೇಳಿಕೊಂಡಿದ್ದಾರೆ. ಮೋದಿ ನೇತೃತ್ವದ ಸರ್ಕಾರ ರೈತರ ವಿಶ್ವಾಸವನ್ನು ಕಳೆದುಕೊಂಡಿದ್ದು, ಅವರ ಭಯವನ್ನು ಹೋಗಲಾಡಿಸುವಲ್ಲಿ ವಿಫಲವಾಗಿದೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ಮಾಡಿದ ರಾಹುಲ್ ಗಾಂಧಿ, ಕಾಂಗ್ರೆಸ್ಸಿಗೆ ಒಂದು ಅವಕಾಸ ಕೊಟ್ಟರೆ ಆ ವಿಶ್ವಾಸವನ್ನು ಮತ್ತೆ ಗಳಿಸಲು ಪ್ರಯತ್ನಿಸುತ್ತೇವೆ ಎಂದು ವಿಶ್ವಾಸ ನೀಡಿದ್ದಾರೆ. ಅವರ ಈ ಹೇಳಿಕೆಗೆ ಜನ ಚಪ್ಪಾಳೆಯ ಮೂಲಕ ಸ್ಪಂದಿಸಿದ್ದು, ತಮ್ಮ ಹೇಳಿಕೆಗೆ ಇನ್ನಷ್ಟು ಬಲ ತುಂಬಲು ಕಾಂಗ್ರೆಸ್ ಸರ್ಕಾರದ ರೈತಪರ ಕೆಲಸಗಳ ಪಟ್ಟಿಯನ್ನು ಬಿಚ್ಚಿಟ್ಟ ರಾಹುಲ್, ಇದು ಕೇವಲ ಪೊಳ್ಳು ಭರವಸೆಯಲ್ಲ ಎಂಬುದಕ್ಕೆ ನಮ್ಮ ಹಿಂದಿನ ಕೆಲಸಗಳೇ ಸಾಕ್ಷಿ. ಛತ್ತೀಸ್ಗಢ ಮತ್ತು ರಾಜಸ್ಥಾನಗಳಲ್ಲಿ ರೈತರು ತಮ್ಮ ಬೆಳೆಗಳಿಗೆ ಉತ್ತಮ ಬೆಲೆ ಪಡೆದಿದ್ದಾರೆ ಎಂದರು.

# ಮಣಿಪುರದಲ್ಲಿ ಮತ್ತೆ ಹಿಂಸಾಚಾರ



**ಮಣಿಪುರ:** ಮಣಿಪುರದಲ್ಲಿ ಮತ್ತೆ ಹಿಂಸಾಚಾರ ಭುಗಿಲೆದ್ದಿದೆ. ಇಂಫಾಲ್ ಪೂರ್ವ ಮತ್ತು ಕಾಂಗ್ಪೋಕ್ಪಿ ಜಿಲ್ಲೆಗಳ ಪರಿಧಿಯ ಪ್ರದೇಶದಲ್ಲಿ ಗುಂಡಿನ ದಾಳಿಗೆ ಇಬ್ಬರು ಸಾವಿಗೀಡಾಗಿದ್ದಾರೆ. ವರದಿಗಳ ಪ್ರಕಾರ, ಕಾಂಗ್ಪೋಕ್ಪಿ ಮತ್ತು ಇಂಫಾಲ್ ಪಶ್ಚಿಮದ ಪಕ್ಕದ ಪ್ರದೇಶಗಳಾದ ಕೌಟ್ರುಕ್ನಲ್ಲಿ ಇಂದು ಮಧ್ಯಾಹ್ನ 2:30 ರ ಸುಮಾರಿಗೆ ಗುಂಡಿನ ದಾಳಿ ನಡೆದಿದೆ.ಘಟನೆಯ ಸಂದರ್ಭದಲ್ಲಿ ಅಪರಿಚಿತ ಶಸ್ತ್ರಸಜ್ಜಿತ ದುಷ್ಕರ್ಮಿಗಳು ಗ್ರಾಮದ ಸ್ವಯಂಸೇವಕರ ಮೇಲೆ ಗುಂಡು ಹಾರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಘಟನೆಯಲ್ಲಿ ಇಬ್ಬರು ಸಾವಿಗೀಡಾಗಿದ್ದಾರೆ ಎಂದು ವರದಿಯಾಗಿದೆ. ಮೃತರಿಬ್ಬರನ್ನು ನಾಂಗ್ತೊಂಬಮ್ ಮೈಕೆಲ್ (33) ಮತ್ತು ಮೈಸ್ನಮ್ ಖಬಾ (23) ಎಂದು ಗುರುತಿಸಲಾಗಿದೆ. ಇದೇ ವೇಳೆ ಘಟನೆಯಲ್ಲಿ ಇತರ ಮೂವರು ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ರಾಜ್ಯ ರಾಜಧಾನಿ ಇಂಫಾಲ್ನಲ್ಲಿರುವ RIMS ಆಸ್ಪತ್ರೆಗೆ ಕಳುಹಿಸಲಾಗಿದೆ.

# ಭಾರತದ ಆರ್ಥಿಕತೆಯು ಅತ್ಯಂತ ವೇಗವಾಗಿ ಬೆಳೆಯಲಿದೆ




**ನವದೆಹಲಿ:** ಮಧ್ಯಂತರ ಬಜೆಟ್ ಮಂಡಿಸುವ ಮೊದಲು, ಅಂತರರಾಷ್ಟ್ರೀಯ ಹಣಕಾಸು ನಿಧಿ 2024 ರಲ್ಲಿ ಭಾರತವು ಶೇಕಡಾ 6.5 ರ ದರದಲ್ಲಿ ಬೆಳೆಯುತ್ತದೆ ಎಂದು ಅಂದಾಜಿಸಿತ್ತು. ಐಎಂಎಫ್ ತನ್ನ ಅಂದಾಜನ್ನು 20 ಬೇಸಿಸ್ ಪಾಯಿಂಟ್ ಗಳಿಗೆ ಸುಧಾರಿಸಿದೆ. ಇಂದು ಐಎಂಎಫ್ ವಿಶ್ವ ಆರ್ಥಿಕ ಔಟ್ಲುಕ್ ವರದಿಯನ್ನು ಬಿಡುಗಡೆ ಮಾಡಿದೆ. 2025ರಲ್ಲೂ ಭಾರತದ ಜಿಡಿಪಿ ಶೇ.6.5ರಷ್ಟಾಗಲಿದೆ ಎಂದು ಐಎಂಎಫ್ ಅಂದಾಜಿಸಿದೆ. ಆದಾಗ್ಯೂ, ಇದು 2023 ರ ಅಂದಾಜು ಶೇಕಡಾ 6.7 ಕ್ಕಿಂತ ಕಡಿಮೆಯಾಗಿದೆ. 2023–24ರಲ್ಲಿ ಜಿಡಿಪಿ ಶೇ.7.3ರಷ್ಟಾಗಬಹುದು ಎಂಬುದು ಭಾರತ ಸರಕಾರದ ಸ್ವಂತ ಅಂದಾಜು.

ವರದಿಯ ಪ್ರಕಾರ, ಬಲವಾದ ದೇಶೀಯ ಬೇಡಿಕೆಯಿಂದಾಗಿ ಭಾರತವು 2024 ಮತ್ತು 2025 ರಲ್ಲಿ ಎರಡೂ ವರ್ಷಗಳಲ್ಲಿ ಶೇಕಡಾ 6.5 ರಷ್ಟು ಬೆಳೆಯುತ್ತದೆ. ಐಎಂಎಫ್ ತನ್ನ ಅಂದಾಜನ್ನು 0.20 ಬೇಸಿಸ್ ಪಾಯಿಂಟ್ಗಳಿಂದ ನವೀಕರಿಸಿದೆ. ಸೋಮವಾರ, ಜನವರಿ 29, 2024 ರಂದು, ಹಣಕಾಸು ಸಚಿವಾಲಯವು ಭಾರತೀಯ ಆರ್ಥಿಕತೆಯ ಬಗ್ಗೆ ವರದಿಯನ್ನು ಬಿಡುಗಡೆ ಮಾಡಿತು, 2023–24 ಸತತ ಮೂರನೇ ವರ್ಷವಾಗಿದ್ದು, ಭಾರತದ ಆರ್ಥಿಕ ಬೆಳವಣಿಗೆಯ ದರವು ಶೇಕಡಾ 7 ಕ್ಕಿಂತ ಹೆಚ್ಚಾಗಿದೆ.

# ನಿತೀಶ್ ಅಗತ್ಯವೇ ಇಲ್ಲ: ರಾಗಾ



**ಪೂರ್ನಿಯಾ:** ಇಂಡಿಯಾ ಒಕ್ಕೂಟಕ್ಕೆ ನಿತೀಶ್ ಕುಮಾರ್ ಅಗತ್ಯವೇ ಇಲ್ಲ ಎಂದು ಕಾಂಗ್ರೆಸ್ನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಹೇಳಿದ್ದಾರೆ. ಬಿಹಾರದ ಪೂರ್ನಿಯಾದಲ್ಲಿ ಭಾರತ ಜೋಡೋ ನ್ಯಾಯ ಯಾತ್ರೆ ಪ್ರಯುಕ್ತ ಮಂಗಳವಾರ ಆಯೋಜಿಸಲಾಗಿದ್ದ ರ್ಯಾಲಿಯಲ್ಲಿ ಅವರು ಮಾತನಾಡಿದ್ದಾರೆ. ಬಿಜೆಪಿ ಜತೆಗೆ ಭಾನುವಾರ ಮತ್ತೆ ಕೈಜೋಡಿಸಿ ಸರ್ಕಾರ ರಚಿಸಿದ ಬಳಿಕ ರಾಹುಲ್ ಗಾಂಧಿ ನೀಡಿದ ಮೊದಲ ಪ್ರತಿಕ್ರಿಯೆ ಇದಾಗಿದೆ. ಅವರು ಮೈತ್ರಿಕೂಟ ತೊರೆದ ಸಂದರ್ಭದಲ್ಲಿ ಕೊಂಚ ಆತಂಕ ಉಂಟಾದದ್ದು ಹೌದು. ಬಿಜೆಪಿ ಜತೆಗೆ ಮತ್ತೆ ಮೈತ್ರಿ ಮಾಡಿಕೊಂಡಿರುವ ಅವರ ವರ್ತನೆ ಹೊಸತೇನಲ್ಲ. ಬಿಹಾರದಲ್ಲಿ ಸಾಮಾಜಿಕ ನ್ಯಾಯ ನೀಡುವುದೇ ಮಹಾಮೈತ್ರಿಕೂಟದ ಉದ್ದೇಶ ಎಂದು ರಾಹುಲ್ ಗಾಂಧಿ ಘೋಷಿಸಿದ್ದಾರೆ. ರಾಜಭವನದಲ್ಲಿ ನಿತೀಶ್ ಕುಮಾರ್ ಅವರನ್ನು ಉದ್ದೇಶಿಸಿ ಮಾತನಾಡಿದ್ದ ರಾಜ್ಯಪಾಲರು ಬಲು ಬೇಗನೆ ಇಲ್ಲಿಗೆ ಬಂದಿದ್ದೀರಿ ಎಂದು ಪ್ರಶ್ನಿಸಿದ್ದರು ಎಂದು ಚಟಾಕಿ ಹಾರಿಸಿದರು ರಾಹುಲ್ ಗಾಂಧಿ. ದೇಶದ ಎಲ್ಲಾ ವ್ಯವಸ್ಥೆಗಳಲ್ಲಿ ದಲಿತರು ಮತ್ತು ಹಿಂದುಳಿದ ವರ್ಗದವರಿಗೆ ಇನ್ನೂ ಪ್ರಾತಿನಿಧ್ಯ ಸಿಕ್ಕಿಲ್ಲ. ಅದಕ್ಕಾಗಿಯೇ ಜಾತಿ ಆಧಾರಿತ ಜನಗಣತಿ ನಡೆಯಬೇಕು ಎಂದು ಪ್ರತಿಪಾದಿಸಿದ್ದಾರೆ. ಮಣಿಪುರ ಸ್ಥಿತಿಯನ್ನು ಉಲ್ಲೇಖಿಸಿದ ಅವರು, ಆ ರಾಜ್ಯದಲ್ಲಿ ನಾಗರಿಕ ಸಂಘರ್ಷ ಉಂಟಾದಂತೆ ಇದೆ ಎಂದರು.

# ಬಂಗಾಳದಲ್ಲಿ ಸಿಎಎ ಜಾರಿಗೆ ಬಿಡುವುದಿಲ್ಲ: ಬಂಗಾಳ ಸಿಎಂ ಮಮತಾ ಬ್ಯಾನರ್ಜಿ



**ಪಶ್ಚಿಮ ಬಂಗಾಳ:** 'ನಾನು ಬದುಕಿರುವವರೆಗೂ ಬಂಗಾಳದಲ್ಲಿ ಸಿಎಎ ಜಾರಿಗೆ ಬಿಡುವುದಿಲ್ಲ' ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಮಂಗಳವಾರ ಬಿಜೆಪಿಯನ್ನು ತರಾಟೆಗೆ ತೆಗೆದುಕೊಂಡ ಅವರು, ನನ್ನ ಜೀವಿತಾವಧಿಯಲ್ಲಿ ಪಶ್ಚಿಮ ಬಂಗಾಳದಲ್ಲಿ ಅದನ್ನು ಜಾರಿಗೆ ತರಲು ಎಂದಿಗೂ ಅವಕಾಶ ನೀಡುವುದಿಲ್ಲ ಎಂದು ಹೇಳಿದ್ದಾರೆ. ಉತ್ತರ ದಿನಾಜ್ಪುರ ಜಿಲ್ಲೆಯ ರಾಯಗಂಜ್ನಲ್ಲಿ ಸಾರ್ವಜನಿಕ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಬ್ಯಾನರ್ಜಿ, 'ಮುಂಬರುವ ಚುನಾವಣೆಗೆ ಮುನ್ನ ಬಿಜೆಪಿಯು ಪೌರತ್ವ (ತಿದ್ದುಪಡಿ) ಕಾಯ್ದೆ ಅಥವಾ ಸಿಎಎ ವಿಷಯವನ್ನು ಅವಕಾಶವಾದಿಯಾಗಿ ಎತ್ತಿದ. ಚುನಾವಣೆ ಸಂದರ್ಭಗಳಲ್ಲೇ ಬಿಜೆಪಿಗೆ ಇಂತಹವೆಲ್ಲಾ ಹೊಳೆಯುತ್ತದೆ. ಚುನಾವಣೆಗಳು ಸಮೀಪಿಸುತ್ತಿರುವಾಗ, ರಾಜಕೀಯ ಲಾಭ ಪಡೆಯಲು ಬಿಜೆಪಿ ಮತ್ತೆ ಸಿಎಎ ವಿಷಯವನ್ನು ಕೆದಕಿದೆ.ಆದರೆ ನಾನು ಬದುಕಿರುವವರೆಗೂ ಪಶ್ಚಿಮ ಬಂಗಾಳದಲ್ಲಿ ಅದರ ಅನುಷ್ಠಾನ ಮಾಡಲು ಬಿಡುವುದಿಲ್ಲ ಎಂದು ನಾನು ಸ್ಪಷ್ಟವಾಗಿ ಹೇಳುತ್ತೇನೆ ಎಂದು ಹೇಳಿದರು. ಒಂದು ವಾರದೊಳಗೆ ಸಿಎಎ ದೇಶಾದ್ಯಂತ ಜಾರಿಯಾಗಲಿದೆ ಎಂದು ಕೇಂದ್ರ ಸಚಿವ ಮತ್ತು ಬಿಜೆಪಿ ನಾಯಕ ಶಾಂತನು ಠಾಕೂರ್ ಅವರು ಇತ್ತೀಚೆಗೆ ಹೇಳಿಕೆ ನೀಡಿದ್ದರು. ಈ ಹೇಳಿಕೆ ಬೆನ್ನಲ್ಲೇ ಪಶ್ಚಿಮ ಬಂಗಾಳದಲ್ಲಿ ಇದರ ವಿರುದ್ಧ ವ್ಯಾಪಕ ಖಂಡನೆ ವ್ಯಕ್ತವಾಗುತ್ತಿದೆ.

# ಇನ್ಶುರೆನ್ಸ್‌ಗೆ ನಾಮಿನಿ ಮಾಡದ್ದಕ್ಕೆ ಮ್ಯಾಜಿಸ್ಟ್ರೇಟ್ ಪತ್ನಿಯನ್ನೇ ಕೊಂದ

ಭೋಪಾಲ್: ವ್ಯಕ್ತಿಯೊಬ್ಬ ತನ್ನ ಪತ್ನಿ ಬ್ಯಾಂಕ್ ಖಾತೆ ಹಾಗೂ ಇನ್ಶುರೆನ್ಸ್‌ಗೆ ತನ್ನನ್ನು ನಾಮಿನಿ ಮಾಡದ ಕಾರಣಕ್ಕೆ ಆಕೆಯನ್ನು ಹತ್ಯೆಗೈದ ಘಟನೆ ಮಧ್ಯಪ್ರದೇಶದ ಶಹಪುರದಲ್ಲಿ ನಡೆದಿದೆ.

ಡಿಂಡೋರಿ ಜಿಲ್ಲೆಯ ಶಹಪುರದ ಉಪವಿಭಾಗೀಯ ಮ್ಯಾಜಿಸ್ಟ್ರೇಟ್ ನಿಶಾ ನಾಪಿತ್ ಹತ್ಯೆಯಾದ ಮಹಿಳೆಯಾಗಿದ್ದಾರೆ. ಆಕೆಯ ಪತಿ ಮನೀಶ್ ಶರ್ಮಾ ಹತ್ಯೆಗೈದ ಆರೋಪಿಯಾಗಿದ್ದಾನೆ. ನಿರುದ್ಯೋಗಿಯಾಗಿದ್ದ ಮನೀಶ್ ಶರ್ಮಾ, ತನ್ನ ಪತ್ನಿಯ ಬಳಿ ಆಗಾಗ ಜಗಳ ಮಾಡುತ್ತಿದ್ದ ಎಂದು ತಿಳಿದುಬಂದಿದೆ. ಅಲ್ಲದೇ ಬ್ಯಾಂಕ್ ಖಾತೆ ಹಾಗೂ ಇನ್ಶುರೆನ್ಸ್‌ಗೆ ನಾಮಿನಿ ಮಾಡುವಂತೆ ಮಾನಸಿಕ ಹಾಗೂ ದೈಹಿಕ ಹಿಂಸೆ ನೀಡುತ್ತಿದ್ದ ಎಂದು ಆರೋಪಿಸಲಾಗಿದೆ. ಜ.28 ರಂದು ಸಹ ಇದೇ ವಿಚಾರಕ್ಕೆ ನಿಶಾ ನಾಪಿತ್ ಹಾಗೂ ಮನೀಶ್ ಶರ್ಮಾ ನಡುವೆ ಗಲಾಟೆಯಾಗಿದೆ. ಈ ವೇಳೆ ಮಹಿಳೆಯ ತಲೆಗೆ ಬಲವಾಗಿ ಹೊಡೆದಿದ್ದಾನೆ. ಇದರಿಂದ ಮಹಿಳೆ ಸಾವನ್ನಪ್ಪಿದ್ದಾರೆ. ಬಳಿಕ ರಕ್ತದ ಕಲೆಯಾಗಿದ್ದ ತಲೆದಿಂಬು ಹಾಗೂ ಬೆಡ್‌ಶೀಟ್‌ನ್ನು ವಾಷಿಂಗ್ ಮಷಿನ್‌ನಲ್ಲಿ ಹಾಕಿ ಮುಚ್ಚಿಟ್ಟಿದ್ದ ಎಂದು ತಿಳಿದು ಬಂದಿದೆ.

ನಿಶಾ ಅವರ ಸಹೋದರಿ ನಿಲಿಮಾ ನಾಪಿತ್ ಈ ಬಗ್ಗೆ ಪ್ರತಿಕ್ರಿಯಿಸಿದ್ದು, ನಿಶಾ ಮಲಗುವ ಕೋಣೆಯೊಳಗೆ ಹೋಗದಂತೆ ಮನೀಶ್ ತಡೆದಿದ್ದ. ಅಲ್ಲದೇ ನಿಶಾ ಅವರ ಬಳಿ ಹಣಕ್ಕಾಗಿ ಮನೀಶ್ ಪೀಡಿಸುತ್ತಿದ್ದ ಎಂದು ಆರೋಪಿಸಿದ್ದಾರೆ. ಪತ್ನಿಯನ್ನು ಹತ್ಯೆಗೈದ ಬಳಿಕ ಮನೀಶ್, ನಿಶಾ ಅವರಿಗೆ ಮೂತ್ರ ಪಿಂಡದ ಸಮಸ್ಯೆ ಇತ್ತು, ರಾತ್ರಿ ಔಷಧಿ ಸೇವಿಸಿ ಮಲಗಿದ್ದರು ಎಂದು ಕತೆ ಕಟ್ಟಿದ್ದ. ಬಳಿಕ ಬೆಳಗ್ಗೆ ಆಸ್ಪತ್ರೆಗೆ ಸಾಗಿಸಿದ್ದ ವೇಳೆ ವೈದ್ಯರು ಮೃತಪಟ್ಟಿದ್ದಾಗಿ ಘೋಷಿಸಿದ್ದರು. ಅಲ್ಲದೇ ಮೂಗು ಮತ್ತು ಬಾಯಿಯಲ್ಲಿ ರಕ್ತವನ್ನು ಗಮನಿಸಿದ್ದ ವೈದ್ಯರು, ಮರಣೋತ್ತರ ಪರೀಕ್ಷೆ ಬಳಿಕ ತಲೆಗೆ ಪೆಟ್ಟು ಬಿದ್ದಿರುವುದನ್ನು ಖಚಿತ ಪಡಿಸಿದ್ದರು. ಬಳಿಕ ಪೊಲೀಸರು ಮನೀಶ್ ಶರ್ಮಾನನ್ನು ವಿಚಾರಣೆಗೊಳಪಡಿಸಿದಾಗ ಕೊಲೆಯ ರಹಸ್ಯ ಬಯಲಾಗಿದೆ.

ಮ್ಯಾಟ್ರಿಮೋನಿಯಲ್ ಸೈಟ್‌ನಲ್ಲಿ ಭೇಟಿಯಾಗಿದ್ದ ನಿಶಾ ನಾಪಿತ್ ಮತ್ತು ಮನೀಶ್ ಶರ್ಮಾ ಅವರು 2020 ರಲ್ಲಿ ವಿವಾಹವಾಗಿದ್ದರು. ನಿಶಾ ಅವರ ಕುಟುಂಬ ಈ ಮದುವೆಯಲ್ಲಿ ಭಾಗಿಯಾಗಿರಲಿಲ್ಲ ಎಂದು ನಿಲಿಮಾ ನಾಪಿತ್ ತಿಳಿಸಿದ್ದಾರೆ.





# ಮಾಜಿ ಪ್ರಧಾನಿ ಇಮ್ರಾನ್ ಖಾನ್ ಪಕ್ಷದ ರ್ಯಾಲಿಯಲ್ಲಿ ಬಾಂಬ್ ಸ್ಫೋಟ

**ಪಾಕಿಸ್ತಾನ:** ಪಾಕಿಸ್ತಾನದ ಬಲೂಚಿಸ್ತಾನದ ಸಿಬಿಯಲ್ಲಿ ಇಂದು ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಕ್ಷದ ರ್ಯಾಲಿಯಲ್ಲಿ ಬಾಂಬ್ ಸ್ಫೋಟ ಸಂಭವಿಸಿದ್ದು, ಕನಿಷ್ಠ ನಾಲ್ಕು ಜನರು ಸಾವನ್ನಪ್ಪಿದ್ದಾರೆ ಮತ್ತು ಐವರು ಗಾಯಗೊಂಡಿದ್ದಾರೆ .

ಸಿಬಿಯ ಜಿಲ್ಲಾ ಪ್ರಧಾನ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಬಾಬರ್ ಅವರು ಗಾಯಗಳು ಮತ್ತು ಸಾವುನೋವುಗಳನ್ನು Dawn.com ದೃಢಪಡಿಸಿದ್ದಾರೆ. ಫೆಬ್ರವರಿ 8 ರಂದು ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಕೇವಲ ಒಂಬತ್ತು ದಿನಗಳ ಮೊದಲು ಈ ಘಟನೆ ನಡೆದಿದೆ. ಸಾಬಿಯಲ್ಲಿ ತೆಹ್ರೀಕ್–ಇ–ಇನ್ಸಾಫ್ ಚುನಾವಣಾ ರ್ಯಾಲಿಯಲ್ಲಿ ನಡೆದ ಬಾಂಬ್ ಸ್ಫೋಟವನ್ನು ಪಾಕಿಸ್ತಾನ್ ತೆಹ್ರೀಕ್–ಇ–ಇನ್ಸಾಫ್ ಬಲವಾಗಿ ಖಂಡಿಸಿದ್ದು, ಕಾರ್ಮಿಕರ ಹುತಾತ್ಮತೆಯ ಬಗ್ಗೆ ತೀವ್ರ ದುಃಖ ಮತ್ತು ದುಃಖವನ್ನು ವ್ಯಕ್ತಪಡಿಸುತ್ತೇನೆ. ತೆಹ್ರೀಕ್–ಇ–ಇನ್ಸಾಫ್ನ ಶಾಂತಿಯುತ ಚುನಾವಣಾ ರ್ಯಾಲಿಯ ಮೇಲಿನ ದಾಳಿಯು ಮೇಲ್ವಿಚಾರಣೆ ಮಾಡುವ ಪ್ರಾಂತೀಯ ಮತ್ತು ಫೆಡರಲ್ ಸರ್ಕಾರಗಳ ಕ್ರಿಮಿನಲ್ ವೈಫಲ್ಯವಾಗಿದೆ ಎಂದು ಪಿಟಿಐ ಎಕ್ಸ್ನಲ್ಲಿ ಪೋಸ್ಟ್ ಮಾಡಿದ ಸಂದೇಶದಲ್ಲಿ ತಿಳಿಸಿದೆ.



# ಜಿಯೋ ಬ್ರೈನ್ ಎಐ ಪ್ಲಾಟ್ ಫಾರ್ಮ್ ಆರಂಭಿಸಿದ ಜಿಯೋ ಪ್ಲಾಟ್ ಫಾರ್ಮ್ಸ್

**ನವದೆಹಲಿ:** ಜಿಯೋ ಪ್ಲಾಟ್ ಫಾರ್ಮ್ಸ್ ನಿಂದ ಕೃತಕ ಬುದ್ಧಿಮತ್ತೆ ಪ್ಲಾಟ್ ಫಾರ್ಮ್ ಜಿಯೋ ಬ್ರೈನ್ ಎಂಬುದನ್ನು ಸೃಷ್ಟಿ ಮಾಡಿದೆ. ಇದರಿಂದಾಗಿ ಟೆಲಿಕಾಂ ಆಪರೇಟರ್ ಆದ ಜಿಯೋದ ನೆಟ್ ವರ್ಕ್, ಎಂಟರ್ ಪ್ರೈಸ್ ನೆಟ್ ವರ್ಕ್, ಅಥವಾ ಯಾವುದೇ ಉದ್ಯಮ ನಿರ್ದಿಷ್ಟ ಮಾಹಿತಿ ತಂತ್ರಜ್ಞಾನ ವಾತಾವರಣಕ್ಕೆ ಮಶೀನ್ ಲರ್ನಿಂಗ್ ಸಾಮರ್ಥ್ಯವನ್ನು ಸಂಯೋಜನೆ ಮಾಡಬಲ್ಲದಾಗಿರುತ್ತದೆ. ಮತ್ತು ಹೀಗೆ ಮಾಡುವುದಕ್ಕೆ ಯಾವುದೇ ವ್ಯಾಪಕವಾದ ನೆಟ್ ವರ್ಕ್/ ಮಾಹಿತಿ ತಂತ್ರಜ್ಞಾನದ ಪರಿವರ್ತನೆಯ ಅಗತ್ಯ ಇರುವುದಿಲ್ಲ ಎಂದು ಕಂಪನಿಯ ಹಿರಿಯ ಉಪಾಧ್ಯಕ್ಷರಾದಂತಹ ಆಯುಷ್ ಭಟ್ನಾಗರ್ ಸೋಮವಾರ ಲಿಂಕ್ಡ್ ಇನ್ ನಲ್ಲಿ ಹೇಳಿದ್ದಾರೆ. ನೂರಾರು ಇಂಜಿನಿಯರ್ ಗಳು ಎರಡು ವರ್ಷಗಳ ಕಾಲ ಶ್ರಮಪಟ್ಟು, ಸಂಶೋಧನೆ ಹಾಗೂ ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗಿಕೊಂಡು, ಆ ನಂತರ ಈ ಪ್ಲಾಟ್ ಫಾರ್ಮ್ ಅಭಿವೃದ್ಧಿ ಪಡಿಸಲಾಗಿದೆ ಎಂದು ಭಟ್ನಾಗರ್ ಅವರು ತಿಳಿಸಿದ್ದಾರೆ. ಈ ಪ್ಲಾಟ್ ಫಾರ್ಮ್ ಹೇಗೆ ಅಭಿವೃದ್ಧಿ ಆಗಿದೆ ಅಂದರೆ, 500 ರಷ್ಟು ಅಪ್ಲಿಕೇಷನ್ ಪ್ರೋಗ್ರಾಮಿಂಗ್ ಇಂಟರ್ ಫೇಸ್ ಗಳು ಮತ್ತು ಡೇಟಾ ಎಪಿಐಗಳನ್ನು ಒಳಗೊಂಡಿದ್ದು, ಇದರ ಮೂಲಕ ಮಶೀನ್ ಲರ್ನಿಂಗ್ ಸಕ್ರಿಯಗೊಂಡ ಸೇವೆಗಳನ್ನು ಸೃಷ್ಟಿಸಲು ಸಾಧ್ಯವಾಗುತ್ತದೆ.ಆಯಾ ಸಂಸ್ಥೆಗೆ ನಿರ್ದಿಷ್ಟವಾಗಿ ಬೇಕಾದಂಥದ್ದು ಮತ್ತು ದೊಡ್ಡ ಪ್ರಮಾಣದ ಎಲ್ಎಲ್ಎಂ ಸಾಮರ್ಥ್ಯ ಹೊರತುಪಡಿಸಿ ಉತ್ಕೃಷ್ಟ ಗುಣಮಟ್ಟದ ಎಐ ಫೀಚರ್ ಉಳ್ಳ ಫೋಟೋಗಳಿಗೆ, ವಿಡಿಯೋಗಳಿಗೆ, ಟೆಕ್ಸ್ಟ್, ಡಾಕ್ಯುಮೆಂಟ್ಸ್, ಧ್ವನಿ ಹಾಗೂ ಅಂತರ್ಗತವಾದ ಅಂದರೆ ಇನ್ ಬಿಲ್ಟ್ ಅಲ್ಗೊರಿದಂಗಳು ಸೇವೆಯ ರೀತಿಯಲ್ಲಿ ದೊರೆಯುತ್ತವೆ ಎಂದು ಅವರು ಹೇಳಿದ್ದಾರೆ. ಅವರು ಹೇಳಿರುವಂತೆ, ಹೊಸ 5ಜಿ ಸೇವೆಗಳನ್ನು ಸೃಷ್ಟಿಸುವುದಕ್ಕೆ, ಉದ್ಯಮಗಳ ಪರಿವರ್ತನೆಗೆ, ನೆಟ್ ವರ್ಕ್ ಗಳ ಸರಿಯಾದ ಬಳಕೆ, 6ಜಿ ಅಭಿವೃದ್ಧಿಗೆ ವೇದಿಕೆ ಸಿದ್ಧಪಡಿಸಲು ಹೀಗೆ ಎಲ್ಲೆಲ್ಲಿ ಮಷೀನ್ ಲರ್ನಿಂಗ್ ಸಾಮರ್ಥ್ಯವನ್ನು ಮುಖ್ಯವಾಗಿ ಬಳಕೆ ಆಗುತ್ತದೆ ಅಲ್ಲೆಲ್ಲ ಜಿಯೋ ಬ್ರೈನ್ ಸಹಾಯ ಮಾಡಲಿದೆ. ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷರಾದ ಮುಕೇಶ್ ಅಂಬಾನಿಯವರು ಕಳೆದ ಆಗಸ್ಟ್ ನಲ್ಲಿ ಈ ಬಗ್ಗೆ ಮಾತನಾಡಿದರು. ನಿರ್ದಿಷ್ಟವಾಗಿ ಭಾರತಕ್ಕೆ ಬೇಕಾದಂಥ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮಾದರಿಗಳು ಹಾಗೂ ಎಲ್ಲ ಡೊಮೇನ್ ನಲ್ಲಿ ಎಐ ಚಾಲಿತ ಸಲ್ಯೂಷನ್ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಜಿಯೋ ಫ್ಲಾಟ್ ಫಾರ್ಮ್ಸ್ ಮುಂಚೂಣಿಯಲ್ಲಿ ಶ್ರಮಿಸಲಿದೆ. ಭಾರತೀಯ ನಾಗರಿಕರು, ಉದ್ಯಮಗಳು ಹಾಗೂ ಸರ್ಕಾರಕ್ಕೆ ಕೃತಕ ಬುದ್ಧಿಮತ್ತೆಯ ಅನುಕೂಲವನ್ನು ಒದಗಿಸಲಿದೆ ಎಂದು ಹೇಳಿದ್ದರು. ಜಿಯೋ ಬೆಳವಣಿಗೆಗೆ ಕೃತಕ ಬುದ್ಧಿಮತ್ತೆಯು ಮುಂದಿನ ದಿನಗಳಲ್ಲಿ ಮುಂಚೂಣಿಯಲ್ಲಿ ಇರುತ್ತದೆ ಎಂದು ಮುಕೇಶ್ ಅಂಬಾನಿ ತಿಳಿಸಿದ್ದರು. ಕ್ಲೌಡ್ ಮತ್ತು ಎಡ್ಜ್ ಲೊಕೇಶನ್ ಗಳಲ್ಲಿ ಎರಡು ಸಾವಿರ ಮೆಗಾ ವಾಟ್ ತನಕ ಎಐ ಸಿದ್ಧವಾದ ಕಂಪ್ಯೂಟಿಂಗ್ ಸಾಮರ್ಥ್ಯವನ್ನು ಜಿಯೋ ಪ್ಲಾಟ್ ಫಾರ್ಮ್ಸ್ ಸೃಷ್ಟಿಸಲಿದೆ ಎಂದು ಹೇಳಿದ್ದರು.ಜಾಗತಿಕ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕ್ಲೌಡ್ ಆಧಾರಿತ ಕೃತಕ ಬುದ್ಧಿ ಮತ್ತೆ ಕಂಪ್ಯೂಟ್ ಮೂಲಸೌಕರ್ಯ ಸೃಷ್ಟಿಸಲು ಚಿಪ್ ತಯಾರಕ ಎನ್ ವಿಡಿಯ ಜೊತೆಗೆ 2023ರ ಸೆಪ್ಟೆಂಬರ್ ತಿಂಗಳಲ್ಲಿ ಜಿಯೋ ಪ್ಲಾಟ್ ಫಾರ್ಮ್ಸ್ ಸಹಭಾಗಿತ್ವ ಘೋಷಣೆ ಮಾಡಿತ್ತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮೆಗಾಸ್ಟಾರ್ ಚಿರಂಜೀವಿ ಭೇಟಿ ಮಾಡಿದ ಕನ್ನಡ ನಟ ಅನೀಶ್

ಕಮರ್ಶಿಯಲ್ ಸಿನಿಮಾ ಹೀರೋ ಆಗಿ ಮಿಂಚಿರುವ ನಟ, ನಿರ್ದೇಶಕ ಅನೀಶ್ ರೋಮ್ಯಾಂಟಿಕ್ ಹೀರೋ ಆಗಿ ತೆರೆ ಮೇಲೆ ಮಿಂಚಲು ಸಜ್ಜಾಗಿದ್ದಾರೆ. ಸದ್ಯ 'ಆರಾಮ್ ಅರವಿಂದ್ ಸ್ವಾಮಿ'ಆಗಿ ತೆರೆ ಮೇಲೆ ನಯಾ ಅವತಾರದಲ್ಲಿ ಬರಲು ರೆಡಿಯಾಗಿರುವ ಅವರು, ಧಿಡೀರನೇ ಟಾಲಿವುಡ್ ಮೆಗಾ ಸ್ಟಾರ್ ಚಿರಜೀವಿ ಜೊತೆ ಪ್ರತ್ಯಕ್ಷರಾಗಿದ್ದಾರೆ.

ಭಾರತದ ಎರಡನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಪದ್ಮವಿಭೂ?ಣ ಪ್ರಶಸ್ತಿಗೆ ಭಜನರಾಗಿರುವ ಮೆಗಾಸ್ಟಾರ್ ಚಿರಂಜೀವಿ ಅವರನ್ನು ನಟ ಅನೀಶ್ ಭೇಟಿಯಾಗಿದ್ದಾರೆ (ಒಜಜಣ), ಇಂದು ಚಿರು ಹೈದ್ರಾಬಾದ್ ನಿವಾಸದಲ್ಲಿ ಭೇಟಿಯಾಗಿರುವ ಅವರು, ಮೆಗಾಸ್ಟಾರ್ ಗೆ ಶುಭಾಶಯ ತಿಳಿಸಿದ್ದಾರೆ. ಇದೇ ವೇಳೆ ತಮ್ಮ ಬಹುನಿರೀಕ್ಷಿತ ಆರಾಮ್ ಅರವಿಂದ ಸ್ವಾಮಿ ಚಿತ್ರದ ಕಂಟೆಂಟ್ ತೋರಿಸಿದ್ದಾರೆ. ಸಿನಿಮಾದ ಕಂಟೆಂಟ್ ನೋಡಿ ಮೆಚ್ಚಿಕೊಂಡ ಚಿರಂಜೀವಿ ಅನೀಶ್ ಚಿತ್ರಕ್ಕೆ ಬೆಸ್ಟ್ ವಿ?ಸ್ ತಿಳಿಸಿದ್ದಾರೆ.

ಅನೀಶ್ ಹುಟ್ಟುಹಬ್ಬದ ಅಂಗವಾಗಿ ಬಿಡುಗಡೆಯಾಗಿದ್ದ ಆರಾಮ್ ಅರವಿಂದ ಸ್ವಾಮಿ ಟೈಟಲ್ ಟ್ರ್ಯಾಕ್ ಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಅರ್ಜುನ್ ಜನ್ಯ ಮ್ಯೂಸಿಕ್, ನಾಗಾರ್ಜುನ್ ಶರ್ಮಾ ಸಾಹಿತ್ಯದ ಹಾಡಿಗೆ ಬೊಂಬಾಟ್ ಆಗಿ ಅನೀಶ್ ಕುಣಿದು ಕುಪ್ಪಳಿಸಿದ್ದರು. ಬಾಬಾ ಭಾಸ್ಕರ್ ಮಾಸ್ಟರ್ ಕೊರಿಯೋಗ್ರಾಫಿಯಲ್ಲಿ ಮೂಡಿಬಂದಿದ್ದ ಟೈಟಲ್ ಟ್ರ್ಯಾಕ್ 1 ಕೋಟಿಗೂ ಅಧಿಕ ವೀವ್ಸ್ ಪಡೆದುಕೊಂಡಿದೆ. ತನ್ನ ಪ್ರಮೋಷನ್ ಕಂಟೆಂಟ್ ನಿಂದಲೇ ಈಗಾಗಲೇ ಸದ್ದು ಮಾಡುತ್ತಿರುವ 'ಆರಾಮ ಅರವಿಂದ ಸ್ವಾಮಿ' ಸಿನಿಮಾಗೆ ಅಭಿಷೇಕ್ ಶೆಟ್ಟಿ ಆಕ್ಷನ್ ಕಟ್ ಹೇಳಿದ್ದಾರೆ. ನಮ್ ಗಣಿ ಬಿಕಾಂ ಪಾಸ್, ಗಜಾನನ ಅಂಡ್ ಗ್ಯಾಂಗ್ ಸಿನಿಮಾಗಳ ಮೂಲಕ ಭರವಸೆ ಮೂಡಿಸಿರುವ ಅಭಿಷೇಕ್ ಶೆಟ್ಟಿ ನಿರ್ದೇಶನದಲ್ಲಿ ಮೂಡಿ ಬರ್ತಿರುವ ಮೂರನೇ ಸಿನಿಮಾವಿದು. ರೊಮ್ಯಾಂಟಿಕ್ ಕಾಮಿಡಿ ಸಬ್ಜೆಕ್ಟ್ ಒಳಗೊಂಡ 'ಆರಾಮ ಅರವಿಂದ ಸ್ವಾಮಿ' ಶೂಟಿಂಗ್ ಮುಗಿಸಿ ಬಿಡುಗಡೆಗೆ ಸಜ್ಜಾಗಿದ್ದಾನೆ. ಅಕಿರ ಸಿನಿಮಾ ಖ್ಯಾತಿಯ ಶ್ರೀಕಾಂತ್ ಪ್ರಸನ್ನ, 'ಗುಳ್ಟು' ಸಿನಿಮಾ ಖ್ಯಾತಿಯ ಪ್ರಶಾಂತ್ ರೆಡ್ಡಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಮ್ಯೂಸಿಕ್ ಮಾಂತ್ರಿಕ ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ವೈವಿಬಿ ಶಿವಸಾಗರ್ ಛಾಯಾಗ್ರಹಣ, ಉಮೇಶ್ ಆರ್ ಬಿ ಸಂಕಲನ ಚಿತ್ರಕ್ಕಿದೆ.



# 'ಅಗ್ನಿಲೋಕ'ಕ್ಕೆ ಯಶಸ್ವ ಹೀರೋ

## ಇವರು ಮೂರ್ತಿ ಮೊಮ್ಮಗ

ಸ್ಯಾಂಡಲ್ ವುಡ್ ದಂತಕಥೆ ಸಿನಿಮಾಟೋಗ್ರಾಫರ್, ನಿರ್ಮಾಪಕ, ನಿರ್ದೇಶಕ ಹಾಗೂ ಚಲನಚಿತ್ರ ನಿರ್ಮಾಪಕರ ಸಂಘದ ಪ್ರಥಮ ಅಧ್ಯಕ್ಷರೂ ಆಗಿದ್ದ ಹೆಚ್.ಎಂ.ಕೆ. ಮೂರ್ತಿ ಅವರ ಮೊಮ್ಮಗ ಯಶಸ್ವ ಈಗ ನಾಯಕನಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಡಲು ಅಣಿಯಾಗಿದ್ದಾರೆ. ಎಮೋಷನಲ್ ಹಾಗೂ ಆಕ್ಷನ್ ಥ್ರಿಲ್ಲರ್ ಕಥಾಹಂದರ ಹೊಂದಿದ ಅಗ್ನಿಲೋಕ ಎಂಬ ಚಿತ್ರದಲ್ಲಿ ಹೆಚ್. ಎಂ.ಕೆ.ಮೂರ್ತಿ ಅವರ ಮೊಮ್ಮಗ ಹಾಗೂ ನಿರ್ದೇಶಕ, ನಿರ್ಮಾಪಕ ರಾಜೇಶ್ ಮೂರ್ತಿ ಅವರ ಪುತ್ರ 'ಯಶಸ್ವ' ಆಕ್ಷನ್ ಹೀರೋ ಆಗಿ ಕಾಣಿಸಿಕೊಂಡಿದ್ದಾರೆ. ಆ ಚಿತ್ರವೀಗ ಬಿಡುಗಡೆಯ ಹಂತದಲ್ಲಿದೆ.

ತನ್ನ ತಾತ, ತಂದೆಯಂತೆಯೇ ಚಿತ್ರರಂಗದಲ್ಲಿ ಕಲಾವಿದ, ತಂತ್ರಜ್ಞನಾಗಿ ಮುಂದುವರಿಯಬೇಕೆಂಬ ಮಹದಾಸೆ ಹೊತ್ತಿರುವ ಯಶಸ್ವ, ಈಗಾಗಲೇ ಮಾಸ್ ಕಮ್ಯುನಿಕೇಶನ್ ನಲ್ಲಿ ಡಿಗ್ರಿ ಮುಗಿಸಿಕೊಂಡು ವೆಲ್ ಪ್ರಿಪೇರ್ ಆಗಿ ಚಿತ್ರರಂಗಕ್ಕೆ ಧುಮುಕಿದ್ದಾರೆ. ತನ್ನ ತಾತನ ಹಾಗೆ ಚಿತ್ರರಂಗದಲ್ಲಿ ಆಕ್ಟಿಂಗ್ ಜೊತೆಗೆ ರೈಟಿಂಗ್ , ಪ್ರೊಡಕ್ಷನ್ ವಿಭಾಗದಲ್ಲೂ ತೊಡಗಿಕೊಳ್ಳಲು ಸಿದ್ದತೆ ಮಾಡಿಕೊಂಡಿದ್ದಾರೆ. ಮಗನ ಚಿತ್ರಕ್ಕೆ ರಾಜೇಶ್ ಮೂರ್ತಿ ಅವರೇ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಜೊತೆಗೆ ಸಂಕಲನವನ್ನೂ ಸಹ ನಿರ್ವಹಿಸಿದ್ದಾರೆ.

ಬೆಂಗಳೂರು, ಕೆಜಿಎಫ್, ಮಂಡ್ಯ, ಚಿಕ್ಕಮಗಳೂರು ಸುತ್ತಮುತ್ತ ಸುಮಾರು 30 ದಿನಗಳ ಕಾಲ ಈ ಚಿತ್ರದ ಚಿತ್ರೀಕರಣ ನಡೆಸಲಾಗಿದೆ. ಈಗಾಗಲೇ ತನ್ನ ಶೂಟಿಂಗ್ ಹಾಗೂ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನೆಲ್ಲ ಮುಗಿಸಿಕೊಂಡಿರುವ ಅಗ್ನಿಲೋಕ ಚಿತ್ರವೀಗ ಸೆನ್ಸಾರ್ ಹಂತದಲ್ಲಿದೆ.

ವಿಷ್ಣು ಪುಷ್ಪ ಫಿಲಂಸ್ ಮೂಲಕ ಶ್ರೀಮತು ಪುಷ್ಪ ಮಂಜುನಾಥ್ ಅವರು ಈ ಚಿತ್ರವನ್ನು ಅದ್ದೂರಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ಮಂಜುಶ್ರೀ ಅವರು ಈ ಚಿತ್ರದಲ್ಲಿ ಯಶಸ್ವ ಜೊತೆ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಬಹಳ ವರ್ಷಗಳ ನಂತರ ನೆಲ ನರೇಂದ್ರಬಾಬು ಅವರ ಸಹೋದರ ನೆಲ ಮಹೇಶ್ ಅವರು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಬಿಎಸ್. ಮಂಜುನಾಥ್, ಅಜಿತ್ ಕುಮಾರ್, ಪ್ರಮೋದ್ ಹಿರೇಮಠ್ ಉಳಿದ ತಾರಾಗಣದಲ್ಲಿದ್ದಾರೆ. ವಿನೋದ್ ಅವರ ಛಾಯಾಗ್ರಹಣ, ನಿತೀಶ್ ಕುಮಾರ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ.

ಮುಂದಿನ ತಿಂಗಳು ಚಿತ್ರದ ಟ್ರೈಲರನ್ನು ರಿಲೀಸ್ ಮಾಡುವ ಯೋಜನೆಯಿದ್ದು, ಫೆಬ್ರವರಿ ಕೊನೆಗೆ ಅಥವಾ ಮಾರ್ಚ್ ಮೊದಲವಾರ ಅಗ್ನಿಲೋಕ ಚಿತ್ರವನ್ನು ತೆರೆಗೆ ತರುವ ಯೋಜನೆಯಿದೆ ಎಂದು ನಿರ್ದೇಶಕ ರಾಜೇಶ್ ಮೂರ್ತಿ ಅವರು ತಿಳಿಸಿದ್ದಾರೆ.



## ಸಿನಿಮಾ

# ವೀಡಿಯೋ ಸಾಂಗ್ ಮೂಲಕ ತೆರೆದುಕೊಂಡ 'ಸಾರಾಂಶ'ದ ನಶೆ-ನಕಾಶೆ!



ಸೂರ್ಯ ವಸಿಷ್ಠ ನಿರ್ದೇಶನದ 'ಸಾರಾಂಶ' ಚಿತ್ರದ ಮತ್ತೊಂದು ವೀಡಿಯೋ ಸಾಂಗ್ ಬಿಡುಗಡೆಗೊಂಡಿದೆ. ಸಾರಾಂಶ ಎಂಬುದು ವಿಶೇಷ ಕಥಾ ಹಂದರದೊಳಗೆ ನಾನಾ ಬೆರಗುಗಳನ್ನು ಬಚ್ಚಿಟ್ಟುಕೊಂಡಿರುವ ಸಿನಿಮಾ ಎಂಬ ಸೂಚನೆ ಈ ಹಿಂದೆಯೇ ಸಿಕ್ಕಿತ್ತು. ಅದೀಗ ಈ ಹಾಡಿನ ಮೂಲಕ ಸಮ್ಮೋಹಕವಾಗಿ ಸಾಬೀತಾಗಿ ಬಿಟ್ಟಿದೆ. ಒಟ್ಟಾರೆ ಸಿನಿಮಾದ ಇಂಚಿಂಚನ್ನೂ ಹೊಸತನದೊಂದಿಗೆ ಸಿಂಗರಿಸಬೇಕೆಂಬಂಥಾ ತಪನೆ ಹೊಂದಿರುವವರು ಸೂರ್ಯ ವಸಿಷ್ಠ. ಅದಕ್ಕೆ ಉದಿತ್ ಹರಿತಾಸ್ ರಂಥಾ ಸಂಗೀತ ನಿರ್ದೇಶಕರ ಸಾಥ್ ಸಿಕ್ಕಿರೋದರಿಂದಾಗಿ ಸಾರಾಂಶದ ನಶೆಯ ನಕಾಶೆ ಚೆಂದದ ಹಾಡಿನ ಮೂಲಕ ಪಸರಿಸುವಂತಾಗಿದೆ. ನಶೆಯೋ ನಕಾಶೆಯೋ ಎಂಬ ಈ ಹಾಡು ಮಾಧುರಿ ಶೇಷಾದ್ರಿ, ಕಂಠಸಿರಿಯಲ್ಲಿ ಮೂಡಿ ಬಂದಿದೆ. ಕಾಂತಾರ ಖ್ಯಾತಿಯ ಪ್ರಮೋದ್ ಮರವಂತೆ ಸಾಹಿತ್ಯ ಮತ್ತು ಉದಿತ್ ಹರಿತಾಸ್ ಸಂಗೀತ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಹಾಡು ರಾಮ್ ಕುಮಾರ್ ನೃತ್ಯ ನಿರ್ದೇಶನದೊಂದಿಗೆ ಕಳೆಗಟ್ಟಿಕೊಂಡಿದೆ. ಇದರ ಮೂಲಕವೇ ಶೃತಿ ಹರಿಹರನ್ ಪಾತ್ರದ ಝಲಕ್ ಕೂಡಾ ಜಾಹೀರಾಗಿದೆ.

ಈ ವೀಡಿಯೋ ಸಾಂಗ್ ಸಂಗೀತ, ಸಾಹಿತ್ಯದಾಚೆಗೂ ವಿಶೇಷತೆಗಳನ್ನೊಳಗೊಂಡಿದೆ. ಸಾಮಾನ್ಯವಾಗಿ ಒನ್ ಟೇಕ್ ಸಾಂಗ್ ಎಂಬ ಪರಿಕಲ್ಪನೆಯನ್ನು ದೃಷ್ಯಕ್ಕೆ ಒಗ್ಗಿಸುವುದು ವಿರಳ. ಅಂಥಾದ್ದೊಂದು ಅಪರೂಪದ ಚೌಕಟ್ಟಿನಲ್ಲಿ ಈ ಹಾಡು ರೂಪುಗೊಂಡಿದೆ. ಇನ್ನುಳಿದಂತೆ, ಕಥೆಗೆ ಪೂರಕವಾಗಿ ಸೂಕ್ಷ್ಮ ಕಾನ್ಸೆಪ್ಟಿನಲ್ಲಿ ಈ ಹಾಡು ಸಿದ್ಧಗೊಂಡಿದೆ. ಪ್ರತಿಯೊಬ್ಬರನ್ನೂ ಕಾಡುವ, ಪುಳಕಗೊಳಿಸುವ, ಎಂತೆಂಥಾದ್ದೋ ಸಾಹಸಗಳಿಗೆ ಒಡ್ಡಿಕೊಳ್ಳುವಂತೆ ಮಾಡುವ ಕನಸೆಂಬ ಮಾಯಾವಿ ಈ ಹಾಡಿನ ಹಿಂದಿರುವ ಮುಖ್ಯ ಮಾಯೆ. ಆ ಕ್ಷಣಕ್ಕೆ ವಾಸ್ತವಿಕ ಪರಿಧಿಯಾಚೆ ಕೊಂಡೊಯ್ಯುವ, ಅಸಾಧ್ಯವಾದುದನ್ನೂ ಕೂಡಾ ಸಾಧ್ಯವಾಗುವಂತೆ ಮಾಡುವ ಶಕ್ತಿ ಕನಸಿಗಿದೆ. ನಾವು ಸವಾಲು ಅಂತ ಬಂದಾಗ ಕಳೆದುಕೊಳ್ಳುವ ಭಯದಿಂದ ಹಿಂದಡಿ ಇಡೋದಿದೆ. ಆದರೆ, ಕನಸಿಗಾಗಿ ಮಾತ್ರ ಎಂಥಾ ತ್ಯಾಗಕ್ಕಾದರೂ ಸಿದ್ಧವಾಗಿ ಬಿಡುತ್ತೇವೆ. ಯಾಕೆ ಹೀಗೆ ಎಂಬಂತೆ ನಮ್ಮೊಳಗೇ ನಾವು ಪ್ರಶ್ನೆಯಾಗುತ್ತೇವೆ; ಅಚ್ಚರಿಗೊಳ್ಳುತ್ತೇವೆ. ಅಂಥಾ ಎಲ್ಲ ಭಾವಗಳೂ ಎರಕ ಹೊಯ್ದಂತೆ ಈ ಹಾಡು ಮೂಡಿ ಬಂದಿದೆ. ಶೃತಿ ಹರಿಹರನ್ ಜೊತೆಗೆ ಇಲ್ಲಿ ಸುಮೇಶ್ ವಿ.ಎಂ ಮತ್ತು ಐಶ್ವರ್ಯಾ ಪ್ರತಾಪ್ ಕೂಡಾ ಹಾಡಿನ ಭಾಗವಾಗಿದ್ದಾರೆ. ಹೀಗೆ ಹೊಸತನದ ಹಾಡುಗಳ ಮೂಲಕವೇ ಪ್ರೇಕ್ಷಕರನ್ನು ಮುಟ್ಟುತ್ತಿರುವ ಸಾರಾಂಶ ಚಿತ್ರದಲ್ಲಿ ದೀಪಕ್ ಸುಬ್ರಮಣ್ಯ, ಸೂರ್ಯ ವಸಿಷ್ಠ, ಶೃತಿ ಹರಿಹರನ್, ಶ್ವೇತಾ ಗುಪ್ತ ಪ್ರಧಾನ ಪಾತ್ರಗಳಲ್ಲಿ ನಟಿಸಿದ್ದಾರೆ. ರವಿ ಕಶ್ಯಪ್ ಮತ್ತು ಆರ್.ಕೆ ನಲ್ಲಮ್ ವಿಭಾ ಕಶ್ಯಪ್ ಪ್ರೊಡಕ್ಷನ್ಸ್ ಮತ್ತು ಕ್ಲಾಪ್ ಬೋರ್ಡ್ ಪ್ರೊಡಕ್ಷನ್ ಮೂಲಕ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಆಸಿಫ್ ಕ್ಷತ್ರಿಯಾ, ರವಿ ಭಟ್, ರಾಮ್ ಮಂಜುನಾಥ್, ಸತೀಶ್ ಕುಮಾರ್, ಪೃಥ್ವಿ ಬನವಾಸಿ ಮುಂತಾದವರ ತಾರಾಗಣ, ಅಪರಾಜಿತ್ ಹಿನ್ನೆಲೆ ಸಂಗೀತ ಮತ್ತು ಪ್ರದೀಪ್ ನಾಯಕ್ ಸಂಕಲನ ಈ ಚಿತ್ರಕ್ಕಿದೆ.



# ಎರಡನೇ ಟೆಸ್ಟ್, ಜೋ ರೂಟ್ V/S ಟೀಮ್ ಇಂಡಿಯಾ




ಫೆಬ್ರವರಿ 2 ರಿಂದ ಭಾರತ ಮತ್ತು ಇಂಗ್ಲೆಂಡ್ ನಡುವಣ ದ್ವಿತೀಯ ಟೆಸ್ಟ್ ಪಂದ್ಯ ಶುರುವಾಗಲಿದೆ. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿರುವ ವೈಎಸ್ ರಾಜಶೇಖರ ರೆಡ್ಡಿ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯವು ಜೋ ರೂಟ್ ವರ್ಸಸ್ ಟೀಮ್ ಇಂಡಿಯಾ ಎಂದು ಬಿಂಬಿತವಾಗಿದೆ. ಇದಕ್ಕೆ ಮುಖ್ಯ ಕಾರಣ ರೂಟ್ ಟೆಸ್ಟ್ ಕ್ರಿಕೆಟ್‌ನಲ್ಲಿ ಪೇರಿಸಿರುವ ರನ್‌ಗಳು.

136 ಟೆಸ್ಟ್ ಪಂದ್ಯಗಳನ್ನಾಡಿರುವ ಜೋ ರೂಟ್ ಇದುವರೆಗೆ 11447 ರನ್ ಕಲೆಹಾಕಿದ್ದಾರೆ. ಇದರಲ್ಲಿ 5 ದ್ವಿಶತಕಗಳು, 30 ಶತಕಗಳು ಹಾಗೂ 60 ಅರ್ಧಶತಕಗಳು ಸೇರಿವೆ.

ಆದರೆ ಮತ್ತೊಂದೆಡೆ ಎರಡನೇ ಪಂದ್ಯಕ್ಕೆ ಆಯ್ಕೆಯಾಗಿರುವ ಭಾರತ ತಂಡದ ಆಟಗಾರರು ಟೆಸ್ಟ್ ಕ್ರಿಕೆಟ್‌ನಲ್ಲಿ ಕಲೆಹಾಕಿರುವ ಒಟ್ಟು ರನ್ 10726. ಅಂದರೆ ಪ್ರಸ್ತುತ ಭಾರತ ತಂಡದಲ್ಲಿರುವ ಯಾವುದೇ ಬ್ಯಾಟರ್ 5 ಸಾವಿರಕ್ಕಿಂತ ಹೆಚ್ಚು ರನ್ ಕಲೆಹಾಕಿಲ್ಲ.

ಹಾಗೆಯೇ ಪ್ರಸ್ತುತ ತಂಡದಲ್ಲಿರುವ ಆಟಗಾರರಲ್ಲಿ ಅತ್ಯಧಿಕ ರನ್ ಕಲೆಹಾಕಿರುವುದು ರೋಹಿತ್ ಶರ್ಮಾ. ಹಿಟ್‌ಮ್ಯಾನ್ ಹೆಸರಿನಲ್ಲಿ 3801 ಟೆಸ್ಟ್ ರನ್‌ಗಳಿದ್ದರೆ, ಅಶ್ವಿನ್ ಖಾತೆಯಲ್ಲಿ 32,22 ಟೆಸ್ಟ್ ರನ್‌ಗಳಿವೆ. ಇವರಿಬ್ಬರನ್ನು ಹೊರತುಪಡಿಸಿ ಟೀಮ್ ಇಂಡಿಯಾದ ಯಾವೊಬ್ಬ ಬ್ಯಾಟರ್ ಕೂಡ 3 ಸಾವಿರ ಟೆಸ್ಟ್ ರನ್‌ಗಳ ಗಡಿ ತಲುಪಿಲ್ಲ.

ಇಲ್ಲಿ ಇಂಟ್ರೆಸ್ಟಿಂಗ್ ವಿಯ ಎಂದರೆ ಭಾರತ ತಂಡದ ಎಲ್ಲಾ ಆಟಗಾರರ ಒಟ್ಟು ರನ್ ಸೇರಿಸಿದರೂ ಜೋ ರೂಟ್‌ಗಿಂತ 721 ರನ್ ಗಳ ಮುನ್ನಡೆ ಹೊಂದಿದ್ದಾರೆ. ಹೀಗಾಗಿಯೇ 2ನೇ ಟೆಸ್ಟ್ ಪಂದ್ಯವನ್ನು ಭಾರತ V/S ಜೋ ರೂಟ್ ಎಂದು ಬಿಂಬಿಸಲಾಗುತ್ತಿದೆ. ಭಾರತ ತಂಡದಲ್ಲಿರುವ ಆಟಗಾರರ ಒಟ್ಟು ಟೆಸ್ಟ್ ರನ್ಸ್- 10726



## ಜೋ ರೂಟ್ ಅವರ ಟೆಸ್ಟ್ ರನ್ - 11447

**ಭಾರತ ಟೆಸ್ಟ್ ತಂಡ:** ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್, ಯಶಸ್ವಿ ಜೈಸ್ವಾಲ್, ಶ್ರೇಯಸ್ ಅಯ್ಯರ್, ಕೆಎಸ್ ಭರತ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಮುಕೇಶ್ ಕುಮಾರ್, ಜಸ್ಪ್ರೀತ್ ಬುಮ್ರಾ, ಸರ್ಫರಾಝ್ ಖಾನ್, ವಾಷಿಂಗ್ಟನ್ ಸುಂದರ್, ಸೌರಭ್ ಕುಮಾರ್, ಅವೇಶ್ ಖಾನ್.

**ಇಂಗ್ಲೆಂಡ್ ತಂಡ:** ಬೆನ್ ಸ್ಟೋಕ್ಸ್ (ನಾಯಕ), ಝಾಕ್ ಕ್ರಾಲಿ, ಬೆನ್ ಡಕೆಟ್, ಒಲೀ ಪೋಪ್, ಜೋ ರೂಟ್, ಜಾನಿ ಬೈರ್‌ಸ್ಟೋವ್, ಬೆನ್ ಫೋಕ್ಸ್ (ವಿಕೆಟ್ ಕೀಪರ್), ರೆಹಾನ್ ಅಹ್ಮದ್, ಟಾಮ್ ಹಾರ್ಟ್ಲಿ, ಮಾರ್ಕ್ ವುಡ್, ಜ್ಯಾಕ್ ಲೀಚ್, ಒಲೀ ರಾಬಿನ್ಸನ್, ಜೇಮ್ಸ್ ಆ್ಯಂಡರ್ಸನ್, ಡೇನಿಯಲ್ ಲಾರೆನ್ಸ್, ಗಸ್ ಅಟ್ಕಿನ್ಸನ್.

## ಮಂಡ್ಯ ಹನುಮ ಧ್ವಜ ವಿವಾದ

# ಎಚ್‌ಡಿಕೆ ವಿರುದ್ಧ ಚೆಲುವರಾಯಸ್ವಾಮಿ ಗರಂ

**ಮಂಡ್ಯ:** ಮಂಡ್ಯ ಜಿಲ್ಲೆಯ ಜನರ ನೆಮ್ಮದಿ ಹಾಳು ಮಾಡಲು ಮಾಜಿ ಸಿಎಂ, ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ಮುಂದಾಗಿರುವುದು ನೋವು ತಂದಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಹೇಳಿದ್ದಾರೆ.

ಮಂಡ್ಯ ತಾಲೂಕಿನ ಕೆರಗೋಡಿನಲ್ಲಿ ಹನುಮ ಧ್ವಜ ತೆರವು ಪ್ರಕರಣಕ್ಕೆ ಸಂಬಂಧಿಸಿ ಮಂಡ್ಯದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನೀವು (ಕುಮಾರಸ್ವಾಮಿ) ಸಿಎಂ ಆಗುವುದಕ್ಕೆ ಮಂಡ್ಯ ಜನರ ಆಶೀರ್ವಾದ ಕಾರಣ ಎಂಬುದನ್ನು ಮರೆಯಬೇಡಿ. ಜಿಲ್ಲೆಯ ಜನರ ಜೀವನ ಹಾಳುಮಾಡಬೇಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜವಾಬ್ದಾರಿಯುತ ಪ್ರತಿಪಕ್ಷದ ನಾಯಕರಾಗಿ ನೀವು ನಮ್ಮನ್ನು ಸರಿಯಾದ ದಾರಿಯಲ್ಲಿ ಸಾಗುವಂತೆ ನೋಡಿಕೊಳ್ಳಬೇಕೇ ವಿನಃ ಶಾಂತಿ ಕದಡುವ ಕೆಲಸ ಮಾಡಬಾರದು. ಜಿಲ್ಲೆಯ ಜನರೇ ನಿಮಗೆ ಅಧಿಕಾರ ನೀಡಿದ್ದು. ಕಳೆದ ಬಾರಿಯ ಚುನಾವಣೆಯಲ್ಲಿ ನಮ್ಮನ್ನು ಆಶೀರ್ವದಿಸಿದ್ದಾರೆ. ಮುಂದೆ ನಾವು ಸರಿಯಾದ ದಾರಿಯಲ್ಲಿ ಸಾಗದಿದ್ದರೆ ನಮಗೂ ಜನ ಪಾಠ ಕಲಿಸಬಹುದು. ಇದನ್ನು ನೀವು ನೆನಪಿನಲ್ಲಿಟ್ಟುಕೊಳ್ಳಿ. ಅದು ಬಿಟ್ಟು ಸಂವಿಧಾನ, ಪ್ರಜಾಪ್ರಭುತ್ವ ವಿರೋಧಿ ಚಟುವಟಿಕೆಗಳಿಗೆ ಪ್ರಚೋದನೆ ನೀಡಬೇಡಿ ಎಂದು ಕುಮಾರಸ್ವಾಮಿ ಅವರನ್ನುದ್ದೇಶಿಸಿ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಕೆರಗೋಡು ಗ್ರಾಮದ ಮಧ್ಯಭಾಗದಲ್ಲಿರುವ ಧ್ವಜಸ್ತಂಭದಲ್ಲಿ ರಾಷ್ಟ್ರಧ್ವಜ ಮತ್ತು ಕನ್ನಡ ಧ್ವಜ ಮಾತ್ರ ಆರೋಹಣ, ಅವರೋಹಣ ಮಾಡುವುದಾಗಿ ಕರಾರು ಪತ್ರ ಬರೆಯಲಾಗಿದೆ. ಇದರಂತೆಯೇ ಅವರು ನಡೆದುಕೊಂಡಿದ್ದರು. ಆದರೆ, ನಂತರ ಅಲ್ಲಿ ಧರ್ಮದ ಧ್ವಜ ಆರೋಹಣ ಮಾಡಲು ಯಾರು ಪ್ರೇರೇಪಣೆ ಕೊಟ್ಟರೋ ತಿಳಿಯದು. ಚುನಾವಣೆ ಸಂದರ್ಭದಲ್ಲಿ ಅದರ ಲಾಭ ಪಡೆಯಲು ಮಾಡಿದ್ದಾರೋ ತಿಳಿಯದು ಎಂದು ಚಲುವರಾಯಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಿಟಿ ರವಿ, ಅಶೋಕ ವಿರುದ್ಧವೂ ವಾಗ್ದಾಳಿ

ಧ್ವಜ ವಿವಾದ ವಿಚಾರವಾಗಿ ಬಿಜೆಪಿ ನಾಯಕ ಸಿಟಿ ರವಿ ಮತ್ತು ಪ್ರತಿಪಕ್ಷ ನಾಯಕ ಆರ್ ಅಶೋಕ ವಿರುದ್ಧವೂ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ಸಿಟಿ ರವಿಯವರೇ, ನೀವು ಹೋರಾಟ ಮಾಡಿ. ಬೇಡ ಎನ್ನುತ್ತಿಲ್ಲ. ಆದರೆ ಪ್ರಜಾಪ್ರಭುತ್ವದ ವಿಚಾರದಲ್ಲಿ ಜನರನ್ನು ಹಾದಿತಪ್ಪಿಸುವ ಕೆಲಸ ಮಾಡಬೇಡಿ ಎಂದು ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು. ಆರ್. ಅಶೋಕ ಅವರು ಪ್ರತಿಪಕ್ಷ ನಾಯಕರಾಗಿ ಜವಾಬ್ದಾರಿಯುತ ಸ್ಥಾನದಲ್ಲಿದ್ದುಕೊಂಡು ಘನತೆಯಿಂದ ವರ್ತಿಸಬೇಕಿತ್ತು. ಆದರೆ, ಅವರು ಕ್ಷುಲ್ಲಕ ರಾಜಕಾರಣ ಮಾಡಲು ಮಂಡ್ಯಕ್ಕೆ ಸೋಮವಾರ ಬಂದಿದ್ದರು ಎಂದು ಚಲುವರಾಯಸ್ವಾಮಿ ಟೀಕಿಸಿದರು.





### ಮಂಡ್ಯದ ಜನ ಗಿಮಿಕ್ ನಂಬಲ್ಲ

**ಮಂಡ್ಯ ಜಿಲ್ಲೆಯ ಜನರು ನಿಮ್ಮ ಗಿಮಿಕ್ ಅನ್ನು ನಂಬುವುದಿಲ್ಲ. ಅದೇ ರೀತಿ ನಿಮ್ಮನ್ನು ಕ್ಷಮಿಸುವುದೂ ಇಲ್ಲ ಎಂದು ಕುಮಾರಸ್ವಾಮಿ ವಿರುದ್ಧ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು. ಕೇಸರಿ ಶಾಲು ಹಾಕುವ ಬದಲು ನೇರವಾಗಿ ಬಿಜೆಪಿಗೆ ಸೇರ್ಪಡೆಯಾಗಿ. ರೈತರ ಹಸಿರು ಶಾಲು ಬಿಟ್ಟಾಯ್ತು. ಜೆಡಿಎಸ್‌ನ ಜಾತ್ಯತೀತತೆಯನ್ನೂ ಬಿಟ್ಟಾಯ್ತು. ಇನ್ನು ಬಿಜೆಪಿಗೆ ಸೇರಿಕೊಳ್ಳಿ. ಎಲ್ಲವನ್ನೂ ಜನ ತೀರ್ಮಾನಿಸಲಿ ಎಂದು ಕುಮಾರಸ್ವಾಮಿ ವಿರುದ್ಧ ಸಚಿವರು ಕಿಡಿ ಕಾರಿದರು. ನಿಮ್ಮನ್ನು ಮಂಡ್ಯದ ಜನ ಈ ಹಿಂದೆ ಆಶೀರ್ವದಿಸಿದ್ದಾರೆ. ಅದಕ್ಕೆ ವಿರುದ್ಧವಾಗಿ ನಡೆದುಕೊಳ್ಳಬೇಡಿ. ನಾವು ಇಲ್ಲಿದ್ದು ಜೀವನ ನಡೆಸುವವರು. ನಿಮ್ಮಂತೆ ಬದಲಾಗುವವರಲ್ಲ ಎಂದು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಮಂಡ್ಯದ ಜನ ಯಾವುದೇ ಪ್ರಚೋದನೆಗಳಿಗೆ ಒಳಗಾಗಬಾರದು ಎಂದು ಕರೆ ನೀಡಿದರು.**

### ಚುನಾವಣೆಗಾಗಿ ಈ ರೀತಿ ಮಾಡುತ್ತಿದ್ದಾರೆ

**ಚುನಾವಣೆ ಗಮನದಲ್ಲಿಟ್ಟುಕೊಂಡು ಕುಮಾರಸ್ವಾಮಿ ಈ ರೀತಿ ಮಾಡುತ್ತಿದ್ದಾರೆ. ಇವರು ಸಿಂಗಾಪುರದಲ್ಲಿ ಕುಳಿತುಕೊಂಡು ಹೇಗೆಲ್ಲಾ ಮಾತನಾಡಿದ್ದರು ಎಂಬುದನ್ನು ಗಮನಿಸಿ. ಕುಮಾರಸ್ವಾಮಿಯವರು ಬಿಜೆಪಿಯನ್ನು ಟೀಕಿಸಿದ?ಟು ಬೇರೆ ಯಾರೂ ಟೀಕಿಸಿಲ್ಲ. ಜೆಡಿಎಸ್‌ನವರು ಟೀಕೆಮಾಡಿದ?ಟು ಕಾಂಗ್ರೆಸ್ ಕೂಡ ಮಾಡಿಲ್ಲ. ಇದೀಗ ಅವರಿಬ್ಬರೂ ಅಸ್ತಿತ್ವ ಉಳಿಸಿಕೊಳ್ಳಲು ಯತ್ನಿಸುತ್ತಿದ್ದಾರೆ. ದೇವೇಗೌಡರೇ ದೇಶ ಬಿಟ್ಟು ಹೋಗುತ್ತೇನೆ ಎಂದಿದ್ದರು ಎಂದು ಚಲುವರಾಯಸ್ವಾಮಿ ಹೇಳಿದರು.**

# ಗುರು ಸಂದೀಪ್ ನೇತೃತ್ವದಲ್ಲಿ ಕಥಕ್ ನೃತ್ಯ ತರಬೇತಿ

**ಬೆಂಗಳೂರು:** ನಗರದ ಬನ್ನೇರುಘಟ್ಟ ರಸ್ತೆಯ ಗೊಟ್ಟಿಗೆರೆಯಲ್ಲಿರುವ ವೇದಾಂಗ ಅಂಗ ಸಂಸ್ಥೆಯಾದ ನೃತ್ಯ ನೂಕುಂಜ್ ಕಥಕ್ ನೃತ್ಯ ಸಂಸ್ಥೆಯಲ್ಲಿ ಗುರು ಸಂದೀಪ್ ಮಲ್ಲಿಕ್ ಅವರ ನೇತೃತ್ವದಲ್ಲಿ 3 ದಿನಗಳ ಕಾಲ ಕಥಕ್ ತರಬೇತಿ ಶಿಬಿರ ಆಯೋಜನೆ ಮಾಡಲಾಯಿತು. ಸಂದೀಪ್ ಮಲ್ಲಿಕ್ ಅವರು ಗುರುವಾಗಲು ಹಲವು ಹಿರಿಯ ಮಹಾ ಗುರುಗಳು ಹಾಗೂ ವಿದ್ವಾಂಸರ ಬಳಿ ಕಥಕ್ ನೃತ್ಯ ಅಭ್ಯಾಸವನ್ನು ಮಾಡಿ ಇದೀಗ ದೊಡ್ಡ ಗುರುವಾಗಿ ಹೆಗ್ಗಳಿಕೆಯನ್ನು ಪಡೆದಿದ್ದಾರೆ. ಗುರು ಸಂದೀಪ್ ಮಲ್ಲಿಕ್ ಅವರು ಕಥಕ್ ನೃತ್ಯದಲ್ಲಿ ತಮ್ಮದೇ ಆದಂತಹ ಛಾಪನ್ನು ಮೂಡಿಸಿದ್ದಾರೆ, ಪ್ರಸ್ತುತ ಅವರು ಕಥಕ್ ನೃತ್ಯ ಕ್ಷೇತ್ರದಲ್ಲಿ ಬಹು ದೊಡ್ಡ ಗುರುಗಳಾಗಿ ಹೆಸರು ಮಾಡಿರುವುದು ವಿಶೇಷವಾಗಿದೆ. ಮೂರು ದಿನಗಳ ಕಾಲ ನಡೆದ ಕಥಕ್ ಶಿಬಿರದಲ್ಲಿ ಗುರುಗಳಿಂದ ವಿದ್ಯಾರ್ಥಿಗಳಿಗೆ ತೀಸ್ ತಾಲೆ ಹಾಗು ಧಾಮೊರ್ ತಾಲೆಗಳನ್ನು ಪ್ರಾರಂಭಿಕ ಹಾಗೂ ಮಧ್ಯಮ ವಿದ್ಯಾರ್ಥಿಗಳಿಗೆ ಅಭ್ಯಾಸ ಮಾಡಿಸುವುದರ ಜೊತೆಗೆ ಕಥಕ್ ಬಗ್ಗೆ ಅರಿವನ್ನು ಸಹ ಇದೇ ವೇಳೆ ಮೂಡಿಸಿದರು. ವಿದ್ಯಾರ್ಥಿಗಳ ಜೊತೆಗೆ ಗುರುಗಳು ಸಹ ನೃತ್ಯ ಮಾಡಿ ಬೋಧನೆ ಮಾಡಿದರು.

ಗುರು ಸಂದೀಪ್ ಮಲ್ಲಿಕ್ ಅವರ ಕಥಕ್ ನೃತ್ಯದ ಬಗ್ಗೆ ವಿಶೇ? ಕೆಲಸ ಕಾರ್ಯಗಳನ್ನು ಕಂಡು ನೃತ್ಯ ನೂಕುಂಜ್ ಕಥಕ್ ನೃತ್ಯ ಶಾಲೆಯು ಆಭಾರಿಯಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com